ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೇ 17 ಶನಿವಾರ 2025

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

46

ಸಂಪುಟ: 46 | ಸಂಚಿಕೆ: 31 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

'ರಾಗ ತರಂಗಿಣಿ' ಸುಗಮ ಸಂಗೀತ; ದಾಸವಾಣಿಯ ರಸದೌತಣ...

ಮಳೆಯ ನಡುವೆಯೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದ ಸಂಗೀತಾಸಕ್ತರು



ಕರ್ನಾಟಕ ಸುಗಮ ಸಂಗೀತ ಪರಿಷತ್ ಜಿಲ್ಲಾ ಘಟಕ ಹಾಗೂ ಬ್ಲೂಮೈಂಡ್ ಸಲ್ಯೂಷನ್ಸ್ ವತಿಯಿಂದ ಮೈಸೂರಿನ ನಾದಬ್ರಹ್ಮ ಸಭಾಂಗಣದಲ್ಲಿ ಗುರುವಾರ ನಡೆದ ರಾಗ ತರಂಗಿಣಿ ಕಾರ್ಯಕ್ರಮದಲ್ಲಿ ಸುಗಮ ಸಂಗೀತ ಗಾಯಕಿ ರಶ್ಮಿ ಚಿಕ್ಕಮಗಳೂರು, ಕರ್ನಾಟಕ ಶಾಸ್ತ್ರೀಯ ಸಂಗೀತ ಗಾಯಕಿ ಎಂ.ಎಲ್. ಭಾರತಿ ಹಾಗೂ ಹೋಟೆಲ್ ಉದ್ಯಮಿ ಮಹೇಶ್ ಕಾಮತ್ ಅವರನ್ನು ಸನ್ಮಾನಿಸಲಾಯಿತು.

ಮೈಸೂರು, ಮೇ 16– ಕರ್ನಾಟಕ ಸುಗಮ ಸಂಗೀತ ಪರಿಷತ್ತು ಜಿಲ್ಲಾ ಘಟಕ ಹಾಗೂ ಬ್ಲೂಮೈಂಡ್ ಸಲ್ಯೂಷನ್ಸ್ ಸಂಯುಕ್ತ ಆಶ್ರಯದಲ್ಲಿ ಗುರುವಾರ ನಗರದ ಜೆಎಲ್‌ಬಿ ರಸ್ತೆಯ ನಾದಬ್ರಹ್ಮ ಸಭಾಂಗಣದಲ್ಲಿ ರಾಗ ತರಂಗಿಣಿ– ಸುಗಮ ಸಂಗೀತ, ಸಿತಾರ್ ವಾದನ, ದಾಸವಾಣಿ ಕಾರ್ಯಕ್ರಮ ಜರುಗಿತು.

ಸಿತಾರ್ ವಾದಕಿ, ಗಾಯಕಿ ಸಿ.ಎಸ್. ವೇದಶ್ರೀ, ಹಿನ್ನಲೆ ಗಾಯಕರಾದ ಉಪ್ಪುಂದ ರಾಜೇಶ್ ಪಡಿಯಾರ್, ಹಂಸಿನಿ ಸುಗಮ ಸಂಗೀತ ಹಾಗೂ ದಾಸವಾಣಿ ನಡೆಸಿಕೊಟ್ಟರು. ರಶ್ಮಿ ಚಿಕ್ಕಮಗಳೂರು ಕೂಡ ಕೆಲ ಗೀತೆಗಳನ್ನು ಹಾಡಿದರು.

ಪಕ್ಕವಾದ್ಯದಲ್ಲಿ ಪುರುಷೋತ್ತಮ– ಕೀ ಬೋರ್ಡ್, ವಿಶ್ವನಾಥ್– ಮ್ಯಾಂಡೋಲಿನ್, ರಮೇಶ್ ಧನ್ನೂರು, ಸುಚೇಂದ್ರ– ತಬಲ, ವಿನಯ್ ರಂಗದೋಳ್– ರಿದಂ ಪ್ಯಾಡ್ ನುಡಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ ಉದ್ಘಾಟಿಸಿ ಮಾತನಾಡಿ, ಸಂಗೀತಕ್ಕೆ ಎಲ್ಲರನ್ನು ಸೆಳೆಯುವ ಶಕ್ತಿ ಇದೆ. ಹೀಗಾಗಿಯೇ ರಾಜಮಹಾರಾಜರು ಕೂಡ ಆಸ್ಥಾನದಲ್ಲಿ ಸಂಗೀತ ವಿದ್ವಾಂಸರು, ನೃತ್ಯಗಾರ್ತಿಯರಿಗೆ ಆಶ್ರಯ ನೀಡುತ್ತಿದ್ದರು. ಸಂಗೀತ, ನೃತ್ಯ, ಕಲೆಯಿಂದ ಮನಸ್ಸಿಗೆ ನೆಮ್ಮದಿ ಸಿಗುವುದು ಇದಕ್ಕೆ ಕಾರಣ ಎಂದರು.

ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಸುಗಮ ಸಂಗೀತ ಪರಿಷತ್ ಜಿಲ್ಲಾಧ್ಯಕ್ಷ ನಾಗರಾಜ ವಿ. ಬೈರಿ ಮಾತನಾಡಿ, ಕಳೆದ 14 ತಿಂಗಳಲ್ಲಿ ಪರಿಷತ್ ವತಿಯಿಂದ ನಡೆಯುತ್ತಿರುವ 28 ನೇ ಕಾರ್ಯಕ್ರಮ ಇದಾಗಿದೆ. ಮೇ 17–18 ರಂದು ಸುಗಮ ಸಂಗೀತ ಕಾರ್ಯಾಗಾರ ಏರ್ಪಡಿಸಲಾಗಿದೆ. ಜೂನ್‌ನಲ್ಲಿ ಹವ್ಯಾಸಿ ಗಾಯಕರಿಗೆ ಸ್ಪರ್ಧೆ ಏರ್ಪಡಿಸಲಾಗುವುದು. ಮೇ 27 ರಂದು ಕೆ.ಎಸ್. ಅಶ್ವತ್ಥ್ ನೆನಪಿನ ಕಾರ್ಯಕ್ರಮವನ್ನು ಶಂಕರ್ ಅಶ್ವತ್ಥ್ ಅವರ ನಿರೂಪಣೆಯಲ್ಲಿ ನಡೆಸಲಾಗುವುದು ಎಂದರು.

ಕವಿಗಳು ಬರೆದಿರುವ ಭಾವಗೀತೆಗಳು ಚಲನಚಿತ್ರ ಗೀತೆಗಳಂತೆ ಜನರ ಮನೆ–ಮನಗಳಿಗೆ ತಲುಪಿಸಬೇಕು. ಆ ಮೂಲಕ ಸುಗಮ ಸಂಗೀತ ಮತ್ತಷ್ಟು ಪ್ರವರ್ಧಮಾನಕ್ಕೆ ತರಬೇಕು ಎಂಬುದು ನಮ್ಮ ಉದ್ದೇಶ ಎಂದರು.


ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಸಮಾಜ ಸೇವಕ ಕೆ. ರಘುರಾಂ ವಾಜಪೇಯಿ ಮುಖ್ಯ ಅತಿಥಿಯಾಗಿದ್ದರು. ಇದೇ ಸಂದರ್ಭದಲ್ಲಿ ಕರ್ನಾಟಕ ಶಾಸ್ತ್ರೀಯ ಸಂಗೀತ ಗಾಯಕಿ ಎಂ.ಎಲ್. ಭಾರತಿ, ಸುಗಮ ಸಂಗೀತ ಗಾಯಕಿ ರಶ್ಮಿ ಚಿಕ್ಕಮಗಳೂರು, ಹೋಟೆಲ್ ಪೈವಿಸ್ತಾ ವ್ಯವಸ್ಥಾಪಕ ಮಹೇಶ್ ಕಾಮತ್ ಅವರನ್ನು ಸನ್ಮಾನಿಸಲಾಯಿತು. ಇದಲ್ಲದೇ ತಬಲ ವಾದಕ ರಮೇಶ್ ಧನ್ನೂರು, ಇತ್ತೀಚೆಗೆ ಪ.ಬಂಗಾಳ ಛಾಯಾಚಿತ್ರ ಸ್ಪರ್ಧೆಯಲ್ಲಿ ಚಿನ್ನದ ಪದಕ ಪಡೆದಿರುವ ಪತ್ರಿಕಾ ಛಾಯಾಗ್ರಾಹಕ ಅನುರಾಗ್ ಬಸವರಾಜ್ ಅವರನ್ನು ಸನ್ಮಾನಿಸಲಾಯಿತು. ಪ್ರಿಯಾಂಕ ನಾಗರಾಜ್ ಕಾರ್ಯಕ್ರಮ ನಿರೂಪಿಸಿದರು.

ಪಾಕಿಸ್ತಾನದ ಮೇಲೆ ಭಾರತ ದಾಳಿ ವಿಚಾರ

ತುರ್ತು ಸಂಸತ್ ಅಧಿವೇಶನ ಕರೆಯುವಂತೆ ಕೇಳುವುದು ನಮ್ಮ ಹಕ್ಕು

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರತಿಪಾದನೆ

- ಭಾರತ ಯಾರ ಹಂಗಿಗೂ ಒಳಗಾಗಿಲ್ಲ; ವ್ಯಕ್ತಿಗಿಂತ ದೇಶ ಮುಖ್ಯ
- ಶೀಘ್ರವೇ ಗ್ರೇಟರ್ ಬೆಂಗಳೂರು ಚುನಾವಣೆ
- ರಾಮನಗರ ಹೆಸರು ಬದಲಾವಣೆಗೆ ಶುಭ ಘಳಿಗೆ ಕೂಡಿ ಬಂದಿಲ್ಲ



ಮೈಸೂರು, ಮೇ16(ಬಿಎಲ್ ಯು)– ಪಾಕಿಸ್ತಾನದ ಮೇಲೆ ನಡೆದ ದಾಳಿಯ ಕುರಿತಂತೆ ಚರ್ಚೆ ಮಾಡಲು ತುರ್ತು ಸಂಸತ್ ಅಧಿವೇಶನ ಕರೆಯುವಂತೆ ಕೇಳುವುದು ನಮ್ಮ ಹಕ್ಕು ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ಮೈಸೂರು ವಿಮಾನ ನಿಲ್ದಾಣದಲ್ಲಿ ಇಂದು ಪತ್ರಕರ್ತರ ಜೊತೆ ಮಾತನಾಡಿದ ಅವರು, ಬೇರೆ ದೇಶದವರು ನಮ್ಮ ದೇಶದ ಸ್ವಾಭಿಮಾನದ ಬಗ್ಗೆ ಮಾತನಾಡುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಪಾಕಿಸ್ತಾನದ ಮೇಲೆ ನಡೆದ ದಾಳಿ ವೇಳೆ ಏನೇನು ಪ್ರಕ್ರಿಯೆಗಳು ನಡೆದಿದೆ ಎಂದು ಸರ್ಕಾರ ದೇಶದ ಜನರಿಗೆ ಹೇಳಬೇಕು. ಇಂತಹ ಸಂದರ್ಭದಲ್ಲಿ ದಾಳಿಯ ಬಗ್ಗೆ ಚರ್ಚೆ ಮಾಡಲು ಸಂಸತ್ ಅಧಿವೇಶನ ಕರೆಯುವುದು ಸೂಕ್ತ ಎಂದು ಅಭಿಪ್ರಾಯಪಟ್ಟರು.

ಭಾರತ ಶಕ್ತಿಯುತ ರಾಷ್ಟ್ರವಾಗಿದ್ದು, ಇಂದಿರಾಗಾಂಧಿ ಕಾಲದಿಂದಲೂ ನಾವು ಯಾರ ಹಂಗಿಗೂ ಒಳಗಾದವರಲ್ಲ. ಇಲ್ಲಿ ವ್ಯಕ್ತಿಗಿಂತ ದೇಶ ಮುಖ್ಯ ಎಂದು ಹೇಳಿದರು.

ಗ್ರೇಟರ್ ಬೆಂಗಳೂರು ಚುನಾವಣೆಯನ್ನು ಶೀಘ್ರದಲ್ಲೇ ನಡೆಸಲಾಗುವುದು. ಈ ಸಂಬಂಧ ಮೀಸಲಾತಿ ಹಾಗೂ ವಲಯವಾರು ವಿಭಾಗಗಳನ್ನು ರಚಿಸಲಾಗುವುದು. ಚುನಾವಣೆ ವಿಳಂಬ ಮಾಡುವುದರಲ್ಲಿ ಯಾವುದೇ ಅರ್ಥವಿಲ್ಲ ಎಂದು ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದರು. ಚುನಾವಣೆಗೂ ಮುನ್ನ ಸರ್ವ ಪಕ್ಷಗಳ ಸಭೆ ಕರೆಯಲಾಗುವುದು. ಯಾವ ರೀತಿ ವಿಭಾಗಗಳನ್ನು ಮಾಡಬೇಕು ಎಂದು ವಿರೋಧ ಪಕ್ಷದವರ ಸಲಹೆ ಪಡೆಯಲಾಗುವುದು. ಸದನದಲ್ಲಿ ಎಲ್ಲರ ಸಲಹೆ ಪಡೆದ ನಂತರ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಗ್ರೇಟರ್ ಬೆಂಗಳೂರು ರಚನೆಗೆ ಸಚಿವ ಸಂಪುಟ ಉಪ ಸಮಿತಿ ರಚನೆ ಮಾಡಲಾಗಿತ್ತು. ಸಮಿತಿಯ 90 ರಷ್ಟು ಅಭಿಪ್ರಾಯವನ್ನು ಪರಿಗಣಿಸಲಾಗಿದೆ. ಈ ಹಿನ್ನೆಲೆಯಲ್ಲಿ ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಚುನಾವಣೆ ನಡೆಸಲಾಗುವುದು ಎಂದು ಪುನರುಚ್ಚರಿಸಿದರು.

ಗ್ರೇಟರ್ ಬೆಂಗಳೂರಿಗೆ ಹೊಸ ಬಡಾವಣೆಗಳನ್ನು ಸೇರಿಸಿದರೆ ಚುನಾವಣೆ ವಿಳಂಬವಾಗುತ್ತದೆ. ಈ ಹಿನ್ನೆಲೆಯಲ್ಲಿ ಈಗಿರುವ ಪ್ರದೇಶಗಳ ವ್ಯಾಪ್ತಿಯಲ್ಲೇ ಚುನಾವಣೆ ನಡೆಸಲಾಗುವುದು ಎಂದು ಡಿ.ಕೆ.ಶಿವಕುಮಾರ್ ಸ್ಪಷ್ಟನೆ ನೀಡಿದರು.

ಮೊದಲು ಬೆಂಬಲಿಸಿ ಈಗ ವಿರೋಧಿ ಸರಿಯೇ?: ಗ್ರೇಟರ್ ಬೆಂಗಳೂರು ಅಲ್ಲ ಕ್ವಾಟರ್ ಬೆಂಗಳೂರು ಎಂಬ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರ ಲೇವಡಿಗೆ ಪ್ರತಿಕ್ರಿಯೆ ನೀಡಿದ ಅವರು, ಈ ವಿಧೇಯಕ ಮೊದಲಿಗೆ ಸದನಕ್ಕೆ ಬಂದಾಗ ವಿರೋಧ ವ್ಯಕ್ತಪಡಿಸ ಬೇಕಿತ್ತು. ಆದರೆ ಸದನದಲ್ಲಿ ಜಾರಿಗೆ ಒಪ್ಪಿಗೆ ನೀಡಿ ಹೊರಗೆ ವಿರೋಧ ವ್ಯಕ್ತಪಡಿಸುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು.

ಫುಲ್ ಬೆಂಗಳೂರು ಎನ್ನಲಿ ಅಥವಾ ಕ್ವಾಟರ್ ಬೆಂಗಳೂರು ಎಂದು ಗೇಲಿ ಮಾಡಲಿ ನಾನು ತಲೆ ಕೆಡಿಸಿಕೊಳ್ಳುವುದಿಲ್ಲ ಎಂದು ಅಶೋಕ್‌ಗೆ ತಿರುಗೇಟು ನೀಡಿದ ಅವರು, ವಿರೋಧ ಪಕ್ಷದವರಾಗಿ ಅಷ್ಟಾದರೂ ವಿರೋಧ ಮಾಡದಿದ್ದರೆ ಹೇಗೆ ಹೇಳಿ ಎಂದು ಪ್ರಶ್ನಿಸಿದರು.

ಶುಭ ಮಹೂರ್ತ ಬರಬೇಕು: ರಾಮನಗರದ ಹೆಸರು ಬದಲಾವಣೆಯ ವಿಳಂಬದ ಬಗ್ಗೆ ಪ್ರತಿಕ್ರಿಯೆ ನೀಡಿದ ಡಿ.ಕೆ. ಶಿವಕುಮಾರ್ ಅವರು, ಎಲ್ಲಾ ಪ್ರಕ್ರಿಯೆ ನಡೆಯುತ್ತಿದೆ. ಆದರೆ ಹೊಸ ಹೆಸರು ಘೋಷಣೆಗೆ ಶುಭ ಘಳಿಗೆ, ಶುಭ ಮಹೂರ್ತ ಬರಬೇಕಲ್ಲವೆ ಎಂದರು.

ಥಮ್ಸ್ ಅಪ್ ತೋರಿಸಿದ ಡಿ.ಕೆ.ಶಿವಕುಮಾರ್

ಈ ವರ್ಷ ನಿಮಗೆ ದೊಡ್ಡ ಹುದ್ದೆ ಸಿಗುವುದೇ ಎಂಬ ಪತ್ರಕರ್ತರ ಪ್ರಶ್ನೆಗೆ ಡಿ.ಕೆ. ಶಿವಕುಮಾರ್ ಥಮ್ಸ್ ಅಪ್ ಮೂಲಕ ಕುತೂಹಲ ಮೂಡಿಸಿದರು. ಈ ಬಾರಿ ನಾನು ಹುಟ್ಟುಹಬ್ಬ ಆಚರಿಸಿಕೊಂಡಿಲ್ಲ. ಯಾರು ನನ್ನ ಹುಟ್ಟುಹಬ್ಬ ಆಚರಿಸಬಾರದು ಎಂದು ಕಾರ್ಯಕರ್ತರು ಹಾಗೂ ಅಭಿಮಾನಿಗಳಲ್ಲಿ ಮನವಿ ಮಾಡಿದ್ದೆ. ಆದರೆ ಕುಟುಂಬದವರ ಜೊತೆ ನಮ್ಮದೆ ಕಬಿನಿ ಕಾಡಿನಲ್ಲಿ ಮೂರು ದಿನ ಕಾಲ ಕಳೆದೆ ಎಂದರು. ಈ ವರ್ಷ ನಿಮಗೆ ದೊಡ್ಡ ಹುದ್ದೆ ಸಿಗಬಹುದೇ ಎಂಬ ಪ್ರಶ್ನೆಗೆ, ನಿಮ್ಮ ಆಶೀರ್ವಾದ ಇರಲಿ ಎಂದು ಥಮ್ಸ್ ಅಪ್ ಮಾಡಿ ಮುನ್ನಡೆದರು.

ಆಶಾ ಕಾರ್ಯಕರ್ತೆಯರಿಗೆ ಗೌರವಧನ ಹೆಚ್ಚಿಸಿ ರಾಜ್ಯ ಸರ್ಕಾರ ಆದೇಶ

ಬೆಂಗಳೂರು, ಮೇ.16– ಆಶಾ ಕಾರ್ಯಕರ್ತೆಯರ ಗೌರವ ಧನವನ್ನು ರೂ.1,000 ಹೆಚ್ಚಿಸಿ, ರಾಜ್ಯ ಸರ್ಕಾರ ಆದೇಶಿಸಿದೆ. ಕಳೆದ ಬಜೆಟ್‌ನಲ್ಲಿ ಗೌರವ ಧನ ಹೆಚ್ಚಿಸುವ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದರು.

ಈ ಕುರಿತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಆದೇಶ ಹೊರಡಿಸಿದ್ದು, 2025–26ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದಂತೆ ಆಶಾ ಕಾರ್ಯಕರ್ತೆಯರಿಗೆ ತಂಡ ಆಧಾರಿತ ಪ್ರೋತ್ಸಾಹ ಧನ ನೀಡುವುದರ ಮೂಲಕ ರೂ. ಗೌರವ ಧನವನ್ನು ರೂ. 1,000 ಹೆಚ್ಚಿಸಲಾಗುವುದು ಎಂದಿದ್ದಾರೆ. ಆಶಾ ಕಾರ್ಯಕರ್ತೆಯರು ಮಾನ್ಯತೆ ಪಡೆದ ಸಾಮಾಜಿಕ ಆರೋಗ್ಯ ಕಾರ್ಯಕರ್ತೆಯಾಗಿದ್ದು, ಸ್ಥಳೀಯ ಸಮುದಾಯದಿಂದ ಗುರುತಿಸಿ, ಆಯ್ಕೆ ಮಾಡಲಾಗಿದೆ. ಅವರ ಗ್ರಾಮ ಅಥವಾ ಪ್ರದೇಶ ವ್ಯಾಪ್ತಿಯಲ್ಲಿ ಸಮುದಾಯ ಆರೋಗ್ಯ ಸ್ಥಿತಿ ಸುಧಾರಣೆಗೆ ಶ್ರಮಿಸುತ್ತಿದ್ದಾರೆ.

ಆರೋಗ್ಯ ಸಿಬ್ಬಂದಿ ಗೌರವ ಧನವೂ ಏರಿಕೆ: ಇದರ ಜೊತೆಗೆ ಆರೋಗ್ಯ ಸಿಬ್ಬಂದಿಯ ಗೌರವ ಧನವನ್ನೂ ಏರಿಕೆ ಮಾಡಿ ಸರ್ಕಾರ ಆದೇಶಿಸಿದೆ. ಆರೋಗ್ಯ ನಿರೀಕ್ಷಣಾಧಿಕಾರಿಗಳು ಮತ್ತು ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳ ಗೌರವ ಧನ 1500 ರೂಪಾಯಿಗೆ ಏರಿಕೆ ಮಾಡಿ ಸರ್ಕಾರ ಆದೇಶಿಸಿದೆ.

ಪ್ರಜ್ಞಾ ರಂಗೋತ್ಸವಕ್ಕೆ ಚಾಲನೆ

ಮೈಸೂರು, ಮೇ 16(ಎಂಕೆ)– ಪ್ರಜ್ಞಾ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಕಾರದೊಂದಿಗೆ ಆಯೋಜಿಸಿರುವ ಎರಡು ದಿನಗಳ ಪ್ರಜ್ಞಾ ರಂಗೋತ್ಸವಕ್ಕೆ ಶುಕ್ರವಾರ ಚಾಲನೆ ನೀಡಲಾಯಿತು.

ಮೈಸೂರು ಕಲಾಮಂದಿರದ ಕಿರುರಂಗ ಮಂದಿರದಲ್ಲಿ ಶುಕ್ರವಾರ ನಡೆದ ಕಾರ್ಯಕ್ರಮದಲ್ಲಿ ನಗರ ರಂಗಕರ್ಮಿ ಹೆಚ್.ಎಂ. ಕುಮಾರಸ್ವಾಮಿ ನಗಾರಿ ಬಾರಿಸುವ ಮೂಲಕ ರಂಗೋತ್ಸವಕ್ಕೆ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಸಮಾಜದಲ್ಲಿ ಅದರಲ್ಲಿಯೂ ಯುವ ಸಮೂಹದಲ್ಲಿ ಸಾಂಸ್ಕೃತಿಕ ಸಾಹಿತ್ಯ, ಸಾಮಾಜಿಕ ಮತ್ತು ಶೈಕ್ಷಣಿಕ ಪ್ರಜ್ಞೆ ಮೂಡಿಸುವುದು ಅತ್ಯಂತ ಅವಶ್ಯವಾಗಿದ್ದು, ಈ ನಿಟ್ಟಿನಲ್ಲಿ ಪ್ರಜ್ಞಾ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ ಕಾರ್ಯಕ್ರಮಗಳು ಶ್ಲಾಘನೀಯ. ಇವತ್ತಿನ ಸಂದರ್ಭದಲ್ಲಿ ನಾವುಗಳು ಹರಿದು–ಹಂಚಿ ಹೋಗುತ್ತಿದ್ದೇವೆ. ದೇಶದಲ್ಲಿ ಆರ್ಥಿಕ ಶಕ್ತಿ ಜೊತೆಗೆ ಜ್ಞಾನ ಪರಂಪರೆಗಳು ವೃದ್ಧಿಯಾಗುತ್ತಿವೆ. ಅದರಂತೆ ಸಾಂಸ್ಕೃತಿಕ ಮತ್ತು ಸಾಹಿತ್ಯದಲ್ಲಿಯೂ ಜ್ಞಾನ ಪಡೆದು ರೂಪುಗೊಂಡರೆ, ದೇಶಕ್ಕೆ ಒಳ್ಳೆಯದಾಗುವುದರಲ್ಲಿ ಅನುಮಾನವಿಲ್ಲ ಎಂದರು.

ಸಾಹಿತ್ಯ, ಸಂಗೀತ, ಕಲೆಯ ಪರಿಚಯ ಇಲ್ಲದವರು ಕೊಂಬು ಮತ್ತು ಬಾಲವಿಲ್ಲದ ಪಶುವಿಗೆ ಸಮ ಎಂಬ ಮಾತಿದೆ. ಹಾಗಾಗಿ ನಮ್ಮೆಲ್ಲರ ಚಟುವಟಿಕೆಗಳು ಸಾಹಿತ್ಯಾತ್ಮಕವಾಗಿರಬೇಕು. ಸಮ ಸಮಾಜವನ್ನು ಕಟ್ಟುವ ರೀತಿಯಲ್ಲಿರಬೇಕು. ಎಲ್ಲೆಲ್ಲೋ ನಮ್ಮ ಹಣವನ್ನು ಖರ್ಚು ಮಾಡುತ್ತೇವೆ. ಅದೇ ಹಣವನ್ನು ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಕೊಡುಗೆಯಾಗಿ ನೀಡಿದರೆ ದೇಶಕ್ಕೆ ಕೊಡುಗೆ ನೀಡಿದಂತಾಗುತ್ತದೆ ಎಂದು ತಿಳಿಸಿದರು. ನಂತರ ಹನೂರು ಚನ್ನಪ್ಪ ರಚನೆ, ರೂಬಿನ್ ಸಂಜಯ್ ನಿರ್ದೇಶನದಲ್ಲಿ 'ಬೆಲ್ಲದ ದೋಣಿ' ನಾಟಕ ಪ್ರದರ್ಶನವಾಯಿತು. ಮೈಸೂರಿನ ಕರ್ನಾಟಕ ಪೊಲೀಸ್ ಅಕಾಡೆಮಿ ನಿರ್ದೇಶಕ ಚನ್ನಬಸವಣ್ಣ, ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ದೀಪಕ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಂ.ಡಿ.ಸುದರ್ಶನ್, ದಲಿತ ಮುಖಂಡ ಅಹಿಂದ ಜವರಪ್ಪ, ಪ್ರಜ್ಞಾ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್‌ನ ಸೋಸಲೆ ಸಿದ್ದರಾಜು ಮತ್ತಿತರರಿದ್ದರು.



ಎರಡು ದಿನಗಳ ಪ್ರಜ್ಞಾ ರಂಗೋತ್ಸವಕ್ಕೆ ಶುಕ್ರವಾರ ಚಾಲನೆ ನೀಡಲಾಯಿತು.

ಮೇ 17ರಂದು ವಿಪ್ರ ಸಂಘಟನಾ ಸಭೆ

ಮೈಸೂರು, ಮೇ 16– ಮೈಸೂರು ಬ್ರಾಹ್ಮಣ ಯುವ ವೇದಿಕೆ ವತಿಯಿಂದ ಕಾಳಿದಾಸ ರಸ್ತೆಯಲ್ಲಿರುವ ಶ್ರೀ ಲಕ್ಷ್ಮೀ ನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ವಿಪ್ರ ಸಂಘಟನಾ ಸಭೆ ಹಾಗೂ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದಲ್ಲಿ ನೂತನ ಸದಸ್ಯತ್ವ ಪಡೆದ ಸದಸ್ಯರಿಗೆ ಗುರುತಿನ ಚೀಟಿ ವಿತರಣೆ ಕಾರ್ಯಕ್ರಮವನ್ನು ನಾಳೆ (ಮೇ17) ಶನಿವಾರ ಸಂಜೆ 5.30ಕ್ಕೆ ಆಯೋಜಿಸಿದ್ದು, ವಿಪ್ರ ಸಂಘ ಸಂಸ್ಥೆಯ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ವಿಪ್ರ ಮುಖಂಡರು ಭಾಗವಹಿಸುವಂತೆ ಮೈಸೂರು ಬ್ರಾಹ್ಮಣ ಯುವ ವೇದಿಕೆ ಅಧ್ಯಕ್ಷ ಎಚ್.ಎನ್. ಶ್ರೀಧರ್ ಮೂರ್ತಿ ಮನವಿ ಮಾಡಿದ್ದಾರೆ.



ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೇ 17 ಶನಿವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

46

ಸಂಪುಟ: 46 | ಸಂಚಿಕೆ: 31 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಒಳ ಮೀಸಲಾತಿ ಸಮೀಕ್ಷೆ ಅವಧಿ ಮೇ 25ರವರೆಗೆ ವಿಸ್ತರಣೆ

● ಏಕ ಸದಸ್ಯ ಆಯೋಗದ ಅಧ್ಯಕ್ಷ ನ್ಯಾ. ಹೆಚ್.ಎನ್.ನಾಗಮೋಹನ್ ದಾಸ್ ನಿರ್ಧಾರ ● ಸಮೀಕ್ಷೆ ವೇಳೆ ಉದ್ಭವಿಸಿರುವ ಸಮಸ್ಯೆಗಳ ನಿವಾರಣೆಗೆ ಹೆಚ್ಚಿನ ಕಾಲಾವಕಾಶದ ಬೇಡಿಕೆ ● ಮನೆ ಮನೆ ಸಮೀಕ್ಷೆ ಮೇ 25, ವಿಶೇಷ ಶಿಬಿರ, ಆನ್‌ಲೈನ್ ಮೂಲಕ ಸ್ವಯಂ ಘೋಷಣೆಗೆ ಮೇ 28ರ ಕಾಲಾವಕಾಶ

ಬೆಂಗಳೂರು, ಮೇ 16(ಕೆಎಂಶಿ)– ಪರಿಶಿಷ್ಟ ಜಾತಿ ಒಳಮೀಸಲಾತಿ ಸಂಬಂಧ ನಡೆಯುತ್ತಿರುವ ಸಮೀಕ್ಷೆ ಅವಧಿಯನ್ನು ಮೇ 25ರವರೆಗೆ ವಿಸ್ತರಿಸಲು ತೀರ್ಮಾನಿಸಲಾಗಿದೆ ಎಂದು ಏಕಸದಸ್ಯ ಆಯೋಗದ ಅಧ್ಯಕ್ಷ ನ್ಯಾ. ಹೆಚ್.ಎನ್. ನಾಗಮೋಹನ್ ದಾಸ್ ತಿಳಿಸಿದ್ದಾರೆ.



ನ್ಯಾ.ನಾಗಮೋಹನ್

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಸಕರುಗಳು, ಹಲವು ಸಂಘ ಸಂಸ್ಥೆಗಳು ಸಮೀಕ್ಷೆ ವೇಳೆ ಉದ್ಭವಿಸಿರುವ ಕೆಲವೊಂದು ಸಮಸ್ಯೆಗಳನ್ನು ಸರಿಪಡಿಸಲು ಸಮೀಕ್ಷಾ ದಿನಾಂಕವನ್ನು ವಿಸ್ತರಿಸಬೇಕೆಂದು ಕೋರಿದ ಹಿನ್ನೆಲೆಯಲ್ಲಿ ಆಯೋಗ ಈ ತೀರ್ಮಾನ ಕೈಗೊಂಡಿದೆ. ಅದರಂತೆ ಮನೆ–ಮನೆಗೆ ಭೇಟಿ ಸಮೀಕ್ಷೆ ಯನ್ನು ಮೇ 25ರವರೆಗೂ, ವಿಶೇಷ ಶಿಬಿರ (ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ) ಮೇ 28ರವರೆಗೂ ವಿಸ್ತರಿಸಲಾಗಿದೆ. ಆನ್‌ಲೈನ್ ಮೂಲಕ ಸ್ವಯಂ ಘೋಷಣೆ ದಿನಾಂಕವನ್ನು ಮೇ 28ರವರೆಗೆ ವಿಸ್ತರಿಸಲಾಗಿದೆ ಎಂದರು.

ಒಳಮೀಸಲಾತಿ ಸಂಬಂಧ ಸಮೀಕ್ಷೆಯನ್ನು ಮೇ 5ರಿಂದ ಗಣತಿದಾರರು ಮನೆ–ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವುದರ ಮೂಲಕ ರಾಜ್ಯಾದ್ಯಂತ ಈಗಾಗಲೇ ಪ್ರಾರಂಭಿಸಿದ್ದಾರೆ. ಈ ಮೊದಲು ಸಮೀಕ್ಷೆಯನ್ನು 3 ಹಂತಗಳಲ್ಲಿ ನಡೆಸಲು ತೀರ್ಮಾನಿಸಲಾಗಿತ್ತು.

ಅದರಂತೆ ಮನೆ ಮನೆಗೆ ತೆರಳಿ ಸಮೀಕ್ಷೆ ನಡೆಸುವ ದಿನಾಂಕವನ್ನು ಮೇ 5ರಿಂದ 17ರವರೆಗೆ ಮಾಡಲು ನಿಗದಿ ಪಡಿಸಲಾಗಿತ್ತು. ವಿಶೇಷ ಶಿಬಿರ (ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ) ದಿನಾಂಕವನ್ನು ಮೇ 19ರಿಂದ 21ರವರೆಗೆ, ಆನ್‌ಲೈನ್ ಮೂಲಕ ಸ್ವಯಂ ಘೋಷಣೆಗೆ ಮೇ 19ರಿಂದ 23ರವರೆಗೆ ನಿಗದಿ ಪಡಿಸಲಾಗಿತ್ತು.

ಸಮೀಕ್ಷೆಯನ್ನು ಆಧುನಿಕ ತಂತ್ರ ಜ್ಞಾನದ ಸಾಧನಗಳನ್ನು ಬಳಸಿಕೊಂಡು ಮೊಬೈಲ್ ಆ್ಯಪ್ ಮೂಲಕ ನಡೆಸಲಾಗುತ್ತಿದೆ ಎಂದು ತಿಳಿಸಿದರು. ಮೇ 15ರ ಅಂತ್ಯಕ್ಕೆ ಮನೆ ಮನೆ ಸಮೀಕ್ಷೆಯಲ್ಲಿ 73.72%ರಷ್ಟು ಪ್ರಗತಿ ಸಾಧಿಸಲಾಗಿದೆ. ರಾಜ್ಯದ 31 ಜಿಲ್ಲೆಗಳಲ್ಲಿ 18,41,258 ಎಸ್‌ಸಿ ಕುಟುಂಬಗಳ ಸಮೀಕ್ಷೆ ನಡೆಸಲಾಗಿದ್ದರೆ, ಬಿಬಿಎಂಪಿ ವ್ಯಾಪ್ತಿಯಲ್ಲಿ 55,027 ಎಸ್ ಸಿ ಕುಟುಂಬಗಳನ್ನು ಸಮೀಕ್ಷೆ ನಡೆಸಲಾಗಿದೆ. ಆ ಮೂಲಕ ಒಟ್ಟು 18,96,285 ಎಸ್ ಸಿ ಕುಟುಂಬಗಳನ್ನು ಸಮೀಕ್ಷೆ ನಡೆಸಲಾಗಿದೆ. ಸುಮಾರು 1,10,32,556 ಎಸ್‌ಸಿಯೇತರ ಕುಟುಂಬಗಳನ್ನು ಭೇಟಿ ಮಾಡಲಾಗಿದೆ ಎಂದು ತಿಳಿಸಿದರು. ■ 6ನೇ ಪುಟಕ್ಕೆ

ಸಮೀಕ್ಷೆಗೆ ಅಡ್ಡಿಪಡಿಸಿದರೆ ಕ್ರಮ

ಅಪಾರ್ಟ್ ಮೆಂಟ್‌ಗಳಲ್ಲಿ ಸಮೀಕ್ಷೆಗೆ ಅಡ್ಡಿಪಡಿಸುತ್ತಿರುವುದು ಆಯೋಗದ ಗಮನಕ್ಕೆ ಬಂದಿದೆ. ಅಡ್ಡಿಪಡಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಯಾರೂ ಸಮೀಕ್ಷಾ ಕರ್ತವ್ಯಕ್ಕೆ ಅಡ್ಡಿಪಡಿಸ ಬಾರದು. ನಿಮ್ಮಲ್ಲಿನ ಮಾಹಿತಿ ನೀಡಿ ಅಷ್ಟೆ. ಯಾರು ಸಮೀಕ್ಷೆಗೆ ತಡೆ ಮಾಡುತ್ತಾರೆ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು. ಪಾಲಿಕೆಗೆ ಈ ಸಂಬಂಧ ಕ್ರಮ ಕೈಗೊಳ್ಳಲು ಸೂಚನೆ ನೀಡಿದ್ದೇವೆ ಎಂದರು.

ಎಸ್‌ಸಿಯೇತರರು ಅಂದರೆ ಯಾವುದೇ ಮಾಹಿತಿ ಪಡೆಯುವುದು ಬೇಡ ಅಂದಿದ್ದೇವೆ. ಸಮೀಕ್ಷೆ ಮುಗಿದ ಮೇಲೆ ದತ್ತಾಂಶ ವಿಶ್ಲೇಷಣೆ ಮಾಡುತ್ತೇವೆ. ಮಾನದಂಡದ ಪ್ರಕಾರ ಏನೆಲ್ಲಾ ವರ್ಗೀಕರಣ ಆಗಬೇಕು ಅದನ್ನು ಮಾಡಲಿದ್ದೇವೆ. ಇನ್ನು ಯಾವುದೇ ವಿಳಂಬ ಆಗದಂತೆ ವರದಿ ನೀಡುತ್ತೇವೆ ಎಂದರು.

ಆದಿ ಕರ್ನಾಟಕ, ಆದಿ ಆಂಧ್ರ, ಆದಿ ಜಾಂಬವ ಸಂಬಂಧ ಜಾತಿ ಹೆಸರು ಹೇಳಬೇಕು. ಒಂದು ವೇಳೆ ಆದಿ ಕರ್ನಾಟಕ ಅಂದರೆ ಈ 101ರಲ್ಲಿ ಯಾವ ಉಪ ಜಾತಿ ಎಂದು ಹೇಳಬೇಕು. ಹೇಳಿಲ್ಲ ವಾದರೆ ಹಾಗೇ ನಮೂದು ಮಾಡಲಾಗುತ್ತದೆ. ಕೆಲ ಮಾನದಂಡದ ಆಧಾರದ ಮೇಲೆ ನಾವು ಮುಂದೆ ಆದಿ ಕರ್ನಾಟಕ, ಆದಿ ಆಂಧ್ರದ ಜಾತಿಯವರನ್ನು ಯಾವ ಉಪಜಾತಿ ಎಂದು ತೀರ್ಮಾನಿಸುತ್ತೇವೆ ಎಂದರು.

ಸಿದ್ದರಾಮನಹುಂಡಿಯಲ್ಲಿ ಚಿನ್ನದ ಆಲೂಗೆಡ್ಡೆ, ಚಿನ್ನದ ಕಬ್ಬು ಬೆಳೆದು 2 ಸಾವಿರ ಕೊಡುತ್ತಿದ್ದೀರಾ...

ಗ್ಯಾರಂಟಿ ವಿಷಯದಲ್ಲಿ ಸಿಎಂ ಸಿದ್ದರಾಮಯ್ಯರಿಗೆ ಮಾಜಿ ಸಂಸದ ಪ್ರತಾಪ್ ಸಿಂಹ ಪ್ರಶ್ನೆ

ಮೈಸೂರು, ಮೇ16(ಬಿಎಲ್ ಯು)– ಸಿದ್ದರಾಮನಹುಂಡಿಯಲ್ಲಿ ಚಿನ್ನದ ಆಲೂಗೆಡ್ಡೆ, ಚಿನ್ನದ ಕಬ್ಬು ಬೆಳೆದು ಅದರಲ್ಲಿ ಬಂದ ಹಣದಿಂದ ಗ್ಯಾರಂಟಿ ಯೋಜನೆಯಲ್ಲಿ ಗೃಹಿಣಿಯರಿಗೆ ಎರಡು ಸಾವಿರ ರೂಪಾಯಿ ಕೊಡುತ್ತಿದ್ದೀರಾ...! ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಪ್ರಶ್ನಿಸಿದ್ದಾರೆ.



ಪ್ರತಾಪ್ ಸಿಂಹ

ನಗರದಲ್ಲಿ ಇಂದು ನಡೆದ ತಿರಂಗಾ ಯಾತ್ರೆ ವೇಳೆ ಪತ್ರಕರ್ತರ ಜೊತೆ ಮಾತನಾಡಿದ ಅವರು, ಪಾಕಿಸ್ತಾನದ ಮೇಲೆ ದಾಳಿ ಮಾಡಿದ ಕ್ರೆಡಿಟ್ ಸೈನ್ಯಕ್ಕೆ ಮಾತ್ರ ಸೇರಬೇಕು ಎಂಬ ಸಿದ್ದರಾಮಯ್ಯ ಅವರ ಹೇಳಿಕೆಗೆ ಪ್ರತಾಪ್ ಸಿಂಹ ತಿರುಗೇಟು ನೀಡಿದರು. ಜನರ ತೆರಿಗೆ ಹಣದಲ್ಲಿ ಎರಡು ಸಾವಿರ ಕೊಟ್ಟು ನಾನೇ ಕೊಟ್ಟೆ ಅಂತ ಏಕೆ ಹೇಳುತ್ತೀರಾ ಎಂದು ■ 6ನೇ ಪುಟಕ್ಕೆ



‘ಆಪರೇಷನ್ ಸಿಂಧೂರ್’ ಟ್ರೇಲರ್ ಅಷ್ಟೇ... ಸಮಯ ಬಂದಾಗ ಸಿನಿಮಾ ತೋರಿಸ್ತೇವೆ

ಪಾಕಿಸ್ತಾನಕ್ಕೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಎಚ್ಚರಿಕೆ


● ಗುಜರಾತ್‌ನ ಭುಜ್ ವಾಯುನೆಲೆಗೆ ಭೇಟಿ ನೀಡಿದ ರಕ್ಷಣಾ ಸಚಿವರು ● ಐಎಂಎಫ್ ಸಾಲವನ್ನು ಪಾಕ್ ಭಯೋತ್ಪಾದನೆಗೆ ಬಳಸುತ್ತಿದೆ

ಶ್ರೀನಗರ, ಮೇ.16– ‘ಆಪರೇಷನ್ ಸಿಂಧೂರ್’ ಇನ್ನೂ ಮುಗಿದಿಲ್ಲ, ಈಗ ನಡೆದಿದ್ದು ಟ್ರೇಲರ್ ಅಷ್ಟೇ. ಸಮಯ ಬಂದಾಗ ಜಗತ್ತಿಗೆ ಸಿನಿಮಾ ತೋರಿಸುತ್ತೇವೆ ಎಂದು ವಾಯುಪಡೆಯ ಶೌರ್ಯವನ್ನು ಹೊಗಳುತ್ತಾ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಪಾಕ್‌ಗೆ ಸಂದೇಶ ರವಾನಿಸಿದರು.

ಇಂದು ಗುಜರಾತ್‌ನ ಭುಜ್ ವಾಯುನೆಲೆಗೆ ಭೇಟಿ ನೀಡಿ ಭಾರತೀಯ ವಾಯುಪಡೆಯನ್ನುದ್ದೇಶಿಸಿ ಮಾತನಾಡಿದ ಅವರು, ಕದನ ವಿರಾಮದ ಬಳಿಕ ನಾವು ಪಾಕಿಸ್ತಾನದ ನಡವಳಿಕೆಯನ್ನು ಪರೀಕ್ಷಿಸುತ್ತಿದ್ದೇವೆ. ಅವರ ನಡವಳಿಕೆಯಲ್ಲಿ ಏನಾದರೂ ಸುಧಾರಣೆಯಾದರೆ ಸರಿ, ಇಲ್ಲವಾದರೆ ತಕ್ಕ ಪಾಠ ಕಲಿಸುತ್ತೇವೆ. ‘ಆಪರೇಷನ್ ಸಿಂಧೂರ್’ ಇನ್ನೂ ಮುಗಿದಿಲ್ಲ. ಈಗ ನಡೆದಿದ್ದು ಟ್ರೇಲರ್ ಅಷ್ಟೇ. ಸರಿಯಾದ ಸಮಯ ಬಂದಾಗ ಜಗತ್ತಿಗೆ ಸಿನಿಮಾವನ್ನು ತೋರಿಸುತ್ತೇವೆ ಎಂದರು.

1965 ಮತ್ತು 1971ರಲ್ಲಿ ಭುಜ್ ವಾಯುನೆಲೆ ಪಾಕಿಸ್ತಾನ ವಿರುದ್ಧದ ಭಾರತದ ಗೆಲುವಿಗೆ ಸಾಕ್ಷಿಯಾಗಿತ್ತು ಇಂದು ಅದೇ ಭುಜ್ ನೆಲೆ ಮತ್ತೆ ಪಾಕಿಸ್ತಾನ ವಿರುದ್ಧದ ನಮ್ಮ ಗೆಲುವಿಗೆ ಸಾಕ್ಷಿಯಾಗಿದೆ. ಇಂದು ನಾನು ಇಲ್ಲಿರುವುದು ನನಗೆ ಹೆಮ್ಮೆ ತಂದಿದೆ. ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಇಡೀ ಭಾರತೀಯರು ಹೆಮ್ಮೆಪಡುವಂತಹ ವಿಷಯವಾಗಿದೆ ಎಂದರು.

ಐಎಂಎಫ್ ಸಾಲ ಭಯೋತ್ಪಾದನೆಗೆ ಬಳಕೆ: ಭಿಕ್ಷೆ ಬೇಡುತ್ತಿದ್ದ ಪಾಕಿಸ್ತಾನಕ್ಕೆ ಅಂತಾರಾಷ್ಟ್ರೀಯ ಹಣಕಾಸು ನಿಧಿಯು ವಿಸ್ತೃತ ನಿಧಿ ಸೌಲಭ್ಯದಡಿಯಲ್ಲಿ ಎರಡು ಕಂತುಗಳಲ್ಲಿ 2.1 ಬಿಲಿಯನ್ ಡಾಲರ್‌ಗಳನ್ನು ವಿತರಿಸಿದೆ. ಇದನ್ನು ಪಾಕಿಸ್ತಾನ ಪರೋಕ್ಷವಾಗಿ ■ 6ನೇ ಪುಟಕ್ಕೆ



ಗುಜರಾತ್‌ನ ಭುಜ್ ವಾಯುನೆಲೆಯಲ್ಲಿ ಯೋಧರೊಂದಿಗೆ ರಕ್ಷಣಾ ಸಚಿವ ರಾಜನಾಥ್‌ಸಿಂಗ್ ಸಂಭಾಷಣೆ.

ಪಾಕ್ ಭಯೋತ್ಪಾದನೆ ಬಯಲಿಗೆ ವಿದೇಶಗಳಿಗೆ ಸರ್ವಪಕ್ಷ ನಿಯೋಗ

ನವದೆಹಲಿ, ಮೇ 16– ಪಾಕಿಸ್ತಾನವು ಭಯೋತ್ಪಾದನೆಯನ್ನು ಪೋಷಿಸುವ ರಾಷ್ಟ್ರ ಎಂಬ ಸಂಗತಿಯನ್ನು ಜಗತ್ತಿಗೆ ಮನವರಿಕೆ ಮಾಡಿಕೊಡುವ ಉದ್ದೇಶದಿಂದ ಭಾರತವು ಜಗತ್ತಿನ ಹಲವು ದೇಶಗಳಿಗೆ ಸರ್ವಪಕ್ಷ ನಿಯೋಗವನ್ನು ಕಳುಹಿಸುವ ತೀರ್ಮಾನ ಮಾಡಿದೆ. ಈ ನಿಯೋಗವು ಹಲವಾರು ದೇಶದ ಸರ್ಕಾರಗಳು, ಮಾಧ್ಯಮಗಳು ಮತ್ತು ರಾಜಕೀಯ ವಿಶ್ಲೇಷಕರೊಂದಿಗೆ ಚರ್ಚೆ ನಡೆಸಲಿದೆ. ಜೊತೆಗೆ ಭಯೋತ್ಪಾದನೆಗೆ ಪಾಕಿಸ್ತಾನದ ಬೆಂಬಲದ ಸತ್ಯಾಸತ್ಯತೆಗಳನ್ನು ಮನವರಿಕೆ ಮಾಡಿಕೊಡಲಿದೆ.

ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಉಗ್ರರು ದಾಳಿ ನಡೆಸಿದ್ದರು. ಇದಕ್ಕೆ ಪ್ರತಿಕಾರವಾಗಿ ಸರ್ಕಾರವು ‘ಆಪರೇಷನ್ ಸಿಂಧೂರ್’ನಡಿ ಉಗ್ರರ ನೆಲೆಗಳ ಮೇಲೆ ದಾಳಿ ಮಾಡಿ ಹೊಡೆದುರುಳಿಸಿತು. ಜೊತೆಗೆ ಪಾಕಿಸ್ತಾನ್‌ನ ಡ್ರೋನ್‌ಗಳನ್ನು ನಾಶ ಪಡಿಸಿತ್ತು. ಸದ್ಯ ಆಪರೇಷನ್ ಸಿಂಧೂರ್ ಅವಶ್ಯಕತೆ ಹಾಗೂ ಪಾಕಿಸ್ತಾನ ಭಯೋತ್ಪಾದನೆಯನ್ನು ಪ್ರಚೋದಿಸುತ್ತಿರುವ ಬಗ್ಗೆ ಮನದಟ್ಟು ಮಾಡಲು ಚಿಂತನೆ ನಡೆಸಿ, ವಿದೇಶಕ್ಕೆ ಸರ್ವಪಕ್ಷ ನಿಯೋಗವನ್ನು ಕಳುಹಿಸಲು ಸರ್ಕಾರವು ನಿರ್ಧರಿಸಿದೆ. ಇದು ಜಾಗತಿಕ ವೇದಿಕೆಯಲ್ಲಿ ಭಾರತ ಸರ್ಕಾರದ ಅಭೂತಪೂರ್ವ ರಾಜತಾಂತ್ರಿಕತೆಯನ್ನು ■ 6ನೇ ಪುಟಕ್ಕೆ

ಗ್ಯಾರಂಟಿ ಜೊತೆಗೆ ಅಭಿವೃದ್ಧಿ

▸ ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥನೆ
▸ ಹಣ ಇಲ್ಲದೆ ಇದ್ದಿದ್ದರೆ ಯೋಜನಾ ಗಾತ್ರ 38 ಸಾವಿರ ಹೆಚ್ಚಳ ಮಾಡಲು ಆಗುತ್ತಿತ್ತೆ!



ಹೊಸಪೇಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ.

ಬೆಂಗಳೂರು, ಮೇ 16(ಕೆಎಂಶಿ)– ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಜೊತೆಗೆ ರಾಜ್ಯದಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೂ ಅಷ್ಟೇ ಒತ್ತು ನೀಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಗ್ಯಾರಂಟಿ ಯೋಜನೆಯಿಂದ ರಾಜ್ಯ ದಿವಾಳಿಯಾಗಿದ್ದರೆ, ಬೊಕ್ಕಸದಲ್ಲಿ ಹಣ ಇಲ್ಲದಿದ್ದರೆ, ಇಷ್ಟು ಅಭಿವೃದ್ಧಿ ಆಗಲು ಸಾಧ್ಯವಿತ್ತೆ ಎಂದು ಪ್ರಶ್ನಿಸಿದ್ದಾರೆ. ಕಳೆದ ಮಾರ್ಚ್ ಮಾಹೆಯಲ್ಲಿ ಮಂಡಿಸಿದ ಮುಂಗಡ ಪತ್ರದಲ್ಲಿ 38 ಸಾವಿರ ಕೋಟಿ ರೂ. ಯೋಜನಾ ಗಾತ್ರ ಹೆಚ್ಚಳವಾಗಲು ಸಾಧ್ಯವಿತ್ತೆ ಎಂದಿದ್ದಾರೆ. ವಿಜಯನಗರದ ಹೊಸಪೇಟೆಯಲ್ಲಿ ಮೇ 20 ರಂದು ನಡೆಯಲಿರುವ ತಮ್ಮ ಎರಡು ವರ್ಷದ ಸಾಧನಾ ಸಮಾವೇಶದ ಸಿದ್ದತೆ ಪರಿಶೀಲನೆ ನಡೆಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯವರಿಗೆ ರಾಜ್ಯದ ಆರ್ಥಿಕ ಸ್ಥಿತಿಗತಿಗಳ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಅವರು ಕೇವಲ ಅಭಿವೃದ್ಧಿಗೆ ಹಣ ನೀಡಿಲ್ಲ ಎಂದು ಆರೋಪ ಮಾಡುತ್ತಿದ್ದಾರೆ ಎಂದರು.

ಗ್ಯಾರಂಟಿ ಮತ್ತು ಅಭಿವೃದ್ಧಿ ಒಂದೇ ನಾಣ್ಯದ ಎರಡು ಮುಖಗಳ ಮಾದರಿಯಲ್ಲಿ ಸರ್ಕಾರ ಸಾಗುತ್ತಿದೆ. ಚುನಾವಣಾ ಸಂದರ್ಭದಲ್ಲಿ ನಾವು ನೀಡಿದ ಭರವಸೆಯಂತೆ ಒಂದು ಲಕ್ಷ ಜನವಸತಿ ಕುಟುಂಬಗಳಿಗೆ ಹಕ್ಕುಪತ್ರ ನೀಡುತ್ತಿರುವುದೇ ಇದಕ್ಕೆ ಸಾಕ್ಷಿ ಎಂದರು.


ಬಿಜೆಪಿಯವರು ಅಧಿಕಾರದಲ್ಲಿದ್ದಾಗ ಸೂರಿಲ್ಲದವರಿಗೆ ಒಂದು ಸೂರು ಒದಗಿಸಲು ಸಾಧ್ಯವಾಗಿಲ್ಲ. ನಾವು ಮನೆಗಳನ್ನು ನೀಡುವುದರ ಜೊತೆಗೆ ತಾಂಡ, ಹಟ್ಟಿ ಸೇರಿದಂತೆ ಜನವಸತಿ ಪ್ರದೇಶದ ಕುಟುಂಬಗಳಿಗೆ ಹಕ್ಕುಪತ್ರಗಳನ್ನು ■ 6ನೇ ಪುಟಕ್ಕೆ



‘ಆಪರೇಷನ್ ಸಿಂಧೂರ್’ ಕಾರ್ಯಾಚರಣೆ ಬಳಿಕ ತಣ್ಣಗಾದ ಪಾಕಿಸ್ತಾನ

ಭಾರತದೊಂದಿಗೆ ಮಾತುಕತೆಗೆ ಉತ್ಸುಕತೆ

ಇಸ್ಲಾಮಾಬಾದ್, ಮೇ 16– ಭಾರತದ ವಿರುದ್ಧ ಯುದ್ಧೋತ್ಸಾಹದಲ್ಲಿದ್ದ ಪಾಕಿಸ್ತಾನ್, ‘ಆಪರೇಷನ್ ಸಿಂಧೂರ್’ ಬಳಿಕ ತಣ್ಣಗಾಗಿದ್ದು, ಭಾರತದೊಂದಿಗೆ ಶಾಂತಿಯುತ ಮಾತುಕತೆಗೆ ಸಿದ್ಧ ಎಂದು ಹೇಳಿದೆ.



ಶೆಹಬಾಜ್ ಷರೀಫ್

ಪಾಕಿಸ್ತಾನದ ಪಂಜಾಬ್‌ನಲ್ಲಿರುವ ಕಮ್ರಾ ವಾಯುನೆಲೆಗೆ ಗುರುವಾರ ಭೇಟಿ ನೀಡಿದ್ದ ಪಾಕಿಸ್ತಾನದ ಪ್ರಧಾನಮಂತ್ರಿ ಶೆಹಬಾಜ್ ಷರೀಫ್, ನಮ್ಮ ದೇಶ ಭಾರತದೊಂದಿಗೆ ಶಾಂತಿ ಯುತ ಮಾತುಕತೆ ನಡೆಸಲು ಸಿದ್ಧವಿದೆ ಎಂದು ಹೇಳಿದ್ದಾರೆ. ಆದರೆ, ಈ ಮಾತುಕತೆಯಲ್ಲಿ ಕಾಶ್ಮೀರ ಸಮಸ್ಯೆ ಪರಿಹರಿಸುವ ವಿಚಾರ ಕೂಡ ಇರಬೇಕೆಂದು ಷರತ್ತು ಹಾಕಿದ್ದಾರೆ.

ಏಪ್ರಿಲ್ 22ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ದಾಳಿ ನಡೆಸಿದ್ದ ಉಗ್ರರು ನೇಪಾಳಿ ಪ್ರಜೆ ಸೇರಿದಂತೆ 26 ಭಾರತೀಯ ನಾಗರಿಕರ ಬಲಿ ಪಡೆದಿದ್ದರು. ಈ ದಾಳಿಗೆ ಪ್ರತೀಕಾರವಾಗಿ ಭಾರತ ಆಪರೇಷನ್ ಸಿಂಧೂರ್ ಕಾರ್ಯಾಚರಣೆಯನ್ನು ಆರಂಭಿಸಿತ್ತು. ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದ ಒಂಬತ್ತು ಭಯೋತ್ಪಾದಕ ತಾಣಗಳನ್ನು ಗುರಿಯಾಗಿಸಿಕೊಂಡು ಭಾರತ ದಾಳಿ ನಡೆಸಿತ್ತು. ಈ ದಾಳಿಯಲ್ಲಿ 100ಕ್ಕೂ ಹೆಚ್ಚು ಭಯೋತ್ಪಾದಕರು ಸಾವನ್ನಪ್ಪಿದ್ದಾರೆ.

ಇದರ ಬೆನ್ನಲ್ಲೇ ಪಾಕಿಸ್ತಾನವು ಮೇ 8, 9 ಮತ್ತು 10ರಂದು ಹಲವಾರು ಭಾರತೀಯ ಸೇನಾ ನೆಲೆಗಳ ಮೇಲೆ ದಾಳಿ ಮಾಡಲು ಪ್ರಯತ್ನಿಸಿತ್ತು. ಇದಕ್ಕೆ ತಿರುಗೇಟು ನೀಡಿದ ಭಾರತೀಯ ಸಶಸ್ತ್ರ ಪಡೆಗಳು ರಫೀಕಿ, ಮುರಿಯದ್, ಚಕ್ಲಾಲಾ, ರಹೀಮ್ ಯಾರ್ ಖಾನ್, ಸುಕ್ಕೂರ್ ಮತ್ತು ಚುನಿಯನ್ ಸೇರಿದಂತೆ ಹಲವಾರು ಪಾಕಿಸ್ತಾನಿ ಮಿಲಿಟರಿ ನೆಲೆಗಳ ಮೇಲೆ ಭೀಕರ ಪ್ರತಿದಾಳಿ ನಡೆಸಿತ್ತು.

ಬಳಿಕ ಭಾರತ ಮತ್ತು ಪಾಕಿಸ್ತಾನ ಮೇ 10ರಂದು ಡಿಜಿಎಂಒ ಮಟ್ಟದ ಮಾತುಕತೆಯಲ್ಲಿ ಯುದ್ಧವನ್ನು ಕೊನೆಗೊಳಿಸಲು ಒಪ್ಪಿಕೊಂಡಿದ್ದವು. ಈಗ ಎರಡೂ ದೇಶಗಳು ವಿಶ್ವಾಸ ವೃದ್ಧಿ ಕ್ರಮಗಳನ್ನು ಮುಂದುವರಿಸಲು ನಿರ್ಧರಿಸಿವೆ. ಮೂಲಗಳ ಪ್ರಕಾರ ಯುದ್ಧವನ್ನು ಕೊನೆಗೊಳಿಸುವ ಕುರಿತು ಎರಡೂ ದೇಶಗಳ ನಡುವೆ ಮಾಡಿಕೊಂಡ ಒಪ್ಪಂದವನ್ನು ಮೇ 18ರವರೆಗೆ ವಿಸ್ತರಿಸಲಾಗಿದೆ ಎಂದು ತಿಳಿದುಬಂದಿದೆ.

ಒಂದೇ ದಿನದಲ್ಲಿ ಹಣ ದ್ವಿಗುಣ, ಅರ್ಧ ಬೆಲೆಗೆ ಚಿನ್ನದ ನಾಣ್ಯ ಆಮಿಷವೊಡ್ಡಿ 30 ಲಕ್ಷ ರೂ. ವಂಚಿಸಿದ ನಕಲಿ ಸ್ವಾಮೀಜಿ, ಆತನ ಪುತ್ರಿ!

ವಂಚನೆಗೊಳಗಾದ ವ್ಯಕ್ತಿಯಿಂದ ಮೈಸೂರಿನ ಎನ್.ಆರ್.ಠಾಣೆಯಲ್ಲಿ ಪ್ರಕರಣ ದಾಖಲು

ಮೈಸೂರು, ಮೇ 16(ಆರ್‌ಕೆ)–ಒಂದೇ ದಿನದಲ್ಲಿ ಹಣ ದ್ವಿಗುಣ ಮಾಡಿಕೊಡುತ್ತೇವೆ! ಅರ್ಧ ಬೆಲೆಗೆ ಚಿನ್ನದ ನಾಣ್ಯ ಕೊಡಿಸುತ್ತೇವೆ!! ಎಂಬುದಾಗಿ ನಂಬಿಸಿ ಅಮಾಯಕನಿಂದ 30 ಲಕ್ಷ ರೂ. ಹಣ ಪಡೆದು ವಂಚಿಸಿರುವ ಘಟನೆ ಮೈಸೂರಲ್ಲಿ ಬೆಳಕಿಗೆ ಬಂದಿದೆ.



ಮಂಡ್ಯ ಜಿಲ್ಲೆ, ಕೆ.ಆರ್. ಪೇಟೆ ತಾಲೂಕು, ಐಚನಹಳ್ಳಿ ಗ್ರಾಮದ ಮಾದೇಗೌಡರ ಮಗ ಎಂ. ಮಂಜು (38) ಎಂಬುವರು, ನಕಲಿ ಸ್ವಾಮೀಜಿ ಕೃಷ್ಣಪ್ಪ(77) ಹಾಗೂ ಆತನ ಪುತ್ರಿ ಪುಷ್ಪಾ(53) ಅವರ ಮಾತಿಗೆ ಮರುಳಾಗಿ 30 ಲಕ್ಷ ರೂ. ಹಣ ಕಳೆದುಕೊಂಡಿದ್ದಾರೆ.

ಮಂಜು ನೀಡಿದ ಲಿಖಿತ ದೂರಿನನ್ವಯ ಮೇ 8ರಂದು ಕೃಷ್ಣಪ್ಪ, ಪುಷ್ಪಾ ಮತ್ತು ಇತರರ ವಿರುದ್ಧ ಎನ್.ಆರ್.ಠಾಣೆ ಪೊಲೀಸರು ದಿ ಭಾರತೀಯ ನ್ಯಾಯ ಸಂಹಿತೆ ಕಲಂ 318(4) ರೆವಿ 3(5) ರೀತ್ಯ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ. ವ್ಯವಸಾಯ ಮಾಡಿಕೊಂಡು ಜೀವನ ನಡೆಸುತ್ತಿರುವ ಮಂಜುಗೆ ಕಳೆದ 5 ತಿಂಗಳ ಹಿಂದೆ, 2024ರ ಡಿಸೆಂಬರ್ 5ರಂದು ಮೇಲುಕೋಟೆಯಲ್ಲಿ ಪರಿಚಯವಾದ ಬೆಂಗಳೂರಿನ ಪುಷ್ಪಾ, ಬೇಗ ಹಣ ಮಾಡಿಕೊಡುವ ಸ್ವಾಮೀಜಿಯೊಬ್ಬರು ನನಗೆ ಪರಿಚಯವಿದ್ದಾರೆ. ಅವರ ಸಹಾಯದಿಂದಲೇ ನಾನು ಬೆಂಗಳೂರಲ್ಲಿ ಮನೆ ತೆಗೆದುಕೊಂಡಿದ್ದೇನೆ. ಅವರ ಹೆಸರು ಕೃಷ್ಣಪ್ಪ ಸ್ವಾಮೀಜಿ. ನಿನ್ನನ್ನು ಒಂದೇ ದಿನದಲ್ಲಿ ಶ್ರೀಮಂತನನ್ನಾಗಿ ಮಾಡಬಲ್ಲರು ಎಂದು ಹೇಳಿ ನಂಬಿಸಿದ್ದಾಳೆ. ಜೊತೆಗೆ ಆ ಸ್ವಾಮೀಜಿಯನ್ನು ಪರಿಚಯಿಸಿದ್ದಾಳೆ.

ಆತನೂ ತಾನು ಸ್ವಾಮೀಜಿ, ಈ ಹಿಂದೆ ಮೈಸೂರಿನ ಆರ್‌ಬಿಐ ನೋಟು ಮುದ್ರಣಾಲಯದಲ್ಲಿ ಕೆಲಸ ಮಾಡುತ್ತಿದ್ದು, ಈಗ ನಿವೃತ್ತನಾಗಿದ್ದೇನೆ. ಈಗಲೂ ಅಲ್ಲಿನ ನೌಕರರು, ಅಧಿಕಾರಿಗಳು ನಾನು ಹೇಳಿದಂತೆ ಕೇಳುತ್ತಾರೆ ಎಂದು ಹೇಳಿ ನಂಬಿಕೆ ಹುಟ್ಟಿಸಿದ್ದಾನೆ. ನೀನು ನನಗೆ 15 ಲಕ್ಷ ಹಣ ನೀಡಿದರೆ ಒಂದೇ ದಿನದಲ್ಲಿ ನಾನು ಪ್ರತಿಯಾಗಿ 30 ಲಕ್ಷ ಕೊಡುತ್ತೇನೆಂದು ಹೇಳಿದ್ದಾನೆ.

ಅದೂ ಅಲ್ಲದೆ, ನನ್ನ ಬಳಿ ಪೂರ್ವಜರ ಕಾಲದ ಚಿನ್ನದ ನಾಣ್ಯಗಳು, ನಾನಾ ಆಭರಣಗಳೂ ಇವೆ. ನಿಮಗೆ ಅರ್ಧ ಬೆಲೆಗೆ ಕೊಡುತ್ತೇನೆಂದು ತಿಳಿಸಿದ ಕೃಷ್ಣಪ್ಪ, ಹಲವು ದಿನಗಳ ನಂತರ ಮಂಜುಗೆ ಪುಷ್ಪಾ ಮೂಲಕ ಫೋನ್ ಮಾಡಿಸಿ, ಮೈಸೂರಿನ ಮಣಿಪಾಲ್ ಆಸ್ಪತ್ರೆ ಬಳಿಯ ಬೆಲವತ್ತ ಗ್ರಾಮದ ಮನೆಗೆ ಬರುವಂತೆ ಪುಸಲಾಯಿಸಿದ್ದಾನೆ. 2025ರ ಫೆಬ್ರವರಿ 2ರಂದು ಅಲ್ಲಿಗೆ ಹೋದಾಗ ಅಲ್ಲಿ ಪುಷ್ಪಾ ಜೊತೆ ಕೃಷ್ಣಪ್ಪ ಸಹ ಇದ್ದ. ಆಗ ಕೃಷ್ಣಪ್ಪ 1 ನಾಣ್ಯ ಕೊಟ್ಟು ಇದನ್ನು ಚೆಕ್ ಮಾಡಿಕೊಂಡು ಬಾ ಎಂದ. ನಾನು ಆ ನಾಣ್ಯವನ್ನು ಪರೀಕ್ಷಿಸಿದಾಗ ಅದು ಅಸಲಿ ಎಂದು ತಿಳಿಯಿತು. ನಾನು ಆ ವಿಷಯವನ್ನು ಕೃಷ್ಣಪ್ಪಗೆ ತಿಳಿಸಿದಾಗ, ನನ್ನ ಬಳಿ ಇನ್ನೂ ಅರ್ಧ ಕೆಜಿ. ■ 6ನೇ ಪುಟಕ್ಕೆ



ನಕ್ಕರೆ ಅದೇ ಸ್ವರ್ಗ

ಮನೆಗೆ ಹೊಸ ನಾಯಿ ತಂದವನೊಬ್ಬ ಫೇಸ್‌ಬುಕ್‌ನಲ್ಲಿ
ಫೋಟೋ ಹಾಕಿ ಈ ತರ ಬರೆದಿದ್ದ.
"ನಾನು ಈ ನಾಯಿ ತಂದೆ..."!

ಮೈಸೂರು ಮಿತ್ರ

ಶನಿವಾರ, 17 ಮೇ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ..........

ಜೀವನದಲ್ಲಿ ಎರಡು ರೀತಿಯ ನೋವುಗಳಿರುತ್ತವೆ. ಒಂದು ನಿಮ್ಮನ್ನು ನೋಯಿಸಿದರೆ, ಇನ್ನೊಂದು ನಿಮ್ಮನ್ನು ಬದಲಾಯಿಸುತ್ತದೆ.

– ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಮಾಡಿ ಉಣ್ಣು ಬೇಡಿದಷ್ಟು, ತಗಾದೆ ಮಾಡದೇ ಉಣ್ಣು ನೀಡಿದಷ್ಟು

ನಿಮ್ಮ ಪತ್ರಗಳು

ನಮ್ಮ ತಲೆ ಮೇಲೆ ಹೊಡೆದವರ ಎದೆ ಸೀಳಿದೆವು

ಮಾನ್ಯರೆ

ಅಬ್ಬಾ! ಎಂತಹ ಎದೆಗಾರಿಕೆಯ ಮಾತು. ಜಮ್ಮು ಮತ್ತು ಕಾಶ್ಮೀರದ ಶ್ರೀನಗರದ ಹೊರವಲಯದಲ್ಲಿ ಇರುವ ಬಾದಾಮಿ ಬಾಗ್ ಕಂಟೋನ್ಮೆಂಟ್‌ನಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ನಮ್ಮ ಸಶಸ್ತ್ರ ಪಡೆಗಳ ಸೈನಿಕರನ್ನು ಹುರಿದುಂಬಿಸಿ ಮಾತನಾಡುತ್ತಾ, ಪಾಕಿಸ್ತಾನ ನಮ್ಮ ತಲೆ ಮೇಲೆ ದಾಳಿ ಮಾಡಿತು. ನಾವು ಅವರ ಎದೆ ಮೇಲೆ ದಾಳಿ ನಡೆಸಿ ಯಶಸ್ವಿಯಾಗಿದ್ದೇವೆ ಎಂದು ತಿಳಿಸಿರುವುದು ಶ್ಲಾಘನೀಯ, ಹೆಮ್ಮೆಯ ವಿಚಾರ.

ಪಾಕಿಸ್ತಾನದಂತಹ ರಾಕ್ಷಸ ರಾಷ್ಟ್ರದ ಕೈಯಲ್ಲಿ ಪರಮಾಣು ಅಣ್ವಸ್ತ್ರ ಇರುವುದು ಸುರಕ್ಷಿತವೇ? ಎಂದು ವಿಶ್ವ ನಾಯಕರಿಗೆ ಗಂಭೀರ ಪ್ರಶ್ನೆ ಹಾಕುವ ಮೂಲಕ ಭಾರತದ ಕೆಚ್ಚೆದೆಯ ನಡೆಯನ್ನು ಮುನ್ನೆಲೆಗೆ ತಂದಿರುವುದು ಪ್ರಶಂಸನಾರ್ಹ. ಪಾಕಿಸ್ತಾನದ ಪೋಸ್ಟ್‌ಗಳು ಮತ್ತು ಬಂಕರ್‌ಗಳನ್ನು ನೀವು ನಾಶ ಮಾಡಿದ ರೀತಿ, ಶತ್ರುಗಳ ಅಡಗು ತಾಣಗಳನ್ನು ನಾಶ ಮಾಡುವ ನಿಮ್ಮ ಶೌರ್ಯವನ್ನು ಕೊಂಡಾಡಲು ಹಾಗೂ ಉದ್ರೇಕದಲ್ಲಿದ್ದ ಜನಸಾಮಾನ್ಯರ ಈಗಿನ ಮನಸ್ಥಿತಿಯನ್ನು ನಿಮ್ಮೊಡನೆ ಹಂಚಿಕೊಳ್ಳಲು ರಕ್ಷಣಾ ಸಚಿವನಾಗಿಯೂ, ಸಂದೇಶ ವಾಹಕನಾಗಿಯೂ ನಾನು ನಿಮ್ಮ ನಡುವೆ ಒಬ್ಬ ಪೋಸ್ಟ್ ಮ್ಯಾನ್ ಆಗಿ ಬಂದು ದೇಶವಾಸಿಗಳ ಸಂದೇಶ ತಂದಿದ್ದೇನೆ ಎಂದು ಹೇಳಿರುವುದು ಪ್ರತಿಯೊಬ್ಬ ಭಾರತೀಯನು ಮೆಚ್ಚುವಂತದ್ದು.

–ಬೆಸಗರಹಳ್ಳಿ ರವಿ ಪ್ರಸಾದ್, ಮೈಸೂರು.

ನೀರಿಗಾಗಿ ಜನರ ಪರದಾಟ

ಮಾನ್ಯರೇ

ಮೈಸೂರಿನ ದಟ್ಟಗಳ್ಳಿ ಬಡಾವಣೆಗೆ ಹೊಂದಿಕೊಂಡಿರುವ ಸೋಮನಾಥ ನಗರವು ಬೋಗಾದಿ ಪಟ್ಟಣ ಪಂಚಾಯಿತಿಗೆ ಸೇರ್ಪಡೆಯಾಗಿದ್ದು ಇಲ್ಲಿ ಸಮಸ್ಯೆಗಳು ಬೆಂಬಿಡದ ಬೇತಾಳದಂತೆ ಕಾಡುತ್ತಿವೆ. ಇಷ್ಟು ದಿನ ಕಸದ ವಾಹನ ಬರದೆ ಕಸ ವಿಲೇವಾರಿಗೆ ತೊಂದರೆ ಆಗುತ್ತಿತ್ತು. ಕಸದ ಸಮಸ್ಯೆ ಬಗೆಹರಿದಿದ್ದು ಈಗ ನೀರಿನ ಮೋಟಾರ್ ರಿಪೇರಿಗೆ ಬಂದಿದೆ. ಸೋಮನಾಥನಗರದ ಜನರು ನೀರಿಲ್ಲದೆ ಪರದಾಡುವಂತಾಗಿದೆ. ಯಾರನ್ನು ಎಲ್ಲಿ ಕೇಳಬೇಕು ಎಂದು ಗೊತ್ತಿಲ್ಲದೆ ನಿವಾಸಿಗಳು ಪರಿತಪಿಸುತ್ತಿದ್ದಾರೆ. ಬದುಕಲು ಅಗತ್ಯವಿರುವ ಪ್ರತಿಯೊಂದರ ಬೆಲೆಯನ್ನು ಏರಿಸಿರುವ ಸರ್ಕಾರದ ಈ ವ್ಯವಸ್ಥೆಯಲ್ಲಿ ನೀರಿಗೂ ದುಡ್ಡು ಕೊಟ್ಟು ಟ್ಯಾಂಕರ್‌ಗಳಲ್ಲಿ ಹಾಕಿಸಿಕೊಳ್ಳಬೇಕಾಗಿದೆ. ಇದಕ್ಕೆಲ್ಲ ಯಾರು ಹೊಣೆ. ಕನಿಷ್ಠ ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿದ್ದು ಯಾರೂ ಕೂಡ ಧ್ವನಿ ಎತ್ತದೆ ಮೌನದಿಂದ ಸಮಸ್ಯೆಗಳನ್ನು ಎದುರಿಸುತ್ತಿರುವುದು ವಿಪರ್ಯಾಸ.

–ರೂಪ ಎಂ., ಸೋಮನಾಥನಗರ. ದಟ್ಟಗಳ್ಳಿ, ಮೈಸೂರು.

ಫುಟ್‌ಪಾತ್, ರಸ್ತೆಗಳ ಅತಿಕ್ರಮಣ; ಅಧಿಕಾರಿಗಳ ನಿರ್ಲಕ್ಷ್ಯ?



ಮಾನ್ಯರೆ,

ಮೈಸೂರಿನ ಹಲವೆಡೆ ಕಟ್ಟಡ ನಿರ್ಮಾಣ ಮಾಡುವವರು ರಸ್ತೆ ಹಾಗೂ ಪಾದಚಾರಿ ಮಾರ್ಗಗಳನ್ನು ಕಟ್ಟಡ ನಿರ್ಮಾಣ ಸಾಮಗ್ರಿಗಳನ್ನು ಹಾಕಲು ಬಳಸುತ್ತಿರುವುದರಿಂದ ವಾಹನ ಸಂಚಾರ ಹಾಗೂ ಪಾದಚಾರಿಗಳಿಗೆ ಬಹಳ ತೊಂದರೆಯಾಗುತ್ತಿದೆ.

ನಗರದ ಚಾಮರಾಜಪುರಂ ಬಡಾವಣೆಯಲ್ಲಿ ವರ್ಷಗಟ್ಟಲೇ ಈ ರೀತಿ ನಡೆದರೂ ಅದನ್ನು ಪ್ರಶ್ನಿಸಬೇಕಾದ ಪಾಲಿಕೆ ಹಾಗೂ ಪೊಲೀಸರು ಕಣ್ಮುಚ್ಚಿ ಕುಳಿತಿದ್ದಾರೆ.

ಫುಟ್‌ಪಾತ್‌ನಲ್ಲಿ ಅತಿಕ್ರಮಣವಾದರೆ ಜನರು ನಡೆಯಲು ರಸ್ತೆಗಿಳಿಯುತ್ತಾರೆ. ಆಗ ಅಪಘಾತವಾದರೆ ಯಾರು ಹೊಣೆ? ಸಂಚಾರಕ್ಕೆ ಅಡ್ಡಿಯುಂಟಾದರೆ ಸಂಚಾರಿ ಪೊಲೀಸರು ಕ್ರಮ ಕೈಗೊಳ್ಳಬಹುದಾದರೂ ಪೊಲೀಸರಿಗೆ ಇನ್ನಿತರ ಗುರುತರ ಕೆಲಸ (ಅತಿಗಣ್ಯರಿಗೆ ಭದ್ರತೆ ನೀಡುವುದು ಇತ್ಯಾದಿ) ವಿರುವುದರಿಂದ ಇಂತಹ ಜುಜುಬಿ ಕೆಲಸಗಳತ್ತ ಗಮನ ಹರಿಸಲು ಅವರಿಗೆ ಪುರಸೊತ್ತೇ ಇಲ್ಲ.! ಪಾಲಿಕೆಯ ಅಧಿಕಾರಿಗಳ ಬೇಜವಾಬ್ದಾರಿಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ಜಿಲ್ಲಾಡಳಿತವೇನಾದರೂ ಜೀವಂತವಾಗಿದ್ದರೆ ಈ ಬಗ್ಗೆ ಗಮನಹರಿಸಲಿ.

–ಕೊ.ಸು.ನರಸಿಂಹ ಮೂರ್ತಿ, ಹಿರಿಯ ನಾಗರಿಕ, ಚಾಮರಾಜಪುರಂ, ಮೈಸೂರು.

ನೂತನ ಸಿಜೆಐಗೆ ಅಭಿನಂದನೆಗಳು



ಮಾನ್ಯರೆ,

ಸರ್ವೋಚ್ಚ ನ್ಯಾಯಾಲಯದ ಮುಖ್ಯ ನ್ಯಾಯ ಮೂರ್ತಿಯಾಗಿ ಇತ್ತೀಚೆಗೆ ಪ್ರಮಾಣವಚನ ಸ್ವೀಕರಿಸಿರುವ ನ್ಯಾಯಮೂರ್ತಿ ಬಿ.ಆರ್.ಗವಾಯಿ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು. ದೇಶದ 52ನೇ ಮುಖ್ಯ ನ್ಯಾಯಮೂರ್ತಿಯಾಗಿರುವ ಗವಾಯಿಯವರು, ಇದೇ ವರ್ಷದ ನವಂಬರ್ 23 ರಂದು ತಮ್ಮ ಹುದ್ದೆಯಿಂದ ನಿವೃತ್ತರಾಗಲಿದ್ದಾರೆ. ನಿವೃತ್ತಿಯ ನಂತರ, ತಾವು ಸರ್ಕಾರದಿಂದ ಯಾವುದೇ ಹೊಸ ಹುದ್ದೆ ಅಥವಾ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ ಎಂದು ಸ್ಪಷ್ಟಪಡಿಸುವ ಮೂಲಕ ಗವಾಯಿಯವರು ನ್ಯಾಯಾಂಗದ ಘನತೆಯನ್ನು ಎತ್ತಿ ಹಿಡಿಯುವ ಪಣ ತೊಟ್ಟಿರುವುದು ಅನುಕರಣೀಯವಾಗಿದೆ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು



ರಾಘವೇಂದ್ರ ಸಿ.ಎಸ್.
ಉಪನ್ಯಾಸಕರು
ಶ್ರೀ ರಾಮಕೃಷ್ಣ ವಿದ್ಯಾಶಾಲಾ, ಮೈಸೂರು
ಮೊ: 9036389640

ಈ ಜೀವನ

ಹರೆಯ ಹುಚ್ಚು ಮಾರಾಯಾ...!

ಸಾಮಾನ್ಯವಾಗಿ 13ರಿಂದ 19ರ ವಯಸ್ಸಿನವರೆಗಿನ ಹಂತವೇ ಹದಿಹರೆಯದ ಹಂತ ಅಥವಾ ಟೀನೇಜ್. ಪ್ರತಿಯೊಬ್ಬರ ಬದುಕಿನಲ್ಲೂ ಈ ಹಂತ ತುಂಬಾ ಪ್ರಮುಖವಾದದ್ದು. ಈ ಹಂತದಲ್ಲಿ ಸ್ವಲ್ಪ ಎಚ್ಚರ ತಪ್ಪಿದರೂ ಜೀವನದ ಉದ್ದಕ್ಕೂ ಪರಿತಪಿಸಬೇಕಾಗುತ್ತದೆ. ಹಾಗಾಗಿಯೇ ಕವಿಭಾವ ಬಿಚ್ಚಿ ನುಡಿದ ನುಡಿ 'ಹುಚ್ಚು ಕೋಡಿ ಮನಸು, ಅದು ಹದಿನಾರರ ವಯಸು' ಎಂಬ ಮರೆಯಲಾಗದ ಅಕ್ಷರದ ಅಕ್ಷಯಕಾವ್ಯ.


ಬಾಲ್ಯವನ್ನು ಕಳೆದು ಯೌವನಾವಸ್ಥೆಗೆ ಕಾಲಿಡುವ ನಡುವೆ ಕಂಡುಬರುವ ಈ ಹಂತವೇ ಹದಿಹರೆಯದ ವಯಸ್ಸು. ಈ ವಯಸ್ಸಿನಲ್ಲಿರುವವರಿಗೆ ಸರಿಯಾದ ಮಾರ್ಗದರ್ಶನ ಲಭ್ಯವಾದರೆ ಮುಂದೆ ಸಾಮಾನ್ಯ ಜೀವನದ ಅಭಿವ್ಯಕ್ತಿಯು, ಅಸಾಮಾನ್ಯ ಶಕ್ತಿಯಾಗಿ ರೂಪುಗೊಳ್ಳಬಹುದು. ಅದೇ ತರಹ ಈ ಸಮಯದಲ್ಲಿ ಅವರಿಗೆ ಸರಿಯಾದ ಮಾರ್ಗದರ್ಶನ, ದೀಪದಾರಿಯಲ್ಲಿ ನಡೆಯಲು ಬೆಳಕು ಲಭ್ಯವಾಗದಿದ್ದರೆ ಇಡೀ ಬದುಕು ಕತ್ತಲ ಕಡಲಲ್ಲಿ ಮುಳುಗಿ ಹೋಗುತ್ತದೆ ಅಲ್ಲದೆ ಅಲ್ಲಿಯ ಜೀವಬಂಧುಗಳು ಸಮಾಜಕ್ಕೂ ಕಂಟಕ ಪ್ರಾಯವಾಗುವರು. ಈ ನೆಲೆಯಲ್ಲಿ ಹದಿಹರೆಯದ ಭಾವದ ಕಡಲನ್ನು ವ್ಯಾಪಿಸಿರುವ ಅಂಶಗಳ ಕುರಿತು ಒಂದಷ್ಟು ಅವಲೋಕನ, ಬೆಳಕು ಇಲ್ಲಿ ಕವಲೊಡೆದು ಬಳ್ಳಿಯಾಗಿ ಹಬ್ಬಿದೆ.

ಆದಮ್ಯವಾದ ಉತ್ಸಾಹ : ಯುವಜನತೆಯಲ್ಲಿ ಅದರಲ್ಲಿಯೂ ಮುಖ್ಯವಾಗಿ ಹದಿಹರೆಯದವರಲ್ಲಿ ಏನು ಬೇಕಾದರೂ ಮಾಡಬಲ್ಲ ಉತ್ಸಾಹ, ಚುರುಕುತನ ಇರುವುದರಿಂದ ದೇಶದ ಭವಿಷ್ಯವನ್ನು ಬದಲಿಸಬಲ್ಲಂತಹ ಶಕ್ತಿ ಅವರಲ್ಲಿ ಹುದುಗಿರುತ್ತದೆ. ಇಂತಹ ಯುವಜನತೆಯಿಂದ ಭವ್ಯ ಭಾರತದ ನಿರ್ಮಾಣ ಸಾಧ್ಯ. ಏಕೆಂದರೆ ಈ ಹರೆಯದ ವಯಸ್ಸಿನಲ್ಲಿ ಭಯ ಎಂಬುದು ಇರುವುದಿಲ್ಲ, ಏನೇ ಆದರೂ ಅದನ್ನು ಮಾಡಬಲ್ಲ ಉತ್ಸಾಹ, ಹುರುಪು ಇರುತ್ತದೆ. ಯುವಜನತೆಯನ್ನು ಸರಿಯಾದ ರೀತಿಯಲ್ಲಿ ಸದ್ಬಳಕೆ ಮಾಡಿಕೊಂಡಿದ್ದೇ ಆದಲ್ಲಿ ಪ್ರಬಲ ರಾಷ್ಟ್ರ ನಿರ್ಮಾಣ ಸಾಧ್ಯವಾಗುತ್ತದೆ. ಒಮ್ಮೆ ಸ್ವಾಮಿ ವಿವೇಕಾನಂದರು ತಮ್ಮೊಡನೆ ಇದ್ದ ಯುವ ಜನತೆಯನ್ನು ಕುರಿತು ಆ ಬೆಟ್ಟವನ್ನು ನೋಡಿ ಎಂದರಂತೆ, ಆಗ ಆ ಯುವ ಸಮುದಾಯ ಬೆಟ್ಟವನ್ನು ಪುಡಿಮಾಡಬೇಕೇ ಸ್ವಾಮೀಜಿ ಎಂಬ ಉತ್ತರವನ್ನು ನೀಡಿದರಂತೆ. ಅಷ್ಟರಮಟ್ಟಿಗೆ ಆದಮ್ಯವಾದ ಉತ್ಸಾಹ, ಚೈತನ್ಯ ಆ ಯುವಕರಲ್ಲಿ ಇತ್ತು. ಇಂತಹ ಯುವ ಸಮುದಾಯದಿಂದ ರಾಷ್ಟ್ರ ನಿರ್ಮಾಣ ಸಾಧ್ಯವಾಗಬಲ್ಲದು.

ಆದರೆ ಪ್ರಸ್ತುತ ಸನ್ನಿವೇಶದಲ್ಲಿ ಬದಲಾಗುತ್ತಿರುವ ಕಾಲಮಾನಕ್ಕೆ ತಕ್ಕಂತೆ ಯುವ ಜನಾಂಗ ಸಾಮಾಜಿಕ ಜಾಲತಾಣಗಳ ಹಿಂದೆ ಬಿದ್ದಿದ್ದಾರೆ. ವಾಸ್ತವದ ಬದುಕಿಗಿಂತ ಭ್ರಮೆಯ ಹಿಂದೆ ಬಿದ್ದು ಹೊರಳಾಡುತ್ತಿದ್ದಾರೆ. ಜಿದ್ದಿಗೆ ಬಿದ್ದವರಂತೆ ಸಾಮಾಜಿಕ ಜಾಲತಾಣಗಳಲ್ಲಿ ಮುಳುಗಿ ತಮ್ಮ ಸ್ವ–ಸಾಮರ್ಥ್ಯವನ್ನು ದವಾಖಾನೆಗೆ ದಾಖಲಿಸಿ, ಬದುಕಿನ ವಾಸ್ತವತೆಯನ್ನು ಸಮಾಧಿ ಮಾಡಿ ಜೀವಿಸುತ್ತಿದ್ದಾರೆ. ಇಂತಹ ಹದಿಹರೆಯದವರಿಗೆ ಟ್ರೆಂಡ್ ಆಗುವುದಕ್ಕಿಂತ ಬದುಕು ಮುಖ್ಯವಾದುದು ಎಂಬ ವಾಸ್ತವದ ಅರಿವನ್ನು ಮೂಡಿಸಬೇಕು. ಅವರಲ್ಲಿರುವ ಅಗಾಧವಾದ ಉತ್ಸಾಹವನ್ನು ಸರಿಯಾಗಿ ಸದ್ಬಳಕೆ ಮಾಡಿಕೊಂಡರೆ ಸಾಧನೆಯ ಹಾದಿಗೆ ಅವರನ್ನು ಪ್ರೇರೇಪಣೆಗೊಳಿಸಬಹುದು.

ಹಠ–ಛಲದ ಉನ್ಮಾದ: ಹದಿಹರೆಯದವರಲ್ಲಿ ತಾವು ಹಿಡಿದ ಕೆಲಸವನ್ನು ಅದು ಎಷ್ಟೇ ಕಷ್ಟವಾದರೂ ಬೆಂಬಿಡದೆ ಸಾಧಿಸುವಂತಹ ಹಠ–ಛಲದ ಉನ್ಮಾದ ಉಕ್ಕುತ್ತಲೇ ಇರುತ್ತದೆ. ಆ ಹಠ–ಛಲ ಎಂತಹ ಪರಿಸ್ಥಿತಿಯಲ್ಲಿಯೂ ಕಡಿಮೆಯಾಗಲಾರದು. ಹದಿಹರೆಯದವರ ಈ ಹಠ–ಛಲವನ್ನು ಸರಿಯಾದ ಮಾರ್ಗದಲ್ಲಿ ಬಳಸಿಕೊಂಡಿದ್ದೇ ಆದಲ್ಲಿ ಭವ್ಯ ರಾಷ್ಟ್ರ ನಿರ್ಮಾಣದ ಜೊತೆಗೆ ಬದುಕಿನ ಹೂವು ಅರಳಿ ಸಾಧನೆಯ ಗಿರಿಶಿಖರಕೆ ಮುಡಿಸಿ ಜೀವನದ ವನವು ಶೋಭಿಸಲು ಸಾಧ್ಯವಾಗುತ್ತದೆ.

ಬಣ್ಣ ಬಣ್ಣದ ಹೋಕುಳಿಯಲ್ಲಿ ಮನಸ್ಸು ಅದ್ದಿ ಬಗೆ ಬಗೆಯ ಸೆಳೆತಗಳು ಬರ ಸೆಳೆಯುವುದು ಈ ವಯಸ್ಸಿನಲ್ಲಿ ಸಹಜ ಗರಿಗೆದರಿರುತ್ತದೆ ಅಂತಹ ಆಕರ್ಷಣೆಗಳಿಗಿಂತ ವಾಸ್ತವ ಮುಖ್ಯವಾದುದು ಎಂಬ ಅರಿವನ್ನು ಮೂಡಿಸಬೇಕು. ಏನಾದರೂ ಸಾಧನೆ ಮಾಡಬೇಕೆಂಬ ಆತ್ಮವಿಶ್ವಾಸವನ್ನು ಮೂಡಿಸಿದರೆ ಖಂಡಿತವಾಗಿ ಅದನ್ನು ಸಾಕಾರಗೊಳಿಸುವಲ್ಲಿ ಪ್ರೇರಣೆ ನೀಡುತ್ತಿರಬೇಕು. ಇಲ್ಲದಿದ್ದರೆ ಹಠ–ಛಲ ಬೇಡದ ವಿಚಾರಗಳಲ್ಲಿ ಮೂಡಿಬಂದರೆ ಅದರಿಂದ ಅಪಾಯ ಸಾಧ್ಯ. ಆದ್ದರಿಂದ ಸರಿಯಾದ ಮಾರ್ಗದರ್ಶನವನ್ನು ನೀಡಿ ಸಕರಾತ್ಮಕ ದಾರಿಯತ್ತ ಅವರನ್ನು ಸೆಳೆಯುವ ಪ್ರಯತ್ನ ಮಾಡಬೇಕು.



> ಹೆಣ್ಣು ಮಕ್ಕಳನ್ನು ತುಂಬಾ ಸಲುಗೆಯಿಂದ ಬೆಳೆಸಬಾರದು, ಶಿಸ್ತಿನಿಂದ ಬೆಳೆಸಬೇಕು ಎಂದು ಕಣ್ಣಿಗೆ ಗೋಚರವಾಗದ ಬೇಲಿಯನ್ನು ಹಾಕಿ ಬೆಳೆಸುವ ಕೆಲಸ ನಮ್ಮಲ್ಲಿ ಬಹುತೇಕರಲ್ಲಿದೆ. ಹದಿಹರೆಯದವರು ಈ ಹಂತದಲ್ಲಿ ಕಾಣದ ಬೇಲಿಯನ್ನು ಬುಡ ಸಮೇತ ಕಿತ್ತೊಗೆದು ಹೊರ ನಡೆಯುವ ಕೆಲಸವನ್ನು ಒಳಗೊಳಗೆ ನಡೆಸುತ್ತಿರುತ್ತಾರೆ. ಆದ್ದರಿಂದ ಸಾಧ್ಯವಾದಷ್ಟು ಮನೆಯಲ್ಲಿ ಹೆಣ್ಣು ಅಥವಾ ಗಂಡು ಮಕ್ಕಳನ್ನಾಗಲೀ ಸ್ನೇಹಿತರಂತೆ ನಡೆಸಿಕೊಳ್ಳುವ ಮನೋಭಾವ ಬೆಳೆಸಿಕೊಳ್ಳಬೇಕು. ಅವರ ಅಗತ್ಯಗಳನ್ನು, ಅವರಿಗೆ ಆಗುತ್ತಿರುವ ಗೊಂದಲಗಳನ್ನು ನಿವಾರಿಸುವಂತಹ ಮುಕ್ತ ವಾತಾವರಣವನ್ನು ಕಲ್ಪಿಸಿಕೊಡಬೇಕು.

ನಾಯಕತ್ವದ ಗುಣ : ಹದಿಹರಿಯದ ವಯಸ್ಸು ಸದಾ ಹರಿಯುವ ಹೊನ್ನೊಳೆ, ಅದು ಹರಿದಾಡುವ ಭಾವ. ಈ ಚಂಚಲ, ಕೋಮಲ ಕಮಲವನ್ನು ಪ್ರತಿಯೋರ್ವರು ಗಮನಿಸಬೇಕು, ಲೈಕ್ಸ್ ಎಂಬ ಮಾಯದ ಬೆನ್ನೇರಿ, ಮತಿಯೋ–ಮತಿಹೀನವೋ ನಗುವಲ್ಲಿ ಮೊಗ್ಗು ಹಿಡಿದು ಕಿನ್ನರಿ ಬಾರಿಸುತ್ತಾ ತನ್ನತ್ತ ಕಾಣುವ ಕಣ್ಣುಗಳ ಒಳಗೆ ರೂಪವ ಪ್ರತಿಷ್ಠಾಪನೆಗೆ ಹಾತೊರೆಯುವ ಸೆಳಕು. ಇಲ್ಲಿ ಪ್ರತಿಯೋರ್ವರಿಗೂ ನಾಯಕತ್ವ ಪಟ್ಟ ಬೇಕೇ ಬೇಕು. ಈ ಹಂತದಲ್ಲಿ ಎಲ್ಲರೂ ತಮ್ಮನ್ನು ಗುರುತಿಸಬೇಕು, ನಮ್ಮ ಬಗ್ಗೆಯೇ ಮಾತನಾಡಬೇಕು, ಒಳ್ಳೆಯದ್ದೋ, ಕೆಟ್ಟದ್ದೋ ನಾವು ಯಾವಾಗಲೂ ಪ್ರಚಲಿತದಲ್ಲಿರಬೇಕು ಎಂಬ ಮನೋಭಾವ ಈ ಹದಿಹರೆಯದವರಲ್ಲಿ ತುಸು ಹೆಚ್ಚಾಗಿಯೇ ಇರುತ್ತದೆ. ಸಾಧ್ಯವಾದಷ್ಟು ಒಳ್ಳೆಯ ಕೆಲಸಗಳಿಗೆ ಹೆಚ್ಚು ಪ್ರೋತ್ಸಾಹ ನೀಡುವ, ಕೆಟ್ಟ ಕೆಲಸಗಳನ್ನು ಮಾಡಿದಾಗ ಅದರಿಂದಾಗುವ ಕೆಡಕುಗಳ ಬಗ್ಗೆ ತಿಳಿಸುವ ಕೆಲಸವನ್ನು ಮಾಡಬೇಕು. ಇದರಿಂದ ಅವರಲ್ಲಿ ಯಾವುದನ್ನು ಮಾಡಬೇಕು, ಯಾವುದನ್ನು ಮಾಡಬಾರದೆಂಬ ಜವಾಬ್ದಾರಿಯ ಅರಿವನ್ನು ಬೆಳೆಸಿದಂತಾಗುತ್ತದೆ.

ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸಬೇಕು: ಹದಿಹರೆಯದ ಹಂತದಲ್ಲಿ ಅವರಲ್ಲಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸಿದರೆ ಖಂಡಿತವಾಗಿಯೂ ಆ ಕ್ಷೇತ್ರದಲ್ಲಿ ಅವರು ಉತ್ತಮ ವ್ಯಕ್ತಿಯಾಗಿ ರೂಪುಗೊಳ್ಳಲು ಸಾಧ್ಯವಿದೆ. ಅವರ ಆಸಕ್ತಿಯ ಕ್ಷೇತ್ರವನ್ನು ಕಡೆಗಣಿಸಿ ನಮಗಿಷ್ಟವಾದ ಕ್ಷೇತ್ರದ ಕಡೆಗೆ ಒಲವನ್ನು ಮೂಡಿಸಿಕೊಳ್ಳಬೇಕು ಎಂದು ಒತ್ತಡವನ್ನು ಹೇರಿದರೆ ಖಂಡಿತವಾಗಿಯೂ ಅವರ ಆಸಕ್ತಿಯ ಕ್ಷೇತ್ರದಲ್ಲೂ ಬೆಳೆಯಲಾಗದೆ, ಇತ್ತ ನಮ್ಮ ಆಸಕ್ತಿಯ ಕ್ಷೇತ್ರದಲ್ಲಿಯೂ ಬೆಳೆಯಲಾಗದೆ ದುಃಖಕ್ಕೆ ಒಳಗಾಗುತ್ತಾರೆ. ಆದ್ದರಿಂದ ಸೂಕ್ತವಾದ ಮಾರ್ಗದರ್ಶನವನ್ನು ನೀಡಿ ಅವರಲ್ಲಿರುವ ಪ್ರತಿಭೆಯ ಅನಾವರಣಕ್ಕೆ ಅವಕಾಶವನ್ನು ನೀಡಿದರೆ ಖಂಡಿತವಾಗಿಯೂ ಅವರಿಂದ ಸಾಧನೆ ಸಾಧ್ಯವಾಗುತ್ತದೆ. ಪ್ರತಿಯೊಬ್ಬರಲ್ಲೂ ಅವರದೇ ಆದ ಪ್ರತಿಭೆ ಇರುತ್ತದೆ ಅವರಂತೆ ನೀನಾಗಬೇಕು ಎನ್ನುವ ಬದಲು ನಿನ್ನಂತೆ ನೀನಾಗು ಎಂಬ ತಿಳುವಳಿಕೆಯನ್ನು ಮೂಡಿಸಿ ಸಹಜವಾಗಿ ಅವರಲ್ಲಿರುವ ಪ್ರತಿಭೆ ಅನಾವರಣವಾಗಲು ಸೂಕ್ತವಾದ ವೇದಿಕೆಯನ್ನು ನಿರ್ಮಿಸಿಕೊಟ್ಟರೆ ಖಂಡಿತವಾಗಿಯೂ ಅಪೂರ್ವವಾದ ಸಾಧನೆಯನ್ನು ಹದಿಹರೆಯದವರು ಮಾಡಬಲ್ಲರು. ಉದಾಹರಣೆಗೆ ಓದಿನಲ್ಲಿ ಆಸಕ್ತಿ ಇಲ್ಲದ ವಿದ್ಯಾರ್ಥಿಗೆ ಕ್ರೀಡೆಯಲ್ಲಿ ಆಸಕ್ತಿ ಇರಬಹುದು. ಆ ಆಸಕ್ತಿಯನ್ನು ಗುರುತಿಸಿ ಪ್ರೋತ್ಸಾಹಿಸಿದರೆ ಆ ಕ್ಷೇತ್ರದಲ್ಲಿ ಅವರು ಅಪರೂಪದ ಸಾಧನೆಯನ್ನು ಮಾಡಬಹುದು.

ಜೀವನದ ಬಗ್ಗೆ ತಿಳಿಸಬೇಕು : ಸಾಮಾನ್ಯವಾಗಿ ಹದಿಹರೆಯದಲ್ಲಿ ಆಕರ್ಷಣೆಗಳು ಹೆಚ್ಚಾಗಿ ಇರುತ್ತದೆ. ಭಿನ್ನ ಲಿಂಗದವರೊಂದಿಗೆ ಬಹು ಬೇಗನೇ ಆಕರ್ಷಣೆಗೆ ಒಳಗಾಗಿ ಪ್ರೀತಿ ಎಂಬ ಹೆಸರಿನಲ್ಲಿ ಮೋಸ ಹೋಗುವವರ ಸಂಖ್ಯೆ ದಿನೇದಿನೆ ಹೆಚ್ಚಾಗುತ್ತಿದೆ. ಸಾಮಾಜಿಕ ಜಾಲತಾಣ, ಮೊಬೈಲ್, ಸಿನಿಮಾಗಳಲ್ಲಿ ನೋಡುವ, ಕೇಳುವುದನ್ನೇ ಸರಿ ಎಂದು ಭಾವಿಸಿ ಸಣ್ಣ ವಯಸ್ಸಿನಲ್ಲಿಯೇ ಮದುವೆ ಮಾಡಿಕೊಂಡು ಮುಂದೆ ಆ ಮದುವೆ ಯಶಸ್ವಿಯಾಗದೇ ವಿಚ್ಛೇದನದಲ್ಲಿ ಕೊನೆಯಾಗುತ್ತಿರುವುದು ಸರ್ವಸಾಮಾನ್ಯವಾಗಿದೆ. ಬದುಕು ಅಂದುಕೊಂಡದಕ್ಕಿಂತ ಭಿನ್ನವಾದುದು. ಅದರಿಂದ ಕಲಿಯುವ ಪಾಠಗಳು ಅಗಾಧವಾದುದು,ಇವುಗಳ ಬಗ್ಗೆ ಸೂಕ್ತ ರೀತಿಯಲ್ಲಿ ಮಾರ್ಗದರ್ಶನ ನೀಡಬೇಕು.

ಹದಿಹರೆಯದವರಲ್ಲಿ ಸಾಮಾನ್ಯವಾಗಿ ದೈಹಿಕ ಮಾನಸಿಕ ಬದಲಾವಣೆಗಳು ಆದಂತೆ ತಮ್ಮನ್ನು ನೋಡಿಕೊಳ್ಳುವವರು, ಹೊಗಳುವವರು, ತಮ್ಮ ಸೌಂದರ್ಯವನ್ನು ಆಸ್ವಾದಿಸುವವರು ಬೇಕೆಂದು ಅಪೇಕ್ಷಿಸುತ್ತಾರೆ. ಅಂತ ಸಮಯದಲ್ಲಿ ಬಹುಬೇಗನೆ ಸ್ವಲ್ಪ ಅವರಿಗಿಷ್ಟವಾದಂತೆ ನಡೆದುಕೊಂಡರೆ ಸಾಕು ಪ್ರೀತಿಯ ಬಲೆಯಲ್ಲಿ ಬೀಳುತ್ತಾರೆ. ಆದ್ದರಿಂದ ಅವರಿಗೆ ವಾಸ್ತವದ ಬದುಕಿನ ಚಿತ್ರಣವನ್ನು ಕಲಿಸಿಕೊಡಬೇಕು.ತಮ್ಮ ಮನೆಯ ವಾತಾವರಣ, ಬದುಕು ನಡೆಸಲು ಪಡಬೇಕಾದ ಕಷ್ಟ, ಓದು ಅನಿವಾರ್ಯ, ಸ್ವಾವಲಂಬಿಯಾಗಿ ಬದುಕಬೇಕು, ಒಳ್ಳೆಯ ಉದ್ಯೋಗ ಪಡೆದು ನಂತರ ಬದುಕಿನ ಲೆಕ್ಕಾಚಾರಗಳನ್ನು ತೀರ್ಮಾನ ಮಾಡಿಕೊಳ್ಳುವ ವಯಸ್ಸಿಗೆ ಬಂದ ನಂತರ ನಿಮ್ಮ ತೀರ್ಮಾನ ನೀವೇ ತೆಗೆದುಕೊಳ್ಳಿ ಎಂಬ ವಾಸ್ತವತೆಯನ್ನು ಮೂಡಿಸಬೇಕು. ನಮ್ಮಲ್ಲಿ ಅನೇಕರಿಗೆ ಮುಖ್ಯವಾಗಿ ಮನೆಯ ಹಿರಿಯರಿಗೆ ತಮ್ಮ ಮಕ್ಕಳು ಯಾವ ಹುಡುಗ ಅಥವಾ ಹುಡುಗಿಯ ಪ್ರೀತಿಸುತ್ತಿದ್ದಾರೆ ಎಂದು ತಿಳಿದರೆ ಸಾಕು ಆ ವಿಷಯವನ್ನು ದೊಡ್ಡದಾಗಿ ಮಾಡಿ ಬಹುಬೇಗನೆ ಬೇರೆಯವರೊಂದಿಗೆ ಮದುವೆ ಮಾಡಿ ತಮ್ಮ ಜವಾಬ್ದಾರಿ ಮುಗಿಯಿತು ಎಂದು ಭಾವಿಸುತ್ತಾರೆ. ಮನೆತನದ ಮರ್ಯಾದೆ ಮುಖ್ಯ ಎಂದು ಭಾವಿಸುತ್ತಾರೆ. ಹಿರಿಯರಾಗಿ ಅವರು ನಡೆದುಕೊಳ್ಳುವ ಪ್ರೀತಿ ತಪ್ಪಿಲ್ಲ. ಆದರೆ ಬದಲಾಗುತ್ತಿರುವ ಕಾಲಕ್ಕೆ ತಕ್ಕಂತೆ ನಮ್ಮನ್ನು ನಾವು ಬದಲಿಸಿಕೊಳ್ಳಲೇ ಬೇಕು. ಹದಿಹರೆಯದಲ್ಲಿ ಹುಟ್ಟುವ ಪ್ರೀತಿ ಕೇವಲ ಆಕರ್ಷಣೆಯಿಂದ ಮಾತ್ರ ಕೂಡಿರುತ್ತದೆ.ಆದರೆ ಬದುಕು ಆಕರ್ಷಣೆಗಿಂತಲೂ ಭಿನ್ನವಾದುದು ಎಂಬ ಅಂಶವನ್ನು ಹದಿಹರೆಯವರಿಗೆ ಮನವರಿಕೆ ಮಾಡಿಕೊಡಬೇಕು.

ನಾನು ಪಟ್ಟ ಕಷ್ಟವನ್ನು ನಮ್ಮ ಮಕ್ಕಳು ಪಡಬಾರದು ಎಂದು ಬಹುತೇಕ ಹಿರಿಯರು ಭಾವಿಸುತ್ತಾರೆ. ಬದುಕನ್ನು ನಡೆಸಲು ಹೆಣಗುತ್ತಿರುವ ತಮ್ಮ ಪರಿಸ್ಥಿತಿಯನ್ನು ಮಕ್ಕಳಿಗೆ ತಿಳಿಸದೆ ಮುಚ್ಚಿಡುತ್ತಾರೆ. ಇದು ತಪ್ಪು. ಬದುಕಿನ ವಾಸ್ತವತೆಯನ್ನು ಮಕ್ಕಳಿಗೆ ತೆರೆದಿಡುವ ಕೆಲಸವನ್ನು ಮಾಡಬೇಕು. ಅವರಲ್ಲಿ ಜವಾಬ್ದಾರಿಯನ್ನು ಬೆಳೆಸಬೇಕು. ಜೀವನದ ಕಟು ಸತ್ಯವನ್ನು ತಿಳಿಸಿ ಒಳ್ಳೆಯ ನಾಗರಿಕರಾಗುವಲ್ಲಿ ತಮ್ಮ ಪಾತ್ರ ಎಷ್ಟು ಮುಖ್ಯ ಎಂಬುದನ್ನು ಮನವರಿಕೆ ಮಾಡಿಕೊಡಬೇಕು.

ಸ್ನೇಹಿತರಂತೆ ಅವರ ಭಾವನೆಗಳನ್ನು ಗೌರವಿಸಬೇಕು : ಹದಿಹರೆಯದವರಲ್ಲಿ ಮೂಡುವ ಸಂದೇಹಗಳಿಗೆ, ಅವರ ಬದುಕಿನಲ್ಲಿ ಆಗುತ್ತಿರುವ ಬದಲಾವಣೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸುವ ಗುಣವನ್ನು ಉಳ್ಳಂತಹ ಅವರ ಭಾವನೆಗಳನ್ನು ಗೌರವಿಸುವವರು ಬೇಕಾಗುತ್ತಾರೆ. ಬದುಕಿನಲ್ಲಿ ಶಿಸ್ತು ಮುಖ್ಯ ನಿಜ. ಆದರೆ ಕೇವಲ ಶಿಸ್ತಿನಿಂದಲೇ ಎಲ್ಲವನ್ನೂ ಕಲಿಸುವುದಕ್ಕೆ ಆಗದು. ಬದಲಾಗುತ್ತಿರುವ ಸಮಾಜದಲ್ಲಿ ಗೆಳೆಯರಂತೆ ಅವರ ಭಾವನೆಗಳನ್ನು ಗೌರವಿಸುವ ಗುಣ ನಮದಾದರೆ ಮಾತ್ರ ಅವರಿಗಿರುವ ಎಲ್ಲ ಬೇಕು, ಬೇಡಗಳನ್ನು ಮುಕ್ತವಾಗಿ ಹಂಚಿಕೊಳ್ಳುತ್ತಾರೆ. ಇಲ್ಲದಿದ್ದರೆ ಮನಸ್ಸಿನೊಳಗಿಟ್ಟುಕೊಂಡು ಪರಿತಪಿಸುತ್ತಾರೆ.

ಮುಖ್ಯವಾಗಿ ಹೆಣ್ಣು ಮಕ್ಕಳನ್ನು ತುಂಬಾ ಸಲುಗೆಯಿಂದ ಬೆಳೆಸಬಾರದು, ಶಿಸ್ತಿನಿಂದ ಬೆಳೆಸಬೇಕು ಎಂದು ಕಣ್ಣಿಗೆ ಗೋಚರವಾಗದ ಬೇಲಿಯನ್ನು ಹಾಕಿ ಬೆಳೆಸುವ ಕೆಲಸ ನಮ್ಮಲ್ಲಿ ಬಹುತೇಕರಲ್ಲಿದೆ. ಹದಿಹರೆಯದವರು ಈ ಹಂತದಲ್ಲಿ ಕಾಣದ ಬೇಲಿಯನ್ನು ಬುಡ ಸಮೇತ ಕಿತ್ತೊಗೆದು ಹೊರ ನಡೆಯುವ ಕೆಲಸವನ್ನು ಒಳಗೊಳಗೆ ನಡೆಸುತ್ತಿರುತ್ತಾರೆ. ಆದ್ದರಿಂದ ಸಾಧ್ಯವಾದಷ್ಟು ಮನೆಯಲ್ಲಿ ಹೆಣ್ಣು ಅಥವಾ ಗಂಡು ಮಕ್ಕಳನ್ನಾಗಲೀ ಸ್ನೇಹಿತರಂತೆ ನಡೆಸಿಕೊಳ್ಳುವ ಮನೋಭಾವ ಬೆಳೆಸಿಕೊಳ್ಳಬೇಕು. ಅವರ ಅಗತ್ಯಗಳನ್ನು, ಅವರಿಗೆ ಆಗುತ್ತಿರುವ ಗೊಂದಲಗಳನ್ನು ನಿವಾರಿಸುವಂತಹ ಮುಕ್ತ ವಾತಾವರಣವನ್ನು ಕಲ್ಪಿಸಿಕೊಡಬೇಕು.

ರಾಜ್ಯಕ್ಕೆ ಅಗತ್ಯವಿರುವ ಎಲೆಕ್ಟ್ರಿಕ್ ಬಸ್ ಆದ್ಯತೆ ಮೇಲೆ ಪೂರೈಕೆ

● ರಾಜ್ಯ ಸಾರಿಗೆ ಸಚಿವ ರಾಮಲಿಂಗಾರೆಡ್ಡಿಯವರಿಗೆ ಕೇಂದ್ರ ಸಚಿವ ಕುಮಾರಸ್ವಾಮಿ ಭರವಸೆ ● ಪ್ರಧಾನಮಂತ್ರಿ ಇ–ಡ್ರೈವ್ ಯೋಜನೆಯಡಿ ಬಸ್ ಒದಗಿಸಲು ತೀರ್ಮಾನ

ಬೆಂಗಳೂರು, ಮೇ 16(ಕೆಎಂಶಿ)– ರಾಜ್ಯದ ಪ್ರಮುಖ ನಗರಗಳಿಗೆ ಅಗತ್ಯವಿರುವ ಎಲೆಕ್ಟ್ರಿಕ್ ಬಸ್‌ಗಳನ್ನು ಕೇಂದ್ರ ಒದಗಿಸಲಿದೆ ಎಂದು ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ.

ದೆಹಲಿಯಲ್ಲಿಂದು ರಾಜ್ಯ ರಸ್ತೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಕುಮಾರಸ್ವಾಮಿ ಅವರನ್ನು ಭೇಟಿ ಮಾಡಿ, ಹೆಚ್ಚು ಬಸ್‌ಗಳನ್ನು ಒದಗಿಸುವಂತೆ ಕೋರಿದ ಮನವಿಗೆ ಕೇಂದ್ರ ಸಚಿವರು ಸ್ಪಂದಿಸಿದ್ದಾರೆ. ಕೇಂದ್ರ ಸರಕಾರ ಪ್ರಾಯೋಜಿತ ಪಿಎಂ ಇ–ಡ್ರೈವ್ ಉಪಕ್ರಮದ ಅಡಿಯಲ್ಲಿ ಎಲೆಕ್ಟ್ರಿಕ್ ಬಸ್‌ಗಳನ್ನು ಹಂಚಿಕೆ ಮಾಡುವಂತೆ ರೆಡ್ಡಿ ಕೋರಿದ್ದರು. ಅಲ್ಲದೆ, ಕರ್ನಾಟಕ ಸರಕಾರಕ್ಕೆ ಕೇಂದ್ರದಿಂದ ಸಂಪೂರ್ಣ ಬೆಂಬಲ ನೀಡುವುದಾಗಿ ಭರವಸೆ ನೀಡಿದ ಕುಮಾರಸ್ವಾಮಿ ಅವರು, ವಿದ್ಯುತ್ ಚಾಲಿತ ಬಸ್ಸುಗಳ ಹಂಚಿಕೆ ಪ್ರಕ್ರಿಯೆ ಈಗಾಗಲೇ ನಡೆಯುತ್ತಿದೆ ಮತ್ತು ರಾಜ್ಯಕ್ಕೆ ಹಂತ ಹಂತವಾಗಿ, ಆದ್ಯತೆಯ ಮೇರೆಗೆ ವಿದ್ಯುತ್ ಚಾಲಿತ ಬಸ್ಸುಗಳನ್ನು ಹಂಚಿಕೆ ಮಾಡಲಾಗುವುದು ಎಂದು ಭರವಸೆ ನೀಡಿದರು.

ಕರ್ನಾಟಕಕ್ಕೆ ಕೇಂದ್ರ ಸರಕಾರದಿಂದ ಸೂಕ್ತ ಬೆಂಬಲ ಸಿಗುತ್ತದೆ ಎಂದು ನಾನು ಖಚಿತಪಡಿಸುತ್ತೇನೆ ಎಂದು ರಾಮಲಿಂಗಾ



ಕುಮಾರಸ್ವಾಮಿ ರಾಮಲಿಂಗಾರೆಡ್ಡಿ

ರೆಡ್ಡಿ ಅವರಿಗೆ ಸ್ಪಷ್ಟವಾಗಿ ತಿಳಿಸಿದ ಕುಮಾರಸ್ವಾಮಿ, ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿಯಿಂದ ಪಿಎಂ ಇ–ಡ್ರೈವ್ ಯೋಜನೆ ಅತ್ಯಂತ ಯಶಸ್ವಿಯಾಗಿ ಮುಂದುವರಿಯುತ್ತಿದೆ.

ಸಾರಿಗೆ ವ್ಯವಸ್ಥೆಯಲ್ಲಿ, ಅದರಲ್ಲಿಯೂ ನಗರ ಪ್ರದೇಶಗಳಲ್ಲಿ ವಾಹನಗಳು ಹೊರ ಸೂಸುವ ಮಾಲಿನ್ಯವನ್ನು ಶೂನ್ಯಮಟ್ಟಕ್ಕೆ ಇಳಿಸುವ ನಿಟ್ಟಿನಲ್ಲಿ ಕರ್ನಾಟಕವೂ ಸೇರಿ ಭಾರತದಾದ್ಯಂತ ವಿದ್ಯುತ್ ಚಾಲಿತ ಬಸ್ಸುಗಳ ಅಳವಡಿಕೆಗೆ ಕೇಂದ್ರ ಸರಕಾರವು ದೊಡ್ಡ ಪ್ರಮಾಣದಲ್ಲಿ ಪ್ರಯತ್ನ ಮಾಡುತ್ತಿದೆ. ಕರ್ನಾಟಕವು ಪಿಎಂ ಇ–ಡ್ರೈವ್ ಯೋಜನೆ ಅಡಿಯಲ್ಲಿ ಖಂಡಿತವಾಗಿಯೂ ಹೆಚ್ಚು ಬಸ್ಸುಗಳನ್ನು ಪಡೆಯುತ್ತದೆ" ಎಂದು ತಿಳಿಸಿದರು.

ಪಿಎಂ ಇ–ಡ್ರೈವ್ ಉಪಕ್ರಮದಡಿಯಲ್ಲಿ 9 ಪ್ರಮುಖ ನಗರಗಳಿಗೆ 14,000 ವಿದ್ಯುತ್ ಚಾಲಿತ ಬಸ್‌ಗಳನ್ನು ಹಂಚಿಕೆ ಮಾಡಲಾಗುವುದು. ಚಾರ್ಜಿಂಗ್ ಸ್ಟೇಷನ್‌ಗಳು, ಬಸ್ ಡಿಪೋಗಳು ಮತ್ತು ವಾಹನ ನಿರ್ವಹಣಾ ವ್ಯವಸ್ಥೆ ಸೇರಿದಂತೆ ಸಂಬಂಧಿತ ಮೂಲಸೌಕರ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರಕಾರಗಳ ನಡುವಿನ ಚರ್ಚೆ ನಡೆಸುತ್ತಿವೆ. ಈಗಾಗಲೇ ಗುರುತಿಸಲಾದ ನಗರ ಸಮೂಹಗಳಲ್ಲಿ ಈ ಯೋಜನೆಯ ತ್ವರಿತ ಅನುಷ್ಠಾನವನ್ನು ಖಚಿತಪಡಿಸಿಕೊಳ್ಳಲು ಸಚಿವಾಲಯದ ಹಿರಿಯ ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನ ನೀಡಲಾಗಿದೆ ಎಂದು ಸಚಿವ ಕುಮಾರಸ್ವಾಮಿ ಹೇಳಿದರು.

ನಾವು ವಿದ್ಯುತ್ ಚಾಲಿತ ಬಸ್ಸುಗಳನ್ನು ವಿತರಿಸುತ್ತಿದ್ದೇವೆ ಎನ್ನುವುದಕ್ಕಿಂತ, ನಾವು ಭಾರತದ ಜನತೆಗೆ ಸ್ವಚ್ಛ, ಚುರುಕಾದ ಮತ್ತು ಹೆಚ್ಚು ಉತ್ತಮವಾದ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸುತ್ತಿದ್ದೇವೆ ಎಂದು ತಿಳಿಸಿದ ಕೇಂದ್ರ ಸಚಿವರು, ಬೆಂಗಳೂರು ನಗರ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ನಗರವಾಗಿದೆ. ಈ ನಿಟ್ಟಿನಲ್ಲಿ ನಗರದಲ್ಲಿ ಮಾಲಿನ್ಯರಹಿತ ಸಾರಿಗೆ ವ್ಯವಸ್ಥೆ ಕಲ್ಪಿಸುವುದು ನಮ್ಮ ಪ್ರಮುಖ ಆದ್ಯತೆಯಾಗಿದೆ ಎಂದರು.



ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಪ್ರಾರಂಭಿಸಲಾದ ಪಿಎಂ ಇ–ಡ್ರೈವ್ ಉಪಕ್ರಮವು 14,028 ವಿದ್ಯುತ್ ಚಾಲಿತ ಬಸ್ಸುಗಳೊಂದಿಗೆ ನಗರಗಳಲ್ಲಿ ವಾಯುಮಾಲಿನ್ಯ ರಹಿತ ಸಾರಿಗೆ ವ್ಯವಸ್ಥೆ ಕಲ್ಪಿಸುವ ಗುರಿಯನ್ನು ಹೊಂದಿದೆ. ಈ ಯೋಜನೆಗೆ ಕೇಂದ್ರ ಸರಕಾರದಿಂದ ಎರಡು ವರ್ಷಗಳ ಅವಧಿಯಲ್ಲಿ 10,900 ಕೋಟಿ ಮೊತ್ತವನ್ನು ವೆಚ್ಚ ಮಾಡಲಾಗುತ್ತಿದೆ. ಎಲ್ಲಾ ರಾಜ್ಯ ಸರಕಾರಗಳು ಮತ್ತು ಪಾಲುದಾರರ ಸಹಯೋಗದೊಂದಿಗೆ ಈ ಪರಿವರ್ತನಾಶೀಲ ಗುರಿಯನ್ನು ಪೂರೈಸಲು ಬೃಹತ್ ಕೈಗಾರಿಕಾ ಸಚಿವಾಲಯವು ಕ್ರಿಯಾಶೀಲವಾಗಿ ಕೆಲಸ ಮಾಡುತ್ತಿದೆ ಎಂದು ಕೇಂದ್ರ ಸಚಿವರು ಹೇಳಿದ್ದಾರೆ.

ನಾಳೆ ಪುಸ್ತಕ ಬಿಡುಗಡೆ

ಮೈಸೂರು, ಮೇ 16(ಎಂಟಿವೈ)– ಮೈಸೂರಿನ ರಂಗಾಯಣದ ಬಿ.ವಿ. ಕಾರಂತ ರಂಗ ಚಾವಡಿ ವೇದಿಕೆಯಲ್ಲಿ ಮೇ 18ರಂದು ಬೆಳಗ್ಗೆ 10.30ಕ್ಕೆ ಎರಡು ಪುಸ್ತಕಗಳ ಬಿಡುಗಡೆ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದು ನಗರದ ಚಾವಡಿ ಗೆಳೆಯರ ಬಳಗದ ಕೃಷ್ಣ ಜನಮನ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 1998–2000 ಸಾಲಿನಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯಲ್ಲಿ ಎಂಎ ಕನ್ನಡ ಸ್ನಾತಕೋತ್ತರ ಪದವಿ ಪಡೆದ ಗೆಳೆಯರು ಸೇರಿ ಚಾವಡಿ ಗೆಳೆಯರ ಬಳಗ ವೇದಿಕೆಯನ್ನು ರಚಿಸಿಕೊಂಡು ವಿವಿಧ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಇದೀಗ ಗೆಳೆಯರೇ ಸೇರಿ ಬರೆದಿರುವ ವಿವಿಧ ಪರಿಸರದ ಹಿನ್ನೆಲೆ, ಸಂಸ್ಕೃತಿಯ ಕಥಾ ಹಂದರವನ್ನು ಒಳಗೊಂಡ 12 ಕಥೆಗಳಿರುವ 'ಮೊಳಕೆ' ಕಥಾ ಸಂಕಲನ ಹಾಗೂ ಲೇಖನ ಸಂಕಲನ 'ಗರಿಕೆ' ಎಂಬ ಪುಸ್ತಕಗಳನ್ನು ಪ್ರಕಟಿಸಿದ್ದಾರೆ. ಈ ಎರಡು ಪುಸ್ತಕಗಳನ್ನು ಮೇ 18ರಂದು ಬಿಡುಗಡೆ ಮಾಡಲಾಗುತ್ತಿದೆ ಎಂದರು.

ಪುಸ್ತಕವನ್ನು ನಮಗೆ ಅಂದು ಗುರುಗಳಾಗಿದ್ದ ಪ್ರೊ.ಕಾಳೇಗೌಡ ನಾಗವಾರ, ಪ್ರೊ. ಮಹಾದೇವ, ಪ್ರೊ.ಪಂಡಿತಾರಾಧ್ಯ, ಪ್ರೊ.ಎಂ. ಎನ್.ತಳವಾರ, ಪ್ರೊ.ಡಿ.ಕೆ.ರಾಜೇಂದ್ರ, ಪ್ರೊ. ರಾಗೌ ಬಿಡುಗಡೆ ಮಾಡಲಿದ್ದಾರೆ. ಅಧ್ಯಕ್ಷತೆಯನ್ನು ಹಿರಿಯ ಪತ್ರಕರ್ತ ಅಂಶಿ ಪ್ರಸನ್ನ ಕುಮಾರ್ ವಹಿಸಲಿದ್ದಾರೆ. ಪ್ರಕಾಶಕ ಸಂಸ್ಕೃತಿ ಸುಬ್ರಹ್ಮಣ್ಯಂ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ ಎಂದರು. ಗೋಷ್ಠಿಯಲ್ಲಿ ಬಳಗದ ಮಹೇಶ್ ಅರಸನಹಳ್ಳಿ, ದೊರೆಸ್ವಾಮಿ ಇದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No.114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ

ಶನಿವಾರ 17 ಮೇ 2025

'ಆಪರೇಷನ್ ಸಿಂಧೂರ'ಗೆ ವಂದನೆ-ಅಭಿವಂದನೆ

ತಿರಂಗ ಯಾತ್ರೆಯ ಮೂಲಕ ಅಪಾರ ದೇಶ ಭಕ್ತಿ ಮೆರೆದ ಮೈಸೂರು



ಮೆಟ್ರೋಪೋಲ್ ವೃತ್ತದಲ್ಲಿರುವ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಅವರ ಪ್ರತಿಮೆಗೆ ಪುಷ್ಪಾರ್ಚನೆ ಮಾಡಿ ತಿರಂಗ ಯಾತ್ರೆಗೆ ಚಾಲನೆ ನೀಡಲಾಯಿತು.



ತಿರಂಗ ಯಾತ್ರೆಯಲ್ಲಿ ಪಾಲ್ಗೊಂಡಿರುವ ವಿವಿಧ ಮಠ, ಆಶ್ರಮಗಳ ಶ್ರೀಗಳು ಮತ್ತು ಅಪಾರ ಜನಸ್ತೋಮ

ಮೈಸೂರು, ಮೇ 16(ಆರ್‌ಕೆ)– ಪಾಕಿಸ್ತಾನದ ಉಗ್ರರ ಶಿಬಿರಗಳನ್ನು ಧ್ವಂಸ ಮಾಡಿದ 'ಆಪರೇಷನ್ ಸಿಂಧೂರ' ಯಶಸ್ಸಿನ ಹಿನ್ನೆಲೆಯಲ್ಲಿ ಮೈಸೂರಲ್ಲಿ ಭಾರತೀಯ ಸೇನೆಗೆ ಪಕ್ಷಾತೀತ, ಧರ್ಮಾತೀತವಾಗಿ ವಂದಿಸಲಾಯಿತು.

ಭಾರತದ ಸಶಸ್ತ್ರ ಪಡೆಗಳೊಂದಿಗೆ ಅಚಲವಾದ ಒಗ್ಗಟ್ಟು ಪ್ರದರ್ಶಿಸಲು ಇಂದು ಆಯೋಜಿಸಿದ್ದ ತಿರಂಗ ಯಾತ್ರೆ ಸಾಕ್ಷಿಯಾಯಿತು. ಆ ಮೂಲಕ ಪಾಕಿಸ್ತಾನ ಮೂಲದ ಭಯೋತ್ಪಾದಕ ಶಿಬಿರಗಳ ಮೇಲೆ ನಡೆದ 'ಆಪರೇಷನ್ ಸಿಂಧೂರ' ಯಶಸ್ವಿಗೊಳಿಸಿದ ಭಾರತೀಯ ಸೈನಿಕರಿಗೆ ನೆರೆದಿದ್ದ ಸಾವಿರಾರು ಮಂದಿ ಗೌರವ ವಂದನೆ ಸಲ್ಲಿಸಿದರು.

ಬಿಜೆಪಿ ನಗರ ಮತ್ತು ಜಿಲ್ಲಾ ಘಟಕ ಆಯೋಜಿಸಿದ್ದ ತಿರಂಗ ಯಾತ್ರೆಯಲ್ಲಿ ಎಲ್ಲಾ ಪಕ್ಷಗಳ ಮುಖಂಡರು, ಎಲ್ಲಾ ಧರ್ಮಗಳ ಗುರುಗಳು, ಹಲವು ಸಂಘಟನೆಗಳ ಪ್ರತಿನಿಧಿಗಳು, ವಿವಿಧ ಕಾಲೇಜು, ನರ್ಸಿಂಗ್ ಶಾಲಾ ವಿದ್ಯಾರ್ಥಿಗಳು ಭಾಗವಹಿಸಿ ಒಗ್ಗಟ್ಟು ಪ್ರದರ್ಶಿಸಿದರಲ್ಲದೇ, ಎಂತಹ ತುರ್ತು ಸಂದರ್ಭದಲ್ಲೂ, ಯೋಧರೊಂದಿಗೆ ಬೆಂಬಲವಾಗಿರುತ್ತೇವೆ ಎಂಬ ಸಂದೇಶ ರವಾನಿಸಿದರು.

ಮೈಸೂರಿನ ಜೆಎಲ್‌ಬಿ ರಸ್ತೆಯ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ವೃತ್ತ (ಮೆಟ್ರೊ ಪೋಲ್ ಸರ್ಕಲ್)ದಿಂದ ಆರಂಭವಾದ ತಿರಂಗ ಯಾತ್ರೆಯು, ವಿನೋಬಾ ರಸ್ತೆ ಮೂಲಕ ಸಾಗಿ ಶಿವರಾಂಪೇಟೆ, ಚಿಕ್ಕ ಗಡಿಯಾರ, ದೇವರಾಜ ಅರಸು ರಸ್ತೆ, ಜೆಎಲ್‌ಬಿ ರಸ್ತೆ ಮೂಲಕ ಮರಳಿ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ವೃತ್ತದಲ್ಲಿ ಅಂತ್ಯಗೊಂಡಿತು.

100 ಮೀಟರ್‌ಗೊಂದರಂತೆ ಉದ್ದುದ್ದದ ತ್ರಿವರ್ಣ ಧ್ವಜಗಳಡಿ ಯಾತ್ರೆಯಲ್ಲಿ ಸಾಗಿದ 10,000ಕ್ಕೂ ಹೆಚ್ಚು ಮಂದಿ 'ವಂದೇ ಮಾತರಂ', 'ಭಾರತ್ ಮಾತಾಕಿ ಜೈ', 'ಜಮ್ಮು-ಕಾಶ್ಮೀರ ಭಾರತ ಮಾತೆಯ ಸಿಂಧೂರ' ಮುಂತಾದ ದೇಶಭಕ್ತಿ ಘೋಷಣೆಗಳನ್ನು ಮೊಳಗಿಸಿದರಲ್ಲದೆ, 'ಭಾರತೀಯ ಸೇನೆಯ ಬದ್ಧತೆ ನೆಮ್ಮದಿಯ ಬದುಕಿಗೆ ಭದ್ರತೆ', 'ಭಾರತೀಯ ಸೇನೆ ಪ್ರತೀಕಾರ ಪಡೆಯುವುದು ಗ್ಯಾರಂಟಿ', 'ಶತ್ರು ನಾಶಕ್ಕೆ ಪಣ ತೊಟ್ಟ ಧ್ಯೇಯವಿದು- ಗಡಿಗಳಿಗೆ ಕಾವಲಾದ ಯೋಧರ ಛಲವಿದು' ಎಂಬಿತ್ಯಾದಿ ಘೋಷಣಾ ಫಲಕಗಳನ್ನು ಪ್ರದರ್ಶಿಸಿ ರಾಷ್ಟ್ರ ಪ್ರೇಮ ಮೆರೆದರು.

ಅದಕ್ಕೂ ಮೊದಲು ಮೆಟ್ರೊಪೋಲ್ ವೃತ್ತದಲ್ಲಿರುವ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಅವರ ಪ್ರತಿಮೆಗೆ ಮಾಲಾರ್ಪಣೆ ಹಾಗೂ ಪುಷ್ಪಾರ್ಚನೆ ಮಾಡಲಾಯಿತು. ಅದೇ ವೇಳೆ 'ಆಪರೇಷನ್ ಸಿಂಧೂರ'ದಲ್ಲಿ ಹೋರಾಡಿ ವೀರ ಮರಣ ಹೊಂದಿದ ಸೈನಿಕರಿಗೆ ಒಂದು ನಿಮಿಷ ಮೌನಾಚರಣೆ ಮಾಡಿ ಸಂತಾಪ ಸೂಚಿಸಲಾಯಿತು.

ಸುತ್ತೂರು ಮಠಾಧೀಶ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಅವಧೂತ ದತ್ತಪೀಠದ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ, ಕಿರಿಯ ಶ್ರೀಗಳಾದ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ, ಆದಿಚುಂಚನಗಿರಿ ಮೈಸೂರು ಶಾಖಾ ಮಠಾಧೀಶ ಶ್ರೀ ಸೋಮನಾಥ ಸ್ವಾಮೀಜಿ, ಶ್ರೀ ಚಿನ್ಮಯಾನಂದ ಸ್ವಾಮೀಜಿ, ರಾಮಕೃಷ್ಣ ಆಶ್ರಮದ ಸನ್ಯಾಸಿಗಳು, ಮೈಸೂರು ಪ್ರಾಂತದ ಪ್ರಭಾರ ಆಡಳಿತಾಧಿಕಾರಿ ರೆ.ಫಾ.ಬರ್ನಾಡ್ ಮೊರಾಸ್, ಮೌಲನಾ ರಿಯಾಜ್ ಖಾದರ್ ಬಾಬಾ ಸೇರಿದಂತೆ ಎಲ್ಲಾ ಧಾರ್ಮಿಕ ಪ್ರಮುಖರು ತಿರಂಗ ಯಾತ್ರೆಯಲ್ಲಿ ಪಾಲ್ಗೊಂಡಿದ್ದರು.

ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಟಿ.ಎಸ್.ಶ್ರೀವತ್ಸ, ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಮಾಜಿ ಸಂಸದ ಪ್ರತಾಪ್ ಸಿಂಹ, ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ, ಜಿಲ್ಲಾಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ, ಮಾಜಿ ಮೇಯರ್ ಸಂದೇಶ ಸ್ವಾಮಿ, ಬಿಜೆಪಿ ರಾಜ್ಯ ಉಪಾಧ್ಯಕ್ಷ ಎಂ.ರಾಜೇಂದ್ರ, ಎಂ.ವಿ.ರವಿಶಂಕರ್, ನಾರಾಯಣ ವಿ.ಹೆಗ್ಡೆ, ಎಸ್.ಕೆ.ದಿನೇಶ್, ಬಿ.ಎಸ್.ಪ್ರಶಾಂತ್, ಜಯಕುಮಾರ್, ಕೆ.ವಿ.ಶ್ರೀಧರ್, ಕಿರಣ್ ಕುಮಾರ್, ಮೋಹನ್, ಮಹೇಶ ರಾಜೇ ಅರಸ್ ಸೇರಿದಂತೆ ಹಲವು ಮುಖಂಡರು ಯಾತ್ರೆಯಲ್ಲಿ ಭಾಗವಹಿಸಿದ್ದರು.

ಹೋಟೆಲ್ ಮಾಲೀಕರ ಸಂಘ, ಹೋಟೆಲ್ ಮಾಲೀಕರ ದತ್ತಿ, ಹೋಟೆಲ್ ಮಾಲೀಕರ ಪತ್ತಿನ ಸಹಕಾರ ಸಂಘ, ಮೈಸೂರು ಟ್ರಾವೆಲ್ ಏಜೆಂಟರ್ ಸಂಘ, ಮೈಸೂರು ಸಂಘ-ಸಂಸ್ಥೆಗಳ ಒಕ್ಕೂಟ, ಸ್ಕೌಟ್ಸ್ ಅಂಡ್ ಗೈಡ್ಸ್, ಕನ್ನಡ ಪರ ಸಂಘಟನೆಗಳು, ಪ್ರವಾಸಿ ಮಾರ್ಗದರ್ಶಿಗಳ ಸಂಘ ಸೇರಿದಂತೆ ಮೈಸೂರಿನ ಹಲವು ಸಂಘ-ಸಂಸ್ಥೆಗಳ ಪ್ರತಿನಿಧಿಗಳೂ ಸಹ ಯಾತ್ರೆಯಲ್ಲಿ ಭಾಗವಹಿಸಿದ್ದರು.

ತಿರಂಗ ಯಾತ್ರೆಗೆ ದೇವರಾಜ ಠಾಣೆ, ದೇವರಾಜ ಸಂಚಾರ ಠಾಣೆ ಸಿಬ್ಬಂದಿ ಬಂದೋಬಸ್ತ್ ಮಾಡಿ ಸಂಚಾರ ವ್ಯವಸ್ಥೆ ನಿಭಾಯಿಸಿದರು.

ಇಲವಾಲದಲ್ಲಿ ನಾಳೆ ಡಾ.ಅಂಬೇಡ್ಕರ್ ಜಯಂತ್ಯೋತ್ಸವ



ಡಾ.ಬಿ.ಆರ್.ಅಂಬೇಡ್ಕರ್ ಜಯಂತ್ಯೋತ್ಸವ ಸಮಿತಿ ಉಪಾಧ್ಯಕ್ಷ ಹುಯಿಲಾಳು ರಾಮಸ್ವಾಮಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಮೈಸೂರು, ಮೇ 16– ಡಾ.ಬಿ.ಆರ್. ಅಂಬೇಡ್ಕರ್ ಜಯಂತ್ಯೋತ್ಸವ ಸಮಿತಿ ವತಿಯಿಂದ ಮೈಸೂರು ತಾಲೂಕು ಇಲವಾಲದಲ್ಲಿ ಮೇ 18ರಂದು ಡಾ.ಬಿ. ಆರ್. ಅಂಬೇಡ್ಕರ್ ಅವರ 134ನೇ ಜಯಂತ್ಯೋತ್ಸವವನ್ನು ಅದ್ದೂರಿಯಾಗಿ ಆಚರಿಸಲಾಗುವುದು ಎಂದು ಸಮಿತಿಯ ಉಪಾಧ್ಯಕ್ಷ ಹುಯಿಲಾಳು ರಾಮಸ್ವಾಮಿ ತಿಳಿಸಿದ್ದಾರೆ.

ಇಲವಾಲದ ಡಾ.ಬಿ.ಆರ್.ಅಂಬೇಡ್ಕರ್ ವಸತಿ ನಿಲಯದ ಆವರಣದಲ್ಲಿ ಅಂದು ಬೆಳಗ್ಗೆ 10ಕ್ಕೆ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಶ್ರೀ ಮಲ್ಲಿಕಾರ್ಜುನ ಖರ್ಗೆ ಅಭಿಮಾನಿಗಳ ಸಂಘದ ರಾಜ್ಯಾಧ್ಯಕ್ಷ ಸಿ.ನರೇಂದ್ರ ಅವರ ನೇತೃತ್ವದಲ್ಲಿ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದರು.

ಉರಿಲಿಂಗಪೆದ್ದಿ ಮಠದ ಶ್ರೀ ಜ್ಞಾನಪ್ರಕಾಶ ಸ್ವಾಮೀಜಿ ಅವರ ಸಾನಿಧ್ಯ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಸಮಾರಂಭವನ್ನು ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ಉದ್ಘಾಟಿಸಲಿದ್ದಾರೆ. ಚಾಮರಾಜನಗರ ಸಂಸದ ಸುನೀಲ್ ಬೋಸ್ ಅವರು ಗಣ್ಯರೊಡಗೂಡಿ ಡಾ.ಅಂಬೇಡ್ಕರ್ ಫೋಟೋಗೆ ಪುಷ್ಪ ನಮನ ಸಲ್ಲಿಸಲಿದ್ದಾರೆ. ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಮತ್ತಿತರ ಗಣ್ಯರು ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಗಳಿಸಿರುವ ಪ್ರತಿಭಾನ್ವಿತ ವಿದ್ಯಾರ್ಥಿಗಳು ಹಾಗೂ ವಿವಿಧ ಕ್ಷೇತ್ರಗಳ ಸಾಧಕರನ್ನು ಅಭಿನಂದಿಸಲಾಗುವುದು. ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆಯ ಭವ್ಯ ಮೆರವಣಿಗೆಯಲ್ಲಿ ವಿವಿಧ ಸಾಂಸ್ಕೃತಿಕ ಕಲಾತಂಡಗಳ ಜೊತೆಗೆ ನೂರೊಂದು ಮಹಿಳೆಯರು ಕಳಶ ಹೊತ್ತು ಸಾಗಲಿದ್ದಾರೆ. ಕಾರ್ಯಕ್ರಮದಲ್ಲಿ ಸುಮಾರು ಐದಾರು ಸಾವಿರ ಸಾರ್ವಜನಿಕರು ಭಾಗವಹಿಸುವ ನಿರೀಕ್ಷೆ ಇದ್ದು, ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಗ್ರಾಮ ಪಂಚಾಯಿತಿ ಸದಸ್ಯ ಬೊಮ್ಮೇನಹಳ್ಳಿ ಬಿ.ಕೆ.ಈಶ್ವರ್, ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕ ಶಿವರಾಜು ಬೊಮ್ಮೇನಹಳ್ಳಿ, ಐಎನ್‌ಬಿಸಿ ಡಬ್ಲ್ಯೂಎಫ್ ಯುವ ಘಟಕದ ರಾಜ್ಯಾಧ್ಯಕ್ಷ ಚಿಕ್ಕನಹಳ್ಳಿ ಸಂತೋಷ್, ಇಲವಾಲ ಡಾ.ಬಿ.ಆರ್.ಅಂಬೇಡ್ಕರ್ ಸಂಘದ ಅಧ್ಯಕ್ಷ ಚಲುವರಾಜು, ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಉಂಡುವಾಡಿ ಕುಮಾರ್, ಯುವ ಕಾಂಗ್ರೆಸ್ ಕಾರ್ಯದರ್ಶಿ ಜೆಟ್ಟಿ ಹುಂಡಿ ಸುನಿಲ್, ರಟ್ನಳ್ಳಿ ರಾಚಪ್ಪ ಇದ್ದರು.

ಕಾರಿನಲ್ಲಿದ್ದ ಒಂದೂವರೆ ಲಕ್ಷ ಎಗರಿಸಿದ ಖದೀಮರು!

ಕ್ರೈಂ ಬಾಕ್ಸ್

ಮೈಸೂರು, ಮೇ 16– ಕಲ್ಯಾಣ ಮಂಟಪಕ್ಕೆ ಮುಂಗಡ ನೀಡಲೆಂದು ಕಾರಿನಲ್ಲಿಟ್ಟಿದ್ದ ಒಂದೂವರೆ ಲಕ್ಷ ಹಣವನ್ನು ಖದೀಮರು ಎಗರಿಸಿರುವ ಘಟನೆ ಮೈಸೂರಿನ ದಟ್ಟಗಳ್ಳಿ ರಿಂಗ್ ರಸ್ತೆಯಲ್ಲಿ ನಡೆದಿದೆ.

ಗೌರಿಶಂಕರನಗರದ ನಿವಾಸಿ ಮಹದೇವ್ ಹಣ ಕಳೆದುಕೊಂಡವರು. ಹಾರ್ಡ್‌ವೇರ್ ವ್ಯಾಪಾರಿಯಾಗಿರುವ ಇವರು ತಮ್ಮ ಮಗಳ ಮದುವೆಗೆ ಕಲ್ಯಾಣ ಮಂಟಪ ಬುಕ್ ಮಾಡಲೆಂದು 1.55 ಲಕ್ಷ ರೂ.ಗಳನ್ನು ಇಟ್ಟುಕೊಂಡಿದ್ದರು. ಅದಕ್ಕೂ ಮುನ್ನ ಸಾ.ರಾ. ಕಲ್ಯಾಣ ಮಂಟಪದಲ್ಲಿ ನಡೆಯುತ್ತಿದ್ದ ಸ್ನೇಹಿತರ ಮನೆಯ ಮದುವೆ ಕಾರ್ಯಕ್ರಮದಲ್ಲಿ ಭಾಗವಹಿಸಲೆಂದು ತಮ್ಮ ಬಳಿ ಇದ್ದ ಹಣವನ್ನು ಕಾರಿನ ಡ್ಯಾಶ್‌ಬೋರ್ಡ್‌ನಲ್ಲಿಟ್ಟು ತೆರಳಿದ್ದರು. ಮದುವೆ ಮುಗಿಸಿಕೊಂಡು ಕಾರು ಹತ್ತಿ ಡ್ಯಾಶ್‌ಬೋರ್ಡ್ ತೆರೆದಾಗ ಅದರಲ್ಲಿದ್ದ ಹಣ ಕಳುವಾಗಿತ್ತು. ಈ ಸಂಬಂಧ ಮಹದೇವ್ ಕುವೆಂಪುನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

17.05.2025 ಶನಿವಾರ, ಮಳೆ ನಕ್ಷತ್ರ: ಕೃತ್ತಿಕ 11.05.2025 ರಿಂದ 24.05.2025
ವಿಶ್ವವಸು ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ವೈಶಾಖ ಮಾಸ, ಕೃಷ್ಣ ಪಕ್ಷ,
ತಿಥಿ: ಪಂಚಮಿ, ನಕ್ಷತ್ರ: ಪೂಷಾ, ರಾಹುಕಾಲ: ಬೆಳಗ್ಗೆ 9 ರಿಂದ 10.30ರವರೆಗೆ

■ **ಎಟಿಎಂಇ ಕಾಲೇಜ್ ಆಫ್ ಇಂಜಿನಿಯರಿಂಗ್ :** ಅಂಗವೈಕಲ್ಯವನ್ನು ಮೀರಿದ ಸಾಮರ್ಥ್ಯ ಎಂಬ ಘೋಷ ವಾಕ್ಯದೊಂದಿಗೆ ಆತ್ಮೀಯ–2ಕೆ25 ಕಾಲೇಜು ವಾರ್ಷಿಕೋತ್ಸವದ ಅಂಗವಾಗಿ ಮ್ಯಾರಾಥಾನ್, ಮುಖ್ಯ ಅತಿಥಿಗಳು : ಮೈಸೂರು ವಿವಿ ದೈಹಿಕ ವಿಭಾಗದ ನಿರ್ದೇಶಕ ಡಾ. ಸಿ. ವೆಂಕಟೇಶ್, ಎಟಿಎಂಇ ಅಧ್ಯಕ್ಷ ಎಲ್. ಅರುಣ್ ಕುಮಾರ್, ಕಾರ್ಯದರ್ಶಿ ಕೆ. ಶಿವಶಂಕರ್, ಖಜಾಂಚಿ ಆರ್. ವೀರೇಶ್, ಮ್ಯಾರಾಥಾನ್‌ಗೆ ಚಾಲನೆ : ಭಾರತೀಯ ಖೋ ಖೋ ಆಟಗಾರ್ತಿ ಕು. ಚೈತ್ರಾ, ಸ್ಥಳ: ಓವೆಲ್ ಮೈದಾನ, ಮೈಸೂರು ವಿವಿ ಆವರಣ, ಬೆಳಗ್ಗೆ 7ಕ್ಕೆ.

■ **ಜಿಲ್ಲಾಡಳಿತ, ಆರೋಗ್ಯ ಇಲಾಖೆ, ಮೈಸೂರು ಮಹಾನಗರ ಪಾಲಿಕೆ, ಜೀವನ್‌ಧಾರ ರಕ್ತನಿಧಿ ಕೇಂದ್ರ :** ಬೃಹತ್ ರಕ್ತದಾನ ಶಿಬಿರ, ಸ್ಥಳ: ಕಲ್ಯಾಣಗಿರಿನಗರದ ಅಜೀಜ್ ಸೇಠ್ ಜೋಡಿ ರಸ್ತೆಯಲ್ಲಿರುವ ಕೇಂದ್ರ ಬೀಡಿ ಕಾರ್ಮಿಕರ ಆಸ್ಪತ್ರೆ ಆವರಣ, ಬೆಳಗ್ಗೆ 8 ರಿಂದ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಬೊಜ್ಜು ನಿವಾರಣಾ ಚಿಕಿತ್ಸಾ ಶಿಬಿರ, ಆರೋಗ್ಯಾಯುಷ್ಯ ಆರೋಗ್ಯ ವರ್ಧಕ ಶಿಬಿರ ಮತ್ತು ಶಾಲಾಕ್ಯ ತಂತ್ರ ಸ್ನಾತಕೋತ್ತರ ವಿಭಾಗದಿಂದ ಕಣ್ಣಿಗೆ ಸಂಬಂಧಿಸಿದ ಸಮಸ್ಯೆಗಳ ಬಗ್ಗೆ ವಿಶೇಷ ಬೇಸಿಗೆ ಆರೋಗ್ಯ ಶಿಬಿರ, ಮೂತ್ರಪಿಂಡ (ಕಿಡ್ನಿ) ಕಾಯಿಲೆಗೆ ಚಿಕಿತ್ಸಾ ಶಿಬಿರ ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿ ರಸ್ತೆ, ಆಲನಹಳ್ಳಿ, ಬೆಳಗ್ಗೆ 9 ರಿಂದ.

■ **ಶಾರವಿ ಫೌಂಡೇಷನ್ :** ತಲೆ ನೋವು, ಕೂದಲು ಉದುರುವಿಕೆ ಸಮಸ್ಯೆಗೆ ಉಚಿತ ಆಯುರ್ವೇದ ತಪಾಸಣಾ ಶಿಬಿರ, ಸ್ಥಳ: ಭವೇದ್, 434/ಎ, ಗೋಕುಲಂ 3ನೇ ಹಂತ, ಬೆಳಗ್ಗೆ 9 ರಿಂದ.

■ **ಕರ್ನಾಟಕ ಸುಗಮ ಸಂಗೀತ ಪರಿಷತ್, ಮೈಸೂರು ಘಟಕ :** ಸುಗಮ ಸಂಗೀತ ಕಲಿಕಾ ಶಿಬಿರ, ಎದೆ ತುಂಬಿ ಹಾಡುವೆನು ಖ್ಯಾತಿಯ ಸಂಗೀತ ಮಾಂತ್ರಿಕ ಬಿ.ವಿ. ಶ್ರೀನಿವಾಸ್, ಗಾಯಕಿ ಶ್ರೀಮತಿ ನಾಗಚಂದ್ರಿಕಾ ಭಟ್ ಅವರಿಂದ ಸುಗಮ ಸಂಗೀತ ಕಾರ್ಯಾಗಾರ, ಉದ್ಘಾಟನೆ : ಕರ್ನಾಟಕ ಸುಗಮ ಸಂಗೀತ ಪರಿಷತ್ ರಾಜ್ಯಾಧ್ಯಕ್ಷ ವೈ.ಕೆ. ಮುದ್ದುಕೃಷ್ಣ, ಅಧ್ಯಕ್ಷತೆ : ಕರ್ನಾಟಕ ಸುಗಮ ಸಂಗೀತ ಪರಿಷತ್ ರಾಜ್ಯ ಕಾರ್ಯದರ್ಶಿ ಡಾ. ಕಿಕ್ಕೇರಿ ಕೃಷ್ಣಮೂರ್ತಿ, ಮುಖ್ಯ ಅತಿಥಿಗಳು : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಮಲ್ಲಿಕಾರ್ಜುನಸ್ವಾಮಿ, ಹಿರಿಯ ಪತ್ರಕರ್ತ ಅಂಶಿಪ್ರಸನ್ನಕುಮಾರ್, ಬಿ.ವಿ. ಪ್ರವೀಣ್, ಪ್ರಶಾಂತ್ ಉಡುಪ, ಕರ್ನಾಟಕ ಸುಗಮ ಸಂಗೀತ ಪರಿಷತ್ ಅಧ್ಯಕ್ಷ ಡಾ. ನಾಗರಾಜ್ ವಿ. ಭೈರಿ, ಸ್ಥಳ: ಶ್ರೀ ಅನಂತೇಶ್ವರ ಭವನ, ಕೆಹೆಚ್‌ಬಿ ಕಾಲೋನಿ, ಹೂಟಗಳ್ಳಿ, ಬೆಳಗ್ಗೆ 10 ರಿಂದ.

■ **ವಿದ್ಯಾವರ್ಧಕ ಕಾನೂನು ಕಾಲೇಜು :** ಕೆ. ಪುಟ್ಟಸ್ವಾಮಿಯವರ ನೆನಪಿಗಾಗಿ 6ನೇ ದತ್ತಿ ಉಪನ್ಯಾಸ ಕಾರ್ಯಕ್ರಮ, ವಿಷಯ : ಪ್ರಜಾಪ್ರಭುತ್ವದಲ್ಲಿ ನ್ಯಾಯಾಂಗದ ಪತ್ರ, ದತ್ತಿ ಉಪನ್ಯಾಸ : ನ್ಯಾಯಮೂರ್ತಿ ಹೆಚ್.ಪಿ. ಸಂದೇಶ್, ಅಧ್ಯಕ್ಷತೆ : ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ, ಉಪಸ್ಥಿತರು : ಕಾರ್ಯದರ್ಶಿ ಪಿ.ವಿಶ್ವನಾಥ್, ಅಧ್ಯಕ್ಷ ಎಸ್. ಶಿವಲಿಂಗಯ್ಯ, ಸ್ಥಳ : ಪಿ.ಎಂ. ಚಿಕ್ಕಬೋರಯ್ಯ ಹಾಲ್, ಬೆಳಗ್ಗೆ 10ಕ್ಕೆ.

■ **ಮಹಾರಾಜ ಕಾಲೇಜು :** ಕನ್ನಡ ವಿಭಾಗದ ಸಂಶೋಧನಾ ವಿದ್ಯಾರ್ಥಿಗಳಿಗೆ ಸಂಶೋಧನಾ ಕಮ್ಮಟ, ಡಾ. ಹಳೆಮನೆ ರಾಜಶೇಖರ ಅವರ ಕಾದಂಬರಿ ಒಡಲುಗೊಂಡವರು ಹಾಗೂ ಸಂಶೋಧನಾ ವಿಧಾನಗಳು, ಸಂಪನ್ಮೂಲ ವ್ಯಕ್ತಿಗಳು : ಡಾ. ಬಸವರಾಜ ಕಲ್ಗುಡಿ, ವಿಮರ್ಶಕ ಪ್ರೊ. ಓ.ಎಲ್. ನಾಗಭೂಷಣಸ್ವಾಮಿ, ಸಾಹಿತಿ ಡಾ. ಗುರುಪಾದ ಮರಿಗುದ್ದಿ, ಲೇಖಕ ಡಾ. ಹಳೆಮನೆ ರಾಜಶೇಖರ, ಸ್ಥಳ: ಜೂನಿಯರ್ ಬಿ.ಎ.ಹಾಲ್, ಮಹಾರಾಜ ಕಾಲೇಜು, ಬೆಳಗ್ಗೆ 10.30ಕ್ಕೆ.

■ **ಶ್ರೀ ಶ್ರೀನಿವಾಸಸ್ವಾಮಿ ಕೈಂಕರ್ಯ ಸಭಾ :** ಶ್ರೀ ಶ್ರೀನಿವಾಸಸ್ವಾಮಿಯವರ ವಾರ್ಷಿಕ ಮಹೋತ್ಸವ, ಬೆಳಗ್ಗೆ 9ಕ್ಕೆ ಅಭಿಷೇಕ, ಸಂಜೆ 6ಕ್ಕೆ ರಕ್ಷಾಬಂಧನ, ಕಲ್ಯಾಣೋತ್ಸವ, ಸ್ಥಳ: ಸಭಾ ಆವರಣ, ತಿಲಕ್‌ನಗರ.

■ **ಶ್ರೀ ಶೃಂಗೇರಿ ಜಗದ್ಗುರು ಶಂಕರಾಚಾರ್ಯ ಮಹಾಸಂಸ್ಥಾನಮ್, ದಕ್ಷಿಣಾಮ್ನಾಯ ಶ್ರೀ ಶಾರದಾ ಪೀಠಮ್, ಶೃಂಗೇರಿ ಶ್ರೀ ಶಂಕರ ಮಠ :** 45ನೇ ವರ್ಷದ ಮೂರ್ತಿ ಪ್ರತಿಷ್ಠಾ ಮಹೋತ್ಸವ, ಬೆಳಗ್ಗೆ 7.30 ರಿಂದ 9.30 ರವರೆಗೆ ಶಾರದಮ್ಮನವರಿಗೆ ಅಭಿಷೇಕ, 9.30ಕ್ಕೆ ಹರಿದ್ರಾಲಂಕಾರ ದರ್ಶನ, ಲಲಿತಾ ಹೋಮ ಪ್ರಾರಂಭ, 12.30ಕ್ಕೆ ಲಲಿತಾ ಹೋಮದ ಪೂರ್ಣಾಹುತಿ, ಮಹಾಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ, ಸಂಜೆ 5ಕ್ಕೆ ಶ್ರೀ ಶಾರದಮ್ಮನವರ ಸನ್ನಿಧಿಯಲ್ಲಿ ಲಕ್ಷ ಕುಂಕುಮಾರ್ಚನೆ, ಸಂಜೆ 8ಕ್ಕೆ ಶಾರದಮ್ಮನವರ ಪ್ರಾಕಾರೋತ್ಸವ, 9ಕ್ಕೆ ಮಹಾಮಂಗಳಾರತಿ, ಅಷ್ಟಾವಧಾನ ಸೇವೆ, ಪ್ರಸಾದ ವಿನಿಯೋಗ, ಸಂಜೆ 6.30 ರಿಂದ ವಿದ್ವಾನ್ ಆರ್.ಪಿ. ಕೌಶಿಕ್ ವೃಂದದವರಿಂದ ಸಂಗೀತ ಗಾಯನ, ಸ್ಥಳ: ಶೃಂಗೇರಿ ಶ್ರೀ ಶಂಕರಮಠ.

■ **ಮೈಸೂರು ಆರ್ಟ್ ಗ್ಯಾಲರಿ :** ಶ್ರೀ ಜಗಜ್ಯೋತಿ ಬಸವಣ್ಣ ಅವರ ಜಯಂತ್ಯೋತ್ಸವದ ಅಂಗವಾಗಿ ಶಾಲೆಯಿಂದ ಕಾಲೇಜುವರೆಗೆ ಬಸವಣ್ಣನವರ ಚಿತ್ರಗಳ ನಡಿಗೆ ಕಾರ್ಯಕ್ರಮ, ವಿಜೇತರಿಗೆ ಬಹುಮಾನ, ಪ್ರಶಂಸಾ ಪತ್ರ ವಿತರಣೆ ಕಾರ್ಯಕ್ರಮ, ಉದ್ಘಾಟನೆ : ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ. ದೀಪಕ್, ಪ್ರಾಸ್ತಾವಿಕ ನುಡಿ : ಕನ್ನಡ ಸಾಹಿತ್ಯ ಕಲಾಕೂಟ ಅಧ್ಯಕ್ಷ ಎಂ. ಚಂದ್ರಶೇಖರ್, ಅಧ್ಯಕ್ಷತೆ : ಮೈಸೂರು ಆರ್ಟ್ ಗ್ಯಾಲರಿ ಸ್ಥಾಪಕ ಅಧ್ಯಕ್ಷ ಎಲ್. ಶಿವಲಿಂಗಪ್ಪ, ಸ್ಥಳ: ಮೈಸೂರು ಆರ್ಟ್ ಗ್ಯಾಲರಿ, ಬೆಳಗ್ಗೆ 11ಕ್ಕೆ.

■ **ಕನ್ನಡ ಸಾಹಿತ್ಯ ಪರಿಷತ್, ಮೈಸೂರು ಜಿಲ್ಲಾ ಘಟಕ :** ನಾಡು ಕಂಡ ಶ್ರೇಷ್ಠ ಕವಿ ಪ್ರೊ. ಜಿ.ಎಸ್. ಸಿದ್ದಲಿಂಗಯ್ಯನವರಿಗೆ ಭಾವಪೂರ್ಣ ಶ್ರದ್ಧಾಂಜಲಿ, ನುಡಿನಮನ ಸಲ್ಲಿಸುವವರು : ಡಾ. ಸಿ.ಪಿ. ಕೃಷ್ಣಕುಮಾರ್, ಪ್ರೊ. ಕೆ.ಟಿ. ವೀರಪ್ಪ, ಡಾ. ಮೊರಬದ ಮಲ್ಲಿಕಾರ್ಜುನ, ಪ್ರೊ. ಸಿ. ನಾಗಣ್ಣ, ಡಾ. ಶಿವರಾಜಪ್ಪ, ಎಂ. ಚಂದ್ರಶೇಖರ್, ಪ್ರೊ. ಅಂಬಳಿ ಹಿರಿಯಣ್ಣ, ಪ್ರೊ. ಪದ್ಮಾಶೇಖರ್, ಸೋಮಶೇಖರಗೌಡ, ಶ್ರೀಮತಿ ರತ್ನ ಹಾಲಪ್ಪಗೌಡ, ಸ್ಥಳ: ಜಿಲ್ಲಾ ಕನ್ನಡ ಸಾಹಿತ್ಯ ಭವನ, ವಿಜಯನಗರ 1ನೇ ಹಂತ, ಬೆಳಗ್ಗೆ 11ಕ್ಕೆ.

■ **ಕಾವೇರಿ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್ :** ಪದವಿ ಪ್ರದಾನ ಸಮಾರಂಭ, ಮುಖ್ಯ ಅತಿಥಿಗಳು : ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾನಿಲಯ ಕುಲಪತಿ ಡಾ. ಬಿ.ಸಿ. ಭಗವಾನ್, ಮೈಸೂರು ವಿವಿ ವಿಶ್ರಾಂತ ಕುಲಪತಿ ಪ್ರೊ.ಕೆ.ಎಸ್. ರಂಗಪ್ಪ, ಸುರಕ್ಷಾ ಎಜುಕೇಷನ್ ಟ್ರಸ್ಟ್ ಅಧ್ಯಕ್ಷ ಡಾ. ಸರಳಾ ಚಂದ್ರಶೇಖರ್, ಅಧ್ಯಕ್ಷತೆ : ಡಾ. ಚಂದ್ರಶೇಖರ್ ಫೌಂಡೇಷನ್ ಅಧ್ಯಕ್ಷ ಡಾ. ಜಿ.ಆರ್. ಚಂದ್ರಶೇಖರ್, ಸ್ಥಳ: ಕಾವೇರಿ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್ ಸಭಾಂಗಣ, ದೇವೇಗೌಡ ಸರ್ಕಲ್, ಸಂಜೆ 4ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ, ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯ, ಹಸಿರು ದಳ, ಬೆಂಗಳೂರು :** ಸುಸ್ಥಿರ ಘನತ್ಯಾಜ್ಯ ನಿರ್ವಹಣೆ ಕುರಿತು ಕಾರ್ಯಾಗಾರ, ಅಧ್ಯಕ್ಷತೆ : ಮೈಸೂರು ವಿವಿ ಕುಲಸಚಿವೆ ಶ್ರೀಮತಿ ಎಂ.ಕೆ. ಸವಿತಾ, ಉದ್ಘಾಟನೆ : ಮೈಸೂರು ವಿವಿ ಸಿಂಡಿಕೇಟ್ ಸದಸ್ಯರಾದ ಡಾ. ಜೆ. ಶಿಲ್ಪಾ, ಉಪಸ್ಥಿತರು : ಡಾ. ಸೌಮ್ಯ, ಸಿ.ಎಸ್. ಕುಮುದ, ಪ್ರೊ. ಹೆಚ್.ಪಿ.ಜ್ಯೋತಿ, ಸ್ಥಳ: ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಸಭಾಂಗಣ, ಸೆನೆಟ್ ಭವನ, ಮಾನಸಗಂಗೋತ್ರಿ, ಸಂಜೆ 4 ರಿಂದ.

■ **ಸುರುಚಿ ರಂಗಮನೆ :** ಕಥೆ ಕೇಳೋಣ ಬನ್ನಿ ಕಾರ್ಯಕ್ರಮ – 880, ಕಥೆ ಹೇಳುವವರು: ಹಿರಿಯ ರಂಗಕರ್ಮಿ ಹೆಚ್.ಎಸ್. ಗೋವಿಂದೇಗೌಡ, ಸ್ಥಳ: ಸುರುಚಿ ರಂಗಮನೆ, 476, ಚಿತ್ರಭಾನು ರಸ್ತೆ, ಕುವೆಂಪುನಗರ, ಸಂಜೆ 4.30 ರಿಂದ

■ **ಚಂಪಕ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ :** ಚಂಪಕ ರಾಷ್ಟ್ರೀಯ ಕಲಾ ಉತ್ಸವ, ಚಂಪಕ ಅಕಾಡೆಮಿಯ ಸಂಸ್ಥಾಪಕಿ ಡಾ. ನಾಗಲಕ್ಷ್ಮಿ ನಾಗರಾಜನ್, ಕಲಾಸಂದೇಶ ಪ್ರತಿಷ್ಠಾನದ ವ್ಯವಸ್ಥಾಪಕ ಟ್ರಸ್ಟಿ ಗುರು ವಿದ್ವಾನ್ ಸಂದೇಶ ಭಾರ್ಗವ್ ಅವರ ಶಿಷ್ಯರಿಂದ ನೃತ್ಯ ಪ್ರದರ್ಶನ, ಬೆಂಗಳೂರಿನ ಶಾರದಾ ನಾಟ್ಯ ಕುಟೀರದ ವಿದುಷಿ ಮಿಲನ್ ಶಿಷ್ಯರಿಂದ ನೃತ್ಯ ಪ್ರದರ್ಶನ, ಮುಖ್ಯ ಅತಿಥಿಗಳು: ಮೈಸೂರು ಸಿಎಫ್‌ಟಿಆರ್‌ಐ ಲೇಔಟ್ ನಿವಾಸಿಗಳ ಕಲ್ಯಾಣ ಸಂಘದ ಅಧ್ಯಕ್ಷೆ ಶ್ರೀಮತಿ ಕರುಣಾ ವೆಂಕಟರಾಮನ್, ಸ್ಥಳ: ರಾಮಕೃಷ್ಣನಗರದ ಚಂಪಕ ಅಕಾಡೆಮಿ ಆವರಣದ ಚಂಪಕ ಸಭಾಂಗಣ, ಸಂಜೆ 5ಕ್ಕೆ.

■ **ಮೈಸೂರು ಬ್ರಾಹ್ಮಣ ಯುವ ವೇದಿಕೆ:** ವಿಪ್ರರ ಸಂಘಟನಾ ಸಭೆ, ಉಪಸ್ಥಿತರು : ಶಾಸಕ ಟಿ.ಎಸ್. ಶ್ರೀವತ್ಸ, ಹಿರಿಯ ಸಮಾಜ ಸೇವಕ ಡಾ. ರಘುರಾಮ್ ವಾಜಪೇಯಿ, ಮೇಲುಕೋಟೆ ವಂಗೀಪುರ ಮಠದ ಶ್ರೀ ಇಳೈ ಆಳ್ವಾರ್ ಸ್ವಾಮೀಜಿ, ಸ್ಥಳ: ಶ್ರೀ ಲಕ್ಷ್ಮೀ ನರಸಿಂಹ ಸ್ವಾಮಿ ದೇವಸ್ಥಾನ, ಕಾಳಿದಾಸ ರಸ್ತೆ, ಸಂಜೆ 5.30ಕ್ಕೆ

■ **ನಿತಿನ್ಸ್ ನಾದಾಮೃತ ಸ್ಕೂಲ್ ಆಫ್ ಮ್ಯೂಸಿಕ್ :** 11ನೇ ವಾರ್ಷಿಕೋತ್ಸವ ಹಾಗೂ 6ನೇ ರಾಜು ಗಾನಲಹರಿ, ಅಧ್ಯಕ್ಷತೆ : ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ. ರಾಜೀವ್, ಉದ್ಘಾಟನೆ : ಡಾ. ಶ್ವೇತಾ ಮಡಪ್ಪಾಡಿ, ಮುಖ್ಯ ಅತಿಥಿಗಳು : ಶ್ರೀಮತಿ ಶ್ರೀರಕ್ಷಾ ಜಯರಾಮ್, ವಿಶೇಷ ಆಹ್ವಾನಿತರು : ಕರ್ನಾಟಕ ಸುಗಮ ಸಂಗೀತ ಪರಿಷತ್ ಅಧ್ಯಕ್ಷ ಡಾ. ನಾಗರಾಜ್ ವಿ. ಭೈರಿ, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಸ್ಥಳ: ವೀಣೆ ಶೇಷಣ್ಣ ಭವನ, ಗಾನಭಾರತಿ, ಸಂಜೆ 5.30ಕ್ಕೆ.

■ **ಪ್ರಜ್ಞಾ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ :** ಪ್ರಜ್ಞಾ ರಂಗೋತ್ಸವ–2025, ದೇವನೂರು ಮಹಾದೇವ ಅವರ ಎದೆಗೆ ಬಿದ್ದ ಅಕ್ಷರ ನಾಟಕ ಪ್ರದರ್ಶನ, ನಿರ್ದೇಶನ : ಸಿ. ಬಸವಲಿಂಗಯ್ಯ, ಸ್ಥಳ: ಕಿರುರಂಗ ಮಂದಿರ, ಕಲಾಮಂದಿರ ಆವರಣ, ಸಂಜೆ 6ಕ್ಕೆ

■ **ಭಾರತೀಯ ವಿದ್ಯಾ ಭವನ, ಮೈಸೂರು ಕೇಂದ್ರ, ಬೆಂಗಳೂರಿನ ಇನ್ಫೋಸಿಸ್ ಪ್ರತಿಷ್ಠಾನ :** ತಿಂಗಳ ಸಂಗೀತ ಕಾರ್ಯ ಕ್ರಮದ ಅಂಗವಾಗಿ ವಿದ್ವಾನ್ ವೈಣಿಕ ರತ್ನ ಆರ್.ಕೆ.ಪದ್ಮನಾಭ, ವಿದ್ವಾನ್ ಗಣೇಶ್ ಶರ್ಮ, ವಿದುಷಿ ಗೀತಶ್ರೀ, ವಿದ್ವಾನ್ ವರುಣ್ ಮತ್ತು ವಿದುಷಿ ಶ್ರೀ ಲಕ್ಷ್ಮಿ ಅವರಿಂದ ಪಂಚವೀಣಾ ಕಾರ್ಯಕ್ರಮ, ವಿದ್ವಾನ್ ಎಸ್. ಕುಮಾರಸ್ವಾಮಿ –ಮೃದಂಗ ಮತ್ತು ವಿದ್ವಾನ್ ಶ್ರೀನಿಧಿ–ಘಟಂ, ಸ್ಥಳ: ಭಾರತೀಯ ವಿದ್ಯಾಭವನ, ವಿಜಯನಗರ ಮೊದಲನೇ ಹಂತ, ಸಂಜೆ 6ಕ್ಕೆ.

■ **ಶ್ರೀ ರಾಮಕೃಷ್ಣ ಆಶ್ರಮ :** ಸ್ವಾಮಿ ಮಹೀಪಾಲಾನಂದ ಅವರಿಂದ ಇನ್‌ಸೈಟ್ಸ್ ಫ್ರಂ ಪ್ಯಾರಾಬಲ್ಸ್ ಆಫ್ ಶ್ರೀ ರಾಮಕೃಷ್ಣ–5 ಕುರಿತು ಪ್ರವಚನ, ಸ್ಥಳ: ಸ್ವಾಮಿ ಶಾಂಭವಾನಂದಜೀ ಸ್ಮಾರಕ ಸಭಾಂಗಣ, ಯಾದವಗಿರಿ, ಸಂಜೆ 6 ರಿಂದ.

■ **ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ :** ವಿಶ್ರಾಂತ ಹೆಚ್ಚುವರಿ ಕಾರ್ಯದರ್ಶಿ ಸಿ.ವಿ. ಗೋಪಿನಾಥ್ ಅವರಿಂದ ವರ್ಲ್ಡ್ ಟೆಲಿಕಮ್ಯೂನಿಕೇಷನ್ ಅಂಡ್ ಇನ್‌ಫರ್ಮೇಷನ್ ಸೊಸೈಟಿ ಡೇ ಕುರಿತು ತಾಂತ್ರಿಕ ಉಪನ್ಯಾಸ, ಅಧ್ಯಕ್ಷತೆ : ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಅಧ್ಯಕ್ಷ ಡಾ. ಆರ್. ದೀಪು, ಸ್ಥಳ: ಎಸ್.ಪಿ. ಭಟ್ ಹಾಲ್, ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್, ಜೆಎಲ್‌ಬಿ ರಸ್ತೆ, ಸಂಜೆ 6ಕ್ಕೆ.

■ **ಭೂಷಣ್ ಪ್ರದರ್ಶಕ ಮತ್ತು ದೃಶ್ಯ ಕಲೆಗಳ ಅಕಾಡೆಮಿ :** ಅಭ್ಯುದಯ ಧ್ಯಾನ್ ಭೂಷಣ್ ಮತ್ತು ಅಭಿಗ್ನನ್ ವೇದಾಂತ್ ಭೂಷಣ್ ಅವರಿಂದ ನವರಸ ರಾಮಾಯಣ ಆಧಾರಿತ ರಾಮಾಭ್ಯುದಯಮ್, ಸಂಗೀತ ನೃತ್ಯ ನಾಟಕ, ಸ್ಥಳ: ಶ್ರೀ ಕೃಷ್ಣ ದೇವಸ್ಥಾನ, ಗೋಕುಲಂ 3ನೇ ಹಂತ, ಸಂಜೆ 6.30ಕ್ಕೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ನಖ ಶಿಖಾಂತ ಅಂದ ಆರೋಗ್ಯಗಳ ಆಪ್ತ ಮಾಹಿತಿ, ಪ್ರಸ್ತುತಿ: ಡಾ. ಕೇಶವ ಕೊರಸೆ, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಎಂ.ಡಿ. ಸುಮತಿ ಮುರಾರಿ, ವ್ಯಾಖ್ಯಾನ–ಡಾ. ಹೆಚ್. ಎಂ. ಕಲಾಶ್ರೀ, 6.50 ರೈತರಿಗೆ ಸಲಹೆ, 7.15 ಮನೆ ಮನೆಯ ಹಣತೆ –ಪ್ರಾಯೋಜಿತ ಸರಣಿ ಕಾರ್ಯಕ್ರಮ, ಪ್ರಾಯೋಜಕರು–ಡಾ. ಬಿ. ಆರ್. ಅಂಬೇಡ್ಕರ್ ಸಂಶೋಧನಾ ಸಂಸ್ಥೆ, ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ, 8.30 ಯೋಗ ಕುರಿತ ವಿಶೇಷ ಸರಣಿ ಮಹಾಯೋಗ, 8.35 ಕನ್ನಡ ಚಿತ್ರಗೀತೆಗಳು, 9.00 ವಿಶೇಷ ಹಿಂದಿ ವಾರ್ತೆ, 9.10 ವಿಶೇಷ ಇಂಗ್ಲೀಷ್ ವಾರ್ತೆ, 9.20 ಕನ್ನಡ ಚಿತ್ರಗೀತೆಗಳು, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ :ಹಂಸಿನಿ ನಾಗೇಂದ್ರ – ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ನಮ್ಮೂರ್ ಹೆಸರು, ಪ್ರಸ್ತುತಿ : ಡಾ. ಮೈಸೂರು ಉಮೇಶ್

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಜನಪದ ಸಂಗೀತ, 1.00 ಪ್ರಗತಿ ಪಥ– ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 2.40 ಹಿಂದಿ ಚಿತ್ರಗೀತೆಗಳು, 3.00 ವಿಶೇಷ ಹಿಂದಿ ವಾರ್ತೆಗಳು, 3.10 ವಿಶೇಷ ಇಂಗ್ಲೀಷ್ ವಾರ್ತೆಗಳು, 3.20 ಕನ್ನಡ ಚಿತ್ರಗೀತೆಗಳು, 3.30 ಮಕ್ಕಳ ಮಂಟಪ, 4.00 ನಾಟಕ ಥ್ಯಾಂಕ್ ಕ್ಯೂ ಕ್ಯಾನ್ಸರ್, ರಚನೆ–ಎಸ್. ಕೆ. ಪೂರ್ಣಿಮಾ ದೇವಿ, ನಿರ್ಮಾಣ–ಉಮೇಶ್ ಎಸ್.ಎಸ್., 4.30 ನೆನಪಿನಂಗಳ (ಧ್ವನಿ ಭಂಡಾರದಿಂದ), 6.50 ಕೃಷಿರಂಗ :ಕಿಸಾನ್‌ವಾಣಿ, ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ಸಮಗ್ರ ಕೃಷಿಯ ಪ್ರಾಮುಖ್ಯತೆ ಕುರಿತ ಸಂವಾದ ಭಾಗವಹಿಸುತ್ತಾರೆ: ಪಾಂಡವಪುರ ತಾಲೂಕಿನ ಚಿನಕುರಳಿ ಹೋಬಳಿ ಅಂತರಹಳ್ಳಿಯ ದೇವರಾಜ್ ಮತ್ತು ಎ.ಎಸ್. ಪ್ರಭುಸ್ವಾಮಿ, ಪ್ರಸ್ತುತಿ: ಎನ್. ಕೇಶವಮೂರ್ತಿ, 8.00 ವಿಶೇಷ ಹಿಂದಿ ವಾರ್ತೆಗಳು, 8.10 ವಿಶೇಷ ಇಂಗ್ಲೀಷ್ ವಾರ್ತೆಗಳು, 8.20 ಹಿಂದಿ ಚಿತ್ರಗೀತೆಗಳು, 9.15 ವಿಶೇಷ ಸಂವಾದ ಕಾರ್ಯಕ್ರಮ, 10.00 ಸುದ್ದಿ ಅಧಾರಿತ ವಿಶೇಷ ಕಾರ್ಯಕ್ರಮ, ಸುರ್ಖಿಯೋಮೆ–ಇದರ ಧ್ವನಿ ಮುದ್ರಣ

ಡೆಂಗ್ಯೂ ಜ್ವರ ಮಾರಕ ಖಾಯಿಲೆ, ಮುನ್ನೆಚ್ಚರಿಕೆ ಕ್ರಮವಹಿಸಿ

ಜಾಗೃತಿ ಜಾಥಾಕ್ಕೆ ಚಾಲನೆ ನೀಡಿದ ಜಿಲ್ಲಾಧಿಕಾರಿ ಡಾ.ಕುಮಾರ ಮನವಿ

ಮಂಡ್ಯ,ಮೇ 16– ಡೆಂಗ್ಯೂ ಜ್ವರ ಒಂದು ಮಾರಕ ಖಾಯಿಲೆ, ಈ ಮಹಾಮಾರಿ ಡೆಂಗ್ಯೂ ಬಾರದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಿ ಎಂದು ಜಿಲ್ಲಾಧಿಕಾರಿ ಡಾ ಕುಮಾರ ಜಾಗೃತಿ ಮೂಡಿಸಿದರು.

ನಗರದ ಸಂಜಯ ವೃತ್ತದಲ್ಲಿ ಹಮ್ಮಿಕೊಳ್ಳಲಾಗಿದ್ದ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಹಸಿರು ಬಾವುಟ ಪ್ರದರ್ಶಿಸುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು ಡೆಂಗ್ಯೂ ಎಂಬ ಮಾರಕ ರೋಗವನ್ನು ಹೋಗಲಾಡಿಸುವ ಮೊದಲ ಔಷಧಿ ಎಂದರೆ ಅದು ಅರಿವು, ಸಾರ್ವಜನಿಕರು ಡೆಂಗ್ಯೂ ಜ್ವರ ತಡೆಗಟ್ಟುವ ಬಗ್ಗೆ ಮುನ್ನೆಚ್ಚರಿಕೆ ಕ್ರಮ ವಹಿಸಬೇಕು ಎಂದರು.

ಸಾರ್ವಜನಿಕರು ತಾವು ವಾಸಿಸುವ ಸುತ್ತ ಮುತ್ತಲ ಪ್ರದೇಶಗಳಲ್ಲಿ ಸ್ವಚ್ಛತೆ ಕಾಪಾಡುವುದು ಹಾಗೂ ಸೊಳ್ಳೆಗಳು ಉತ್ಪತ್ತಿಯಾಗದಂತೆ ನೋಡಿಕೊಳ್ಳುವುದು ಅತಿ ಮುಖ್ಯ, ನಮ್ಮೆಲ್ಲರ ಆದ್ಯ ಕರ್ತವ್ಯ, ಡೆಂಗ್ಯೂ ಬಂದ ನಂತರ ಎಚ್ಚೆತ್ತುಕೊಳ್ಳುವುದಕ್ಕಿಂತ ಡೆಂಗ್ಯೂ ಬಾರದಂತೆ ನೋಡಿಕೊಳ್ಳುವುದು ಬುದ್ಧಿವಂತಿಕೆ ಎಂದರು.



ಡೆಂಗ್ಯೂ ಜಾಗೃತಿ ಜಾಥಾಕ್ಕೆ ಜಿಲ್ಲಾಧಿಕಾರಿ ಡಾ ಕುಮಾರ ಚಾಲನೆ ನೀಡಿ ಜಾಗೃತಿ ಮೂಡಿಸಿದರು.

ಡೆಂಗ್ಯೂ ಕುರಿತು ನಾವೆಲ್ಲರೂ ಜಾಗೃತರಾದರೆ ಡೆಂಗ್ಯೂ ಎಂಬ ಮಹಾಮಾರಿಯನ್ನು ಹೋಗಲಾಡಿಸಬಹುದು, ಮಳೆಗಾಲ ಆರಂಭವಾಗುವುದರಿಂದ ಚರಂಡಿ ಹಾಗೂ ಅರ್ಧಕ್ಕೆ ನಿಂತು ಹೋದ ಕಟ್ಟಡಗಳಲ್ಲಿ ನೀರು ನಿಂತರೆ ಸೊಳ್ಳೆಗಳು ಉತ್ಪತ್ತಿಯಾಗುತ್ತವೆ, ಸಾರ್ವಜನಿಕರು ತಮ್ಮ ತಮ್ಮ ಮನೆಗಳ ಮುಂಭಾಗದಲ್ಲಿ ಇರುವ ಚರಂಡಿಗಳನ್ನು ಸ್ವಚ್ಛಗೊಳಿಸಿ, ತಮ್ಮ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ಸ್ವಯಂ ಪ್ರೇರಿತರಾಗಿ ಸ್ವಚ್ಛಗೊಳಿಸುವುದರಿಂದ ಡೆಂಗ್ಯೂ ಜ್ವರವನ್ನು ತಡೆಗಟ್ಟಬಹುದು ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಕೆ.ಮೋಹನ್ ಮಾತನಾಡಿ ಈ ಬಾರಿ ಡೆಂಗ್ಯೂ ಜ್ವರದ ಘೋಷ ವಾಕ್ಯ "ಪರಿಶೀಲಿಸಿ, ಸ್ವಚ್ಛಗೊಳಿಸಿ, ಮುಚ್ಚಿಡಿ", ಮೊದಲು ನಮ್ಮ ಸುತ್ತಮುತ್ತಲಿನ ಪರಿಸರದಲ್ಲಿ ಎಲ್ಲಾದರೂ ಸೊಳ್ಳೆ ಉತ್ಪತ್ತಿಯಾಗುವಂತಹ ಸ್ಥಳಗಳು ಇದ್ದಾರೆ ಅದನ್ನು ಗುರುತಿಸಿ ಸ್ವಚ್ಛಗೊಳಿಸಿ, ನೀರು ನಿಲ್ಲದಂತೆ ಸ್ವಚ್ಛಗೊಳಿಸಿದ ಸ್ಥಳಗಳನ್ನು ಮುಚ್ಚಿಡಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಲೇರಿಯಾ ನಿಯಂತ್ರಣ ಅಧಿಕಾರಿ ಡಾ. ಕಾಂತರಾಜು, ಡಾ. ಬೆಟ್ಟಸ್ವಾಮಿ,ಎಮ್.ಎನ್. ಆಶಾಲತಾ ಸೇರಿದಂತೆ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

ಸಂಜಯ ವೃತ್ತದಲ್ಲಿ ಮಾನವ ಸರಪಳಿ ನಿರ್ಮಾಣ: ರಾಷ್ಟ್ರೀಯ ಡೆಂಗ್ಯೂ ಜ್ವರ ದಿನಾಚರಣೆ ಪ್ರಯುಕ್ತ ಜನರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ನಗರದ ಸಂಜಯ್ ವೃತ್ತದಲ್ಲಿ ಬೃಹತ್ ಮಾನವ ಸರಪಳಿಯನ್ನು ನಿರ್ಮಿಸಿ ಸಾರ್ವಜನಿಕರಿಗೆ ಅರಿವು ಮೂಡಿಸಲಾಯಿತು.

ನಂತರ ಎಸ್.ಡಿ.ಜಯರಾಮ್ ಪ್ಯಾರ ಮೆಡಿಕಲ್ ವಿಜ್ಞಾನ ಸಂಸ್ಥೆ ಮತ್ತು ಸದ್ವಿದ್ಯಾ ಪ್ಯಾರಮೆಡಿಕಲ್ ಕಾಲೇಜಿನ ವಿದ್ಯಾರ್ಥಿಗಳಿಂದ ಸಂಜಯ್ ವೃತ್ತದಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಕಚೇರಿಯವರೆಗೂ ಜಾಥಾ ನಡೆಯಿತು,

ವಿದ್ಯಾರ್ಥಿನಿಯರು 'ಕೀಟ ಚಿಕ್ಕದು ಕಾಟ ದೊಡ್ಡದು', 'ವಿದ್ಯೆ ಕದಿಯಲಾಗದ ಸಂಪತ್ತು ಆರೋಗ್ಯ ಕೊಳ್ಳಲಾಗದ ಸಂಪತ್ತು', 'ಸ್ವಯಂ ರಕ್ಷಣಾ ವಿಧಾನವನ್ನು ಬಳಸಿ ಸೊಳ್ಳೆಗಳನ್ನು ನಿಯಂತ್ರಿಸಿ' ಎಂಬ ಜಾಗೃತಿ ಫಲಕಗಳನ್ನು ಜಾಥಾದಲ್ಲಿ ಪ್ರದರ್ಶನ ಮಾಡಿದರು.

ನೀರಿಗಾಗಿ ರೈತರ ಪ್ರತಿಭಟನೆ



ಪಾಂಡವಪುರ ಪಟ್ಟಣದ ವಿಸಿ ಕಚೇರಿ ಎದುರು ಹರವು ಗ್ರಾಮದ ರೈತರು ನಾಲೆಗೆ ಸಂಪರ್ಕವಾಗಿ ನೀರು ಹರಿಸುತ್ತಿಲ್ಲ ಎಂದು ಆಗ್ರಹಿಸಿ ಪ್ರತಿಭಟನೆ ನಡೆಸಿದರು.

ಪಾಂಡವಪುರ: ತಾಲೂಕಿನ ಹರವು ಗ್ರಾಮದಲ್ಲಿ ಎಲ್‌ಬಿಎಲ್‌ಎಲ್ ನಾಲೆಗೆ ಸಮರ್ಪಕ ನೀರು ಹರಿಸುತ್ತಿಲ್ಲ ಎಂದು ಆರೋಪಿಸಿ ಹರವು ಗ್ರಾಮದ ರೈತರು ಶುಕ್ರವಾರ ಪಟ್ಟಣದ ವಿಸಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಹರವು ಗ್ರಾಮದ ಹೊರವಲಯದ ಎಲ್‌ಬಿಎಲ್‌ಎಲ್ ನಾಲೆಯ ಕಾಮಗಾರಿಯನ್ನು 13 ವರ್ಷಗಳ ಹಿಂದೆಯೇ ಮಾಡಲಾಗಿದೆ. ಈ ಕಾಮಗಾರಿ ಅಸಮರ್ಪಕವಾಗಿದ್ದು, ಕೊನೆ ಭಾಗದ ರೈತರಿಗೆ ನೀರು ತಲುಪುತ್ತಿಲ್ಲ. ವಿಸಿ ನಾಲೆ, ಸಿಡಿಎಸ್ ನಾಲೆ ನೀರು ಬಿಟ್ಟು ನಾಲ್ಕು ದಿನವಾದರೂ ಸಹ ನಮ್ಮ ಜಮೀನಿಗೆ ತಲುಪುತ್ತಿಲ್ಲ. ಇದರಿಂದಾಗಿ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಬೆಳೆದಿರುವ ಬೆಳೆಯನ್ನು ಸಹ ಉಳಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಈ ಸಂಬಂಧ ಈಗಾಗಲೇ ಎಇ, ಎಇಇ, ಎಸ್‌ಸಿಗಳಿಗೂ ಮನವಿ ಮಾಡಿದರೂ ಸಹ ಸಂಬಂಧಪಟ್ಟ ಅಧಿಕಾರಿಗಳು ಕ್ರಮವಹಿಸಿಲ್ಲ ಎಂದು ಕಿಡಿಕಾರಿದರು.

ಪ್ರತಿಭಟನೆಯಲ್ಲಿ ಶ್ರೀನಿವಾಸ್, ಗೋಪಾಲ, ನಟರಾಜು, ವಾಸು, ನಾಗಣ್ಣ, ಕುಮಾರ್, ರಮೇಶ್, ಆನಂದ್, ಸುರೇಶ್, ಜಗದೀಶ್, ಸತೀಶ, ಎಚ್.ಕೆ.ಜಗದೀಶ, ಎಚ್.ಕೆ.ಜ್ಞಾನೇಶ, ಲೋಕೇಶ್, ಪ್ರಭಾಕರ, ಶ್ರೀನಿವಾಸ್, ಮಹದೇವು, ನಂದೀಶ, ಗೋವಿಂದ್ ಸೇರಿದಂತೆ ಹಲವರು ಹಾಜರಿದ್ದರು.

ಅಣ್ಣೇಚಾಕನಹಳ್ಳಿ ಡೇರಿಗೆ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ



ಅಣ್ಣೇಚಾಕನಹಳ್ಳಿ ಡೈರಿ ಅಧ್ಯಕ್ಷರಾಗಿ ಜಯಲಕ್ಷ್ಮಮ್ಮ ಮಂಚೇಗೌಡ, ಉಪಾಧ್ಯಕ್ಷರಾಗಿ ಶಿವಮ್ಮರವಿ ಅವಿರೋಧವಾಗಿ ಆಯ್ಕೆಯಾದರು.

ಕೆ.ಆರ್.ಪೇಟೆ, ಮೇ 16– ತಾಲೂಕಿನ ಸಂತೇಬಾಚಹಳ್ಳಿ ಹೋಬಳಿಯ ಅಣ್ಣೇಚಾಕನಹಳ್ಳಿ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಜಯಲಕ್ಷ್ಮಮ್ಮ ಮಂಚೇಗೌಡ ಹಾಗೂ ಉಪಾಧ್ಯಕ್ಷರಾಗಿದ್ದ ಶಿವಮ್ಮ ರವಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸಂಘದ ಹಿಂದಿನ ಅಧ್ಯಕ್ಷರಾದ ಸುಧಾಮಣಿ ಶಿವಪ್ಪ ಹಾಗೂ ಉಪಾಧ್ಯಕ್ಷರಾದ ನಂಜಮ್ಮ ಗವೀಗೌಡ ರಾಜೀನಾಮೆಯಿಂದ ತೆರವಾಗಿದ್ದ ಅಧ್ಯಕ್ಷ ಉಪಾಧ್ಯಕ್ಷ ಸ್ಥಾನಕ್ಕೆ ಇಂದು ಚುನಾವಣೆ ನಿಗದಿಯಾಗಿತ್ತು. ಅಧ್ಯಕ್ಷ ಸ್ಥಾನಕ್ಕೆ ಜಯಲಕ್ಷ್ಮಮ್ಮ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಶಿವಮ್ಮ ನಾಮಪತ್ರವನ್ನು ಸಲ್ಲಿಸಿದರು. ಬೇರೆ ಯಾವುದೇ ನಿರ್ದೇಶಕರು ನಾಮಪತ್ರವನ್ನು ಸಲ್ಲಿಸದ ಕಾರಣ ಅವಿರೋಧ ಆಯ್ಕೆ ನಡೆಯಿತು. ಚುನಾವಣಾ ಅಧಿಕಾರಿಯಾಗಿ ಸಹಕಾರ ಇಲಾಖೆಯ ಅಧಿಕಾರಿ ಶೋಭ, ಸಹ ಚುನಾವಣಾಧಿಕಾರಿಯಾಗಿ ಸಂಘದ ಕಾರ್ಯದರ್ಶಿ ಅಂಬುಜ ಯೋಗೇಶ್ ಕಾರ್ಯ ನಿರ್ವಹಿಸಿದರು.

ನೂತನ ಅಧ್ಯಕ್ಷ ಹಾಗೂ ಉಪಾಧ್ಯಕ್ಷರನ್ನು ತಾಲೂಕು ಪಿಎಲ್‌ಡಿ ಬ್ಯಾಂಕ್ ನಿರ್ದೇಶಕರಾದ ನಾಗರಾಜು ಹಾಗೂ ಎಪಿಎಂಸಿ ಮಾಜಿ ಅಧ್ಯಕ್ಷ ಚಂದ್ರಹಾಸ, ಸಂಘದ ನಿರ್ದೇಶಕರಾದ ಜಯಮ್ಮ ಎ.ಬಿ.ಜವರೇಗೌಡ, ರತ್ನಮ್ಮ ಶಿವಪ್ಪ, ನಾಗಮ್ಮ ಸಿದ್ದರಾಮೇಗೌಡ, ಸುಧಾ ತಿಮ್ಮರಾಯಪ್ಪ, ಸುಲೋಚನ ನಾಗರಾಜು, ರೇಣುಕಾ ನಾಗರಾಜು, ಮಮತಾ ಲೋಕೇಶ್, ಮುಖಂಡರಾದ ರಾಮಕೃಷ್ಣೇಗೌಡ, ಎ.ಬಿ ಜವರೇಗೌಡ, ಸಿದ್ದರಾಮೇಗೌಡ, ಟೈಲರ್ ದೇವರಾಜು, ಮಾರಿಗುಡಿ ನಾಗರಾಜು, ಕೆಂಪಣ್ಣನ ಶಿವಣ್ಣ, ಕಾಯಿ ಕುಮಾರ್, ತಮ್ಮೇಗೌಡ, ಕಾಂತರಾಜು, ಅಶೋಕ್, ಮಾಟಣ್ಣನ ಶಿವಣ್ಣ ಇನ್ನಿತರರು ಅಭಿನಂದಿಸಿದರು.

ಕಾಂಗ್ರೆಸ್ ತೊರೆದು ಜೆಡಿಎಸ್ ಸೇರಿದ ಮುಖಂಡರು

ಶ್ರೀರಂಗಪಟ್ಟಣ: ತಾಲೂಕಿನ ಕಾಂಗ್ರೆಸ್ ಮುಖಂಡರು ಶುಕ್ರವಾರ ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ ಅವರ ನಿವಾಸದಲ್ಲಿ ಕಾಂಗ್ರೆಸ್ ಪಕ್ಷ ತೊರೆದು ಜೆಡಿಎಸ್ ಸೇರ್ಪಡೆಯಾದರು.

ಶ್ರೀರಂಗಪಟ್ಟಣ ಯುವ ಕಾಂಗ್ರೆಸ್‌ನ ಗ್ರಾಮಾಂತರ ಅಧ್ಯಕ್ಷ ಕಿಶೋರ್, RAP CMS ಮಾಜಿ ಅಧ್ಯಕ್ಷ ಶಂಕರ್, ಕಾಂಗ್ರೆಸ್ ಯುವ ಮುಖಂಡರಾದ ಮಂಜು, ರಂಜು, ಹೆಮ್ಮಿಗೆ ಗುರು ಸೇರಿದಂತೆ ಹಲವು ಮುಖಂಡರು ಕಾಂಗ್ರೆಸ್ ಪಕ್ಷ ತೊರೆದು ಜೆಡಿಎಸ್ ಸೇರ್ಪಡೆಯಾದರು.

ಈ ವೇಳೆ ಮಾತನಾಡಿದ ಯುವ ಕಾಂಗ್ರೆಸ್‌ನ ಗ್ರಾಮಾಂತರ ಅಧ್ಯಕ್ಷ ಕಿಶೋರ್,



ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ ಅವರ ನಿವಾಸದಲ್ಲಿ ಕಾಂಗ್ರೆಸ್ ಮುಖಂಡರು ಪಕ್ಷ ತೊರೆದು ಜೆಡಿಎಸ್ ಸೇರ್ಪಡೆಯಾದರು.

ಹಾಲಿ ಶಾಸಕ ರಮೇಶ್ ಬಂಡಿಸಿದ್ದೇಗೌಡ ಕಾರ್ಯಕರ್ತರ ಸಮಸ್ಯೆಗಳಿಗೆ ಸ್ಪಂದಿಸದ ಹಿನ್ನಲೆ ಇಂದು ನಾವು ಹಲವು ಮುಖಂಡರು ಕಾಂಗ್ರೆಸ್ ತೊರೆದು ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ ಅವರ ನಾಯಕತ್ವ ಮೆಚ್ಚಿ ಜೆಡಿಎಸ್ ಸೇರ್ಪಡೆಗೊಂಡಿದ್ದೇವೆ. ಇಲ್ಲಿ ನಮಗೆ ಪಕ್ಷ ಸಂಘಟನೆಗೆ ಹೆಚ್ಚು ಅವಕಾಶವಿರುವುದರಿಂದ ನಾವು ಆಡಳಿತ ಪಕ್ಷ ತೊರೆದಿದ್ದೇವೆ ಎಂದು ಪ್ರತಿಕ್ರಿಯಿಸಿದರು.

ಈ ವೇಳೆ ಹಲವು ಜೆಡಿಎಸ್ ಕಾರ್ಯಕರ್ತರು, ಮುಖಂಡರು ಹಾಜರಿದ್ದರು.

ಶಿವರಾಮೇಗೌಡ ನಿಧನ

ಶ್ರೀರಂಗಪಟ್ಟಣ, ಮೇ 16– ತಾಲೂಕಿನ ಹೊಸಹಳ್ಳಿ ಗ್ರಾಮ ಪಂಚಾಯ್ತಿ ಅಧ್ಯಕ್ಷ ಚಲುವರಾಜ್ ಅವರ ತಂದೆ ಶಿವರಾಮೇಗೌಡ(75) ಅನಾರೋಗ್ಯದಿಂದ ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು.



ಮೃತರು ಇಬ್ಬರು ಪುತ್ರರು, ಓರ್ವ ಪುತ್ರಿ, ಸೊಸೆಯಂದಿರು ಹಾಗೂ ಮೊಮ್ಮೊಕ್ಕಳನ್ನು ಅಗಲಿದ್ದಾರೆ. ಗುರುವಾರ ಮಧ್ಯಾಹ್ನ ಹೊಸಹಳ್ಳಿಯ ರುದ್ರಭೂಮಿಯಲ್ಲಿ ಅಂತ್ಯಸಂಸ್ಕಾರ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಅನ್ನದಾನಿ ಶಾಸಕರಾಗಿದ್ದ ವೇಳೆ ಮಳವಳ್ಳಿಯ 2500 ಎಕರೆ ಜಮೀನು ಭೂಗಳ್ಳರ ಪಾಲು

ಮಳವಳ್ಳಿ ಕಾಂಗ್ರೆಸ್ ಮುಖಂಡ ರಾಜು ಆರೋಪ



ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ.ಪಿ.ರಾಜು ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಮಂಡ್ಯ,ಮೇ 16– ಮಳವಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿ 2 ಬಾರಿ ಶಾಸಕರಾಗಿ ಕಾರ್ಯ ನಿರ್ವಹಿಸಿರುವ ಮಾಜಿ ಶಾಸಕ ಡಾ.ಕೆ.ಅನ್ನದಾನಿ, ಕ್ಷೇತ್ರದ ಅಭಿವೃದ್ಧಿಗೆ ಯಾವುದೇ ಶಾಶ್ವತ ಯೋಜನೆಗಳನ್ನು ಅನುಷ್ಠಾನಗೊಳಿಸಿಲ್ಲ ಹಾಗೂ ಅವರು ಶಾಸಕರಾಗಿದ್ದ ವೇಳೆಯಲ್ಲೇ ಮಳವಳ್ಳಿ ತಾಲೂಕಿನಲ್ಲಿ ಸುಮಾರು 2500 ಎಕರೆ ಸರ್ಕಾರಿ ಜಮೀನು ಭೂಗಳ್ಳರ ಪಾಲಾಗಿದೆ, ಇದಕ್ಕೆ ಹೊಣೆ ಯಾರು ಎಂದು ಮಳವಳ್ಳಿ ತಾಲೂಕು ಘಟಕದ ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ.ಪಿ.ರಾಜು ಆರೋಪಿಸಿದರು.

ಶುಕ್ರವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಡಾ.ಅನ್ನದಾನಿಯವರ ಅಧಿಕಾರಾವಧಿಯಲ್ಲಿ ಅಕ್ರಮ ಖಾತೆಯಾಗಿರುವ 2.500 ಎಕರೆ ಪೈಕಿ ಈಗಾಗಲೇ 800 ಎಕರೆ ಜಮೀನಿನ ಖಾತೆ ರದ್ದುಪಡಿಸಲಾಗಿದೆ ಎಂದರು.

ಮನ್‌ಮುಲ್ ನಿರ್ದೇಶಕ ಆರ್.ಎನ್. ವಿಶ್ವಾಸ್ ಮಾತನಾಡಿ, ಮಾಜಿ ಶಾಸಕ ಅನ್ನದಾನಿ ಅವರು ಶಾಸಕರಾಗಿದ್ದ ಅವಧಿಯಲ್ಲಿ ಕೇವಲ ನಾಲ್ಕೈದು ರಸ್ತೆಗಳನ್ನು ಮಾತ್ರ ಅಭಿವೃದ್ಧಿಪಡಿಸಲಾಗಿತ್ತು. ಇದನ್ನು ಹೊರತುಪಡಿಸಿ ಯಾವುದೇ ಶಾಶ್ವತ ಯೋಜನೆ ಜಾರಿಗೊಳಿಸಲು ಅವರಿಂದ ಸಾಧ್ಯವಾಗಿಲ್ಲ ಎಂದರು.

ಮನ್‌ಮುಲ್ ನಿರ್ದೇಶಕ ಕೃಷ್ಣೇಗೌಡ, ಬ್ಲಾಕ್ ಕಾಂಗ್ರೆಸ್ ಮಾಜಿ ಅಧ್ಯಕ್ಷ ದೇವರಾಜು, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಚಿಕ್ಕಲಿಂಗಯ್ಯ ಮಾತನಾಡಿದರು.

ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಪ್ರಭು ಮಾತನಾಡಿ, ಎಸ್ಸಿ, ಎಸ್ಟಿ ಜನಾಂಗಕ್ಕೆ ಬ್ಯಾಕ್ ಲಾಗ್ ಹುದ್ದೆ ಕೊಡಿಸುವಲ್ಲಿ ನರೇಂದ್ರಸ್ವಾಮಿ ಕಾರ್ಯದಕ್ಷತೆ ಎಷ್ಟು ಎಂಬುದು ಆ ಜನಾಂಗದ ನೌಕರರು ಮತ್ತು ಅಧಿಕಾರಿಗಳಿಗೆ ತಿಳಿದಿದೆ.ಮಾಜಿ ಶಾಸಕರ ಸಲಹೆ ಪಡೆದು ಆ ಜನಾಂಗಕ್ಕೆ ನ್ಯಾಯ ಕೊಡಿಸುವ ಅಗತ್ಯವಿಲ್ಲವೆಂದರು.

ಸುದ್ದಿಗೋಷ್ಠಿಯಲ್ಲಿ ಪುರಸಭೆ ಮಾಜಿ ಅಧ್ಯಕ್ಷ ದೊಡ್ಡಯ್ಯ ಉಪಸ್ಥಿತರಿದ್ದರು.

ಮೂರನೇ ಪುಟದಿಂದ

ಮೇ 25ರವರೆಗೆ ವಿಸ್ತರಣೆ

ಇಂದು ಮಧ್ಯಾಹ್ನ 12 ಗಂಟೆ ವರೆಗೆ 49,814 ಎಸ್‌ಸಿ ಕುಟುಂಬಗಳ ಸಮೀಕ್ಷೆ ನಡೆಸಲಾಗಿದೆ. ಸಂಜೆ ವೇಳೆಗೆ ಒಟ್ಟು ಎಸ್‌ಸಿ ಕುಟುಂಬಗಳ ಸಂಖ್ಯೆ 20 ಲಕ್ಷ ದಾಟುವ ವಿಶ್ವಾಸ ಇದೆ. ಸದ್ಯ 31,006 ಜನ ಲಾಗ್ ಇನ್ ಆಗಿ ಸಮೀಕ್ಷೆ ನಡೆಸುತ್ತಿದ್ದಾರೆ. 2011 ಜಾತಿ ಗಣತಿ ಪ್ರಕಾರ ರಾಜ್ಯದಲ್ಲಿ 21,40, 304 ಪರಿಶಿಷ್ಟ ಜಾತಿ ಕುಟುಂಬಗಳಿದ್ದು, 2025ರ ವೇಳೆಗೆ ಸುಮಾರು 25,72,050 ಕುಟುಂಬಗಳು ಇರಬಹುದು ಎಂದು ಅಂದಾಜಿಸಲಾಗಿದೆ ಎಂದು ತಿಳಿಸಿದರು.

ಶಿಕ್ಷಕರಿಗೆ ಗೌರವ ಧನ: ಸಮೀಕ್ಷೆಯಲ್ಲಿ ಪಾಲ್ಗೊಂಡಿರುವ ಶಿಕ್ಷಕರಿಗೆ ಶಿಕ್ಷಣ ಇಲಾಖೆಯ ಮಾನದಂಡದ ಪ್ರಕಾರ ಗೌರವಧನ ನೀಡಲಾಗುತ್ತದೆ. ಶಿಕ್ಷಕೇತರರಿಗೆ ತಲಾ 5,000 ರೂ. ಕೊಡಲಾಗುತ್ತದೆ. ಜೊತೆಗೆ ಪ್ರತಿ ಮನೆಗೆ ತಲಾ 100 ರೂ. ಗೌರವಧನ ಪಾವತಿ ಮಾಡಲಾಗುತ್ತದೆ ಎಂದು ತಿಳಿಸಿದರು.

ಎಸ್‌ಸಿ ಸಿಬ್ಬಂದಿ ವರ್ಗದ ಉಪಜಾತಿಗಳ ಬಗ್ಗೆ ಇಲಾಖಾವಾರು ಮಾಹಿತಿ ಕೇಳಲಾಗಿದ್ದು, ರಾಜ್ಯದಲ್ಲಿನ ವಿಶ್ವವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿರುವ ಎಸ್‌ಸಿ ವಿದ್ಯಾರ್ಥಿಗಳ ಮಾಹಿತಿ ಬಂದಿದೆ. ಅದರ ವಿಶ್ಲೇಷಣೆ ನಡೆಸಲಾಗುತ್ತಿದೆ ಉಳಿದಂತೆ 40 ಇಲಾಖೆಗಳಿಂದ ಎಸ್‌ಸಿ ಉದ್ಯೋಗಿಗಳ ಉಪಜಾತಿಗಳ ಮಾಹಿತಿ ಬಂದಿದೆ. ಅದರ ಜೊತೆಗೆ ಎಸ್‌ಸಿ ಸಮುದಾಯದ ರಾಜಕೀಯ ಪ್ರಾತಿನಿಧ್ಯದ ಬಗ್ಗೆನೂ ಮಾಹಿತಿ ಕೇಳಿದ್ದೇವೆ. ಅದರ ಮಾಹಿತಿಯೂ ಬಂದಿದೆ. ಪೂರ್ಣ ಮಾಹಿತಿ ನೀಡದ ಇಲಾಖೆಗೆ ಎಚ್ಚರಿಕೆ ನೀಡಿದ್ದು, ನೋಟೀಸ್ ಕೂಡ ನೀಡಲಾಗಿದೆ ಎಂದರು.

ಗ್ಯಾರಂಟಿ ಜೊತೆಗೆ ಅಭಿವೃದ್ಧಿ

ನೀಡಿ, ಆ ತಾಂಡದ ಅಭಿವೃದ್ಧಿಗಳಿಗೆ ಒತ್ತು ನೀಡುತ್ತಿದ್ದೇವೆ. ಗಂಗಾವತಿ ಶಾಸಕ ಜನಾರ್ಧನ ರೆಡ್ಡಿ ಅನರ್ಹತೆಯ ಕುರಿತ ಪ್ರಶ್ನೆಗೆ ಉತ್ತರಿಸಿ, ನ್ಯಾಯಾಲಯ ಅವರಿಗೆ ಏಳು ವರ್ಷಗಳ ಶಿಕ್ಷೆಗೆ ಗುರಿಪಡಿಸಿದ್ದು, ಸಂವಿಧಾನದಂತೆ ಅವರು ಅನರ್ಹರಾಗುತ್ತಾರೆ. ಈ ಕ್ಷೇತ್ರಕ್ಕೆ ಉಪಚುನಾವಣೆ ಘೋಷಣೆಯಾದರೆ, ಪಕ್ಷದ ತೀರ್ಮಾನದಂತೆ ಕಾಂಗ್ರೆಸ್ ಅಭ್ಯರ್ಥಿಯ ಬಗ್ಗೆ ತೀರ್ಮಾನ ಕೈಗೊಳ್ಳಲಾಗುವುದು. ಗಂಗಾವತಿ ವಿಧಾನಸಭೆಯ ಉಪಚುನಾವಣೆಯಲ್ಲಿ ಕಾಂಗ್ರೆಸ್ ಖಂಡಿತ ಗೆಲ್ಲುತ್ತದೆ ಎಂದರು.

2008–2013ರವರೆಗೆ ವಿರೋಧಪಕ್ಷದ ನಾಯಕನಾಗಿ , ಲೋಕಾಯುಕ್ತ ನ್ಯಾ. ಸಂತೋಷ್ ಹೆಗಡೆ ಅವರ ಅಕ್ರಮ ಗಣಿಗಾರಿಕೆಯ ವರದಿ ಆಧರಿಸಿ, ಬೆಂಗಳೂರಿನಿಂದ ಬಳ್ಳಾರಿವರೆಗೆ ಪಾದಯಾತ್ರೆ ನಡೆಸಲಾಗಿತ್ತು. ಅಂದು ಬಿಜೆಪಿ ಸರ್ಕಾರ ಅದನ್ನು ವಿರೋಧಿಸಿತ್ತು. ಅಂದು ಅಕ್ರಮ ಗಣಿಗಾರಿಕೆ ವಿರುದ್ಧ ನಡೆಸಿದ ಹೋರಾಟಕ್ಕೆ ಇಂದು ಫಲ ದೊರೆತಿದೆ. ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿರುವವರಿಗೆ ಶಿಕ್ಷೆಯಾಗಬೇಕು ಹಾಗೂ ಅಕ್ರಮ ಗಣಿಗಾರಿಕೆ ನಿಲ್ಲಬೇಕು ಎಂದು ತಿಳಿಸಿದರು.

ಸಮಯ ಬಂದಾಗ ಸಿನಿಮಾ ತೋರಿಸ್ತೇವೆ

ಭಯೋತ್ಪಾದನೆಗೆ ನೀಡುತ್ತಿದೆ. ಈ ಮೂಲಕ ಪಾಕಿಸ್ತಾನ ಸರ್ಕಾರ ಭಾರತೀಯರ ವಿರುದ್ಧ ದಾಳಿ ನಡೆಸಲು ಅವಕಾಶ ನೀಡುತ್ತಿದೆ. ಹೀಗಾಗಿ ನೀಡಿರುವ ಸಾಲವನ್ನು ಐಎಂಎಫ್ ಮರುಪರಿಶೀಲಿಸಬೇಕೆಂದು ಕೇಳಿಕೊಂಡರು. ಪಾಕ್ ಹಣವನ್ನು ಭಯೋತ್ಪಾದಕ ಮೂಲಸೌಕರ್ಯಗಳ ಅಭಿವೃದ್ಧಿಗೆ ಬಳಕೆ ಮಾಡುತ್ತಿದೆ. ಮೃತ ಭಯೋತ್ಪಾದಕರ ಕುಟುಂಬಗಳಿಗೆ ಈ ಹಣವನ್ನು ಪಾಕ್ ಪರಿಹಾರವಾಗಿ ನೀಡುತ್ತಿದೆ. ಈಗಾಗಲೇ ಮೋಸ್ಟ್ ವಾಂಟೆಡ್ ಉಗ್ರ ಮಸೂದ್‌ಗೆ ಪಾಕಿಸ್ತಾನ 14 ಕೋಟಿ ರೂ. ಪರಿಹಾರ ನೀಡಿದೆ ಎಂದರು.

ಆಪರೇಷನ್ ಸಿಂಧೂರ್‌ನಲ್ಲಿ ಧ್ವಂಸಗೊಂಡ ಭಯೋತ್ಪಾದಕ ಮೂಲಸೌಕರ್ಯವನ್ನು ಪಾಕಿಸ್ತಾನ ಮತ್ತೆ ನಿರ್ಮಿಸುತ್ತಿದೆ. ಇದಕ್ಕೆ ಅಂತಾರಾಷ್ಟ್ರೀಯ ಹಣಕಾಸು ನಿಧಿ (ಐಎಂಎಫ್) ನೀಡಿರುವ ಆರ್ಥಿಕ ನೆರವನ್ನು ಬಳಸಿಕೊಳ್ಳಲಾಗುತ್ತಿದೆ. ಐಎಂಎಫ್ ತಾನು ಒದಗಿಸುವ ಆರ್ಥಿಕ ನೆರವಿನ ಸೂಕ್ತ ಬಳಕೆಯ ಮೇಲ್ವಿಚಾರಣೆ ನಡೆಸಬೇಕು ಎಂದು ರಕ್ಷಣಾ ಸಚಿವರು ಇದೇ ವೇಳೆ ಒತ್ತಾಯಿಸಿದ್ದಾರೆ. ಪಾಕಿಸ್ತಾನವು ತನ್ನ ನಾಗರಿಕರಿಂದ ಸಂಗ್ರಹಿಸಿದ ತೆರಿಗೆ ಹಣವನ್ನು, ಜೈಶ್ ಸಂಘಟನೆಯ ಮುಖ್ಯಸ್ಥ ಮಸೂದ್ ಅಜರ್‌ಗೆ ನೀಡಿದೆ. ಮಸೂದ್ ಅಜರ್ ವಿಶ್ವಸಂಸ್ಥೆಯಿಂದ ಗುರುತಿಸಲ್ಪಟ್ಟ ಭಯೋತ್ಪಾದಕನಾಗಿದ್ದರೂ, ಪಾಕಿಸ್ತಾನ ಸರ್ಕಾರವು ಲಷ್ಕರ್ ಮತ್ತು ಜೈಶ್ ಸಂಘಟನೆಗಳ ಭಯೋತ್ಪಾದಕ ಮೂಲಸೌಕರ್ಯವನ್ನು ಪುನಃಸ್ಥಾಪಿಸುತ್ತಿರುವುದು ನಿಜಕ್ಕೂ ಅಸಹ್ಯಕರ ಎಂದು ರಾಜನಾಥ್ ಸಿಂಗ್ ತೀವ್ರ ಕಿಡಿಕಾರಿದರು.

ಭಾರತವು ಪಾಕಿಸ್ತಾನಕ್ಕೆ ಐಎಂಎಫ್ ಆರ್ಥಿಕ ನೆರವು ನಿರ್ಧಾರದ ಬಗ್ಗೆ ಕಳವಳ ವ್ಯಕ್ತಪಡಿಸಿದೆ. ಪಾಕಿಸ್ತಾನವು ಈ ಹಣವನ್ನು ತನ್ನ ವಿರುದ್ಧ ಭಯೋತ್ಪಾದಕ ಚಟುವಟಿಕೆಗಳನ್ನು ಪ್ರಾಯೋಜಿಸಲು ಬಳಸಲಿದೆ ಎಂದು ಭಾರತ ಆರೋಪಿಸಿದೆ. ಗುರುವಾರವಷ್ಟೇ ನಾನು ಶ್ರೀನಗರದಲ್ಲಿ ನಮ್ಮ ಧೈರ್ಯಶಾಲಿ ಸೇನಾ ಸಿಬ್ಬಂದಿಯನ್ನು ಭೇಟಿಯಾದೆ. ಇಂದು ನಾನು ವಾಯುಪಡೆಯನ್ನು ಭೇಟಿಯಾಗಿದ್ದೇನೆ. ನೀವು ಭಾರತದ ಗಡಿಗಳಲ್ಲಿ ಯಾವಾಗಲೂ ಕಾರ್ಯಪ್ರವೃತ್ತರಾಗಿರುವುದರಿಂದ ನಾವೆಲ್ಲರೂ ಸುರಕ್ಷಿತವಾಗಿದ್ದೇವೆ ಎನ್ನುವ ಭರವಸೆ ನನಗಿದೆ. ಬ್ರಹ್ಮೋಸ್ ಕ್ಷಿಪಣಿಯ ಶಕ್ತಿಯನ್ನು ಪಾಕಿಸ್ತಾನ ಕೂಡ ಒಪ್ಪಿಕೊಂಡಿದೆ. ಕ್ಷಿಪಣಿಗಳ ಶಬ್ದದಲ್ಲಿ ನಿಮ್ಮೆಲ್ಲರ ಶೌರ್ಯ ಹಾಗೂ ಭಾರತೀಯ ಮೂರು ಪಡೆಗಳ ಶೌರ್ಯ ಪ್ರತಿಧ್ವನಿಸುತ್ತಿತ್ತು ಎಂದು ತಿಳಿಸಿದರು.

ವಿದೇಶಗಳಿಗೆ ಸರ್ವಪಕ್ಷ ನಿಯೋಗ

ಗುರುತಿಸುತ್ತದೆ ಎಂದು ಸರ್ಕಾರದ ಉನ್ನತ ಅಧಿಕಾರಿಗಳು ತಿಳಿಸಿದ್ದಾರೆ. ಎನ್‌ಡಿಎ ಮೈತ್ರಿ ಪಕ್ಷಗಳಾದ ಜೆಡಿಯು, ಟಿಡಿಪಿ ಮತ್ತಿತರರೊಂದಿಗೆ ವಿರೋಧ ಪಕ್ಷದ ಶಶಿ ತರೂರ್ ಅವರನ್ನೊಳಗೊಂಡ ನಿಯೋಗ ಯುಕೆ, ಇಂಗ್ಲೆಂಡ್, ಅಸಾದುದ್ದೀನ್ ಓವೈಸಿ ಅವರನ್ನೊಳಗೊಂಡ ನಿಯೋಗ ಸೌದಿ ಅರೇಬಿಯಾ ಮತ್ತು ಕತಾರ್‌ಗೆ ತೆರಳುವ ಸಾಧ್ಯತೆಯಿದೆ.

ಶಿವಸೇನೆ (ಯುಬಿಟಿ) ಸಂಸದೆ ಪ್ರಿಯಾಂಕಾ ಚತುರ್ವೇದಿ ಸೇರಿದಂತೆ ಮತ್ತಿತರ ಸುಶಿಕ್ಷಿತ ವಿರೋಧ ಪಕ್ಷಗಳ ಸಂಸದರನ್ನು ನಿಯೋಗಕ್ಕೆ ಆಹ್ವಾನಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಆಪರೇಷನ್ ಸಿಂಧೂರ್ ನಂತರ ಭಾರತದ ನಿಲುವನ್ನು ಜಾಗತಿಕ ಮಟ್ಟದಲ್ಲಿ ಪ್ರತಿಬಿಂಬಿಸಲು ಎನ್ ಡಿಎ ಮತ್ತು ವಿಪಕ್ಷ ಸಂಸದರನ್ನೊಳಗೊಂಡ ನಿಯೋಗ ಯುಕೆ, ಯುಎಸ್, ಯುಎಇ, ಕತಾರ್ ಮತ್ತಿತರ ರಾಷ್ಟ್ರಗಳಿಗೆ 10 ದಿನಗಳ ಭೇಟಿ ನೀಡಲಿದೆ ಎಂದು ಮೂಲಗಳು ಹೇಳಿವೆ.

ಈ ಹಿಂದೆ ಪಿ.ವಿ. ನರಸಿಂಹ ರಾವ್ ಅವರು ಪ್ರಧಾನಿಯಾಗಿದ್ದಾಗ ಅಟಲ್ ಬಿಹಾರಿ ವಾಜಪೇಯಿ ಅವರನ್ನು ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಮಂಡಳಿಗೆ ಕಳುಹಿಸಿದ್ದರು. 1994 ರಲ್ಲಿ, ಭಾರತ ಮತ್ತು ಪಾಕಿಸ್ತಾನದ ನಡುವೆ ಉದ್ವಿಗ್ನತೆ ಹೆಚ್ಚಾಗಿತ್ತು. ಜಮ್ಮು ಮತ್ತು ಕಾಶ್ಮೀರದಲ್ಲಿ ಮಾನವ ಹಕ್ಕುಗಳ ಉಲ್ಲಂಘನೆಯಾಗಿದೆ ಎಂದು ಪಾಕಿಸ್ತಾನವು ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಮಂಡಳಿಯಲ್ಲಿ ಒಂದು ನಿರ್ಣಯವನ್ನು ಮಂಡಿಸಲು ಸಿದ್ಧವಾಗಿತ್ತು. ಆಗ ಪ್ರಧಾನಿ ಪಿ.ವಿ. ನರಸಿಂಹರಾವ್ ಅವರು ಒಂದು ಮಹತ್ವದ ನಿರ್ಧಾರ ತೆಗೆದುಕೊಂಡರು. ಅಟಲ್ ಬಿಹಾರಿ ವಾಜಪೇಯಿ ಅವರ ನೇತೃತ್ವದಲ್ಲಿ ಸರ್ವಪಕ್ಷ ನಿಯೋಗವನ್ನು ಅಲ್ಲಿಗೆ ಕಳುಹಿಸಿದರು. ಅದೇ ರೀತಿ ಈಗಿನ ಸರ್ಕಾರವು ಸರ್ವಪಕ್ಷ ನಿಯೋಗವನ್ನು ಕಳುಹಿಸಲು ನಿರ್ಧರಿಸಿದೆ.

ನಿಯೋಗದಿಂದ ಐದು ವಿಷಯಗಳ ಪ್ರಸ್ತಾಪ

- ಆಪರೇಷನ್ ಸಿಂಧೂರ್ ಗೆ ಪಾಕಿಸ್ತಾನದ ಪ್ರಚೋದನೆ ಕಾರಣ ಎಂದು ಮನವರಿಕೆ ಮಾಡುವುದು
- 'ಆಪರೇಷನ್ ಸಿಂಧೂರ್' ಪಾಕಿಸ್ತಾನದ ಷಡ್ಯಂತರಕ್ಕೆ ಒಂದು ಪ್ರಮುಖ ಪ್ರತಿಕ್ರಿಯೆ
- ಮುಂದೆ ಆಪರೇಷನ್ ಸಿಂಧೂರ್ ನಂತಹ ಕ್ರಮಗಳನ್ನು ತೆಗೆದುಕೊಳ್ಳುವ ಎಚ್ಚರಿಕೆ
- ಭಯೋತ್ಪಾದಕರ ಅಡಗುತಾಣಗಳ ಮೇಲೆ ಮಾತ್ರ ಗುರಿ ಇಡಲಾಗಿತ್ತು ನಾಗರಿಕರ ಮೇಲೆ ದಾಳಿ ಮಾಡುವುದು ಭಾರತದ ಉದ್ದೇಶವಲ್ಲವೆಂದು ಸ್ಪಷ್ಟಪಡಿಸುವುದು
- ಭಯೋತ್ಪಾದನೆಯನ್ನು ಬೆಳೆಸುವಲ್ಲಿ ಪಾಕಿಸ್ತಾನದ ಪಾತ್ರ ಮತ್ತು ಅದರ ಜಾಗತಿಕ ಪರಿಣಾಮಗಳ ಬಗ್ಗೆ ಚರ್ಚಿಸುವ ಸಾಧ್ಯತೆ

ಕಬ್ಬು ಬೆಳೆದು 2 ಸಾವಿರ ಕೊಡುತ್ತಿದ್ದೀರಾ...

ಪ್ರಶ್ನಿಸಿದ ಪ್ರತಾಪ್ ಸಿಂಹ, ಇದರ ಕ್ರೆಡಿಟ್ ಮಾತ್ರ ಏಕೆ ತೆರಿಗೆದಾರರಿಗೆ ಕೊಡುವುದಿಲ್ಲ ಎಂದು ಪ್ರಶ್ನಿಸಿದರು. ಗ್ಯಾರಂಟಿ ಯೋಜನೆಯ ಹಣವನ್ನು ನಾನೇ ಕೊಟ್ಟಿರುವುದು ಎಂದು ಕೊಚ್ಚಿಕೊಳ್ಳುತ್ತೀರಾ. ಆದರೆ ಯುದ್ಧದ ಕ್ರೆಡಿಟ್ ಮಾತ್ರ ಯೋಧರಿಗೆ ಮಾತ್ರ ಸಲ್ಲಬೇಕು ಎಂದು ಹೇಳುತ್ತೀರಾ. ಮೋದಿಯಂತಹ ಗಟ್ಟಿ ನಾಯಕತ್ವಕ್ಕೆ ಜನರು ಕ್ರೆಡಿಟ್ ಕೊಟ್ಟಿದ್ದಾರೆ. ಮೋದಿಗೆ ಕ್ರೆಡಿಟ್ ಕೊಟ್ಟರೆ ನಿಮಗೇಕೆ ಹೊಟ್ಟೆಯುರಿ ಎಂದು ಕೇಳಿದರು. ಮುಂಬೈ ದಾಳಿಯ ಸಂದರ್ಭದಲ್ಲಿ ಯುಪಿಎ ಸರ್ಕಾರ ಅಸ್ತಿತ್ವದಲ್ಲಿತ್ತು. ಆ ವೇಳೆ ಏಕೆ ಪಾಕಿಸ್ತಾನದ ಮೇಲೆ ದಾಳಿ ಮಾಡಲಿಲ್ಲ ಎಂದು ಪ್ರಶ್ನೆ ಮಾಡಿದ ಪ್ರತಾಪ್ ಸಿಂಹ, ನರೇಂದ್ರ ಮೋದಿ ಅವರು ಸೈನಿಕರಿಗೆ ಸ್ವಾತಂತ್ರ್ಯ ಹಾಗೂ ಶಕ್ತಿ ಕೊಟ್ಟಿದ್ದಾರೆ. ನೀವು ಸಾಧಿಸಲು ಸಾಧ್ಯವಾಗದ್ದನ್ನು ಅವರು ಮಾಡಿದ್ದಾರೆ ಎಂದು ಎದಿರೇಟು ನೀಡಿದರು.

ಕೊತ್ತೂರಿಗೆ ಚದರಡಿಗೆ ಬೆಲೆ ಗೊತ್ತು!: ಭಾರತ, ಪಾಕಿಸ್ತಾನದ ಮೇಲೆ ಯುದ್ಧ ಮಾಡಿಲ್ಲ, ನಾಲ್ಕು ಫ್ಲೈಟ್ ಹಾರಿಸಿದೆ ಎಂಬ ಶಾಸಕ ಕೊತ್ತೂರು ಮಂಜುನಾಥ್ ಹೇಳಿಕೆಗೆ ಕಿಡಿಕಾರಿದ ಪ್ರತಾಪ್ ಸಿಂಹ, ಕೊತ್ತೂರು ಮಂಜುನಾಥ್‌ಗೆ ರಿಯಲ್ ಎಸ್ಟೇಟ್ ವ್ಯವಹಾರದ ಬಗ್ಗೆ ಮಾತ್ರ ಗೊತ್ತಿದೆ. ಒಂದು ಚದರ ಅಡಿಗೆ ಎಷ್ಟು ಬೆಲೆ ಎಂದು ಕರಾರುವಕ್ಕಾಗಿ ಹೇಳುತ್ತಾರೆ. ಆದರೆ ಯುದ್ಧ ಎಂದರೇನು ಎಂದು ಅವರಿಗೇನು ತಿಳಿದಿದೆ. ಕಾಂಗ್ರೆಸ್ ಹಿರಿಯ ನಾಯಕರಾದ ಶಶಿ ತರೂರ್ ಅವರನ್ನು ಕೇಳಿದರೆ ಅವರಿಗೆ ಸರಿಯಾದ ಉತ್ತರ ನೀಡುತ್ತಾರೆ ಎಂದರು.

ಅಕ್ಷರಸ್ಥರು ರಾಜಕೀಯಕ್ಕೆ ಬರಬೇಕು: ಬ್ರಹ್ಮೋಸ್ ಕ್ಷಿಪಣಿ ತಯಾರಾಗಿದ್ದು ಡಾ.ಮನಮೋಹನ್ ಸಿಂಗ್ ಕಾಲದಲ್ಲಿ ಎಂಬ ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿಕೆಗೂ ಕಿಡಿಕಾರಿದ ಪ್ರತಾಪ್ ಸಿಂಹ, ಇಂತಹವರೆಲ್ಲಾ ಸಚಿವರಾದರೆ ಪರಿಸ್ಥಿತಿ ಹೀಗೆಯೇ ಆಗುತ್ತದೆ. ಅದಕ್ಕೆ ಹೇಳುವುದು ಅಕ್ಷರಸ್ಥರು ರಾಜಕಾರಣಕ್ಕೆ ಬರಬೇಕು ಅಂತ. ಅಕ್ಷರಸ್ಥ ಸಚಿವರಾಗಿದ್ದರೆ ಪ್ರಾಯಶಃ ಇಂತಹ ಹೇಳಿಕೆ ನೀಡುತ್ತಿರಲಿಲ್ಲ ಎಂದು ಹೇಳಿದರು.

ಭಾರತಕ್ಕೆ ಸ್ವಾತಂತ್ರ್ಯ ಸಿಕ್ಕ ಸಂದರ್ಭದಲ್ಲೆ ಬಲೂಚಿಸ್ತಾನ ಇಲ್ಲಿಗೆ ಸೇರಿಬಿಡಬೇಕಿತ್ತು ಆದರೆ ನೆಹರೂ ಅವರಂತಹ ಮೂರ್ಖ ನಾಯಕನಿಂದ ಅನಿವಾರ್ಯವಾಗಿ ಪಾಕಿಸ್ತಾನಕ್ಕೆ ಹೋಗಬೇಕಾಯಿತು. ಈಗ ಭಾರತದಲ್ಲಿ ಮೋದಿ ನಾಯಕತ್ವವಿದ್ದು, ಈಗಲಾದರೂ ಭಾರತದ ಜೊತೆಗೆ ಬರಲಿ ಆ ಮೂಲಕ ಅವರ ಆಸೆ ಕೈಗೂಡಲಿ ಎಂದು ಪ್ರತಾಪ್ ಸಿಂಹ ಹಾರೈಸಿದರು.

ನಕಲಿ ಸ್ವಾಮೀಜಿ, ಆತನ ಪುತ್ರಿ!

ಚಿನ್ನದ ನಾಣ್ಯಗಳಿವೆ. ನೀನು 30 ಲಕ್ಷ ರೂ. ನಗದು, 5 ಖಾಲಿ ಚೆಕ್‌ಲೀಫ್ ಮತ್ತು 500 ರೂ. ಬೆಲೆಯ ಇ–ಸ್ಟ್ಯಾಂಪ್ ಪೇಪರ್ ಕೊಟ್ಟರೆ ಚಿನ್ನದ ನಾಣ್ಯಗಳನ್ನು ಕೊಡುತ್ತೇನೆ ಎಂದು ಆತ ಹೇಳಿದ್ದಾಗಿ ಮಂಜು ತಮ್ಮ ದೂರಿ ನಲ್ಲಿ ತಿಳಿಸಿದ್ದಾರೆ.

ನಾಣ್ಯಕ್ಕೆ ಸಾಲ ಮಾಡಿದೆ: ಚಿನ್ನದ ನಾಣ್ಯದ ಆಸೆಗಾಗಿ ನನ್ನ ಅಕ್ಕ ಶಶಿಕಲಾರಿಂದ 16 ಲಕ್ಷ ಹಾಗೂ ಗೀತಾ ಎಂಬುವರಿಂದ 6 ಲಕ್ಷ, ಜೊತೆಗೆ ಇನ್ನಿತರ ಕಡೆ 10 ಲಕ್ಷ ರೂ. ಹೊಂದಿಸಿ, ಒಟ್ಟು 30 ಲಕ್ಷ ರೂ. ಹಣವನ್ನು ಕಳೆದ ಫೆಬ್ರವರಿ 16ರಂದು ರಾತ್ರಿ 8 ಗಂಟೆಗೆ ನನ್ನ ಭಾವ ಬಿ.ಎನ್. ಮಂಜುನಾಥ ಅವರೊಂದಿಗೆ ತೆಗೆದು ಕೊಂಡು ಅಲ್ಲಿಗೆ ಹೋದೆ. ಹಣ ತಂದಿರು ವುದನ್ನು ಖಚಿತಪಡಿಸಿಕೊಂಡ ಕೃಷ್ಣಪ್ಪ, ನನ್ನ ಬಳಿ ನಾಣ್ಯ ಕರಗಿಸುವ ಮೆಷಿನ್ ಇದೆ. ಅದರಲ್ಲಿ ಕರಗಿಸಿ ಚಿನ್ನದ ಗಟ್ಟಿ ಮಾಡಿಕೊಡುತ್ತೇನೆಂದು ಹೇಳಿ, ಒಂದು ಕೈಚೀಲ ತೋರಿಸಿ, ಇದರಲ್ಲಿ ನಾಣ್ಯ ಮತ್ತು ಒಡವೆಗಳಿವೆ. ಅವುಗಳನ್ನು ನೀನು ತಂದಿ ರುವ 30 ಲಕ್ಷ ರೂ. ಹಣದ ಜೊತೆ ರೂಮಿ ನಲ್ಲಿಟ್ಟು ಬೀಗ ಹಾಕುತ್ತೇನೆ. ಯಾರೂ ಬೀಗ ತೆಗೆಯಬಾರದು ಎಂದು ಹೇಳಿದ ಕೃಷ್ಣಪ್ಪ, ಅಂದು ರಾತ್ರಿ ಆತ ಅದೇ ಮನೆಯಲ್ಲಿ ಮಲಗಿದರೆ, ನಮ್ಮನ್ನು ಮಾತ್ರ ಪಕ್ಕದ ಗೀತಾ ಅವರ ಮನೆಯಲ್ಲಿ ಮಲಗಿಸಿದ್ದರು.

ಮರು ದಿನ ಬೆಳಗ್ಗೆ 4 ಗಂಟೆಗೆ ಎದ್ದು ನೋಡಿದರೆ, ಕೃಷ್ಣಪ್ಪ ಮನೆಯಿಂದ ಹೊರಗೆ ಹೋಗುತ್ತಿದ್ದ. ನಾನು ಆತನ ಹಿಂಬಾಲಿಸಿ ಹೋಗಿ ಕೇಳಿದಾಗ ಆರ್‌ಬಿಐನಿಂದ ಹಣ ಬಂದಿದೆ, ತರಲು ಹೋಗುತ್ತಿದ್ದೇನೆ. ಅಲ್ಲಿಯ ವರೆಗೆ ಹಣ, ನಾಣ್ಯ ಇರುವ ರೂಮಿನ ಕಡೆ ಹೋಗಬೇಡಿ ಎಂದು ಹೇಳಿ ಹೊರಟು ಹೋದ. ನಂತರ ಮಧ್ಯಾಹ್ನವಾದರೂ ಬರದಿದ್ದರಿಂದ ನಾನು ಕೃಷ್ಣಪ್ಪಗೆ ಫೋನ್ ಮಾಡಿದಾಗ, 'ನಾನು ಬರುವುದು 2 ದಿನ ಆಗುತ್ತದೆ' ಎಂದು ಹೇಳಿದ. ಮನೆಯಲ್ಲಿದ್ದ ಪುಷ್ಪಾ ಸಹ ಮನೆ 'ಕೀ' ಅನ್ನು ನನಗೆ ಕೊಟ್ಟು, ನನ್ನನ್ನು ಕೃಷ್ಣಪ್ಪ ಬರುವವರೆಗೆ ಅಲ್ಲಿಯೇ ಇರುವಂತೆ ಹೇಳಿ, ತನಗೆ ಬೆಂಗಳೂರಲ್ಲಿ ಅರ್ಜೆಂಟ್ ಕೆಲಸವಿದೆ ಎಂದು ಹೊರಟು ಹೋದಳು.

ಮೂರ್‍ನಾಲ್ಕು ದಿನವಾದರೂ ಬರದಿದ್ದ ರಿಂದ ನಾನು ಆ ರೂಮಿನ ಬಾಗಿಲು ತೆರೆದಾಗ ಅಲ್ಲಿ ನಾಣ್ಯ ಹೊರತುಪಡಿಸಿ ಹಣ, ಚೆಕ್‌ಲೀಫ್‌ಗಳು ಇರಲಿಲ್ಲ. ನಾಣ್ಯ ಗಳನ್ನು ಪರೀಕ್ಷಿಸಿದಾಗ ಅವು ನಕಲಿ ಎಂಬುದು ತಿಳಿಯಿತು. ತಕ್ಷಣ ಕೃಷ್ಣಪ್ಪ ಮೊಬೈಲ್‌ಗೆ ಫೋನ್ ಮಾಡಿದಾಗ ಯಾರೋ ಹಿಂದಿಯಲ್ಲಿ ಮಾತನಾಡಿ, ಕೃಷ್ಣಪ್ಪ ಕಾರ್ಗಿಲ್ ಬಳಿ ಅಪಘಾತದಲ್ಲಿ ಸಾವನ್ನಪ್ಪಿದ್ದಾರೆ ಎಂದ. ನಂತರ ಪುಷ್ಪಾಗೆ ಕರೆ ಮಾಡಿದಾಗ ಹೌದು, ಈಗಷ್ಟೇ ಯಾರೋ ಫೋನ್ ಮಾಡಿ ಕೃಷ್ಣಪ್ಪ ಸತ್ತ ಸುದ್ದಿ ಹೇಳಿದರು ಎಂದಳು.

ಕೊನೆಗೆ ನಾನು ಬೆಂಗಳೂರಿಗೆ ಹೋಗಿ ಪುಷ್ಪಾಳನ್ನು ಭೇಟಿಯಾದಾಗ ಆಕೆ ಕೃಷ್ಣಪ್ಪ ಬಗ್ಗೆ ತಿಳಿಯಲಿಲ್ಲ ಎಂದಳು. ಸಂಶಯಗೊಂಡ ನಾನು ಅಕ್ಕ–ಪಕ್ಕದ ಮನೆಯವರನ್ನು ವಿಚಾರಿಸಿದಾಗ ಕೃಷ್ಣಪ್ಪ ಮತ್ತು ಪುಷ್ಪಾ ತಂದೆ–ಮಗಳು, ಅವರು ಮಂಡ್ಯ ಜಿಲ್ಲೆ, ನಾಗಮಂಗಲ ತಾಲೂಕು, ಗರುಡಾಪುರದವರು ಎಂಬುದು ತಿಳಿಯಿತು. ನಂತರ ನಾವು ಆ ಗ್ರಾಮಕ್ಕೆ ಹೋಗಿ ವಿಚಾರಿಸಲಾಗಿ ತಂದೆ–ಮಗಳಿಬ್ಬರೂ ಇದೇ ರೀತಿ ಹಲವರಿಗೆ ವಂಚಿಸಿದ್ದಾರೆಂಬುದು ತಿಳಿಯಿತು ಎಂದು ಮಂಜು ಪೊಲೀಸರಿಗೆ ನೀಡಿರುವ ದೂರಿನಲ್ಲಿ ಆರೋಪಿಸಿದ್ದಾರೆ.

ಹೆಸರು ಬದಲಾದರೆ ಸಾಲದು; ಅಧಿಕಾರಿಗಳ ಮನಸ್ಥಿತಿ ಬದಲಾಗಬೇಕು

ಸಿಐಟಿಬಿ ಮಾಜಿ ಅಧ್ಯಕ್ಷ ಡಿ.ಮಾದೇಗೌಡ ಅಭಿಮತ

ಮೈಸೂರು, ಮೇ 16(ಆರ್‌ಕೆ)– ನಾಮ ಬದಲಾದರೆ ಸಾಲದು, ಪ್ರಾಧಿಕಾರದಲ್ಲಿನ ವ್ಯವಸ್ಥೆ ಸರಿಪಡಿಸಲು ಅಧಿಕಾರಿಗಳ ಮನಸ್ಥಿತಿ ಬದಲಾಗಬೇಕು ಎಂದು ನಗರ ಅಭಿವೃದ್ಧಿ ವಿಶ್ವಸ್ಥ ಮಂಡಳಿ (ಸಿಐಟಿಬಿ) ಮಾಜಿ ಅಧ್ಯಕ್ಷರಾದ ಡಿ.ಮಾದೇಗೌಡರು ಅಭಿಪ್ರಾಯಪಟ್ಟಿದ್ದಾರೆ.



ಡಿ.ಮಾದೇಗೌಡ

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ವನ್ನು ಮೈಸೂರು ಅಭಿವೃದ್ಧಿ ಪ್ರಾಧಿಕಾರ (ಎಂಡಿಎ) ಎಂದು ಹೆಸರು ಬದಲಿಸಿರುವ ಸರ್ಕಾರದ ಕ್ರಮಕ್ಕೆ ಪ್ರತಿಕ್ರಿಯೆ ನೀಡಿರುವ ಮನೆ ಮಾದೇಗೌಡರು, ಕೇವಲ ಹೆಸರು ಬದಲಾದ ಮಾತ್ರಕ್ಕೆ ಜನಪರ ಕೆಲಸವಾಗುತ್ತದೆ ಎನ್ನಲಾಗದು. ಪ್ರಾಧಿಕಾರದಲ್ಲಿ ಕೆಲಸ ಮಾಡುವವರ ಮನಸ್ಥಿತಿ ಬದಲಾದರೆ ಮಾತ್ರ ಅಲ್ಲಿ ವ್ಯವಸ್ಥೆ ಸುಧಾರಣೆ ಆಗಲು ಸಾಧ್ಯ ಎಂದರು.

ಆರಂಭದಲ್ಲಿ ಇದ್ದ 'ನಗರ ಅಭಿವೃದ್ಧಿ ವಿಶ್ವಸ್ಥ ಮಂಡಳಿ' ಬಗ್ಗೆ ಜನರಲ್ಲಿ 'ಟ್ರಸ್ಟ್' (ವಿಶ್ವಾಸ) ಇತ್ತು. ಏಕೆಂದರೆ ಅದು ಜನರ ಪರ, ನಗರದ ಅಭಿವೃದ್ಧಿಗಾಗಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿತ್ತು. ಕೆಲಸ ಮಾಡುವ ಜನಪ್ರತಿನಿಧಿಗಳು, ಅಧಿಕಾರಿಗಳು, ಸಿಬ್ಬಂದಿಯೂ ಜನರಿಗೆ ಸ್ಪಂದಿಸುವ ನಿಟ್ಟಿನಲ್ಲಿ ಕಾಯಾ–ವಾಚಾ–ಮನಸ್ಸಾ ಕೆಲಸ ಮಾಡುತ್ತಿದ್ದರು. ಅದಕ್ಕಾಗಿಯೇ ಮಂಡಳಿಗೆ 'ವಿಶ್ವಸ್ಥ' ಎಂಬ ಹೆಸರು ಸೇರಿಕೊಂಡಿತ್ತು ಎಂದು ಅವರು ತಿಳಿಸಿದರು.

ಆ ಮಂಡಳಿ ತದನಂತರ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವಾಗಿ 'ವಿಶ್ವಸ್ಥ' ಮಾಯವಾಯಿತು. ಅಂದರೆ ಪ್ರಾಧಿಕಾರದ ಅಧಿಕಾರಿಗಳ ಮೇಲೆ ನಂಬಿಕೆ, ವಿಶ್ವಾಸವಿಲ್ಲದಂತಾಗಿದೆ. ಆ ಅವಧಿಯಲ್ಲಿ ಅಭಿವೃದ್ಧಿ ಆಯಿತೋ, ಅವಾಂತರವಾಯಿತೋ ಎಂಬುದು ಜಗಜ್ಜಾಗೀರವಾಗಿದೆ. ಎಂದು ಮಾದೇಗೌಡರು ತಿಳಿಸಿದರು. ಎಲ್ಲಾ ನಷ್ಟವಾದ ಮೇಲೆ ಈಗ 'ಮೈಸೂರು ಅಭಿವೃದ್ಧಿ ಪ್ರಾಧಿಕಾರ' ಎಂದು ಹೆಸರು ಬದಲಾಯಿಸಲಾಗಿದೆ. ಆದರೆ, ಅಲ್ಲಿ ಕೆಲಸ ಮಾಡುವ ಅಧಿಕಾರಿಗಳ ಚಿಂತನೆ, ಮನಸ್ಥಿತಿ ಬದಲಾಗದಿದ್ದರೆ ಜನರಿಗೂ ಒಳ್ಳೆಯದಾಗುವುದಿಲ್ಲ, ಸರ್ಕಾರಕ್ಕೂ ಕಳಂಕ ಮುಂದುವರೆಯುತ್ತದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಅತ್ಯಾಚಾರಿಗಳ ಗಲ್ಲಿಗೇರಿಸಿ



ಗಂಧದಗುಡಿ ಫೌಂಡೇಶನ್ ವತಿಯಿಂದ ಮೈಸೂರಿನ ಹಳೆ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಮೇ16(ಜಿಎ)– ಅತ್ಯಾಚಾರಿಗಳಿಗೆ ಯಾವುದೇ ದಯೆ ತೋರದೆ ಗಲ್ಲಿಗೇರಿಸಬೇಕೆಂದು ಒತ್ತಾಯಿಸಿ ಗಂಧದಗುಡಿ ಫೌಂಡೇಶನ್ ವತಿಯಿಂದ ಮೈಸೂರಿನ ಹಳೆ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಲಾಯಿತು.

ರಾಮನಗರ ಜಿಲ್ಲೆಯ ಬಿಡದಿ ತಾಲೂಕಿನ ಭದ್ರಾಪುರ ಗ್ರಾಮದ ಹದಿನಾಲ್ಕು ವರ್ಷದ ಮಾತು ಬಾರದ ಮತ್ತು ಕಿವಿ ಕೇಳಿಸದ ಅಮಾಯಕ ಹೆಣ್ಣುಮಗಳನ್ನು ಸಾಮೂಹಿಕ ಅತ್ಯಾಚಾರ ಮಾಡಿ ಕೊಲೆ ಮಾಡಿರುವ ಅತ್ಯಾಚಾರಿಗಳಿಗೆ ಗಲ್ಲಿಗೇರಿಸಬೇಕೆಂದು ಆಗ್ರಹಿಸಿದರು. ಈ ಘಟನೆ ಇಡೀ ಸಮಾಜಕ್ಕೆ ಅಮಾನವೀಯ ಘಟನೆಯಾಗಿದೆ. ಮೃಗ ಸೂಕ್ಷ್ಮವಾಗಿ ಭೇಟೆಯಾಡುತ್ತದೆ. ಆದರೆ, ಮನುಷ್ಯರು ಈ ರೀತಿ ಮಾಡುತ್ತಿರುವುದರಿಂದ ಮನುಷ್ಯ ಮೃಗದಂತೆ ವರ್ತಿಸುತ್ತಿದ್ದಾನೆ ಇಂದು ಅತ್ಯಾಚಾರಿಗಳ ವಿರುದ್ಧ ಹೋರಾಟಗಳು ನಡೆಯುತ್ತಿವೆ. ಆದರೆ, ರಾಜ್ಯ ಸರ್ಕಾರ ಅತ್ಯಾಚಾರಿಗಳ ವಿರುದ್ಧ ಕಠಿಣ ಶಿಕ್ಷೆ ರೂಪಿಸಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಗಂಧದಗುಡಿ ಫೌಂಡೇಶನ್ ರಾಜ್ಯಾಧ್ಯಕ್ಷ ಆರ್ಯನ್ ಗಂಧದ ಗುಡಿ, ಉಪಾಧ್ಯಕ್ಷ ಮನೋಹರ್ ಗೌಡ, ಪದಾಧಿಕಾರಿಗಳಾದ ಮೋಹನ್ ರಾಜ್, ಪೃಥ್ವಿರಾಜ್, ಸುಧೀಂದ್ರ ಮಿಂಚು, ಮಹದೇವ್ ಶೆಟ್ಟಿ, ಯಶೋದ ಆರ್, ಗೌತಮ್ ಆರ್ ಮಧು ಮಾಲತಿ, ವಿನೋದ್ ವಿಲಿಯಂ, ಶಿವಶಂಕರ್, ಕಿರಣ್ ಶೆಟ್ಟಿ, ಚೇತನ್ ಶೆಟ್ಟಿ ಮತ್ತಿತರರಿದ್ದರು.

ಮೈಸೂರು ಮಿತ್ರ

'ಆಪರೇಷನ್ ಸಿಂಧೂರ್' ಬಳಿಕ ಭಾರತೀಯ ಸೇನೆಗೆ ಬೂಸ್ಟ್

ರಕ್ಷಣಾ ಇಲಾಖೆಗೆ 50,000 ಕೋಟಿ ಹೆಚ್ಚುವರಿ ಬಜೆಟ್

ನವದೆಹಲಿ, ಮೇ.16– 'ಆಪರೇಷನ್ ಸಿಂಧೂರ್' ಸಕ್ಸಸ್ ಹಿನ್ನೆಲೆ ಭಾರತ ರಕ್ಷಣಾ ವಲಯಕ್ಕೆ ಮತ್ತಷ್ಟು ಬೂಸ್ಟ್ ನೀಡಲು ಕೇಂದ್ರ ಸರ್ಕಾರ ಮುಂದಾಗಿದೆ. ದೇಶದ ರಕ್ಷಣಾ ಬಜೆಟ್ 50,000 ಕೋಟಿ ರೂ.ಗೆ ಹೆಚ್ಚಳವಾಗಬಹುದು ಎಂದು ಸರ್ಕಾರದ ಮೂಲಗಳು ತಿಳಿಸಿವೆ.

ಫೆಬ್ರವರಿ 1 ರಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿದ 2025/26 ರ ಬಜೆಟ್‌ನಲ್ಲಿ ಸಶಸ್ತ್ರ ಪಡೆಗಳಿಗೆ ದಾಖಲೆಯ 6.81 ಲಕ್ಷ ಕೋಟಿ ರೂ.ಗಳನ್ನು ಮೀಸಲಿಡಲಾಗಿತ್ತು. ಈ ವರ್ಷದ ಹಂಚಿಕೆಯು 2024/25 ರಲ್ಲಿನ 6.22 ಲಕ್ಷ ಕೋಟಿ ರೂ.ನಿಂದ ಶೇ.9.2 ರಷ್ಟು ಗಮನಾರ್ಹ ಹೆಚ್ಚಳವಾಗಿದೆ.

2014 ರಿಂದ ನರೇಂದ್ರ ಮೋದಿ ಆಡಳಿತದ ಕೇಂದ್ರ ಬಿಂದು ರಕ್ಷಣೆಯಾಗಿದೆ. ಬಿಜೆಪಿ ಸರ್ಕಾರದ ಮೊದಲ ವರ್ಷವಾದ 2014/15 ರಲ್ಲಿ ರಕ್ಷಣಾ ಸಚಿವಾಲಯಕ್ಕೆ 2.29 ಲಕ್ಷ ಕೋಟಿ ರೂ.ಗಳನ್ನು ನೀಡಲಾಗಿತ್ತು. ಪ್ರಸ್ತುತ ಹಂಚಿಕೆಯು ಎಲ್ಲಾ ಸಚಿವಾಲಯಗಳಿಗಿಂತ ಅತ್ಯಧಿಕವಾಗಿದ್ದು, ಒಟ್ಟು ಬಜೆಟ್‌ನ ಶೇ. 13 ರಷ್ಟಿದೆ.

ಏಪ್ರಿಲ್ 22 ರ ಪಹಲ್ಗಾಮ್ ಭಯೋತ್ಪಾದಕ ದಾಳಿ, ಪಾಕ್ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿನ ಭಯೋತ್ಪಾದಕ ಶಿಬಿರಗಳನ್ನು ಗುರಿಯಾಗಿಸಿಕೊಂಡು ಭಾರತ ನಡೆಸಿದ ಮಿಲಿಟರಿ ಕಾರ್ಯಾಚರಣೆ, ಆಪರೇಷನ್ ಸಿಂಧೂರ್, ಪಾಕ್ ಜೊತೆಗಿನ ಉದ್ವಿಗ್ನತೆ ಮೊದಲಾದ ಬೆಳವಣಿಗೆಗಳ ಮಧ್ಯೆ ಭಾರತದ ರಕ್ಷಣಾ ಸನ್ನದ್ಧತೆ ಮತ್ತು ಬಜೆಟ್ ಹಂಚಿಕೆ ಹೆಚ್ಚಾಗಿದೆ.

ಇಸ್ರೇಲ್‌ನ ಪ್ರಸಿದ್ಧ 'ಐರನ್ ಡೋಮ್'ಗೆ ಹೋಲಿಸಬಹುದಾದ ಮುಂದುವರಿದ ವಾಯು ರಕ್ಷಣಾ ವ್ಯವಸ್ಥೆಗಳೊಂದಿಗೆ ಭಾರತೀಯ ಸೇನೆಯ ಪ್ರಬಲ ಸಿನರ್ಜಿ ಯುದ್ಧತಂತ್ರದ ಚಾತುರ್ಯವನ್ನು ಆಪರೇಷನ್ ಸಿಂಧೂರ್ ಹೈಲೈಟ್ ಮಾಡಿದೆ. ಆಕಾಶ್ ಕ್ಷಿಪಣಿ ರಕ್ಷಣಾ ವ್ಯವಸ್ಥೆ ಸೇರಿದಂತೆ ಆ ಜಾಲದಲ್ಲಿನ ಸ್ವದೇಶಿ ಉಪಕರಣಗಳ ಮೇಲೆಯೂ ಕೇಂದ್ರೀಕರಿಸಿದೆ.

ಎರಡು ವರ್ಷದಲ್ಲಿ ಚಾಮರಾಜ ಕ್ಷೇತ್ರಕ್ಕೆ 800 ರಿಂದ 900 ಕೋಟಿ ಅನುದಾನ

● ಶಾಸಕ ಕೆ. ಹರೀಶ್‌ಗೌಡರ ಮಾಹಿತಿ ● ಶೀಘ್ರವೇ ಮೈಸೂರು ಪಾಲಿಕೆ ಚುನಾವಣೆ; ಕನಿಷ್ಠ 15 ವಾರ್ಡ್ ಗೆಲ್ಲುವ ವಿಶ್ವಾಸ



ರಾಜ್ಯ ಕಾಂಗ್ರೆಸ್ ಸರ್ಕಾರ ಹಾಗೂ ಶಾಸಕರಾಗಿ ಎರಡು ವರ್ಷ ಪೂರ್ಣಗೊಂಡ ಹಿನ್ನಲೆಯಲ್ಲಿ ಶಾಸಕ ಕೆ.ಹರೀಶ್‌ಗೌಡ ಅವರನ್ನು ಚಾಮರಾಜ ವಿಧಾನಸಭಾ ಕ್ಷೇತ್ರದ ಮುಖಂಡರು, ಕಾರ್ಯಕರ್ತರು ಅಭಿನಂದಿಸಿದರು.

ಶೇ.100ಕ್ಕೆ 100 ರಷ್ಟು ಪಾಲಿಕೆ ಚುನಾವಣೆ ನಡೆಯಲಿದೆ....!

ಎಂಸಿಡಿಸಿಸಿ ಬ್ಯಾಂಕ್ ಚುನಾವಣೆ ಬಳಿಕ ಶೇ.100ಕ್ಕೆ 100 ರಷ್ಟು ಮೈಸೂರು ನಗರಪಾಲಿಕೆ ಚುನಾವಣೆ ನಡೆಯಲಿದೆ. ಪಾಲಿಕೆ ಚುನಾವಣೆ ಮಾಡಲೇಬೇಕು ಎಂದು ಮುಖ್ಯಮಂತ್ರಿಗಳಿಗೆ ಮನವಿಕೆ ಮಾಡಿಕೊಡಲಾಗಿದ್ದು, ಎಲ್ಲಾ ಸಿದ್ದತೆಗಳು ನಡೆಯುತ್ತಿವೆ. ನಡೆಯುತ್ತಿರುವ ಜಾತಿ ಗಣತಿ ಕೂಡ ಚುನಾವಣೆ ಮೇಲೆ ಪರಿಣಾಮ ಬೀರಲಿದೆ. ಆದ್ದರಿಂದ ನನ್ನ ಗೆಲುವಿಗೆ ಹೋರಾಟ ಮಾಡಿದಂತೆ ಪಾಲಿಕೆ ಚುನಾವಣೆಯಲ್ಲಿ ಸ್ಪರ್ಧಿಸುವವರ ಗೆಲುವಿಗೂ ಹೋರಾಟ ನಡೆಸಬೇಕು.

- **ಕೆ.ಹರೀಶ್‌ಗೌಡ,** ಶಾಸಕ, ಚಾಮರಾಜ ವಿಧಾನಸಭಾ ಕ್ಷೇತ್ರ

ಮೈಸೂರು, ಮೇ 16(ಎಂಕೆ)– ರಾಜ್ಯ ಕಾಂಗ್ರೆಸ್ ಸರ್ಕಾರದ ಎರಡು ವರ್ಷದ ಅವಧಿಯಲ್ಲಿ ಚಾಮರಾಜ ವಿಧಾನಸಭಾ ಕ್ಷೇತ್ರಕ್ಕೆ 800 ರಿಂದ 900 ಕೋಟಿ ರೂ. ಅನುದಾನ ಬಂದಿದೆ ಎಂದು ಶಾಸಕ ಕೆ.ಹರೀಶ್‌ಗೌಡ ತಿಳಿಸಿದರು.

ಜಲದರ್ಶಿನಿ ಅತಿಥಿ ಗೃಹದಲ್ಲಿರುವ ತಮ್ಮ ಕಚೇರಿ ಸಭಾಂಗಣದಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರ ಎರಡು ವರ್ಷ ಪೂರ್ಣಗೊಳಿಸಿರುವುದು ಹಾಗೂ ಶಾಸಕರಾಗಿಯೂ ಎರಡು ವರ್ಷಗಳಾದ ಹಿನ್ನಲೆಯಲ್ಲಿ ಶುಕ್ರವಾರ ಸಂಜೆ ಆಯೋಜಿಸಿದ್ದ ಅಭಿನಂದನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮೈಸೂರು ಜಿಲ್ಲೆಯ ಬೇರೆ ಯಾವ ಕ್ಷೇತ್ರಕ್ಕೂ ದೊರೆಯದಷ್ಟು ಅನುದಾನ ಚಾಮರಾಜ ಕ್ಷೇತ್ರಕ್ಕೆ ದೊರೆತಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಚಾಮರಾಜ ಕ್ಷೇತ್ರವನ್ನು ಮೈಸೂರಿನ ಎಜುಕೇಷನ್ ಮತ್ತು ಆರೋಗ್ಯ ಹಬ್ ಎಂದೇ ಕರೆಯಲಾಗುತ್ತದೆ. ಮಹಾರಾಣಿ ಮಹಿಳಾ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು ಅಭಿವೃದ್ಧಿ, ವಿದ್ಯಾರ್ಥಿ ನಿಲಯ ಸೇರಿದಂತೆ ಶಿಕ್ಷಣಕ್ಕೆ ಸುಮಾರು 360 ಕೋಟಿ ರೂ. ನೀಡಿದರೆ, ಕ್ಯಾನ್ಸರ್ ಆಸ್ಪತ್ರೆ, ನೆಫ್ರೋ–ಯುರಾಲಜಿ ಆಸ್ಪತ್ರೆ ಸೇರಿದಂತೆ ವೈದ್ಯಕೀಯ ಕ್ಷೇತ್ರಕ್ಕೆ ಸುಮಾರು 500 ಕೋಟಿ ರೂ.ಅನುದಾನ ನೀಡಲಾಗಿದೆ. ಹಾಗೆಯೇ ಚಾಮರಾಜ ಕ್ಷೇತ್ರದ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ರಸ್ತೆ, ಚರಂಡಿ, ಒಳಚರಂಡಿ ಅಭಿವೃದ್ಧಿಗಾಗಿ 125 ಕೋಟಿ ರೂ. ಅನುದಾನ ನೀಡಿರುವ ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಕ್ಷೇತ್ರದ ಜನತೆ ಅಭಾರಿಯಾಗಿರಬೇಕು ಎಂದರು.

15 ವಾರ್ಡ್‌ಗಳನ್ನು ಗೆಲ್ಲಲೇಬೇಕು: ಮುಂದಿನ ಮೂರ್‍ನಾಲ್ಕು ತಿಂಗಳಲ್ಲಿ ನಗರ ಪಾಲಿಕೆ ಚುನಾವಣೆ ನಡೆಯುವ ಎಲ್ಲಾ ಸಾಧ್ಯತೆಗಳಿವೆ. ಚಾಮರಾಜ ವಿಧಾನ ಸಭಾ ಕ್ಷೇತ್ರದಲ್ಲಿ 20 ವಾರ್ಡ್‌ಗಳಿದ್ದು, ಕನಿಷ್ಟ 15 ವಾರ್ಡ್‌ಗಳನ್ನು ಗೆಲ್ಲಲೇಬೇಕು. ಹಾಗಾಗಿ ಕ್ಷೇತ್ರಕ್ಕೆ ರಾಜ್ಯ ಕಾಂಗ್ರೆಸ್ ಸರ್ಕಾರ ನೀಡಿರುವ ಕೊಡುಗೆಗಳನ್ನು ಮನೆ ಮನೆಗೆ ತಿಳಿಸುವ ಮೂಲಕ ಚುನಾವಣೆಗೆ ಸಜ್ಜಾಗಿ ಎಂದು ಕರೆ ನೀಡಿದರು.

ಗ್ರೇಟರ್ ಮೈಸೂರ್‌ಗೆ ಬೆಂಬಲ: ಪಾಲಿಕೆ ಸದಸ್ಯರ ಅವಧಿ ಮುಗಿದು ಸುಮಾರು 2 ವರ್ಷವಾಗಿದೆ. ಚುನಾವಣೆ ಜೊತೆ ಜೊತೆಗೆ ಗ್ರೇಟರ್ ಮೈಸೂರು ಚಿಂತನೆಯೂ ಇದ್ದು, ಮೈಸೂರಿನ ಅಭಿವೃದ್ಧಿಗಾಗಿ ಗ್ರೇಟರ್ ಮೈಸೂರ್‌ಗೆ ಎಲ್ಲರೂ ಬೆಂಬಲ ನೀಡಬೇಕು ಎಂದರು.

ಚಾಮರಾಜ ಕ್ಷೇತ್ರದ ಇಂದಿರಾ ಗಾಂಧಿ ಬ್ಲಾಕ್ ಅಧ್ಯಕ್ಷ ರವಿ ಮಂಚೇಗೌಡನ ಕೊಪ್ಪಲು, ದೇವರಾಜ ಬ್ಲಾಕ್ ಅಧ್ಯಕ್ಷ ರಮೇಶ್ ರಾಯಪ್ಪ ಕ್ಷೇತ್ರ ವ್ಯಾಪ್ತಿಯ ಎಲ್ಲಾ ವಾರ್ಡಿನ ಪುರುಷ ಹಾಗೂ ಮಹಿಳಾ ಅಧ್ಯಕ್ಷರು, ಚಾಮರಾಜ ಕ್ಷೇತ್ರದ ಯುವ ಕಾಂಗ್ರೆಸ್ ಅಧ್ಯಕ್ಷ ನಿಶಾಂತ್ ಪಟೇಲ್ ಮತ್ತು ಪದಾಧಿಕಾರಿಗಳು ಉಪಸ್ಥಿತರಿದ್ದರು.

ಆಪರೇಷನ್ ಸಿಂಧೂರ ಯಶಸ್ಸು

ಭಾರತೀಯ ಯೋಧರಿಗೆ ಶುಭ ಹಾರೈಕೆ; ನಿವೃತ್ತ ಯೋಧರಿಗೆ ಅಭಿನಂದನೆ



'ಆಪರೇಷನ್ ಸಿಂಧೂರ' ಕಾರ್ಯಾಚರಣೆ ಅಂಗವಾಗಿ ನಿವೃತ್ತ ಯೋಧರಿಗೆ ಅಭಿನಂದಿಸಲಾಯಿತು.

ಯೋಧರು ಸೇನೆಯಿಂದ ನಿವೃತ್ತರಾದ ಮೇಲೆ ಸ್ವಲ್ಪ ಮಟ್ಟಿಗೆ ಪಿಂಚಣಿ ಬರಬಹುದು. ಆ ಹಣ ಕುಟುಂಬ ನಿರ್ವಹಣೆಗೆ ಸಾಕಾಗುತ್ತದೆ. ಆದರೆ, ಇಂದಿಗೂ ಸೇನೆಯಿಂದ ನಿವೃತ್ತರಾದ ಹಲವು ಯೋಧರಿಗೆ ಒಂದು ಸೂರು ಕಟ್ಟಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಹಾಗಾಗಿ ರಾಜ್ಯ–ಕೇಂದ್ರ ಸರ್ಕಾರ ಹಾಗೂ ಸಂಘ–ಸಂಸ್ಥೆಗಳು ಇಂತಹ ಯೋಧರಿಗೆ ಸೂರು ದಕ್ಕಿಸಿಕೊಡುವ ನಿಟ್ಟಿನಲ್ಲಿ ಗಮನಹರಿಸಬೇಕಿದೆ.

- **ಪಿ.ಕೆ.ಬಿದ್ದಪ್ಪ,** ನಿವೃತ್ತ ಯೋಧರು

ಮೈಸೂರು, ಮೇ 16(ಎಸ್‌ಪಿಎನ್)– ಜೈ ಜವಾನ್, ಜೈ ಕಿಸಾನ್ ಘೋಷಣೆಗೆ ಜೈ ವಿಜ್ಞಾನ್ ಪದ ಜೋಡಿಸಿದಾಗ ಕೆಲವರು ಅಣಕಾಡಿದ್ದರು. 'ಆಪರೇಷನ್ ಸಿಂಧೂರ್' ಕಾರ್ಯಾಚರಣೆಯಲ್ಲಿ 'ಜೈ ವಿಜ್ಞಾನ್' ಘೋಷಣೆಯ ಮಹತ್ವ ಎಲ್ಲರಿಗೂ ಗೋಚರಿಸಿದೆ ಎಂದು ಮಂಗಳೂರು ಆಂತರಿಕ ಭದ್ರತಾ ವಿಭಾಗದ ಪೊಲೀಸ್ ಅಧೀಕ್ಷಕ ಡಾ.ಎ.ಎನ್. ಪ್ರಕಾಶ್‌ಗೌಡ ಅಭಿಪ್ರಾಯಪಟ್ಟರು.

ಮೈಸೂರು ಜಯನಗರದ ಹೊಸ ನ್ಯಾಯಾಲಯ ಸಮುಚ್ಚಯದ ಎದುರಿನ ನೇಗಿಲಯೋಗಿ ಮರುಳೇಶ್ವರ ಭವನದಲ್ಲಿ ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್ ಹಾಗೂ ನೇಗಿಲಯೋಗಿ ಹಿತೈಷಿಗಳ ಸೇವಾ ಬಳಗದ ಸಹಯೋಗದೊಂದಿಗೆ 'ಆಪರೇಷನ್ ಸಿಂಧೂರ್' ಯಶಸ್ವಿಗೆ ಕಾರಣರಾದ ಭಾರತೀಯ ಸೈನ್ಯದ ವೀರಯೋಧರಿಗೆ ಶುಭ ಹಾರೈಕೆ ಹಾಗೂ ನಿವೃತ್ತ ಯೋಧರಿಗೆ ಅಭಿನಂದಿಸುವ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕೊರೆಯುವ ಚಳಿಯಲಿ, ಉರಿಯುವ ಬಿಸಿಲಿನಲ್ಲಿ ದಿನಪೂರ್ತಿ ನಿಂತು ಗಡಿ ಕಾಯುವ ಯೋಧರ ಕಷ್ಟ, ಹಾಗೆಯೇ ಕಷ್ಟ–ನಷ್ಟಗಳನ್ನು ಯೋಚಿಸದೇ ದೇಶಕ್ಕೆ ಅನ್ನ ನೀಡುವ ರೈತರ ಕಷ್ಟಗಳು ಎಂದಿಗೂ ಮುಗಿಯುವುದಿಲ್ಲ. ಅವರ ಕಷ್ಟಗಳ ಪಟ್ಟಿಗಳನ್ನು ಕೇಳಿದರೆ, ನಾವೇ ಧನ್ಯರು ಎನ್ನುವ ಭಾವನೆ ನಿಮ್ಮಲ್ಲಿ ಮೂಡುತ್ತದೆ. ಸರ್ಕಾರ ಯಾವುದೇ ಸವಲತ್ತು ನೀಡದಿದ್ದರೂ ಗಡಿ ಕಾಯಬೇಕು, ನಮ್ಮ ದೇಶವನ್ನು ಉಳಿಸಿಕೊಳ್ಳ ಬೇಕು ಎಂಬ ಆಲೋಚನೆ ಪ್ರತಿಯೊಬ್ಬ ಯೋಧನ ರಕ್ತದ ಕಣಕಣದಲ್ಲಿ ಮಿಡಿಯುತ್ತಿ ರುತ್ತದೆ. ಅದೇ ರೀತಿ ಮಳೆ ಬಂದಾಗ ಕಷ್ಟಗಳನ್ನು ಬದಿಗಿಟ್ಟು ಕೃಷಿ ಚಟುವಟಿಕೆಯಲ್ಲಿ ತೊಡಗಿ ದೇಶಕ್ಕೆ ಅನ್ನ ನೀಡಬೇಕು ಎನ್ನುವ ಮನೋಭಾವ ರೈತರಲ್ಲಿ ಮೂಡುತ್ತದೆ. ಈ ಆಲೋಚನೆ ಎಲ್ಲರಲ್ಲೂ ಮೂಡುವುದಿಲ್ಲ ಎಂದರು.

ಇಂಡೋ–ಪಾಕಿಸ್ತಾನ ನಡುವೆ ಹಲವು ಬಾರಿ ಯುದ್ಧಗಳಾಗಿವೆ ಆದರೆ, 'ಆಪರೇಷನ್ ಸಿಂಧೂರ್' ಕಾರ್ಯಾಚರಣೆಯಲ್ಲಿ ಯೋಧರ ಜ್ಞಾನ, ತಂತ್ರಜ್ಞರ ವಿಜ್ಞಾನ–ತಂತ್ರಜ್ಞಾನಗಳ ಮಿಳಿತ ಈ ಕಾರ್ಯಾ ಚರಣೆಯ ಯಶಸ್ಸಿಗೆ ಕಾರಣವಾಗಿದೆ. ಯೋಧರ ಶ್ರಮದ ಜೊತೆಗೆ ತಂತ್ರಜ್ಞಾನ ಕೈಜೋಡಿಸಿದ ಹಿನ್ನಲೆಯಲ್ಲಿ ಶತ್ರು ದೇಶಗಳು ಎಷ್ಟೇ ಕುತಂತ್ರ ಮಾಡಿದರೂ ನಮ್ಮ ಜನರ ಪ್ರಾಣವೂ ಉಳಿಯಿತು. ನಮ್ಮ ರಕ್ಷಣೆಗೆ ನಿಂತ ಯೋಧರ ಪ್ರಾಣಕ್ಕೂ ಅಷ್ಟೊಂದು ಹಾನಿಯಾಗಿಲ್ಲ. ಇದು ಜೈ ವಿಜ್ಞಾನ್ ಘೋಷಣೆಯ ಮಹತ್ವ ಎಂದು ವಿವರಿಸಿದರು.

ಅಭಿನಂದಿತರ ಪರವಾಗಿ ನಿವೃತ್ತ ಸೇನಾಧಿಕಾರಿ ಶ್ರೀಧರ್ ಮಾತನಾಡಿ, ಇಂಡೋ–ಪಾಕ್ ನಡುವೆ ಐದು ಬಾರಿ ಯುದ್ಧ ಜರುಗಿದೆ. ಒಮ್ಮೆ ಇಂಡೋ–ಚೀನಾ ನಡುವೆ ಯುದ್ಧ ಸಂಭವಿಸಿವೆ. ಆದರೆ, 2014 ರವರೆಗೂ ಭಾರತೀಯ ಸೇನೆ ಕಾರ್ಯಕ್ಷಮತೆ ಯಾರಿಗೂ ಕಾಣುತ್ತಿರಲಿಲ್ಲ. 2014ರ ನಂತರ ಪ್ರಧಾನಮಂತ್ರಿ ನರೇಂದ್ರ ಮೋದಿ ಸರ್ಕಾರದ ಬಂದ ಮೇಲೆ ಭಾರತೀಯ ಸೈನ್ಯದ ಆತ್ಮವಿಶ್ವಾಸವೇ ಬದಲಾಯಿತು. ಸೈನ್ಯದ ಕಾರ್ಯಕ್ಷಮತೆ 'ಆಪರೇಷನ್ ಸಿಂಧೂರ್' ಕಾರ್ಯಾಚರಣೆಯಲ್ಲಿ ಜಗತ್ತಿನಾದ್ಯಂತ ಪ್ರತಿಫಲಿಸಿದೆ ಎಂದರು.

ಸನ್ಮಾನ: ನಿವೃತ್ತ ಯೋಧರಾದ ಪಿ.ಕೆ.ಬಿದ್ದಪ್ಪ, ಹೆಚ್.ಪಿ.ಲಿಂಗರಾಜು, ನರಸೇಗೌಡ, ಟಿ.ಎ.ಅಯ್ಯಪ್ಪ, ಎಸ್.ಎಂ. ಕಾಳಪ್ಪ, ಎನ್.ಎ.ಹರೀಶ್, ಚಂದ್ರು, ಎ.ಎಂ. ರಮೇಶ್, ಕೆ.ಎಸ್.ಸುರೇಶ್, ಶ್ರೀಧರ್, ಬಿ.ಎನ್.ಚಂದ್ರಶೇಖರ್, ರಾಣಿ ಕಾವೇರಿಯಮ್ಮ, ಮೀರಾಬಾಯಿ, ರೇಖಾ ಕಾರ್ಯಪ್ಪ ಸೇರಿದಂತೆ ಇತರರನ್ನು ಅಭಿನಂದಿಸಲಾಯಿತು. ಈ ವೇಳೆ ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್‌ನ ರವಿಕುಮಾರ್, ಭಾನುಪ್ರಶಾಂತ್ ಹಾಗೂ ಇತರ ಪದಾಧಿಕಾರಿಗಳು ಉಪಸ್ಥಿತರಿದ್ದರು.

ರೂಪಾಯಿಗೊಂದು ಹೋಳಿಗೆ; 'ಹೋಳಿಗೆ ಮನೆ' ವಿಶೇಷ!



ಮೈಸೂರಿನ ಚಾಮುಂಡಿಪುರಂ ವೃತ್ತದಲ್ಲಿ ಆರಂಭಗೊಂಡ ನೂತನ 'ಹೋಳಿಗೆ ಮನೆ'

ಮೈಸೂರು, ಮೇ 16– ಮೈಸೂರಿನ ಚಾಮುಂಡಿಪುರಂ ವೃತ್ತದಲ್ಲಿ ನೂತನ 'ಹೋಳಿಗೆ ಮನೆ' ಮಳಿಗೆ ಪ್ರಾರಂಭೋತ್ಸವ ಪ್ರಯುಕ್ತ ಒಂದು ಹೋಳಿಗೆಗೆ ಒಂದು ರೂಪಾಯಿಯಂತೆ ವಿಶೇಷ ರಿಯಾಯ್ತಿಯಲ್ಲಿ ಮಾರಾಟ ಮಾಡಲಾಯಿತು.

ಒಂದು ರೂ.ಗೆ ಹೋಳಿಗೆ ನೀಡುವ ಬಗ್ಗೆ ಜಾಹಿರಾತು ಮೂಲಕ ತಿಳಿದಿದ್ದ ಸಾರ್ವಜನಿಕರು, ಸರದಿಯಲ್ಲಿ ನಿಂತು ಹೋಳಿಗೆ ರುಚಿ ಸವಿದರು. ಮಳಿಗೆ ಉದ್ಘಾಟನೆ ಸಮಾರಂಭದ ಸಂಭ್ರಮ ಹೆಚ್ಚಿಸಿದ ಗ್ರಾಹಕರಿಗೆ ಬಿಸಿ ಬಿಸಿ ಹೋಳಿಗೆಯನ್ನು ನೀಡಲಾಯಿತು. ಒಬ್ಬರಿಗೆ ಒಂದು ಹೋಳಿಗೆ ಖರೀದಿಗೆ ಮಾತ್ರ ಅವಕಾಶ ನೀಡಿದ್ದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಜನರು ಸೇರಿದ್ದರು.

ಚಾಮುಂಡಿಪುರಂನಲ್ಲಿ ಈಗಾಗಲೇ 'ಹೋಳಿಗೆ ಮನೆ' ನಡೆಸಿ ಮನೆ ಮಾತಾಗಿರುವ ಮಾಲೀಕ ಮಾರ್ಬಳ್ಳಿಹುಂಡಿ ಪ್ರವೀಣ್, ಇದೀಗ ಮುಖ್ಯರಸ್ತೆಯಲ್ಲಿ ನೂತನ ಮಳಿಗೆ ಆರಂಭಿಸಿ ಮೈಸೂರು ನಗರದ ಜನತೆಗೆ ಉತ್ಕೃಷ್ಟ ಹಾಗೂ ಸ್ವಾದಿಷ್ಟ ಸಿಹಿ ಕಲ್ಪಿಸಿದ್ದಾರೆ.

ಶಾಸಕ ಟಿ.ಎಸ್.ಶ್ರೀವತ್ಸ, ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಕಿರುತೆರೆಯ 'ಮಜಾ ಟಾಕೀಸ್' ಕಾರ್ಯಕ್ರಮದ ಹಾಸ್ಯ ಕಲಾವಿದ ವಿಶ್ವ ಪಾಲಿಕೆ ಮಾಜಿ ಸದಸ್ಯ ಮ.ವಿ.ರಾಮಪ್ರಸಾದ್, ವೈದ್ಯ ಡಾ.ಪಿ. ಮಾಲೇಗೌಡ, ಹಿರಿಯ ವಕೀಲ ಆರ್.ಕೆ. ರಾಮಕೃಷ್ಣ, ಮಾಕನಹುಂಡಿ ರಾಮಣ್ಣ ಸೇರಿದಂತೆ ಹಲವು ಗಣ್ಯರು 'ಹೋಳಿಗೆ ಮನೆ'ಗೆ ಭೇಟಿ ನೀಡಿ, ಶುಭ ಹಾರೈಸಿದರು.

ರಕ್ತದಾನ



ರಾಜ್ಯದ ಉಪ ಮುಖ್ಯಮಂತ್ರಿಗಳೂ ಆಗಿರುವ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರ ಹುಟ್ಟುಹಬ್ಬದ ಅಂಗವಾಗಿ, ಅಹಿಂದ ಜಾಗೃತ ವೇದಿಕೆ ಹಾಗೂ ವಿಶ್ವಕರ್ಮ ಜಾಗೃತಿ ವೇದಿಕೆ ಅಧ್ಯಕ್ಷರಾದ ಕಾಂಗ್ರೆಸ್ ಮುಖಂಡ ಕೆಂಡಗಣ್ಣ ವಿಶ್ವಕರ್ಮ ರಕ್ತದಾನದ ಮೂಲಕ ತಮ್ಮ ನೆಚ್ಚಿನ ನಾಯಕನಿಗೆ ಶುಭ ಕೋರಿದರು.

ಜೂಜಾಟ; ಏಳು ಮಂದಿ ವಶ

ಮೈಸೂರು, ಮೇ 16– ಜೂಜಾಡುತ್ತಿದ್ದ ಏಳು ಮಂದಿಯನ್ನು ಇಲವಾಲ ಠಾಣೆ ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಇಲವಾಲ ಸಮೀಪದ ದೊಡ್ಡ ಮಾರಗೌಡನಹಳ್ಳಿ ಬಳಿ, ನವೋದಯ ಶಾಲೆ ರಸ್ತೆ ಪಕ್ಕದಲ್ಲಿ ಜೂಜಾಡುತ್ತಿರುವ ಬಗ್ಗೆ ಮಾಹಿತಿ ತಿಳಿದ ಸಬ್‌ಇನ್ಸ್‌ಪೆಕ್ಟರ್ ಬಿ.ಕೆ.ಮಹೇಶ್ ಕುಮಾರ್ ಹಾಗೂ ಸಿಬ್ಬಂದಿ ಕಾರ್ಯಾಚರಣೆ ನಡೆಸಿದ್ದಾರೆ. ಜೂಜಾಡುತ್ತಿದ್ದ ಮೈಸೂರು ತಾಲೂಕಿನ ವಿವಿಧೆಡೆಯ ಏಳು ಮಂದಿಯನ್ನು ವಶಕ್ಕೆ ಪಡೆದು, 6430 ರೂ.ಗಳನ್ನು ಜಪ್ತಿ ಮಾಡಿದ್ದಾರೆ. ಈ ಸಂಬಂಧ ಇಲವಾಲ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ರಾಜ್ಯ ಮೀಸಲು ಪೊಲೀಸ್ ಪಡೆಗಳಲ್ಲಿ ಮಹಿಳಾ ಪೊಲೀಸ್ ಕಂಪೆನಿ ರಚನೆಗೆ ಸರ್ಕಾರ ಆದೇಶ

ಮೈಸೂರು, ಮೇ 16(ಎಸ್‌ಪಿಎನ್)– ವಿವಿಧ ಮಾದರಿಯ ಗಲಭೆ, ಚಳವಳಿಗಳನ್ನು ನಿಯಂತ್ರಿಸಲು ರಾಜ್ಯ ಮೀಸಲು ಪೊಲೀಸ್ ಪಡೆಗಳಲ್ಲಿ 'ಮಹಿಳಾ ಪೊಲೀಸ್ ಕಂಪನಿ'ಗಳನ್ನು ಸೃಜಿಸಲು ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಪ್ರಸ್ತುತ ದಿನಗಳಲ್ಲಿ ನಡೆಯುತ್ತಿರುವ ವಿವಿಧ ಹೋರಾಟಗಳಲ್ಲಿ ಮಹಿಳೆಯರು ಮುಂಚೂಣಿಯಲ್ಲಿರುತ್ತಿದ್ದಾರೆ. ಇಂತಹ ಸಂದರ್ಭಗಳನ್ನು ನಿಭಾಯಿಸಲು ಮಹಿಳಾ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯ ಅವಶ್ಯಕತೆ ಇದೆ ಎಂದು ರಾಜ್ಯ ಡಿಜಿ ಮತ್ತು ಐಜಿಪಿ ಅವರು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸು ಮಾಡಿದ್ದರು. ಈ ಹಿನ್ನಲೆಯಲ್ಲಿ ರಾಜ್ಯ ಸರ್ಕಾರದ ಒಳಾಡಳಿತ ಇಲಾಖೆ(ಪೊಲೀಸ್ ವೆಚ್ಚ) ಅಧೀನ ಕಾರ್ಯದರ್ಶಿ ಕೆ.ಎನ್.ವನಜ ಆದೇಶ ಹೊರಡಿಸಿದ್ದಾರೆ.

ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಘಟಕಗಳು ಒಂದು ಪ್ರಹಾರ ದಳವಾಗಿದ್ದು, ಚಳವಳಿ, ಧರಣಿ ಇನ್ನಿತರೆ ಹೋರಾಟಗಳಲ್ಲಿ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿಭಾಯಿಸಲು, ಮಹಿಳಾ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯ ಅವಶ್ಯಕತೆ ಇರುವುದರಿಂದ ಪ್ರತಿ ಪಡೆಗಳಲ್ಲಿ ಹುದ್ದೆಯಲ್ಲಿ ಓರ್ವ ಮಹಿಳಾ ಸ್ಪೆಷಲ್ ರಿಸರ್ವ್ ಪೊಲೀಸ್ ಇನ್ಸ್‌ಪೆಕ್ಟರ್, ನಾಲ್ವರು ಮಹಿಳಾ ಸ್ಪೆಷಲ್ ರಿಸರ್ವ್ ಸಬ್–ಇನ್ಸ್‌ಪೆಕ್ಟರ್‌ಗಳು, 12 ಮಹಿಳಾ ಸ್ಪೆಷಲ್ ರಿಸರ್ವ್ ಸಹಾಯಕ ಸಬ್–ಇನ್ಸ್‌ಪೆಕ್ಟರ್‌ಗಳು, 36 ಮಹಿಳಾ ಸ್ಪೆಷಲ್ ರಿಸರ್ವ್ ಹೆಡ್ ಕಾನ್ಸ್‌ಟೇಬಲ್‌ಗಳು, 76 ಮಹಿಳಾ ಸ್ಪೆಷಲ್ ರಿಸರ್ವ್ ಪೊಲೀಸ್ ಕಾನ್ಸ್‌ಟೇಬಲ್‌ಗಳು, 12 ಅನುಯಾಯಿ ಸೇರಿದಂತೆ ಒಟ್ಟು 141 ಹುದ್ದೆಗಳನ್ನು ಸೃಜಿಸಲು ಆದೇಶ ಹೊರಡಿಸಲಾಗಿದೆ.

'ಆಪರೇಷನ್ ಸಿಂಧೂರ' ಬಗ್ಗೆ ಕಾಂಗ್ರೆಸ್ ನಾಯಕರ ಅನುಮಾನ

ಕಾಂಗ್ರೆಸ್‌ನವರು ಪಾಕ್ ವಕ್ತಾರರೇ: ಕುಮಾರಸ್ವಾಮಿ ಪ್ರಶ್ನೆ



ನವದೆಹಲಿ, ಮೇ 16– ಭಾರತೀಯ ಸೈನಿಕರ 'ಆಪರೇಷನ್ ಸಿಂಧೂರ್' ಬಗ್ಗೆ ಕೋಲಾರದ ಶಾಸಕ ಕೊತ್ತೂರು ಮಂಜುನಾಥ್ ನೀಡಿರುವ ಹೇಳಿಕೆ ಕಾಂಗ್ರೆಸ್ ಪಕ್ಷದ ಅಂತರಾತ್ಮದ ದನಿ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಆಪರೇಷನ್ ಸಿಂಧೂರ್ ಕಾರ್ಯಾಚರಣೆ ನಂತರ ಸೀನಿಯರ್ ಖರ್ಗೆ, ಜೂನಿಯರ್ ಖರ್ಗೆ, ರಾಹುಲ್ ಗಾಂಧಿ ಸೇರಿ ಕರ್ನಾಟಕದ ಸೋ ಕಾಲ್ಡ್ ಕಾಂಗ್ರೆಸ್ ನಾಯಕರು ಕೂಡ ಇದೇ ರೀತಿಯಲ್ಲಿ ಹೇಳಿಕೆ ನೀಡಿದ್ದರು ಎಂದು ಪತ್ರಿಕಾ ಹೇಳಿಕೆಯಲ್ಲಿ ಕಿಡಿಕಾರಿದ್ದಾರೆ.

ಪಹಲ್ಗಾಮ್‌ನಲ್ಲಿ ಭಾರತೀಯ ಪ್ರವಾಸಿಗರ ಮೇಲೆ ಪೈಶಾಚಿಕ ಭಯೋತ್ಪಾದಕ ದಾಳಿ ಮತ್ತು ಉಗ್ರರಿಗೆ ಚಿತಾವಣೆಯಷ್ಟೇ ಅಲ್ಲದೇ ತನು–ಮನ–ಧನ ಅರ್ಪಣೆ ಮಾಡುತ್ತಿರುವ ಪಾಕಿಸ್ತಾನವನ್ನು ಖಂಡಿಸುವ ಬದಲಿಗೆ ಕಾಂಗ್ರೆಸ್ ಪಕ್ಷವು ನಮ್ಮ ಸೇನಾಪಡೆಗಳು ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರನ್ನು ನಿಂದಿಸುತ್ತಿರುವುದು ನಾಚಿಕೆಗೇಡು ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಾಂಗ್ರೆಸ್, ಭಾರತದ ರಾಜಕೀಯ ಪಕ್ಷವೊ ಅಥವಾ ಶತ್ರು ದೇಶದ ವಕ್ತಾರಿಕೆ ಮಾಡುವ ಪಕ್ಷವೋ, ಅದರ ಡಿಎನ್‌ಎ ಭಾರತದ್ದೋ ಅಥವಾ ಪಾಕಿಸ್ತಾನದ್ದೋ ಎಂಬುದನ್ನು ಅದುವೇ ಸ್ಪಷ್ಟಪಡಿಸಬೇಕು. ಪಾಕಿಸ್ತಾನ ಸೃಷ್ಟಿಯಾಗಿದ್ದು ಹೇಗೆ ಅದರಲ್ಲಿ ಕಾಂಗ್ರೆಸ್ ಪಾತ್ರವೇನು ಎಂಬ ಬಗ್ಗೆ ಚರ್ಚಿಸುವ ಅಗತ್ಯವಿಲ್ಲ. ಆದರೆ, ದೇಶ ವಿಭಜನೆಯಾಗಿ ಏಳೂವರೆ ದಶಕ ಮೀರಿದರೂ ಆ ಪಕ್ಷ ಇನ್ನೂ ಪಾಕಿಸ್ತಾನ್ ಮನಃಸ್ಥಿತಿಯಲ್ಲೇ ಇದೆ. ಅಸ್ತಿತ್ವ ಭಾರತದಲ್ಲಿ, ಅದರ ಹೃದಯ ಮಾತ್ರ ಪಾಕಿಸ್ತಾನದಲ್ಲಿ. ಶತ್ರು ದೇಶದ ಕ್ಷೇಮಕ್ಕಾಗಿ ಕಾಂಗ್ರೆಸ್ ಮಿಡಿಯುತ್ತಿದೆ ಎಂದು ಕಟುವಾಗಿ ಟೀಕಿಸಿದ್ದಾರೆ.

ಆಚಾರವಿಲ್ಲದ ನಾಲಿಗೆ: ಕೋಲಾರದ ಶಾಸಕ ಕೊತ್ತೂರು ಮಂಜುನಾಥ್ ಹೇಳಿಕೆ ಕಾಂಗ್ರೆಸ್ ಪಕ್ಷದ ಅಂತರಾತ್ಮದ ದನಿ. ಅವರದ್ದು ಆಚಾರವಿಲ್ಲದ ನಾಲಿಗೆ. ಆಪರೇಷನ್ ಸಿಂದೂರ್ ಬೂಟಾಟಿಕೆಯಂತೆ. ಇಡೀ ರಾಷ್ಟ್ರಕ್ಕೆ ಹೆಮ್ಮೆಯಾಗಿರುವ ಈ ಯಶಸ್ವಿ ಕಾರ್ಯಾಚರಣೆ ವಿರಾಟ್ ಸ್ವರೂಪವನ್ನು ಖುದ್ದು ನೋಡಬೇಕೆ ಮಂಜುನಾಥ್. ಹಾಗಿದ್ದರೆ ಬನ್ನಿ, ನಿಮ್ಮನ್ನು ಪಾಕಿಸ್ತಾನಕ್ಕೆ ಕಳಿಸಿ ಕೊಡುತ್ತೇವೆ. ಭಾರತೀಯ ಸೇನೆಯ ಪರಾಕ್ರಮವನ್ನು ಖುದ್ದು ನೋಡಿಕೊಂಡು ಬರುವಿರಂತೆ. ಹೋಗುವಿರಾ ಪಾಕಿಸ್ತಾನಕ್ಕೆ ಎಂದು ಸವಾಲು ಹಾಕಿದ್ದಾರೆ.

ಚುನಾವಣೆ ಆಯೋಗಕ್ಕೆ ನಕಲಿ ಜಾತಿ ಪ್ರಮಾಣ ಪತ್ರ ಕೊಟ್ಟು, ಜನತೆಗೆ ಟೋಪಿ ಹಾಕಿ ಚುನಾವಣೆ ಗೆದ್ದಿದ್ದ ಈ ಕಿಡಿಗೇಡಿ ಕಾಂಗ್ರೆಸ್ ಶಾಸಕ, ತನ್ನೊಳಗಿದ್ದ ವಿಷವನ್ನೇ ಕಕ್ಕಿಕೊಂಡಿದ್ದಾರೆ. ಅಂಥ ವಿಷಕಾರಿ ಡಿಎನ್‌ಎ ಉಳ್ಳ ಕಾಂಗ್ರೆಸ್ ಪಕ್ಷಕ್ಕೆ ರಾಷ್ಟ್ರಪ್ರೇಮವಿರಲು ಸಾಧ್ಯವೇ. ಆಪರೇಷನ್ ಸಿಂಧೂರ್ ನಂತರ ಸೀನಿಯರ್ ಖರ್ಗೆ, ಜೂನಿಯರ್ ಖರ್ಗೆ, ರಾಹುಲ್ ಗಾಂಧಿ ಸೇರಿ ಕರ್ನಾಟಕದ ಸೋ ಕಾಲ್ಡ್ ಕಾಂಗ್ರೆಸ್ ನಾಯಕರ ಆಣಿಮುತ್ತುಗಳನ್ನು ಗಮನಿಸಿದರೆ ಅವರ ಪ್ರೇಮ ಯಾವ ರಾಷ್ಟ್ರದ ಮೇಲೆ ಎಂದು ತಿಳಿಯುತ್ತದೆ ಎಂದು ಕಾಂಗ್ರೆಸ್ ಪಕ್ಷಕ್ಕೆ ಸಚಿವರು ತಿರುಗೇಟು ನೀಡಿದ್ದಾರೆ.

ಹಾಗೆಯೇ, ಪ್ರಧಾನಿ ನರೇಂದ್ರ ಮೋದಿ ಅವರು, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹಾಗೂ ವಿದೇಶಾಂಗ ಮಂತ್ರಿ ಎಸ್.ಜೈಶಂಕರ್ ಅವರ ಹೇಳಿಕೆಗಳನ್ನೂ ದೇಶ ಗಮನಿಸಿದೆ. ರಾಷ್ಟ್ರದ ಬಗ್ಗೆ ಅವರಿಗಿರುವ ಬದ್ಧತೆ, ಆಚಲತೆಯನ್ನು ನೋಡಿದೆ, ಕೊಂಡಾಡಿದೆ. ರಾಷ್ಟ್ರ ದ್ರೋಹ ಮತ್ತು ರಾಷ್ಟ್ರಪ್ರೇಮಕ್ಕೆ ಇರುವ ವ್ಯತ್ಯಾಸವಿದು. ರಾಷ್ಟ್ರ ನಿಂದನೆ, ಸೇನೆಯ ನಿಂದನೆ ಕಾಂಗ್ರೆಸ್ ಪಕ್ಷಕ್ಕೆ ಹೊಸದಲ್ಲ. ಅದು ಕಾಂಗ್ರೆಸ್ ಪಕ್ಷಕ್ಕೆ ಜನ್ಮತಃ ಅಂಟಿರುವ ಜಾಡ್ಯ. ಪಾಕಿಸ್ತಾನ್ ನ್ಯಾಶನಲ್ ಕಾಂಗ್ರೆಸ್ ಪಾರ್ಟಿಯಾಗಿ ರೂಪಾಂತರಗೊಂಡಿರುವ ಆ ಪಕ್ಷದ ಅಸಲಿ ಅಜೆಂಡಾ ಏನು? ಅದು ಏನೆಲ್ಲಾ ಮಾಡುತ್ತಿದೆ ಎನ್ನುವುದು ನನ್ನ ಮೂಲಭೂತ ಪ್ರಶ್ನೆ ಎಂದಿದ್ದಾರೆ.

ದೇಶ - ವಿದೇಶ

ಮಧ್ಯರಾತ್ರಿಯಿಂದ ಗಾಜಾದಲ್ಲಿ ಇಸ್ರೇಲ್ ವೈಮಾನಿಕ ದಾಳಿ; 64 ಮಂದಿ ಸಾವು



ಗಾಜಾ: ನಿನ್ನೆ ಮಧ್ಯರಾತ್ರಿಯಿಂದ ಪ್ಯಾಲೆಸ್ತೀನ್ ಪ್ರದೇಶ ಗಾಜಾದ ಮೇಲೆ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ 64 ಜನರು ಸಾವನ್ನಪ್ಪಿದ್ದಾರೆ. ಉತ್ತರ ಗಾಜಾ ಪಟ್ಟಿಯಲ್ಲಿರುವ ನಾಗರಿಕರ ಮನೆಗಳನ್ನು ಮಧ್ಯರಾತ್ರಿ ಮತ್ತು ಬೆಳಗಿನ ಜಾವದ ನಡುವೆ ಗುರಿಯಾಗಿಸಿ ಇಸ್ರೇಲಿ ನಡೆಸಿದ ಶೆಲ್ ದಾಳಿಯಲ್ಲಿ ಸಾವನ್ನಪ್ಪಿದ ಸಂಖ್ಯೆ 64 ಕ್ಕೆ ಏರಿದೆ. ನಮ್ಮ ತಂಡಗಳು ಇನ್ನೂ ಆ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದು ಗಾಜಾದ ನಾಗರಿಕ ರಕ್ಷಣಾ ಅಧಿಕಾರಿ ಮೊಹಮ್ಮದ್ ಅಲ್–ಮುಘಾಯ್ಯಿರ್ ತಿಳಿಸಿದ್ದಾರೆ.

ಕನಿಷ್ಠ 48 ಶವಗಳನ್ನು ಇಂಡೋನೇಷಿಯನ್ ಆಸ್ಪತ್ರೆಗೆ ತರಲಾಗಿದೆ ಮತ್ತು ಇನ್ನೂ 16 ದೇಹಗಳನ್ನು ನಾಸರ್ ಆಸ್ಪತ್ರೆಗೆ ಕೊಂಡೊಯ್ಯಲಾಗಿದೆ ಎಂದು ಆರೋಗ್ಯ ಅಧಿಕಾರಿಗಳು ತಿಳಿಸಿದ್ದಾರೆ. ಆಸ್ಪತ್ರೆಗೆ ಸೇರಿಸಲಾಗಿದ್ದ 30 ಮಂದಿ ಸಾವನ್ನಪ್ಪಿದ್ದಾರೆ. ಡಜನ್ ನಷ್ಟು ಜನರು ಗಾಯಗೊಂಡಿದ್ದಾರೆ. ಅವರಲ್ಲಿ ಮಹಿಳೆಯರು, ಮಕ್ಕಳೇ ಹೆಚ್ಚಾಗಿದ್ದಾರೆ ಎಂದು ಬೀಟ್ ಲಾಹಿಯಾದಲ್ಲಿರುವ ಇಂಡೋನೇಷ್ಯಾದ ಆಸ್ಪತ್ರೆಯ ವೈದ್ಯರು ಮಾಹಿತಿ ನೀಡಿದ್ದಾರೆ.

ಪಾಕ್ ಮಿತ್ರ ಟರ್ಕಿಗೆ ಅತ್ಯಾಧುನಿಕ ಕ್ಷಿಪಣಿಗಳನ್ನು ನೀಡಲು ಮುಂದಾದ ಅಮೆರಿಕ

ವಾಷಿಂಗ್ಟನ್: ಟರ್ಕಿಗೆ ಸುಧಾರಿತ ಕ್ಷಿಪಣಿಗಳನ್ನು ನೀಡಲು ಅಮೆರಿಕ ಮುಂದಾಗಿದೆ. ಬ್ಲೂಮ್‌ಬರ್ಗ್ ವರದಿ ಪ್ರಕಾರ, 304 ಮಿಲಿಯನ್ ಡಾಲರ್ ಮೌಲ್ಯದ ಮಿಸೈಲ್‌ಗಳು ಹಾಗೂ ಸಂಬಂಧಿತ ಸಪೋರ್ಟ್ ಸಿಸ್ಟಂ ಅನ್ನು ಟರ್ಕಿಗೆ ಅಮೆರಿಕ ಮಾರಲು ಒಪ್ಪಿಕೊಂಡಿದೆ. ಅಮೆರಿಕದ ಎಐಎಂ 120ಸಿ–8 ಮತ್ತು ಬ್ಲಾಕ್–2 ಕ್ಷಿಪಣಿಗಳನ್ನು ಟರ್ಕಿ ಅಪೇಕ್ಷಿಸುತ್ತಿದೆ. ಇದಕ್ಕೆ ಸದ್ಯ ಅಮೆರಿಕ ಸರ್ಕಾರ ಒಪ್ಪಿಕೊಂಡಿದ್ದು, ಸಂಸತ್‌ನಲ್ಲಿ ಅನುಮೋದನೆ ಸಿಕ್ಕ ಬಳಿಕ ಇವುಗಳನ್ನು ಟರ್ಕಿಗೆ ಪೂರೈಸುವ ಸಾಧ್ಯತೆ ಇದೆ.

ಎಐ–120ಸಿ–8 ಎಂಬುದು ಸುಧಾರಿತ ಮಧ್ಯಮ ಶ್ರೇಣಿಯ ಏರ್–ಟು–ಏರ್ ಕ್ಷಿಪಣಿಗಳನ್ನು (ಎಎಂಆರ್‌ಎಎಂ) ಟರ್ಕಿ ಬಯಸುತ್ತಿದೆ. ಇಂಥ 53 ಮಿಸೈಲ್‌ಗಳನ್ನು ನೀಡಬೇಕೆಂದು ಅಮೆರಿಕವನ್ನು ಟರ್ಕಿ ಕೋರಿಕೊಂಡಿತ್ತು. ಇವುಗಳ ಬೆಲೆ 225 ಮಿಲಿಯನ್ ಡಾಲರ್‌ನಷ್ಟಿದೆ ಹಾಗೆಯೇ, 79.1 ಮಿಲಿಯನ್ ಡಾಲರ್ ಮೌಲ್ಯದ 60 ಬ್ಲಾಕ್–2 ಮಿಸೈಲ್‌ಗಳಿಗೂ ಮನವಿ ಮಾಡಿತ್ತು. ಅಮೆರಿಕದ ಪ್ರಮುಖ ಡಿಫೆನ್ಸ್ ಕಂಪನಿಯಾದ ಆರ್‌ಟಿಎಕ್ಸ್ ಕಾರ್ಪೊರೇಶನ್ ಈ ಗುತ್ತಿಗೆ ಪಡೆಯಬಹುದು. ಈ ಮೇಲಿನ ಮಿಸೈಲ್‌ಗಳು ಮಾತ್ರವಲ್ಲ, ಅದಕ್ಕೆ ಪೂರಕವಾಗಿರುವ ಗೈಡೆನ್ಸ್ ಸಿಸ್ಟಮ್ಸ್, ಲಾಜಿಸ್ಟಿಕ್ಸ್, ಪ್ರೋಗ್ರಾಮ್ ಸಪೋರ್ಟ್, ಸ್ಪೇರ್ ಪಾರ್ಟ್ಸ್ ಇತ್ಯಾದಿಯನ್ನೂ ಟರ್ಕಿಗೆ ನೀಡಬೇಕಾಗುತ್ತದೆ.

3 ವರ್ಷದ ಬಳಿಕ ರಷ್ಯಾ–ಉಕ್ರೇನ್ ನಡುವೆ ಶಾಂತಿ ಮಾತುಕತೆ



ಇಸ್ತಾಂಬುಲ್: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಒತ್ತಡಕ್ಕೆ ಮಣಿದಿರುವ ರಷ್ಯಾದ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಮತ್ತು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್‌ಸ್ಕಿ ಅವರು 3 ವರ್ಷಗಳ ನಂತರ ಇದೇ ಮೊದಲ ಬಾರಿಗೆ ಶಾಂತಿ ಮಾತುಕತೆ ನಡೆಸಲಿದ್ದಾರೆ.

ಯುದ್ಧವನ್ನು ಕೊನೆಗೊಳಿಸುವ ಸಲುವಾಗಿ ಮಾತುಕತೆ ನಡೆಸಲು ಇಸ್ತಾನ್‌ಬುಲ್‌ನಲ್ಲಿ ಪುಟಿನ್ ಅವರನ್ನು ಭೇಟಿ ಮಾಡಲು ಸಿದ್ಧ ಎಂದು ಈಚೆಗೆ ಝೆಲೆನ್‌ಸ್ಕಿ ಹೇಳಿದ್ದರು. ಪ್ರಸ್ತಾವಿತ ಉಕ್ರೇನ್–ರಷ್ಯಾ ಶಾಂತಿ ಮಾತುಕತೆಯಲ್ಲಿ ಪಾಲ್ಗೊಳ್ಳಲು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೂ ಮುಂದಾಗಿದ್ದಾರೆ. ಮಾತುಕತೆಯಲ್ಲಿ ಪಾಲ್ಗೊಳ್ಳುವುದಕ್ಕೆ ಸಂಬಂಧಿಸಿದಂತೆ ರಷ್ಯಾ ಹೆಚ್ಚಿನ ವಿವರಗಳನ್ನು ಬಿಟ್ಟುಕೊಟ್ಟಿಲ್ಲ. ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್‌ಸ್ಕಿ ಅವರು ಮಾತುಕತೆಯ ವೇಳೆ ರಷ್ಯಾದ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರನ್ನು ಮಾತ್ರ ಭೇಟಿಯಾಗಲಿದ್ದಾರೆ. ರಷ್ಯಾದ ನಿಯೋಗದಲ್ಲಿರುವ ಇತರ ಸದಸ್ಯರನ್ನು ಭೇಟಿಯಾಗುವುದಿಲ್ಲ ಎಂದು ಉಕ್ರೇನ್ ಅಧ್ಯಕ್ಷರ ಸಲಹೆಗಾರರು ತಿಳಿಸಿದ್ದರು.

ದೆಹಲಿ ಹೋಲ್ ಸೇಲ್ ಮಾರುಕಟ್ಟೆಯಲ್ಲಿ ಟರ್ಕಿ ಸೇಬುಗಳ ಆಮದು ಸ್ಥಗಿತ



ನವದೆಹಲಿ: ಇತ್ತೀಚಿಗೆ ನಡೆದ ಆಪರೇಷನ್ ಸಿಂಧೂರದಲ್ಲಿ ಪಾಕಿಸ್ತಾನ ಪರ ಬೆಂಬಲ ನೀಡಿದ ಟರ್ಕಿಗೆ ಭಾರತ ಒಂದಾದ ನಂತರ ಒಂದರಂತೆ ಬಿಸಿ ಮುಟ್ಟಿಸಿದೆ. ಈಗಾಗಲೇ ಅನೇಕ ವಸ್ತುಗಳ ರಫ್ತು ಹಾಗೂ ಆಮದನ್ನು ನಿಲ್ಲಿಸಲಾಗಿದ್ದು, ಇದೀಗ ಹಣ್ಣು ಮತ್ತು ತರಕಾರಿಗಳ ಏಷ್ಯಾದ ಅತಿದೊಡ್ಡ ಸಗಟು ಮಾರುಕಟ್ಟೆಯಾಗಿರುವ ಆಜಾದ್‌ಪುರ ಮಂಡಿಯಲ್ಲಿ ಟರ್ಕಿಯಿಂದ ಸೇಬುಗಳನ್ನು ಆಮದು ಮಾಡಿಕೊಳ್ಳುವುದನ್ನು ನಿಲ್ಲಿಸಲಾಗಿದೆ.

ಈ ಕುರಿತು ಮಾತನಾಡಿದ ಆಜಾದ್‌ಪುರ ಫ್ರೂಟ್ ಮಂಡಿ ಅಧ್ಯಕ್ಷ ಮೀತಾ ರಾಮ್ ಕೃಪ್ಲಾನಿ, ನಾವು ಟರ್ಕಿಯಿಂದ ಎಲ್ಲಾ ಹೊಸ ಸೇಬುಗಳನ್ನು ಆಮದು ಮಾಡಿಕೊಳ್ಳುವುದನ್ನು ನಿಲ್ಲಿಸಲು ನಿರ್ಧರಿಸಿದ್ದೇವೆ. ಈ ಹಿಂದೆ ಆರ್ಡರ್ ಮಾಡಿದ ಸರಕುಗಳು ಇನ್ನೂ ಬರುತ್ತವೆಯಾದರೂ, ಸೇಬು ಅಥವಾ ಇತರ ಉತ್ಪನ್ನಗಳ ವ್ಯಾಪಾರವು ಮುಂದೆ ನಡೆಯುವುದಿಲ್ಲ. ಪರಿಸ್ಥಿತಿಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಈ ನಿರ್ಧಾರವನ್ನು ತೆಗೆದುಕೊಳ್ಳಲಾಗಿದೆ. ಮುಂದೆ ಯಾವುದೇ ಹೊಸ ಆರ್ಡರ್ ನೀಡಲ್ಲ ಎಂದು ಹೇಳಿದರು. ಕೃಪ್ಲಾನಿ ಪ್ರಕಾರ ಆಜಾದ್‌ಪುರ ಮಂಡಿಯು ಟರ್ಕಿಯ ಸೇಬುಗಳಿಗೆ ಉತ್ತಮ ಬೇಡಿಕೆಯಿತ್ತು. 2024 ರಲ್ಲಿ 1.16 ಲಕ್ಷ ಟನ್ ಆಮದು ಮಾಡಿಕೊಳ್ಳಲಾಗಿತ್ತು.

ಭಾರತದ ನಿರುದ್ಯೋಗ ಪ್ರಮಾಣ ಏಪ್ರಿಲ್‌ನಲ್ಲಿ ಶೇ. 5.1ರಷ್ಟು ಇಳಿಕೆ

ನವದೆಹಲಿ: ಭಾರತದಲ್ಲಿ ಏಪ್ರಿಲ್‌ನಲ್ಲಿ ನಿರುದ್ಯೋಗ ಪ್ರಮಾಣ ಶೇ. 5.1 ರಷ್ಟು ತಗ್ಗಿದೆ ಇದೇ ಮೊದಲ ಬಾರಿಗೆ ಸಾಂಖ್ಯಿಕ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯ, ಮಾಸಿಕ ಕಾರ್ಮಿಕರ ಸಮೀಕ್ಷೆಯನ್ನು (PLFS) ಬಿಡುಗಡೆ ಮಾಡಿದೆ.

ಇದರಲ್ಲಿ ಪುರುಷರಲ್ಲಿ ನಿರುದ್ಯೋಗ ಪ್ರಮಾಣ ಶೇ. 5.2 ರಷ್ಟಿದ್ದು, ಮಹಿಳೆಯರ ನಿರುದ್ಯೋಗ ಪ್ರಮಾಣ ಶೇ 5 ರಷ್ಟಿದ್ದೆ. ಮಹಿಳೆಯರಿಗಿಂತ ಪುರುಷರ ನಿರುದ್ಯೋಗ ಪ್ರಮಾಣ ಸ್ವಲ್ಪ ಹೆಚ್ಚಾಗಿದೆ ಎಂದು ತೋರಿಸಲಾಗಿದೆ.

15–29 ವಯಸ್ಸಿನವರಲ್ಲಿ ನಿರುದ್ಯೋಗ ಪ್ರಮಾಣ ಶೇ. 13.8 ರಷ್ಟಿದೆ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ನಿರುದ್ಯೋಗದ ಪ್ರಮಾಣ ಶೇ. 12. 3 ರಷ್ಟಿದೆ. ನಗರ ಪ್ರದೇಶಗಳಲ್ಲಿ ಇದು ಶೇ. 17.2 ರಷ್ಟಿದೆ. ಏಪ್ರಿಲ್ 2025 ರ ಮಾಸಿಕ ಮಾಹಿತಿಯು ಭಾರತದ ಕಾರ್ಮಿಕರ ಸಂಖ್ಯೆಯನ್ನು ಅರ್ಥಮಾಡಿಕೊಳ್ಳುವಲ್ಲಿ ಗಮನಾರ್ಹವಾದ ಮಾಹಿತಿ ನೀಡುತ್ತದೆ ಎಂದು ಇಂಡಿಯಾ ರೇಟಿಂಗ್ಸ್ ಮತ್ತು ರಿಸರ್ಚ್‌ನ ಅಸೋಸಿಯೇಟ್ ಡೈರೆಕ್ಟರ್ ಪಾರಸ್ ಜಸ್ರೈ ಹೇಳಿದ್ದಾರೆ.

ಒಟ್ಟಾರೆ ನಿರುದ್ಯೋಗ ದರವು 5.1% ರಷ್ಟು ಕಡಿಮೆಯಿದ್ದರೂ, ಗ್ರಾಮೀಣ–ನಗರದ ಅಂತರವು ನಗರ ಪ್ರದೇಶಗಳಲ್ಲಿ ಉದ್ಯೋಗ ಸೃಷ್ಟಿಯ ಒತ್ತಡವನ್ನು ಸೂಚಿಸುತ್ತದೆ. ವಯಸ್ಸು ಮತ್ತು ಲಿಂಗದ ಆಧಾರದ ಮೇಲೆ ನಗರ ಪ್ರದೇಶಗಳಲ್ಲಿ ವಾಸಿಸುತ್ತಿರುವ ಮಹಿಳೆಯರಿಗಿಂತ ಯುವಕರ ನಿರುದ್ಯೋಗ ಪ್ರಮಾಣ (ಶೇ.23.7) ಹೆಚ್ಚಾಗಿದೆ ಎಂದು ಅವರು ಹೇಳಿದ್ದಾರೆ.

ಮೈಸೂರು ಮಿತ್ರ ಶನಿವಾರ 17 ಮೇ 2025

ಪರಿಸರ ಸಂರಕ್ಷಣೆ ನಮ್ಮೆಲ್ಲರ ಆದ್ಯ ಕರ್ತವ್ಯ

ಜಿಪಂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಆನಂದ್ ಪ್ರಕಾಶ್ ಮೀನಾ



ಹವಾಮಾನ ಬದಲಾವಣೆ ಕ್ರಿಯಾ ಯೋಜನೆ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳ ತರಬೇತಿಗೆ ಬಂದಿದ್ದ ಶಿಬಿರಾರ್ಥಿಗಳು.

ಮಡಿಕೇರಿ ಮೇ 16– ಹವಾಮಾನ ವೈಪರೀತ್ಯಗಳಿಂದಾಗಿ ಪರಿಸರದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದ್ದು, ಈ ಬಗ್ಗೆ ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು ಎಂದು ಜಿಪಂನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ ತಿಳಿಸಿದರು.

ನಗರದ ಜಿಪಂ ಕಚೇರಿಯಲ್ಲಿ ಇಂದು ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ, ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ ಸಹಯೋಗದಲ್ಲಿ ಹವಾಮಾನ ಬದಲಾವಣೆ ಕ್ರಿಯಾ ಯೋಜನೆ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳ ತರಬೇತಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಪರಿಸರವನ್ನು ಸ್ವಚ್ಛ ಮತ್ತು ಸುಸ್ಥಿರವಾಗಿಡುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಪೂರ್ವಜರು ಸುಂದರವಾದ ಪರಿಸರವನ್ನು ನಮಗೆ ನೀಡಿದ್ದು, ಅದನ್ನು ಉಳಿಸಿಕೊಳ್ಳಬೇಕು. ಪರಿಸರ ಸಂರಕ್ಷಣೆಗೆ ಎಲ್ಲಾ ಇಲಾಖೆಗಳ ಅಧಿಕಾರಿಗಳು ಒತ್ತು ನೀಡಬೇಕು ಎಂದು ತಿಳಿಸಿದರು.

ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆಯ ಹಿರಿಯ ಸಮಾಲೋಚಕ ಡಾ.ಬಿ.ಸರಿತಾ ಮಾತನಾಡಿ, ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯೂ ಈ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಪರಿಸರ ಸಂರಕ್ಷಣೆ ಮತ್ತು ಸುಸ್ಥಿರ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗಿದೆ ಎಂದು ತಿಳಿಸಿದರೆ, ಸಂಪನ್ಮೂಲ ವ್ಯಕ್ತಿ ಎಂ.ಎ.ಲತಾ, ಪೊನ್ನಂಪೇಟೆ ಅರಣ್ಯ ವಿಶ್ವ ವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ.ಎಂ.ಮಂಜುನಾಥ್ ಹವಾಮಾನ ಬದಲಾವಣೆಯ ಮುಖ್ಯ ಅಂಶಗಳನ್ನು ತಿಳಿಸಿಕೊಟ್ಟರು. ಜಿಪಂ ಎನ್‌ಆರ್‌ಡಿಎಂಎಸ್ ವಿಭಾಗದ ಪ್ರೊಜೆಕ್ಟ್ ಅಸೋಸಿಯೇಟ್ ಇಂಚರ, ವಿವಿಧ ಇಲಾಖೆಗಳ ಅಧಿಕಾರಿ ಗಳು ಉಪಸ್ಥಿತರಿದ್ದರು.

ಸಿಎನ್‌ಸಿಯಿಂದ ಹಿರಿಯರಿಗೆ ಪುಷ್ಪ ನಮನ



ದೇವಟ್ ಪರಂಬುವಿನಲ್ಲಿ ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ಮಾಸಿಕ ಶ್ರದ್ಧಾಂಜಲಿ ಅರ್ಪಿಸಿತು.

ಮಡಿಕೇರಿ, ಮೇ 16– ಕೊಡವರ ನರಮೇಧದ ದೇವಟ್ ಪರಂಬುವಿನಲ್ಲಿ ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ಮಾಸಿಕ ಶ್ರದ್ಧಾಂಜಲಿ ಕಾರ್ಯಕ್ರಮ ನಡೆಸಿತು. ಸಿಎನ್‌ಸಿ ಅಧ್ಯಕ್ಷ ಎನ್.ಯು.ನಾಚಪ್ಪ ಹಾಗೂ ಸದಸ್ಯರು ಹಿರಿಯರಿಗೆ ಪುಷ್ಪ ನಮನ ಸಲ್ಲಿಸಿ ಕೊಡವ ಲ್ಯಾಂಡ್ ಭೂರಾಜಕೀಯ ಸ್ವಾಯತ್ತತೆ ಸೇರಿದಂತೆ ವಿವಿಧ ಬೇಡಿಕೆಗಳ ಪರ ಪ್ರತಿಜ್ಞಾವಿಧಿ ಸ್ವೀಕರಿಸಿದರು.

ಟಿಪ್ಪು ಸುಲ್ತಾನನ ನೇತೃತ್ವದ ಮೈಸೂರು ಸುಲ್ತಾನರು ಹಾಗೂ ಫ್ರೆಂಚ್ ಈಸ್ಟ್ ಇಂಡಿಯಾ ಕಂಪನಿ ರೂಪಿಸಿದ ಸಂಚಿನಿಂದ ದುರಂತ ಅಂತ್ಯ ಕಂಡ ಹಿರಿಯ ಕೊಡವ ಯೋಧರನ್ನು ಸ್ಮರಿಸುವ ಮೂಲಕ ಸಿಎನ್‌ಸಿ ತನ್ನ ಹೋರಾಟದ ಬಲವನ್ನು ಹೆಚ್ಚಿಸಿಕೊಂಡಿದೆ ಎಂದರು.

ರಾಷ್ಟ್ರೀಯ ಜಾತಿಗಣತಿ ಸಂದರ್ಭ ಕೊಡವರಿಗೆ ಪ್ರತ್ಯೇಕ ಕೋಡ್ ಮತ್ತು ಕಾಲಮ್ ಅನ್ನು ಸೇರಿಸಬೇಕು. ಸಂಸತ್ ಹಾಗೂ ವಿಧಾನಸಭೆಯಲ್ಲಿ ಕೊಡವರಿಗೆ ವಿಶೇಷ ರಾಜಕೀಯ ಪ್ರಾತಿನಿಧ್ಯ ನೀಡಬೇಕೆಂಬ ಬೇಡಿಕೆಯನ್ನು ಮುಂದಿಟ್ಟುಕೊಂಡು ಸಿಎನ್‌ಸಿ ಸಂಘಟನೆ ಇನ್ನು ಮುಂದೆಯೂ ಶಾಂತಿಯುತ ಹೋರಾಟ ನಡೆಸಲಿದೆ. ಹತ್ಯೆಗೊಳಗಾದ ಹಿರಿಯ ಕೊಡವ ಯೋಧರಿಂದ ಆಶೀರ್ವಾದ ಪಡೆಯಲಿದೆ ಎಂದು ಎನ್.ಯು.ನಾಚಪ್ಪ ತಿಳಿಸಿದರು.

ಪಟ್ಟಮಾಡ ಕುಶ, ಅರೆಯಡ ಗಿರೀಶ್ ಹಾಗೂ ಮಂದಪಂಡ ಮನೋಜ್ ಹಾಜರಿದ್ದು ಪುಷ್ಪನಮನ ಸಲ್ಲಿಸಿದರು.

ಮಕ್ಕಳ ಬೌದ್ಧಿಕ, ಕ್ರಿಯಾಶೀಲ ಚಟುವಟಿಕೆಗೆ ಬೇಸಿಗೆ ಶಿಬಿರ ಸಹಕಾರಿ



ಸರ್ಕಾರಿ ಬಾಲಕರ ಬಾಲಮಂದಿರದಲ್ಲಿ ಬೇಸಿಗೆ ಶಿಬಿರವನ್ನು ಶಿಕ್ಷಣ ಇಲಾಖೆ ಉಪ ನಿರ್ದೇಶಕ ರಂಗಧಾಮಪ್ಪ ಉದ್ಘಾಟಿಸಿದರು.

ಮಡಿಕೇರಿ, ಮೇ 16–ಮಕ್ಕಳ ಬೌದ್ಧಿಕ ಮತ್ತು ಕ್ರಿಯಾಶೀಲ ಚಟುವಟಿಕೆಗೆ ಬೇಸಿಗೆ ಶಿಬಿರ ಸಹಕಾರಿಯಾಗಿದ್ದು, ಇದನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಶಿಕ್ಷಣ ಇಲಾಖೆ ಉಪ ನಿರ್ದೇಶಕ ರಂಗಧಾಮಪ್ಪ ಹೇಳಿದರು.

ಸರ್ಕಾರಿ ಬಾಲಕರ ಬಾಲಮಂದಿರದಲ್ಲಿ ರಾಜ್ಯ ಬಾಲಭವನ ಸೊಸೈಟಿ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಬಾಲಭವನ ಸಮಿತಿ ಸಹಯೋಗದಲ್ಲಿ ಉಚಿತ ಬೇಸಿಗೆ ಶಿಬಿರ ಉದ್ಘಾಟಿಸಿ ಮಾತನಾಡಿ, ಬಾಲ್ಯದಲ್ಲಿಯೇ ಮಕ್ಕಳಲ್ಲಿರುವ ಸೃಜನಾತ್ಮಕ ಕಲೆಯನ್ನು ವೃದ್ಧಿಸಲು ಹಾಗೂ ಮಕ್ಕಳ ಬೌದ್ಧಿಕ ವಿಕಾಸದೊಂದಿಗೆ ಭವಿಷ್ಯದ ಜೀವನಕ್ಕೆ ಇಂತಹ ಶಿಬಿರಗಳ ಸದುಪಯೋಗ ಪಡೆದು ಕೊಳ್ಳುವಂತಾಗಬೇಕು ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ತಿಪ್ಪಣ್ಣ ಸಿರಸಗಿ ಮಾತನಾಡಿ 5 ರಿಂದ 16 ವರ್ಷದ ಮಕ್ಕಳಿಗೆ ಯೋಗ, ಚಿತ್ರಕಲೆ, ಕ್ರಾಫ್ಟ್, ನೃತ್ಯ, ಸಂಗೀತ, ನಾಟಕ ಸೇರಿದಂತೆ 6 ರೀತಿಯ ಚಟುವಟಿಕೆಗಳನ್ನು ಈ ಶಿಬಿರದಲ್ಲಿ ಕಲಿಸಲಾಗುತ್ತದೆ. ಹೆಚ್ಚಿನ ವಿದ್ಯಾರ್ಥಿಗಳು ಭಾಗವಹಿಸಿ ಇದರ ಸದುಪಯೋಗವನ್ನು ಪಡೆಯಬೇಕು ಮಕ್ಕಳು ಜ್ಞಾನ ವೃದ್ಧಿಯನ್ನು ಪಡೆದುಕೊಳ್ಳಲು ಪೋಷಕರು ಮಕ್ಕಳಿಗೆ ಸಹಕರಿಸಬೇಕು. ಈಗಿನ ಮಕ್ಕಳು ಮೊಬೈಲ್ ಬಳಕೆಯಲ್ಲಿ ಹೆಚ್ಚು ಆಸಕ್ತಿ ಹೊಂದಿದ್ದಾರೆ. ಅದನ್ನು ಕಡಿಮೆ ಮಾಡಿ ಶಿಬಿರದಲ್ಲಿ ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳಲ್ಲಿ ಹೆಚ್ಚು ಭಾಗವಹಿಸುವಂತೆ ತಿಳಿಸಿದರು.

ಕನ್ನಡ ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ್ ಮಾತನಾಡಿದರು. ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸೀತಾಲಕ್ಷ್ಮಿ ಪ್ರಾಸ್ತಾವಿಕ ನುಡಿಗಳನ್ನು ಆಡಿದರು. ವಿಕಲಚೇತರ ಕಲ್ಯಾಣ ಅಧಿಕಾರಿ ವಿಮಲ ಸ್ವಾಗತಿಸಿದರು. ಪೂಜಾ ನಿರೂಪಿಸಿದರು.

ಲೋಕೋಪಯೋಗಿ ಇಲಾಖೆ ಇಇ ಇಬ್ರಾಹಿಂ, ಸರ್ಕಾರಿ ಬಾಲಕರ ಬಾಲ ಮಂದಿರದ ಅಧೀಕ್ಷಕ ಶ್ರೀಧರ್, ಪವಿತ್ರಾ, ಸತ್ಯಭಾಮ, ಸವಿತಾ ಹಾಗೂ ಮಹಿಳಾ ಮೇಲ್ವಿಚಾರಕಿ ಶೀಲಾ, ಯೋಗ ತರಬೇತಿ ಶಿಕ್ಷಕರು ಅಲಿಮ, ಕ್ರಾಫ್ಟ್ ತರಬೇತಿ ಶಿಕ್ಷಕರು ನಮಿತಾ ರಾವ್, ಚಿತ್ರಕಲೆ ತರಬೇತಿ ಶಿಕ್ಷಕರು ಕುಮಾರ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖಾ ಸಿಬ್ಬಂದಿವರ್ಗದವರು, ಪೋಷಕರು ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಇಂದು ಸಿಎಂಇ ಕಾರ್ಯಕ್ರಮ

ಮಡಿಕೇರಿ, ಮೇ 16– ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಕಾಲೇಜಿನ ಸಭಾ ಕೊಠಡಿಯಲ್ಲಿ ಮೇ 17 ರ ಬೆಳಗ್ಗೆ 8.30 ಗಂಟೆಗೆ ಮುಂದುವರೆದ ವೈದ್ಯಕೀಯ ಶಿಕ್ಷಣ (ಸಿಎಂಇ) ಕಾರ್ಯಕ್ರಮ ನಡೆಯಲಿದೆ ಎಂದು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಮಕ್ಕಳ ವಿಭಾಗದ ಪ್ರಾಧ್ಯಾಪಕರು ಮತ್ತು ವಿಭಾಗ ಮುಖ್ಯಸ್ಥೆ ಡಾ.ಪುರುಷೋತ್ತಮ ತಿಳಿಸಿದ್ದಾರೆ.

ದಿಯಾ ಭೀಮಯ್ಯ ಮಹಿಳೆಯರ ಡಬಲ್ಸ್‌ನಲ್ಲಿ ದ್ವಿತೀಯ ಸ್ಥಾನ



ಮಡಿಕೇರಿ: ದಿಯಾ ಭೀಮಯ್ಯಗೆ ರಾಷ್ಟ್ರೀಯ ಬ್ಯಾಡ್ಮಿಂಟನ್ ಸೀನಿಯರ್ ವಿಭಾಗದಲ್ಲಿ ಮೊದಲ ಯಶಸ್ಸು ಲಭಿಸಿದೆ. ಮೇ.8ರಿಂದ 15ರವರೆಗೆ ಹೈದರಾಬಾದಿನ ಜ್ವಾಲಾಗುಟ್ಟ ಅಕಾಡೆಮಿ ಆಫ್ ಎಕ್ಸಲೆನ್ಸ್‌ನಲ್ಲಿ ನಡೆದ ಯೋನೆಕ್ಸ್ ಸನ್‌ರೈಸ್ ಆಲ್ ಇಂಡಿಯ ಸೀನಿಯರ್ ಬ್ಯಾಡ್ಮಿಂಟನ್ ಟೂರ್ನಮೆಂಟ್‌ನಲ್ಲಿ ಕೊಡಗಿನ ಬೊಪ್ಪಂಡ ದಿಯಾ ಭೀಮಯ್ಯ ಮಹಿಳೆಯರ ಡಬಲ್ಸ್‌ನಲ್ಲಿ ದ್ವಿತೀಯ ಸ್ಥಾನ ಗಳಿಸಿದ್ದಾರೆ. 17 ವರ್ಷದ ದಿಯಾ ಭೀಮಯ್ಯ ಮೈಸೂರಿನ ವಿದ್ಯಾಶ್ರಮ ಕಾಲೇಜಿನಲ್ಲಿ ದ್ವಿತೀಯ ಪಿಯುಸಿ ಓದುತ್ತಿದ್ದು, ಸೀನಿಯರ್ಸ್ ಮಹಿಳೆಯರ ಡಬಲ್ಸ್‌ನಲ್ಲಿ ಹರಿಯಾಣದ ಬಾರುನಿ ಪರಸ್ವಾಲ್ ಅವರೊಂದಿಗೆ ಪಂದ್ಯವಾಡಿ ದ್ವಿತೀಯ ಸ್ಥಾನ ಗಳಿಸಿದ್ದಾರೆ. ಇವರು ಮೈಸೂರಿನ ಸ್ಪೋರ್ಟ್ಸ್ ಪಾರ್ಕ್‌ನಲ್ಲಿ ಮೇದುರ ಅರುಣ್ ಪೆಮ್ಮಯ್ಯ ಹಾಗೂ ಭೀಮಯ್ಯ ಅವರು ಬಳಿ ತರಬೇತಿ ಪಡೆಯುತ್ತಿದ್ದಾರೆ.

ಪ್ರಕೃತಿ–ಪ್ರಗತಿ ಜೊತೆಯಾಗಿ ಸಾಗುವ ಅನಿವಾರ್ಯತೆಯಿದೆ

ಮಡಿಕೇರಿ, ಮೇ 16–ಅಭಿವೃದ್ಧಿ ಕಾರ್ಯಗಳ ಜೊತೆಗೆ ಪರಿಸರ ಸಂರಕ್ಷಣೆಯ ಕಾಳಜಿ ಇದ್ದಾಗ ಪ್ರಕೃತಿ ಮತ್ತು ಪ್ರಗತಿ ಜೊತೆಯಲ್ಲಿ ಸಾಗಲು ಸಾಧ್ಯವಿದೆ ಎಂದು ದಿ.ಬಿ.ಎಸ್.ಗೋಪಾಲಕೃಷ್ಣ ದತ್ತಿ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ನಾಗೇಶ್ ಕಾಲೂರು ಅಭಿಪ್ರಾಯಪಟ್ಟಿದ್ದಾರೆ.

ನಗರದ ಪತ್ರಿಕಾಭವನ ಸಭಾಂಗಣದಲ್ಲಿ ಕೊಡಗು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್, ಕೊಡಗು ಪತ್ರಕರ್ತರ ಸಂಘದ ಸಹಯೋಗದಲ್ಲಿ ಆಯೋಜಿತ ಕಾರ್ಯಕ್ರಮದಲ್ಲಿ ದಿ.ಬಿ.ಎಸ್.ಗೋಪಾಲ ಕೃಷ್ಣ ದತ್ತಿ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಅವರು, ಪ್ರಕೃತಿಯನ್ನು ಉಳಿಸಿಕೊಳ್ಳದೆ ಹೋದಲ್ಲಿ ಮಾನವನ ಅಂತ್ಯ ಖಂಡಿತ ಪ್ರಗತಿ ನೆಪದಲ್ಲಿ ಪರಿಸರ ನಾಶ ಹೆಚ್ಚಾಗು ತ್ತಿದೆ. ಈ ನಿಟ್ಟಿನಲ್ಲಿ ಪ್ರಕೃತಿ ಸಂರಕ್ಷಣೆ ಮತ್ತು ಪ್ರಗತಿ ಯೋಜನೆ ಜೊತೆಜೊತೆ ಯಾಗಿ ಸಾಗುವಂತಹ ಚಿಂತನೆ ಅತ್ಯಗತ್ಯ ಎಂದು ಅಭಿಪ್ರಾಯಪಟ್ಟ ನಾಗೇಶ್ ಗಂಗೆ ಕೂಡ ತಲಕಾವೇರಿಗೆ ಬಂದು ವರ್ಷಕ್ಕೊಮ್ಮೆ ಕಾವೇರಿಯಲ್ಲಿ ಮಿಂದು ಪುನೀತಳಾಗುತ್ತಾಳೆ ಎಂದು ಪುರಾಣದಲ್ಲಿ ಉಲ್ಲೇಖವಿದೆ. ಇಂಥ ಪವಿತ್ರ ಕಾವೇರಿಯ ತೀರ್ಥರೂಪದ ನೀರನ್ನು ಸಂರಕ್ಷಿಸುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಕಾಳಜಿ ತೋರಬೇಕೆಂದು ಹೇಳಿದರು

ಕಾರ್ಯಕ್ರಮ ಉದ್ಘಾಟಿಸಿದ ಮಾಜಿ ಸಚಿವ ಎಂ.ಸಿ.ನಾಣಯ್ಯ ಬಿ.ಎಸ್.ಗೋಪಾಲ ಕೃಷ್ಣ ಅವರ ಲೇಖನಿಯಲ್ಲಿ ತೀಕ್ಷ್ಣತೆಯಿತ್ತು, ಕೊಡಗಿಗೆ ಸಮಸ್ಯೆ ಎದುರಾದಾಗಲೆಲ್ಲಾ ಸರ್ಕಾರವನ್ನು ತನ್ನ ಹರಿತ ಬರವಣಿಗೆ ಮೂಲಕ ಎಚ್ಚರಿಕೆ ನೀಡುತ್ತಿದ್ದರು ಎಂದರಲ್ಲದೆ, ಬರವಣಿಗೆ ಮತ್ತು ಪತ್ರಿಕಾ ವರದಿಯ ಶೈಲಿಗೆ ಗೋಪಾಲಕೃಷ್ಣರು ನಾಡಿನ ಪತ್ರಿಕಾ ರಂಗದಲ್ಲಿಯೇ ಮಾದರಿಯಾಗಿದ್ದಾರೆ ಎಂದು ಶ್ಲಾಘಿಸಿದರು.

ದತ್ತಿ ಪ್ರಶಸ್ತಿ ವಿತರಿಸಿದ ರಾಜಲಕ್ಷ್ಮಿ ಗೋಪಾಲಕೃಷ್ಣ ಮಾತನಾಡಿ, ಗೋಪಾಲ ಕೃಷ್ಣ ಅವರು ವೃತ್ತಿ ಜೀವನದಲ್ಲಿ ಪ್ರಾಮಾಣಿಕತೆಗೆ ಆದ್ಯತೆ ನೀಡಿದ್ದರು. ಎಂಥಹದ್ದೇ ಸವಾಲು, ಸಂಕಷ್ಟ ಎದುರಾದಾಗಲೂ ಅಧರ್ಮ ಮಾರ್ಗದತ್ತ ಮನಸ್ಸು ಹರಿಸಲಿಲ್ಲ. ಯಾರನ್ನೂ ಆರ್ಥಿಕ ಸಹಾಯಕ್ಕಾಗಿ ಅಂಗಲಾಚಲಿಲ್ಲ ಎಂದು ಸ್ಮರಿಸಿಕೊಂಡರು. ದತ್ತಿ ಪ್ರಶಸ್ತಿ ನೀಡಿದ್ದ ಬಿ.ಜಿ.ಅನಂತಶಯನ, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಅಧ್ಯಕ್ಷ ಎಂ.ಪಿ.ಕೇಶವ ಕಾಮತ್, ಮಾಜಿ ಅಧ್ಯಕ್ಷ ಟಿ.ಪಿ.ರಮೇಶ್ ಮಾತನಾಡಿದರು. ಪತ್ರಕರ್ತರ ಸಂಘದ ಅಧ್ಯಕ್ಷ ಅನಿಲ್ ಎಚ್.ಟಿ. ಅಧ್ಯಕ್ಷತೆ ವಹಿಸಿದ್ದರು.

ಮಡಿಕೇರಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕಡ್ಲೇರ ತುಳಸಿ ಮೋಹನ್ ವೇದಿಕೆಯಲ್ಲಿದ್ದ ಕಾರ್ಯಕ್ರಮದಲ್ಲಿ ಕಸಾಪ ಗೌರವ ಕಾರ್ಯದರ್ಶಿ ಎಸ್.ಐ. ಮುನೀರ್ ಅಹಮ್ಮದ್ ಸ್ವಾಗತಿಸಿ, ಕೊಡಗು ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಸುರೇಶ್ ಬಿಳಿಗೇರಿ ವಂದಿಸಿದರು.

ರೇವತಿ ರಮೇಶ್ ಪ್ರಶಸ್ತಿ ವಿಜೇತರ ಪರಿಚಯ ಮಾಡಿದ ಸಮಾರಂಭದಲ್ಲಿ ಅಲೆಮಾಡ ಚಿತ್ರಾ ನಂಜಪ್ಪ ಮತ್ತು ವಂದನಾ ಪೊನ್ನಪ್ಪ ಅವರು ಗೋಪಾಲಕೃಷ್ಣ ಅವರಿಗೆ ಪ್ರಿಯವಾಗಿದ್ದ ಗಮಕಗಳನ್ನು ವಾಚಿಸಿದರು. ಇದೇ ಸಂದರ್ಭ ದತ್ತಿ ಪ್ರಶಸ್ತಿ ನೀಡಿದ ಬಿ.ಜಿ. ಅನಂತಶಯನ ಅವರನ್ನು ಕಸಾಪ ವತಿಯಿಂದ ಸನ್ಮಾನಿಸಲಾಯಿತು.

ಇಂದು ಅರೆಭಾಷಿಕರ 'ಐನ್‌ಮನೆ' ಕಾರ್ಯಕ್ರಮ

ಮಡಿಕೇರಿ ಮೇ 16– ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ವತಿಯಿಂದ ಅರೆಭಾಷಿಕರ 'ಐನ್‌ಮನೆ' ಕಾರ್ಯಕ್ರಮವು ಮಕ್ಕಂದೂರು ಗ್ರಾಮದ ಕುಂಭಗೌಡನ ಐನ್‌ಮನೆಯಲ್ಲಿ ಮೇ 17ರ ಬೆಳಗ್ಗೆ 10.30ಕ್ಕೆ ನಡೆಯಲಿದೆ.

ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಸದಾನಂದ ಮಾವಜಿ, ಕುಂಭಗೌಡನ ಕುಟುಂಬದ ಪಟ್ಟೆದಾರ ಕೆ.ಕೆ.ಓಂಕಾರಪ್ಪ, ಶಾಸಕ ಡಾ.ಮಂತರ್‌ಗೌಡ, ವಿಧಾನಪರಿಷತ್ ಮಾಜಿ ಸದಸ್ಯೆ ವೀಣಾ ಅಚ್ಚಯ್ಯ, ಇತರರು ಪಾಲ್ಗೊಳ್ಳಲಿದ್ದಾರೆ. ಸುಳ್ಯದ ಸಾಹಿತಿ ಎ.ಕೆ.ಹಿಮಕರ ಅವರು ಅರೆಭಾಷೆ ಕುಟುಂಬಗಳ ಐನ್‌ಮನೆ ಬಗ್ಗೆ ಹಾಗೂ ಅರವಿಂದ್ ಮಾಚಯ್ಯ ಕುಂಭಗೌಡನ ಕುಂಭಗೌಡನ ಐನ್‌ಮನೆ ನಡೆದು ಬಂದ ದಾರಿ ಕುರಿತು ಉಪನ್ಯಾಸ ನೀಡಲಿದ್ದಾರೆ.

ಬೆಳಗ್ಗೆ 9.30ಕ್ಕೆ ಸುಳ್ಯ ಜಯಪ್ರಕಾಶ್ ಪೆರುಮುಂಡ ಮತ್ತು ತಂಡದವರಿಂದ ಅರೆಭಾಷೆ ಹಾಡುಗಳ ಕಲರವ 10 ಗಂಟೆಗೆ ಆರ್‌ಜೆ ತ್ರಿಶೂಲ್ ಕಂಬಳನೊಟ್ಟಿಗೆ ನೀವು, ಮಧ್ಯಾಹ್ನ 2.30 ರಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ.

ಹಂಗಳಪುರದ ಶ್ರೀ ಚನ್ನಬಸವಸ್ವಾಮೀಜಿ ಲಿಂಗೈಕ್ಯ



ಗುಂಡ್ಲುಪೇಟೆ, (ಸೋಮ್.ಜಿ)– ತಾಲೂಕಿನ ಹಂಗಳಪುರ ಮಠದ ಮಠಾಧಿಪತಿಗಳಾಗಿದ್ದ ಚನ್ನಬಸವಸ್ವಾಮೀಜಿ (82) ಇಂದು ಬೆಳಗ್ಗೆ ವಯೋಸಹಜ ಕಾರಣದಿಂದಾಗಿ ಲಿಂಗೈಕ್ಯರಾದರು. ಶ್ರೀಗಳ ಅಂತ್ಯಕ್ರಿಯೆಯು ಮಠದ ಆವರಣದಲ್ಲಿ ನಡೆಯಿತು.

ತಾಲೂಕಿನ ಹಂಗಳಪುರ ಪಟ್ಟದ ಮಠಕ್ಕೆ 1971ರಲ್ಲಿ ಮಠಾಧಿಪತಿಗಳಾಗಿದ್ದ ಶ್ರೀಗಳು ಜೆಎಸ್‌ಎಸ್ ಗುರುಕುಲದಲ್ಲಿದ್ದು ಸಂಸ್ಕೃತ ವ್ಯಾಸಂಗ ಮಾಡಿದ್ದರು. ಸುತ್ತಮುತ್ತಲಿನ ಗ್ರಾಮಗಳಲ್ಲಿ ಧಾರ್ಮಿಕ ಆಚರಣೆಗಳು ಹಾಗೂ ಪೂಜಾವಿಧಿಗಳಲ್ಲಿ ಭಾಗವಹಿಸುತ್ತಿದ್ದರು. ಜೆಎಸ್‌ಎಸ್ ಗೋಷ್ಠಿಯ ಕಾರ್ಯಕ್ರಮಗಳಲ್ಲೂ ಪಾಲ್ಗೊಳ್ಳು ತ್ತಿದ್ದರು. ಕೃಷಿ ಕಾರ್ಯದಲ್ಲಿ ಹೆಚ್ಚಿನ ಆಸಕ್ತಿ ಹೊಂದಿದ್ದ ಶ್ರೀಗಳು ಅಪಾರ ಭಕ್ತವೃಂದವನ್ನು ಹೊಂದಿದ್ದರು. ಸರಳ ಸಜ್ಜನಿಕೆಯ ಸ್ವಭಾವ ಹಾಗೂ ವಿನಯಶೀಲರಾಗಿದ್ದರು. ಮಠಗಳು, ಭಕ್ತಾದಿಗಳು ಹಾಗೂ ಸಾರ್ವಜನಿಕರೊಂದಿಗೆ ಅವಿನಾಭಾವ ಸಂಬಂಧ ಹೊಂದಿದ್ದರು. ಭಕ್ತರ ಕಷ್ಟ–ಕಾರ್ಪಣ್ಯಗಳಲ್ಲಿ ಭಾಗಿಯಾಗುತ್ತಿದ್ದರು.

ಅಂತಿಮ ದರ್ಶನ: ಸುತ್ತೂರು ಮಠಾಧ್ಯಕ್ಷ ಶ್ರೀ ಶಿವರಾತ್ರಿ ದೇಶೀಕೇಂದ್ರಸ್ವಾಮೀಜಿ, ಪಡಗೂರು ಮಠಾಧ್ಯಕ್ಷ ಶಿವಲಿಂಗೇಂದ್ರಸ್ವಾಮೀಜಿ, ವಾಟಾಳು, ಚಿಕ್ಕತುಪ್ಪೂರು, ಹರವೆ, ಮೂಡಗೂರು, ಗೋಪಾಲಪುರ, ಹಂಗಳ, ಸೋಮಹಳ್ಳಿ ಮೊದಲಾದ ಮಠಾಧ್ಯಕ್ಷರು, ಮಾಜಿ ಶಾಸಕ ಸಿ.ಎಸ್. ನಿರಂಜನ ಕುಮಾರ್, ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಹಂಗಳ ಪ್ರಣಯ್ ಸೇರಿದಂತೆ ಅಪಾರ ಭಕ್ತರು ಮತ್ತು ಗಣ್ಯರು ಭೇಟಿ ನೀಡಿ ಅಂತಿಮ ದರ್ಶನ ಪಡೆದರು.

ಸಂತಾಪ: ಶ್ರೀಗಳವರ ಆತ್ಮಕ್ಕೆ ಶಾಂತಿಯನ್ನು ಹಾಗೂ ಶ್ರೀಮಠದ ಭಕ್ತಾದಿಗಳಿಗೆ ಅಗಲಿಕೆಯ ದುಃಖವನ್ನು ಭರಿಸುವ ಶಕ್ತಿಯನ್ನು ಭಗವಂತನು ನೀಡಲೆಂದು ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ವೀರಶೈವ–ಲಿಂಗಾಯತ ಮಠಾಧಿಪತಿಗಳ ಗೋಷ್ಠಿಯ ಕಾರ್ಯದರ್ಶಿ ಸರ್ಪಭೂಷಣ ಸ್ವಾಮೀಜಿ, ಕ್ಷೇತ್ರದ ಶಾಸಕ ಹೆಚ್.ಎಂ.ಗಣೇಶ್‌ಪ್ರಸಾದ್, ಮತ್ತಿತರೆ ಗಣ್ಯರು ತೀವ್ರ ಸಂತಾಪ ಸೂಚಿಸಿದ್ದಾರೆ.

ಆಪರೇಷನ್ ಅಭ್ಯಾಸ್ ಅಣಕು ಯಶಸ್ವಿ ಕಾರ್ಯಾಚರಣೆ

ಚಾಮರಾಜನಗರ, ಮೇ 16 – ಉದ್ವಿಗ್ನತೆಯ ತುರ್ತು ಸಂದರ್ಭದಲ್ಲಿ ನಾಗರಿಕರನ್ನು ರಕ್ಷಿಸುವ ಕುರಿತು ನಗರದ ಚಾಮರಾಜೇಶ್ವರ ದೇವಾಲಯದ ಅವರಣದಲ್ಲಿ 'ಅಪರೇಷನ್ ಅಭ್ಯಾಸ್' ಅಡಿ ಜಿಲ್ಲಾಡಳಿತ ಆಯೋಜಿಸಿದ್ದ ಅಣಕು ಕಾರ್ಯಾಚರಣೆ ಸಂಜೆ ಯಶಸ್ವಿಯಾಗಿ ನಡೆಸಲಾಯಿತು.

ಚಾಮರಾಜೇಶ್ವರ ದೇವಾಲಯದ ಅವರಣದಲ್ಲಿ ವಾಯುದಾಳಿ, ಬಾಂಬ್ ಸ್ಫೋಟದ ಮೂಲಕ ಉಂಟಾಗುವ ಸನ್ನಿವೇಶವನ್ನು ಕಾಲ್ಪನಿಕವಾಗಿ ಸೃಷ್ಟಿಸಿ ಅದನ್ನು ಎದುರಿಸುವ ಬಗ್ಗೆ ಅಣಕು ಕಾರ್ಯಾಚರಣೆ ಆಯೋಜಿಸಲಾಗಿತ್ತು. ಬಾಂಬ್, ಗ್ರೇನೆಡ್‌ನಂತಹ ಮಾದರಿಯ ಕೃತಕ ವಸ್ತುಗಳನ್ನು ಸ್ಫೋಟಿಸಿ ಭಕ್ತರು ಗಾಯಗೊಳ್ಳುವ ಹಾಗೂ ದೇವಾಲಯದ ಸುತ್ತಮುತ್ತಲ ಪ್ರದೇಶದಲ್ಲಿ ಸಾರ್ವಜನಿಕರು ಗಲಿಬಿಲಿಗೊಳ್ಳುವಂತೆ ಸನ್ನಿವೇಶ ಸೃಷ್ಟಿಸಲಾಗಿತ್ತು.

ಬಾಂಬ್, ಗ್ರೇನೆಡ್ ನಿಮಿಷಗಳ ಅಂತರದಲ್ಲಿ ಭಾರಿ ಶಬ್ದದೊಂದಿಗೆ ಸ್ಫೋಟಿಸಿದಾಗ ಹಲವು ಭಕ್ತರು ರಕ್ತಸಿಕ್ತವಾಗಿ ಗಾಯಗೊಂಡು ಚೀರಾಡುತ್ತಾ ದೇವಾಲಯದ ಒಳಗಿನಿಂದ ಹೊರಬಂದ ದೃಶ್ಯ ನೈಜದಂತೆ ಭಾಸವಾಯಿತು. ಬಾಂಬ್ ಸ್ಫೋಟದ ಸುದ್ದಿ



ಜಿಲ್ಲಾಡಳಿತ ಆಯೋಜಿಸಿದ್ದ ಅಣಕು ಕಾರ್ಯಾಚರಣೆ ಇಂದು ಸಂಜೆ ಯಶಸ್ವಿಯಾಗಿ ನಡೆಸಲಾಯಿತು.

ತಿಳಿಯುತ್ತಿದ್ದಂತೆ ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಅಗ್ನಿಶಾಮಕ ದಳ, ಪೊಲೀಸ್, ಇನ್ನಿತರ ಅಧಿಕಾರಿಗಳಿಗೆ ಮಾಹಿತಿ ನೀಡಲಾಯಿತು. ಸೈರನ್‌ಗಳು ಮೊಳಗಿದವು. ಅಗ್ನಿಶಾಮಕ ದಳ ಬಾಂಬ್ ಸ್ಫೋಟದಿಂದ ಹೊತ್ತಿ ಉರಿಯುತ್ತಿದ್ದ ಬೆಂಕಿಯನ್ನು ನಂದಿಸಿದರು. ಪೊಲೀಸರು, ರಕ್ಷಾದಳ, ಗೃಹರಕ್ಷಕ ದಳ ಗಾಯಾಳುಗಳನ್ನು ಕರೆ ತರುತ್ತಿದ್ದಂತೆಯೇ ವೈದ್ಯರು, ಶುಶ್ರೂಷಕರು ಗಂಭೀರವಾಗಿ ಗಾಯಗೊಂಡವರನ್ನು ಆಸ್ಪತ್ರೆಗೆ ಕರೆದೊಯ್ದರು. ಕೆಲವರಿಗೆ ಸ್ಥಳದಲ್ಲಿಯೇ ಪ್ರಾಥಮಿಕ ಚಿಕಿತ್ಸೆ ನೀಡಲಾಯಿತು. ಬಸ್ಸುಗಳು, ಅಂಬುಲೆನ್ಸ್‌ಗಳ ಮೂಲಕ ಗಾಯಾಳುಗಳನ್ನು ಆಸ್ಪತ್ರೆಗೆ ರವಾನಿಸಲಾಯಿತು. ಸ್ಥಳದಲ್ಲಿದ್ದವರನ್ನು ಸುರಕ್ಷಿತವಾಗಿ ಸ್ಥಳಾಂತರ ಮಾಡಲಾಯಿತು. ಯಾರೂ ಹತ್ತಿರ ಬರದಂತೆ, ಅತಂಕಗೊಳ್ಳದಂತೆ ಧ್ವನಿವರ್ಧಕದ ಮೂಲಕ ತಿಳಿಸಲಾಯಿತು. ಕೆಲಹೊತ್ತು ಬ್ಲ್ಯಾಕ್ ಔಟ್ ಮಾಡಲಾಯಿತು.

ಉದ್ವಿಗ್ನತೆಯ ಹಿನ್ನೆಲೆಯಲ್ಲಿ ಯಾವುದೇ ಅವಘಡಗಳು ಸಂಭವಿಸಿದಾಗ ಅದನ್ನು ಎದುರಿಸಲು ಸನ್ನದ್ಧರಾಗಿರ ಬೇಕೆಂಬ ಹಿನ್ನೆಲೆಯಲ್ಲಿ ಮಾಕ್ ಡ್ರಿಲ್ (ಅಣಕು ಕಾರ್ಯಾಚರಣೆ) ನಡೆಸುವಂತೆ ಸರ್ಕಾರದಿಂದ ಸೂಚನೆ ನೀಡಲಾಗಿತ್ತು. ಅದರಂತೆ ಪೊಲೀಸ್, ಅಗ್ನಿಶಾಮಕ, ಗೃಹರಕ್ಷಕ ದಳ, ಕಂದಾಯ, ಆರೋಗ್ಯ, ನಗರಾಡಳಿತ ಸೇರಿದಂತೆ ಹಲವು ಇಲಾಖೆಗಳು ವಹಿಸಬೇಕಿರುವ ಪಾತ್ರಗಳ ಕುರಿತು ಕಾಲ್ಪನಿಕ ವಿಪತ್ತು ಸನ್ನಿವೇಶ ಸೃಷ್ಟಿಸಿ ಕಾರ್ಯಾಚರಣೆ ನಡೆಸಲಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ತಿಳಿಸಿದರು.

ಜಿಲ್ಲಾ ಎಸ್‌ಪಿ ಡಾ. ಬಿ.ಟಿ.ಕವಿತಾ ಮಾತನಾಡಿದರು. ನಗರಸಭೆ ಅಧ್ಯಕ್ಷ ಎಸ್.ಸುರೇಶ್, ಜಿಪಂ ಸಿಇಓ ಮೋನಾ ರೋತ್, ಎಡಿಸಿ ಗೀತಾ ಹುಡೇದ, ಅಡಿಷನಲ್ ಎಸ್‌ಪಿ ಎಂ.ಎನ್. ಶಶಿಧರ್, ಎಸಿ ಬಿ.ಆರ್. ಮಹೇಶ್, ತಹಶೀಲ್ದಾರ್ ಗಿರಿಜ, ಅಗ್ನಿಶಾಮಕ ಅಧಿಕಾರಿ ಪ್ರಶಾಂತ್ ಪಾಟೀಲ್, ಆರೋಗ್ಯಾಧಿಕಾರಿ ಡಾ. ಚಿದಂಬರ, ಅಧಿಕಾರಿಗಳು ಇದ್ದರು.

ಐಸ್‌ಕ್ರೀಂ ಘಟಕ ನಿರ್ಮಾಣಕ್ಕೆ ವಿರೋಧ: ವೈ.ಎನ್.ನಾಗೇಂದ್ರ

ರೈತ ಸಂಘದ ಹೋರಾಟಕ್ಕೆ ಬೆಂಬಲ



ಚಾಮುಲ್ ಮಾಜಿ ಅಧ್ಯಕ್ಷ ವೈ.ಸಿ. ನಾಗೇಂದ್ರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು

ಚಾಮರಾಜನಗರ, ಮೇ 16–(ಎಸ್‌ಎಸ್) ಈಗಾಗಲೇ ಸಾಲದಲ್ಲಿರುವ ಹಾಲು ಒಕ್ಕೂಟವು ಇನ್ನೂ ಮೂಲ ಬಂಡವಾಳವೇ ಇಲ್ಲದೇ ಐಸ್‌ಕ್ರೀಂ ಘಟಕ ಸ್ಥಾಪನೆಯಿಂದ ಮತ್ತಷ್ಟು ಸಾಲದ ಕೂಪಕ್ಕೆ ರೈತರನ್ನು ದೂಡಿದಂತಾಗುತ್ತದೆ. ಹೀಗಾಗಿ ಘಟಕ ಸ್ಥಾಪನೆಯನ್ನು ಸಂಪೂರ್ಣ ವಿರೋಧಿಸುವುದಾಗಿ ಚಾಮುಲ್ ಮಾಜಿ ಅಧ್ಯಕ್ಷ ವೈ.ಸಿ. ನಾಗೇಂದ್ರ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಮಾತನಾಡಿದ ಅವರು, ಜಿಲ್ಲೆಗೆ ಪ್ರತ್ಯೇಕ ಹಾಲು ಒಕ್ಕೂಟ ನಿರ್ಮಾಣ ಮಾಡಬೇಕೆಂಬ ಮಹದೇವಪ್ರಸಾದ್ ಆಶಯದಂತೆ ಘಟಕ ಕಾರ್ಯನಿರ್ವಹಣೆ ಮಾಡುತ್ತಿದ್ದೆ. ಕೆಎಂಎಫ್, ಕೇಂದ್ರ ಸರ್ಕಾರದ ಸಹಾಯಧನ ಸೇರಿ ಬ್ಯಾಂಕಿನಿಂದ ಕಡಿಮೆ ಬಡ್ಡಿ ದರದಲ್ಲಿ ಸಾಲ ಪಡೆದು ಘಟಕ ನಿರ್ಮಿಸಲು ಅನುಮೋದನೆ ಕೊಟ್ಟಿದ್ದು ನಿಜ. ಆದರೆ, ಕೇಂದ್ರ ಸರ್ಕಾರ ಸಬ್ಸಿಡಿ 5 ಕೋಟಿಗೆ ಇಳಿಸಿ, ನಮ್ಮ ಮನವಿಗೆ ಸ್ಪಂದಿಸದ ಕಾರಣ ವಿಳಂಬ ಮಾಡಿದ್ದೆ ಇದನ್ನೇ ಮಾನದಂಡವಾಗಿಟ್ಟು ನನ್ನ ಅವಧಿಯಲ್ಲಿ ಐಸ್‌ಕ್ರಿಂ ಘಟಕ ನಿರ್ಮಾಣಕ್ಕೆ ಅನುಮೋದನೆಯಾಗಿತ್ತು ಎಂದು ಸುಳ್ಳು ಹೇಳಿಕೆಯನ್ನು ನೀಡಿ, ಈಗಿನ ಅಧ್ಯಕ್ಷರು ಹಾಲು ಉತ್ಪಾದಕ ರೈತರನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಬೆಂಬಲ : ರೈತ ಸಂಘಟನೆಗಳು ಮೇ 27 ರಂದು ಕರೆ ನೀಡಿರುವ ಪ್ರತಿಭಟನೆಗೆ ಹೆಚ್ಚಿನ ಬೆಂಬಲ ನೀಡಬೇಕು ಎಂದು ನಾಗೇಂದ್ರ ಮನವಿ ಮಾಡಿದರು. ಪತ್ರಿಕಾಗೋಷ್ಠಿಯಲ್ಲಿ ಕುದೇರು ಡೇರಿ ಅಧ್ಯಕ್ಷ ಕೆ.ಎನ್. ಫಣಿರಾಜ್‌ಮೂರ್ತಿ, ಹಳ್ಳಿಕೆರೆ ಹುಂಡಿ ಡೇರಿ ಅಧ್ಯಕ್ಷ ಶಿವಸ್ವಾಮಿ, ಟಿ. ಹೊಸೂರು ಡೇರಿ ಅಧ್ಯಕ್ಷ ರಾಜಣ್ಣ, ಬೂದಿತಿಟ್ಟು ನಾಗರಾಜು ಇದ್ದರು.

'ರಾಜೀವ್ ಗಾಂಧಿ ಜ್ಯೋತಿಯಾತ್ರೆ'ಗೆ ಸ್ವಾಗತ



ಚಾಮರಾಜನಗರದಲ್ಲಿ ರಾಜೀವ್ ಗಾಂಧಿ ಜ್ಯೋತಿಯಾತ್ರೆಗೆ ಜಿಲ್ಲಾಕಾಂಗ್ರೆಸ್ ಸಮಿತಿಯಿಂದ ಅದ್ದೂರಿಯಾಗಿ ಸ್ವಾಗತ ಕೋರಲಾಯಿತು.

ಚಾಮರಾಜನಗರ, ಮೇ 16–ಜಿಲ್ಲಾ ಕೇಂದ್ರಕ್ಕೆ ಆಗಮಿಸಿದ ರಾಜೀವ್ ಗಾಂಧಿ ಜ್ಯೋತಿ ಯಾತ್ರೆಗೆ ಜಿಲ್ಲಾ ಕಾಂಗ್ರೆಸ್‌ನಿಂದ ಶುಕ್ರವಾರ ಅದ್ದೂರಿಯಾಗಿ ಸ್ವಾಗತ ಕೋರಲಾಯಿತು.

ಬೆಂಗಳೂರು, ರಾಮನಗರ, ಮಂಡ್ಯ, ಮೈಸೂರು, ಗುಂಡ್ಲುಪೇಟೆ ಮೂಲಕ ನಗರವನ್ನು ಪ್ರವೇಶಿಸಿದ ರಾಜೀವ್ ಗಾಂಧಿ ಜ್ಯೋತಿಯಾತ್ರೆಗೆ ಸ್ವಾಗತಕೋರಿದ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಪಿ.ಮರಿಸ್ವಾಮಿ ಮಾತನಾಡಿ, ಮೇ 15ರಿಂದ ಬೆಂಗಳೂರಿನಿಂದ ಹೊರಟ ರಾಜೀವ್ ಗಾಂಧಿ ಜ್ಯೋತಿ ಯಾತ್ರೆ ನಗರಕ್ಕೆ ಬಂದಿದ್ದು, ಸತ್ಯಮಂಗಲ, ಕೊಯಮತ್ತೂರು. ಪಾಲಕ್ಕಾಡು, ಕೊಚ್ಚಿನ್, ಕೋಲಂ, ತ್ರಿವೆಂಡ್ರಂ,ಕನ್ಯಾಕುಮಾರಿ, ತಿರುನಲ್ವೇಲಿ ಮೂಲಕ ಮೇ 21ರಂದು ಪೆರಂಬದೂರಿಗೆ ತಲುಪಲಿದೆ ಎಂದರು.

ದೇಶದ ಏಕೀಕರಣ, ರಾಷ್ಟ್ರನಿರ್ಮಾಣ ಹಾಗೂ ದೇಶದ ಏಕತೆಯನ್ನು ಬಲಪಡಿಸುವ ಸಂದೇಶ. ರಾಜೀವ್ ಗಾಂಧಿಯವರು ದೇಶಕ್ಕೆ ನೀಡಿರುವ ಕೊಡುಗೆಗಳನ್ನು ರಾಜೀವ್ ಗಾಂಧಿ ಜ್ಯೋತಿಯಾತ್ರೆಯಲ್ಲಿ ಅರಿವು ಮೂಡಿಸಲಾಗುತ್ತಿದೆ ಎಂದರು. ನಂತರ ರಾಜೀವ್ ಗಾಂಧಿ ಜ್ಯೋತಿಯಾತ್ರೆಯನ್ನು ತಮಿಳುನಾಡಿಗೆ ಬೀಳ್ಕೊಡಲಾಯಿತು.

ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ. ರವಿಕುಮಾರ್, ಚುಡಾ ಅಧ್ಯಕ್ಷ ಮಹಮದ್ ಅಸ್ಗರ್, ಸದಸ್ಯರಾದ, ರಾಜು, ಪುಟ್ಟಸ್ವಾಮಿ, ನಗರಸಭೆ ನಾಮ ನಿರ್ದೇಶನ ಸದಸ್ಯ ಸ್ವಾಮಿ, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಸದಸ್ಯ ಕುಮಾರ್, ಮರಿಯಾಲದಹುಂಡಿ, ಕುಮಾರ್ ರಾಜ್ಯ ಮಹಿಳಾ ಕಾಂಗ್ರೆಸ್ ಉಪಾಧ್ಯಕ್ಷೆ ಪದ್ಮ ಪುರುಷೋತ್ತಮ್ ಜಿಪಂ ಮಾಜಿ ಸದಸ್ಯೆ ಕಾವೇರಿ ಶಿವಕುಮಾರ್, ನಗರಸಭೆ ಮಾಜಿ ಸದಸ್ಯ ಮಹದೇವು, ರವಿಗೌಡ, ಅಶೋಕ್, ರಾಮಸಮುದ್ರ, ಮುರುಘ, ಮಹೇಶ್, ಅಪ್ಸರ್‌ಅಹಮದ್, ಸಾದಿಕ್ ಇತರರು ಹಾಜರಿದ್ದರು.

ಆರೋಪ ಸಾಬೀತು ಮಾಡಿದರೆ ಸಹಕಾರ ಕ್ಷೇತ್ರದಿಂದ ಹಿಂದೆ ಸರಿಯುವೆ

ನೂತನ ನಿರ್ದೇಶಕ ಆರ್.ನರೇಂದ್ರ ಸವಾಲು

ಹನೂರು, (ಸೋಮ): ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಷೇರುದಾರರನ್ನು ಕೈ ಬಿಟ್ಟಿರುವ ಬಗ್ಗೆ ಸೂಕ್ತ ದಾಖಲಾತಿಯೊಂದಿಗೆ ಸಾಬೀತು ಮಾಡಿದರೆ ನಾನು ಸಹಕಾರ ಕ್ಷೇತ್ರದಿಂದ ಹಿಂದೆ ಸರಿಯುವೆ, ಇಲ್ಲದಿದ್ದರೆ ನೀವು ಸಹಕಾರ ಕ್ಷೇತ್ರದಿಂದ ಹಿಂದೆ ಸರಿಯಬೇಕು ಎಂದು ನೂತನ ನಿರ್ದೇಶಕ ಆರ್.ನರೇಂದ್ರ ಸವಾಲು ಹಾಕಿದ್ದಾರೆ.

ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ನೂತನ ನಿರ್ದೇಶಕರ ಜೊತೆ ಅನೌಪಚಾರಿಕವಾಗಿ ಕರೆಯಲಾಗಿದ್ದ ಸಭೆಯಲ್ಲಿ ಮಾತನಾಡಿದ ಅವರು, ಸಹಕಾರ ಕ್ಷೇತ್ರದಲ್ಲಿ ರಾಜಕೀಯ ತರಬಾರದು ಎಂಬ ಸದುದ್ದೇಶದಿಂದ ಮೂರು ಪಕ್ಷದ ಷೇರುದಾರರನ್ನು ನಿರ್ದೇಶಕರನ್ನಾಗಿ ಮಾಡಲಾಗಿದೆ ಇಲ್ಲದಿದ್ದರೆ ನಮ್ಮ ಪಕ್ಷದವರನ್ನು ನಿರ್ದೇಶಕರನ್ನಾಗಿ ಮಾಡಿಕೊಳ್ಳಬಹುದಾಗಿತ್ತು. ಕಳೆದ ಎರಡು ಅವಧಿಯಲ್ಲಿಯೂ ನಿಮ್ಮ ಮೈತ್ರಿ ಪಕ್ಷದ ಅಭ್ಯರ್ಥಿಗಳನ್ನು ನಿರ್ದೇಶಕರನ್ನಾಗಿ ಮಾಡಲಾಗಿತ್ತು. ನಾವು ಅವ್ಯವಹಾರ ಮಾಡಿರುವ ದಾಖಲಾತಿಗಳಿದ್ದರೆ ಅದನ್ನು ಸಾಬೀತುಪಡಿಸಲಿ ಎಂದು ತಿಳಿಸಿದರು.

ನಾವು ಎಂಎಲ್‌ಎ, ಎಂಪಿ, ಜಿಲ್ಲಾ ಪಂಚಾಯಿತಿ ತಾಲೂಕು ಪಂಚಾಯಿತಿ ಚುನಾವಣೆಗಳಲ್ಲಿ ರಾಜಕೀಯ ಮಾಡೋಣ ಅದರಲ್ಲಿ ನಮ್ಮ ನಮ್ಮ ಶಕ್ತಿ ಸಾಬೀತುಪಡಿಸೋಣ ಅದನ್ನು ಬಿಟ್ಟು ಸಹಕಾರ ಕ್ಷೇತ್ರದಲ್ಲಿ ರಾಜಕೀಯ ಮಾಡಬಾರದು ಎಂಬುದು ನನ್ನ ನಿಲುವು, ನೀವು ರೈತರ ಪರವಾಗಿದ್ದರೆ ಮುಂದಿನ ದಿನಗಳಲ್ಲಿ ಸಹಕಾರ ಕ್ಷೇತ್ರದಲ್ಲಿ ಚುನಾವಣೆಗೆ ಅವಕಾಶ ಮಾಡಿಕೊಡಬಾರದು. ನೀವು ರೈತ ವಿರೋಧಿ ಗಳಾಗಿದ್ದರೆ ಹಣದ ಮದ ಹೆಚ್ಚಾಗಿದ್ದರೆ ಚುನಾವಣೆಗೆ ಅವಕಾಶ ಮಾಡಿಕೊಡುತ್ತೀರಾ ಎಂದರು.

ಸಭೆಯಲ್ಲಿ ನೂತನ ನಿರ್ದೇಶಕರಾದ ಶ್ರೀನಿವಾಸ್ ಗೌಡ, ಅನಿಲ್ ಕುಮಾರ್, ನಟರಾಜು, ತಾಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಕೆ.ಸಿ ಮಾದೇಶ್, ಪಟ್ಟಣ ಪಂಚಾಯಿತಿ ಸದಸ್ಯರಾದ ಗಿರೀಶ್ ಹರೀಶ್, ಸುದೇಶ್, ಬಸವರಾಜು ಮುಖಂಡರಾದ ಮಲ್ಲುಸ್ವಾಮಿ, ಹುಣಸೆ ಪಾಳ್ಯ ನಾಗೇಂದ್ರ, ಅಂಕರಾಜು, ಜಗದೀಶ್, ನಾಗೇಶ್, ಮಾದೇಶ್, ರಾಜೇಶ್ ಸೇರಿದಂತೆ ಇನ್ನಿತರರು ಹಾಜರಿದ್ದರು.

ಹಸಿರು ನಮ್ಮ ಉಸಿರು

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ

ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

SBIT TRAVELS
Fixed Departure
ODISHA 5 DAYS
July 18th
Air tickets | Meals | Hotel | Sightseeing | All tours and transfers
9343524127
(Saraswathipuram, Mysuru)

WANTED TEACHERS
JNANAJYOTHI VIDYALAYA
Beerihundi. English medium. (High school).
Wanted Mathematics, Hindi, Social science, English teacher immediately.
9845390377
8197057626

DTCP SITES FOR SALE
ಹುಣಸೂರಿನ ಕೋಟೆ ರಸ್ತೆಯ "VCR ದೇವಗಿರಿ" ಬಡಾವಣೆ ನಿವೇಶನಗಳು ಮಾರಾಟಕ್ಕಿವೆ.
9886048471, 9036291192

ಮೈಸೂರು, ಮಂಡ್ಯ, ಚಾಮರಾಜನಗರ, ಕೊಡಗು ಜಿಲ್ಲೆಯ ರೈತ ಬಾಂಧವರಿಗೆ ಒಂದು ಸದಾವಕಾಶ
ತೆಂಗು ಸಸಿಗಳನ್ನು ಬೆಳೆಸಿಕೊಡುವವರಿಗೆ ನಾವು ಬ್ಯಾಂಕಿನ ಸಾಲ ಸೌಲಭ್ಯ ಒದಗಿಸಿ ಸಸಿಗಳನ್ನು ಮಾರಾಟ ಮಾಡಿಕೊಡಲಾಗುವುದು. ಕೂಡಲೇ ಸಂಪರ್ಕಿಸಿ:
Mob: 8951525007

ಹೆಸರಾಂತ ಕಂಪನಿಯ ಅಪಾರ್ಟ್‌ಮೆಂಟ್‌ಗಳಲ್ಲಿ ಕೆಲಸಕ್ಕೆ ಬೇಕಾಗಿದ್ದಾರೆ
ಅನುಭವವುಳ್ಳ ಎಲೆಕ್ಟ್ರಿಷಿಯನ್, ಪ್ಲಂಬರ್ಸ್ ಹಾಗೂ ಕಲಿಯುವ ಆಸಕ್ತಿಯುಳ್ಳ ಯುವಕರು ಬೇಕಾಗಿದ್ದಾರೆ. ಅನುಭವಕ್ಕೆ ತಕ್ಕಂತೆ ವೇತನ
ಸಂಪರ್ಕಿಸಿ: 94823 86545

SITE FOR SALE
MANASI NAGARA 40X60
HANCHYA SATHGALLI 40X60 - 30X40
VIJAY NAGAR - 20X30
Cont: 9448447035

ಬೇಕಾದ್ದಾರೆ
ಶಾಲಾ ವಾಹನ ಚಲಾಯಿಸಲು ಲೈಸನ್ಸ್ ಹೊಂದಿದ್ದು 5 ವರ್ಷ ಅನುಭವವುಳ್ಳ ಅನುಭವಿ ಚಾಲಕರು ಬೇಕಾಗಿದ್ದಾರೆ.
8123093500

ಸೈಟ್ ಬೇಕಾಗಿದೆ
ನಿತ್ಯಾನಂದ ಸಾಗರ ಅಥವಾ ಕುಬೇರನಂದ ಸಾಗರದಲ್ಲಿ ಸೈಟ್ ಬೇಕಾಗಿದೆ.
ಮಾಲೀಕರು ಸಂಪರ್ಕಿಸಿ
9538032165

ಬೇಕಾಗಿದ್ದಾರೆ
ಸಸ್ಯಾಹಾರಿ ಹೋಟೆಲ್‌ಗೆ ಒಬ್ಬ ಅಡಿಗೆ ಸಹಾಯಕ ಚೈನಿಸ್ ಮತ್ತು ಚಾಟ್ ತಯಾರಕ ದೋಸೆಯವರು, ಸೂಪರ್ ವೈಸರ್ ಬೇಕಾಗಿದ್ದಾರೆ.
9916206561

ಬಸವಮಾರ್ಗ ವ್ಯಸನಮುಕ್ತ ದೇವಸ್ಥಾನ
10 ದಿನಗಳ ಸಂಪೂರ್ಣ ಉಚಿತ ಕುಡಿತ ಬಿಡಿಸುವ ಶಿಬಿರ ಜೂ.1 ರಿಂದ 10ರ ವರೆಗೆ
88033-44999
97429-19191

Document Lost
S. Harish Kumar, #52/10, 2nd Cross, Latjinagar, Lakkasandra, Bangalore South, Adugodi-560 030, I lost my sale deed documents at bus travel, Yelahanka New Town Bus at Atturu Bus Stop, Yelahanka on 28-4-2025. Finders please contact:
Mob: 9448049492

TEACHERS WANTED
S.G.C.M. Education Trust (R)
T.Narasipura, Mysore Dist.
English Medium
PUC, D.Ed. - 2 Posts
B.A., B.Ed. - Kannada - 1 Post
B.A., B.Ed. - Hindi - 1 Post
B.Sc., B.Ed. - PCM - 1 Post
B.Sc., B.Ed. CBZ - 1 Post
9880361180, 9742496113

ಬೋಳು ತಲೆಯ ಸಮಸ್ಯೆಯೇ?



ಕಿಮೊತೆರಪಿ ಚಿಕಿತ್ಸೆಗೆ ಒಳಪಡುತ್ತಿರುವ ರೋಗಿಗಳಿಗೆ ಸ್ಪರ್ಧಾತ್ಮಕ ಬೆಲೆಯಲ್ಲಿ ಹೇರ್ ವಿಗ್‌ಗಳು ದೊರೆಯುತ್ತವೆ.
SMART HAIR FIXING
574, 9th Cross, Anikethara Road, kuvempunagar, Mysuru
MYSURU 9611028523 MANGALORE 9343142258

ಬೇಕಾಗಿದ್ದಾರೆ
ಪ್ರಿಂಟಿಂಗ್ ಪ್ರೆಸ್‌ಗೆ
Kannada DTP, Photoshop And Coreldraw ಡಿಸೈನರ್‌ಗಳು ಬೇಕಾಗಿದ್ದಾರೆ.
ಅನುಭವ ಇದ್ದವರಿಗೆ ಮೊದಲ ಆದ್ಯತೆ
ಮೊ : 9449853308

ಉತ್ತಮ ಆರೋಗ್ಯ ಮನಃಶಾಂತಿಗಾಗಿ
ಸಿದ್ಧ ಸಮಾಧಿ ಯೋಗ ಶಿಬಿರ ಪ್ರಾಣಾಯಾಮ, ಧ್ಯಾನ, ಆಹಾರಕ್ರಮ, ವ್ಯಕ್ತಿತ್ವ ವಿಕಾಶ ದಿ.19–05–25 ಸೋಮವಾರ ಸಂಜೆ 6 ಗಂಟೆಗೆ ಶಿಬಿರದ ಬಗ್ಗೆ ಉಚಿತ ಪರಿಚಯ ಹಾಗೂ ಶಿಬಿರ ಪ್ರಾರಂಭ (14ದಿನಗಳು) ಸ್ಥಳ ಋಷಿ ಸಂಸ್ಕೃತಿ ವಿದ್ಯಾ ಕೇಂದ್ರ, ಕುವೆಂಪುನಗರ, ಮೈಸೂರು
9448458050,8618762110

WANTED
We requires female candidate for Accountant post with Bcom having 2 to 3 years of work experience related to handle Accounts/Tally independently Pl mail the resume to sselmech@gmail.com
9886329428

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 9606838940

ಮುಡಾ ಸೈಟು ಮಾರಾಟಕ್ಕಿದೆ
30x30 East Facing
ಜೆ.ಪಿ. ನಗರ ರಿಂಗ್ ರಸ್ತೆ ಪಕ್ಕದಲ್ಲಿ ಕೊಪ್ಪಲೂರು, ಮೈಸೂರು
7411848108

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 7204494854

DTCP Sites for Sale
Thalur Circle, Mysuru
Rs. 1800/- per sq.ft.
H.D. Kote Road
Mob: 9611110601

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 8618373596

SRC Mysore
D.Salundi(v), Jayapura Hobali, H.D Kote Road, Mysore.
Wanted Teachers For High School.
Hindi Teacher-1 Post
Primery English-1 Post
Office Management-1 Post
9741219572

WANTED
OT / ER / ICU
Pharmacist
Duty Doctor
For a Reputed Multi Speciality Hospital
8129717802

Residential Site for Sale
Kuvempunagar E & F Block
30x55
Attractive Rate.
Mob: 9845005718

HOUSE FOR RENT
Independent red oxide house available for rent on Theobald Main Road, Nazarbad, suitable for office purose / clinics.
9611105747, 9900735747

HOUSE FOR SALE
Kuvempunagar E & F Block
40x60 West Facing G+1 Floors, 5 BHK house. Contact:
Mob: 9449323272

WANTED
Reputed Pan Masala Company needed sales boys to sell the product. Good salary & commission wil be given. Contact:
Mob: 9986462204

Job Opportunities
KOUSHIK CONSULTANTS ENGINEERING SERVICES PVT. LTD., MYSORE. We are hiring * Site Engineers (Site / Office): B.E. / Diploma in Civil Engineering (Freshers welcome). * Field Survey Boys : SSLC / PUC (Pass or Fail). Walk-in interview. 1169/A, 2nd Floor, T.K. Layout, 4th Stage, Ramakrishnanagar Post, Near Diganta Circle, Mysore-22. Mon - Sat, 10 am to 5 pm
9986246267, 9591015424
Please bring your printed CV.

ತಕ್ಷಣ ಬೇಕಾಗಿದ್ದಾರೆ
ವಿದ್ಯಾರಣ್ಯಪುರಂ ಏರಿಯಾದಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡುಗಳು ಬೇಕಾಗಿದ್ದಾರೆ.
ವಿದ್ಯಾರ್ಹತೆ : SSLC & ಮೇಲ್ಪಟ್ಟು
ಸಂಬಳ: 17000+W/o 8hrs
ಸಂಪರ್ಕಿಸಬೇಕಾದ ಸಂಖ್ಯೆಗಳು
7006635122
9880727819

WANTED
FOR LAND DEVELOPER OFFICE
1) ENGINEER -1 MALE
2) ACCOUNTS ASSISTANT-1 FEMALE
3) COOK (ಅಡುಗೆಯವರು)- 1 FEMALE
4) HOUSE MAID (ಮನೆ ಕೆಲಸದವರು) 1 FEMALE
08212951079
8310257589

ಹುಣಸೂರಿನಲ್ಲಿ ಮನೆ ಮಾರಾಟಕ್ಕಿದೆ
30x50 ರಲ್ಲಿ 20 ಚದರ ಅಳತೆಯ 2 ಬಿಹೆಚ್‌ಕೆ, 3 ಮನೆಗಳು, ಕೆಹೆಚ್‌ಬಿ ಕಾಲೋನಿ, ಆರ್‌ಟಿಓ ಕಛೇರಿ ಹತ್ತಿರ ಮಾರಾಟಕ್ಕಿದೆ.
9449680548, 6363027089

COMMERCIAL PLOT FOR SALE
Metagalli Junction Service Road (Ring Road), Behind Royal Inn Hotel, 5100 sq.ft. area.
Mob: 9845267278

FOR SALE
40x60 W/F at Vijayanagar 4th Stage, 2nd Phase, very close to Ring Road.
Mob: 9480202090

2 BHK ON 20x40 EAST
Architect Design – 100% Vaastu
Lingadevara Koppal, Hunsur Road,
Ready to Occupy (Avail Loan)
9886697052

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

ಜಮೀನು ಹಾಗೂ ಪಿಜಿ ಕಟ್ಟಡ ಬಾಡಿಗೆಗೆ
ಮೈಸೂರು ತಾ॥ ಬೋಗಾದಿ ರಿಂಗ್ ರಸ್ತೆಯಿಂದ 3 ಕಿ.ಮೀ ದೂರದಲ್ಲಿ ಎಲ್ಲಾ ಸೌಕರ್ಯವಿರುವ/ವಿವಿಧ ಉದ್ದೇಶಕ್ಕೆ 2 1/4 ಎಕರೆ ಜಮೀನು ಬಾಡಿಗೆಗಿದೆ ಹಾಗೂ ಎಲ್ಲಾ ಪಿಠೋಪಕರಣಗಳಿರು 8 ದೊಡ್ಡರೂಮಿನ ಕಟ್ಟಡ ಅಪೋಲೋ ಆಸ್ಪತ್ರೆ ಹತ್ತಿರ ಬಾಡಿಗೆಗೆ ಸಂಪರ್ಕಿಸಿ:
8197609290

ವಧು–ವರಾನ್ವೇಷಣೆ
ಒಕ್ಕಲಿಗ/ಕುರುಬ/ಲಿಂಗಾಯತ/ನಾಯಕ/SC & ಎಲ್ಲಾ ಜಾತಿಯ ವಧು–ವರರಿಗಾಗಿ ಕೂಡಲೇ ಸಂಪರ್ಕಿಸಿ:
(II Marriages Also)
9343175000

ನಿರುದ್ಯೋಗಿಗಳಿಗೊಂದು ಸುವರ್ಣಾವಕಾಶ
ಮನೆಯಲ್ಲೇ ಕುಳಿತು ಟಾರ್ಗೆಟ್ ಇಲ್ಲದೆ ಬರವಣಿಗೆ ಮೂಲಕ 9 ರಿಂದ 30 ಸಾವಿರದವರೆಗೆ ಹಣಗಳಿಸುವ ಸುವರ್ಣಾವಕಾಶ. ಆಸಕ್ತರು ಸಂಪರ್ಕಿಸಿ:
6361056646, 7676844160

WANTED URGENT
ಕ್ರಿಯಾಶೀಲ ಯುವಕ ಯುವತಿಯರು Age (18-24) TRAINEE ANAGERಗಳಾಗಿ 10th, PUC, Deplomo, ITI ಯಾದ Earn (10400/- ರಿಂದ 18500/-) pm *NO FEE* ಪರಸ್ಥಳದವರಿಗೆ ಮಾತ್ರ ವಸತಿ ತಮ್ಮ ವಿವರಗಳೊಂದಿಗೆ ನೇರ ಸಂಪರ್ಕಿಸಿ, ಮೈಸೂರು
9342827788
9342238667
TIME (11 AM to 3PM)

WANTED
Male - 5 Nos.
Female - 5 Nos.
Office Work and Executive Work
Qualification - Any Degree Pass or Fail
Call - 8147034927

SITE FOR SALE
East facing corner site, near Airport, MUDA khata and E-Khata ready. Rs. 40 Lakhs. Slightly negotiable.
Mob: 9342123373

ಸೈಟುಗಳು ಮಾರಾಟಕ್ಕಿವೆ
30x40, 40x60
ಶ್ರೀರಾಂಪುರ ರಿಂಗ್ ರೋಡ್ ಹಾಗೂ ಶ್ರೀನಗರ ಹಿಂಭಾಗ, ಮೈಸೂರು
Mob: 8050345574

ಬೇಕಾಗಿದ್ದಾರೆ
ಪೆಟ್ರೋಲ್ ಬಂಕ್‌ನಲ್ಲಿ ಹೆಲ್ಪರ್ ಮತ್ತು ಕ್ಯಾಷಿಯರ್ ಕೆಲಸ ಮಾಡಲು ಹುಡುಗರು ಮತ್ತು ಹುಡುಗಿಯರು ಬೇಕಾಗಿದ್ದಾರೆ.
ಸ್ಥಳ: ವಿಜಯನಗರ ವಾಟರ್ ಟ್ಯಾಂಕ್ ಹತ್ತಿರ, ಮೈಸೂರು ನಗರ
6364748485

ತಕ್ಷಣ ಕೆಲಸಕ್ಕೆ ಬೇಕಾಗಿದ್ದಾರೆ
ಮನೆಯಲ್ಲೇ ಉಳಿದು ವಯಸ್ಸಾದವರನ್ನು ನೋಡಿಕೊಳ್ಳಲು ಅನುಭವ ಇರುವ ಇಲ್ಲದೆ ಇರುವ ಪುರುಷ ಹಾಗೂ ಮಹಿಳೆಯರು ಬೇಕಾಗಿದ್ದಾರೆ.
24 ಗಂಟೆ ಸೇವೆ ಮಾಡುವವರು ಸಂಪರ್ಕಿಸಿ ಸಂಬಳ 15000 ರಿಂದ 25000
8123252840

ಮ್ಯಾಂಗೋ ಟ್ರೀ ಲೇಔಟ್
ಪೂರ್ಣ ಅಭಿವೃದ್ಧಿಹೊಂದಿದ ಸೈಟ್‌ಗಳು ಮಾರಾಟಕ್ಕಿವೆ
Govt. ಹೈಸ್ಕೂಲ್ ಮತ್ತು PU ಕಾಲೇಜು ಹತ್ತಿರ.
ಇಲವಾಲ ನಂತರ.
Mob: 9880774395

ಮನೆಯಿಂದಲೇ ಕೆಲಸ
ಗೃಹಿಣಿಯರು, ವಿದ್ಯಾರ್ಥಿಗಳು, ವಯಸ್ಕರು, ನಿವೃತ್ತಿ ಹೊಂದಿದವರು, ನಿಮ್ಮ ಬಿಡುವಿನ ವೇಳೆಯಲ್ಲಿ ಮನೆಯಲ್ಲಿಯೇ ಕುಳಿತು ಬುಕ್ ರೈಟಿಂಗ್, ಫಾರಂ ಫಿಲ್ಲಿಂಗ್, ಡಾಟಾ ಎಂಟ್ರಿ ಮೊಬೈಲ್ ಬಳಸಿ ಸ್ಟೋರಿ ಟೈಪಿಂಗ್ ಮತ್ತು ಪ್ಯಾಕಿಂಗ್ ಕೆಲಸಗಳು ಮಾಡಿ ಗಳಿಸಿ ತಿಂಗಳಿಗೆ 15000 ರಿಂದ 30,000 ದವರೆಗೆ, ಎಲರಿಗೂ ಮುಕ್ತ ಅವಕಾಶ. ಕರೆಮಾಡಿ.
8951232569, 7829483767

ಬನ್ನಿ ವಿಚಾರಿಸಿ
ನಿಮ್ಮ ಮಗ ಮಗಳು ಚೆನ್ನಾಗಿ ಓದುತ್ತಿಲ್ಲವೇ? ಚಿಂತಿಸಬೇಡಿ!
ಜ್ಞಾನ ಗಂಗೋತ್ರಿ ಕಾನ್ವೆಂಟ್, ಇಂಗ್ಲಿಷ್ ಮೀಡಿಯಂ ರಾಜೇಂದ್ರ ನಗರ, ಮೈಸೂರು 7
ಇಲ್ಲಿಗೆ ಸೇರಿಸಿ ನಿಮ್ಮ ಮಕ್ಕಳು ಜಾಣರಾಗಿ ವಿದ್ಯಾವಂತ ರಾಗುವುದನ್ನು ನೀವೇ ನೋಡಿ. Pre KG, LKG ಯಿಂದ ಹತ್ತನೇ ತರಗತಿ ವರೆಗೆ ಯಾವುದೇ ತರಗತಿಗೆ ಅಡ್ಮಿಶನ್ ದೊರೆಯುತ್ತದೆ.
Mob: 9113980741

ಸೈಟು ಮಾರಾಟಕ್ಕಿದೆ
30x60 E/F
ಬಿಇಎಂಎಲ್ ಲೇಔಟ್
ಜೆ.ಪಿ. ನಗರ, ಶ್ರೀ ನಗರ ಹತ್ತಿರ
Mob: 7676830832

PRAKRUTHI PROPERTIES
WISHES HAPPY UGADI
FOR SALE
30x40 @ 20 lakhs Near RT Nagar Including Registration
Apartments @ Ramakrishna Nagar
Residential & Commercial Plots in & around Mysore
20x30 New 2BHK House, As Per your Plan With Interiors @ Just 37 Lakh in Bogadi Including Registration
95386 90359, 90359 90359

ಕಂಕಣ ಭಾಗ್ಯ
ವಧು–ವರರಿಗೆ ಕೂಡಲೇ ಸಂಪರ್ಕಿಸಿ ಕುರುಬ, ಒಕ್ಕಲಿಗ, ಲಿಂಗಾಯತ, ಈಡಿಗ, ಆಚಾರ್ಯ, ನಾಯಕ, SC ಎಲ್ಲಾ ಜಾತಿಯ ವಧು–ವರರಿಗೆ ಸಂಪರ್ಕಿಸಿ ಹಾಗೂ ವಿಧುರ–ವಿಧವೆಯರು ವಿಚ್ಛೇದಿತರು ಸಂಪರ್ಕಿಸಿ
9071577131

ಪ್ರಸಿದ್ಧ ಹೋಟೆಲ್‌ವೊಂದಕ್ಕೆ ಕೆಲಸಕ್ಕೆ ಬೇಕಾಗಿದ್ದಾರೆ.
ಕ್ಯಾಷಿಯರ್, ಇಡ್ಲಿ ವಡೆ, ಕಾಫೀ–ಟೀ, ಕೌಂಟರ್‌ಗೆ ಹುಡುಗರು, ESI, PF ಮತ್ತು ವಸತಿ ಸೌಲಭ್ಯವಿರುತ್ತದೆ. ಆಕರ್ಷಕ ಸಂಬಳದೊಂದಿಗೆ.
9916256503
9986205777

Water Proofing
Specialist in Dr. Fixit, Authorised Terrace, Toilet, Bathroom, Slooped Roof, Exterior wall cracks, any leakage, controling old building repair. 5 years 100% guarantee.
Mob: 9538158129

Change of Name
I, RESHMA T.V residing at #43, 2nd Cross, Mayanna Layout, Nanjangud Town, Mysore District, Karnataka, 571301, here by declare that I have changed my name as RESHMA ABHILASH (Aadhar Number 7039 5883 9035) W/o N. ABHILASH. In future all the correspondences will be in the name of RESHMA ABHILASH only.
Sd/- RESHMA ABHILASH

URGENT SALE
COMMERCIAL SITE
45x60 on 60 ft road for sale in KBL Gardenia Layout. Attached to Vijayanagara 4th Stage. Market price is 1.31 Cr Selling for just 1.10 Cr.
8884616461, 7975269652

SITE FOR SALE
MUDA Approved 30x40 In Bhairava Enclave, 3 km from Bogadi ring road. Attached to Vijayanagara 4th Stage. Just 100 mtrs from bogadi Gaddige main road.
Price 4200 per sqft.
7975269652, 8884616461

DTCP Approved Plots for Sale!
- Plot Sizes: 60x80 & 60x100 & 30×80 & 30×100 sites available. - Location: KRS Back Water View Point. - Launching Price: Rs. 1599/sft - Bank Loan: 70% available. - KRS Railway Station: Just 1 km away.
2. 20x30 ground floor MUDA approved site with Construction just 37 Lakh.
CALL: LISHA PROPERTIES
8151035074, 9035012579

ಸುವರ್ಣಯಾತ್ರಾ
7 ದಿನಗಳ ಕಾಶಿ, ಬಾಬಾ ಬೈದ್ಯನಾಥ, ನೈಮಿಷಾರಣ್ಯ, ಅಯೋಧ್ಯಾ ಪ್ರವಾಸ 23/6/25. 10 ದಿನಗಳ ಅಯೋಧ್ಯಾ, ಗೋರಕ್‌ಪುರ, ಚಿತ್ವಾನ್, ಪೋಕ್ರ, ಮುಕ್ತಿನಾಥ, ಮನೋಕಾಮನ, ಕಠ್ಮಂಡು ಜನಕಪುರ ಪ್ರವಾಸ 18/6/25 ಎಲ್ಲಾ ರೀತಿಯ ಶುಲ್ಕಗಳು ಒಳಗೊಂಡಿರುತ್ತವೆ.
8660233673
9019462508

ಜಮೀನುಗಳು ಮಾರಾಟಕ್ಕಿದೆ
ಮೈಸೂರು ಹೆಚ್.ಡಿ.ಕೋಟೆ ಮುಖ್ಯ ರಸ್ತೆಯ ಪಕ್ಕದಲ್ಲಿ ಕಂಚಮಳ್ಳಿ ಮುಖ್ಯರಸ್ತೆಯಲ್ಲಿ 1 ಎಕರೆ 7 ಗುಂಟೆ ಹಿರೇಮಂದಿಯಲ್ಲಿ 30 ಗುಂಟೆ ಹೊಳೆಪಕ್ಕ ಮತ್ತು 1 ಎಕರೆ ಸಂಗಮಹತ್ತಿರ ಕಪಿಲ ಚಾನೆಲ್ ಪಕ್ಕದಲ್ಲಿ ಇದೆ ಜಮೀನುಗಳು ಮಾರಾಟಕ್ಕಿದೆ.
9945661696
9663793666

ಸಾಲ / LOANS
Housing Loan
Construction Loan
Mortgage Loan Loans for MUDA, Corporation & Revenue Property.
9880718980

WANTED 2 BHK FOR RENT
We need house (ground /1st floor) for rent preferably in Vijayanagar 1st, 2nd, 3rd and 4th stage hebbal or brindavan extension MysoreBudget 10-12k. Vegetarian.
9591544080 | 8310384489

SITES FOR SALE
30x40, 30x50 MUDA Approved Bank loan available. Near Srirampura Ring Road, Opp. to University Layout.
8296832513

ಮೈಸೂರಿನ ಸುತ್ತಮುತ್ತ ಸೈಟ್ ಬೇಕಾದವರು ಮತ್ತು ಮಾರುವವರು ಸಂಪರ್ಕಿಸಿ
ಮೈಸೂರು, ನಂಜನಗೂಡು, ಹುಣಸೂರಿನಲ್ಲಿ ಜೆವಿಗೆ (Joint Venture) ಜಮೀನು ಬೇಕಾಗಿದೆ. ಸಂಪರ್ಕಿಸಿ:
ಶಂಕರ್ 7259407518
ಸುರೇಶ್ ಪಿ. 9972125827

ಹೆಲ್ತ್ ಕೇರ್ ತರಬೇತಿ
SSLC/PUC ಆದವರಿಗೆ ಡಿಪ್ಲೋಮ ಇನ್ ಹೆಲ್ತ್ ಕೇರ್ ತರಬೇತಿ ಕೊಡಲಾಗುತ್ತದೆ. ತರಬೇತಿ ಪಡೆದವರು ಉತ್ತಮ ಆಸ್ಪತ್ರೆಗಳಲ್ಲಿ ಕೆಲಸ ಮಾಡುತ್ತಿದ್ದಾರೆ.
ಸೆಂಟ್ ಮೇರೀಸ್ ಆಸ್ಪತ್ರೆ
ಸಿಲ್ಕ್ ಫ್ಯಾಕ್ಟರಿ ಸರ್ಕಲ್ NIE ಕಾಲೇಜ್ ಪಕ್ಕ, ಮೈಸೂರು
9916908454

ಮನೆ ಸಾಲ
ಜನಮಿತ್ರ ಫಿನ್ ಸರ್ವ್ ಪ್ರೈ.ಲಿ.
2921/ಎ, ಸರಸ್ವತಿಪುರಂ, ಮೈಸೂರು
ನಾವು ನ್ಯಾಷನಲೈಸ್ ಮತ್ತು ಎಸ್.ಬಿಎಫ್‌ಸಿ ಬ್ಯಾಂಕ್‌ಗಳೊಂದಿಗೆ ಸಹಭಾಗಿತ್ವದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು ಯಾರಿಗಾದರು ಮನೆ ಸಾಲ ಸೌಲಭ್ಯ ಕೊಡಸಲಾಗುತ್ತದೆ. ಸಿಬಿಲ್ ತೊಂದರೆ ಇದ್ದರು. 11B, 9&11A, ಮುಡಾ ಮತ್ತು ಕಾರ್ಪೋರೇಷನ್ ಮತ್ತು ರೆವಿನ್ಯೂ ಖಾತೆಗಳಿಗೆ ಲೋನ್ ಮಾಡಿಸಿ ಕೊಡಲಾಗುವುದು.
8088647887

ಸೈಟ್ ಬೇಕಾದವರು
ಮೈಸೂರಿನ ವಿಜಯನಗರ ಒಂಟಿಕೊಪ್ಪಲ್ ರೇಸ್ಕೋಸ್ ಪಕ್ಕ ಜಯಲಕ್ಷ್ಮಿ ಪುರಂ ಕಡೆಗೆ ಸೆಕ್ಯೂರಿಟಿ ಕೆಲಸ ನಿರ್ವಹಿಸಲು 40 ವರ್ಷದೊಳಗಿನ ಪುರುಷರು ಬೇಕಾಗಿದ್ದಾರೆ. ಸಂಪರ್ಕಿಸಿ:
9900481819
9972945905

ತಕ್ಷಣ ಬೇಕಾಗಿದ್ದಾರೆ
ಹೂಟಗಳ್ಳಿ ಇಂಡಸ್ಟ್ರಿಯಲ್ ಏರಿಯಾದಲ್ಲಿ ಕೆಲಸ ಮಾಡಲು ಹುಡುಗರು ಬೇಕಾಗಿದ್ದಾರೆ.
(SSLC and ITI PASS or Fail)
Urgent. Age Limit - 18-30
ಸಂಬಳ: 20,000/-
ಸೌಲಭ್ಯತೆ: ESI, PF, Canteen ಸೌಲಭ್ಯವಿರುತ್ತದೆ.
7090309148
7019380847

ತಂತಿ ಕಂಬದ ಬೇಲಿ
ಹಾಕಲು ಮತ್ತು ಗ್ರಾವಲ್, ಕೆಮ್ಮಣ್ಣು JCB ವರ್ಕ್ ಟಿಪ್ಪರ್ ಬೇಕಾದಲ್ಲಿ ಹಾಗೂ ಸೈಟ್ ಜಮೀನು ಲೆವೆಲ್ ಮಾಡಿಕೊಡಲು ಸಂಪರ್ಕಿಸಿ:
ಶಂಕರ್: 7259407518

ಕಳೆದಿದೆ
ಚಿಕ್ಕಣ್ಣ S/o ಲೇಔಟ್ ಜವರೇಗೌಡ ಸೈಟ್ ನಂ.326, ಸ್ವತ್ತಿನ ಸಂಖ್ಯೆ–33–511–806, ನಿರ್ವಹಣ ಸಂಖ್ಯೆ : 2352/326, ಆಶ್ರಯ ಯೋಜನೆ ನಿವೇಶನ ಹೆಚ್.ಎಸ್.ಮಹದೇವ ಪ್ರಸಾದ್ ಬಡಾವಣೆ 2ನೇ ಹಂತ, ಗುಂಡ್ಲುಪೇಟೆ, ನಿವೇಶನದ ಹಕ್ಕುಪತ್ರ ಹಾಗೂ ಮೂಲ ದಾಖಲಾತಿಗಳು ಕಳೆದು ಹೋಗಿದ್ದು ಯಾಗಿರಿಗಾದರೂ ಸಿಕ್ಕಿದಲ್ಲಿ ಸಂಪರ್ಕಿಸಿ:
9739394911

ತಕ್ಷಣ ಬೇಕಾಗಿದ್ದಾರೆ
ಬಟ್ಟೆ ಅಂಗಡಿಯಲ್ಲಿ ಕೆಲಸ ಮಾಡಲು ಹುಡುಗಿಯರು ಮಹಿಳೆಯರು ಬೇಕಾಗಿದ್ದಾರೆ. ಸ್ಥಳ ನಜರ್‌ಬಾದ್ ಮತ್ತು ಅಗ್ರಹಾರ, ಮೈಸೂರು
ಸಮಯ: ಬೆಳಿಗ್ಗೆ 9:30 ರಿಂದ ರಾತ್ರಿ 8:30/09:00 ವರೆಗೆ, ಸ್ಥಳೀಯರಿಗೆ ಆದ್ಯತೆ
ಸಂಬಳ: 10,000ದಿಂದ ಪ್ರಾರಂಭ ಸಂಪರ್ಕಿಸಿ
9986311444,9986322444

ಸುವರ್ಣಾವಕಾಶ
ಪ್ರಸಿದ್ಧ ಷೋರೂಂ ಮತ್ತು ಕಂಪನಿ & ವರ್ಕ್ ಫ್ರಮ್ ಹೋಂ ಕೆಲಸಕ್ಕೆ ಯುವಕರು ಮತ್ತು ಯುವತಿಯರು 22000/- Salary ಗ್ಯಾರೆಂಟಿ ಕೆಲಸ
9482369816
9482360136

ಸೋಮವಾರ ಗುರುವಾರ ಶನಿವಾರ
ಪ್ರತಿ ಜಾಹೀರಾತಿಗೆ ರೂ. 630 ಮಾತ್ರ

WANTED TEACHERS
LITTLE STAR ABC MONTESSORI
ANY DEGREE, FRESHERS CAN APPLY ENGLISH MANDATORY, FEMALE CANDIDATES ONLY
VIJAYNAGAR IV STAGE, 1ST PHASE MYSORE
8884970282
0821-2955499

WANTED
REQUIRES BOYS FOR WASHING & CAR DETAILING OUTLET NEAR VIJAYANAGAR WATER TANK
9606908396

WANTED 2BHK FOR RENT
We need house (ground /1st floor) for rent preferably in Vijayanagar 1st, 2nd, 3rd and 4th stage hebbal or brindavan extension Mysore Budget 10-12k. (Vegetarian.)
9591544080
8310384489

ಬೇಕಾಗಿದ್ದಾರೆ
ಮೈಸೂರಿನ ವಿಜಯನಗರ ವಾಟರ್ ಟ್ಯಾಂಕ್ ಹತ್ತಿರ ಬೆಳಿಗ್ಗೆ 7 ಗಂಟೆಯಿಂದ ಸಂಜೆ 7 ಗಂಟೆ ತನಕ 12 ಗಂಟೆ ಕೆಲಸ ಮಾಡಲು ವಿದ್ಯಾವಂತ 50 ವರ್ಷ ಒಳಗಿನ ಪುರುಷ (ಹಗಲು ಕೆಲಸ) ಸೆಕ್ಯೂರಿಟಿ ಗಾರ್ಡ್ ಬೇಕಾಗಿದ್ದಾರೆ. ವೇತನ ತಿಂಗಳಿಗೆ 15000/– ಸಾವಿರ ರೂ.ಗಳ ಸಂಪರ್ಕಿಸಿ:
9731259328

ಮೈಸೂರು ಮಿತ್ರ ಓದುಗರ ಗಮನಕ್ಕೆ
46
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮತ್ತಷ್ಟು ವರ್ಗೀಕೃತ ಜಾಹೀರಾತು ಪುಟ 10 ರಲ್ಲಿ

ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಸಚಿವ ಮಹದೇವಪ್ಪ ಪಣ

ಸಂಸದ ಸುನೀಲ್ ಬೋಸ್ ಅವರಿಂದ 6 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ

ತಿ.ನರಸೀಪುರ, ಮೇ 16– ಕ್ಷೇತ್ರದ ಶಾಸಕರೂ ಆದ ಸಚಿವ ಡಾ.ಹೆಚ್.ಸಿ.ಮಹದೇವಪ್ಪನವರು ತಿ.ನರಸೀಪುರ ಕ್ಷೇತ್ರವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಪಣತೊಟ್ಟಿದ್ದು ಇದಕ್ಕಾಗಿ ಕೋಟ್ಯಾಂತರ ರೂ. ಅನುದಾನ ತರಲಿದ್ದಾರೆ ಎಂದು ಸಂಸದ ಸುನೀಲ್ ಬೋಸ್ ತಿಳಿಸಿದರು.

ತಾಲೂಕಿನ ತಲಕಾಡು ಭಾಗದ 10 ಗ್ರಾಮಗಳಲ್ಲಿ ಎಸ್‌ಸಿಪಿ ಯೋಜನೆಯಡಿ 6 ಕೋಟಿ ರೂ. ವೆಚ್ಚದಲ್ಲಿ ಹಮ್ಮಿಕೊಂಡಿರುವ ವಿವಿಧ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ತಾಲೂಕಿನ ಬಣವೆ ಹಾಗೂ ಟಿ.ಬೆಟ್ಟಹಳ್ಳಿ ಗ್ರಾಮದಲ್ಲಿ 1.75 ಕೋಟಿ ರೂ. ವೆಚ್ಚದಲ್ಲಿ ಸರ್ಕಲ್ ಅಭಿವೃದ್ಧಿ, ತಲಕಾಡು ಗ್ರಾಮದಲ್ಲಿ 2 ಕೋಟಿ ರೂ. ವೆಚ್ಚದಲ್ಲಿ ಫುಟ್‌ಪಾತ್ ಪಾರ್ಕಿಂಗ್ ಟೈಲ್ಸ್ ಅಳವಡಿಕೆ. ಪಿಡಬ್ಲ್ಯೂಡಿ ಇಲಾಖೆಯಿಂದ 1.75 ಕೋಟಿ ರೂ. ವೆಚ್ಚದಲ್ಲಿ ಸಿಸಿ ರಸ್ತೆ, ಚರಂಡಿ ಅಭಿವೃದ್ಧಿ ಪಡಿಸಲಾಗುತ್ತದೆ ಎಂದರು.

ಕ್ಷೇತ್ರದ ಜನತೆ ನಮ್ಮ ಮೇಲೆ ಪೂರ್ಣ ಪ್ರಮಾಣದ ವಿಶ್ವಾಸವಿಟ್ಟು ನಮ್ಮ ತಂದೆಯವರನ್ನು 3 ಬಾರಿ ಗೆಲ್ಲಿಸಿದ್ದಾರೆ. ನನಗೂ ಈ ಬಾರಿ ಸಂಸತ್ ಸದಸ್ಯನಾಗಲು ಅವಕಾಶ ಕಲ್ಪಿಸಿಕೊಟ್ಟಿದ್ದಾರೆ. ಹಾಗಾಗಿ ಕ್ಷೇತ್ರದ ಜನರಿಗೆ ಮೂಲ ಸೌಲಭ್ಯ ಕಲ್ಪಿಸಿಕೊಡಬೇಕಾದದ್ದು ನಮ್ಮ ಕರ್ತವ್ಯವಾಗಿದೆ. ಕಟ್ಟ ಕಡೆಯ ವ್ಯಕ್ತಿಗೂ ಮೂಲ ಸೌಕರ್ಯ ದೊರಕಬೇಕೆಂಬುದು ಅಂಬೇಡ್ಕರ್ ಅವರ ಆಶಯವಾಗಿತ್ತು ಅದರಂತೆ ನಮ್ಮ ತಂದೆಯ ವರು ಜಾಥಾ ಮೂಲಕ ಪ್ರತಿಯೊಬ್ಬರಿಗೂ ಸಂವಿಧಾನ ಬಗ್ಗೆ ಅರಿವು ಮೂಡಿಸುವ ಕೆಲಸ ಮಾಡಿದ್ದಾರೆ. ಶಾಲೆಗಳು, ಸರ್ಕಾರಿ ಕಾರ್ಯಕ್ರಮ ಸೇರಿದಂತೆ ಮತ್ತಿತರ ಕಾರ್ಯಕ್ರಮಗಳಲ್ಲಿ ಸಂವಿಧಾನ ಪೀಠಿಕೆ ಓದುವಂತೆ ಮಾಡಿದ ಕೀರ್ತಿ ನಮ್ಮ ತಂದೆ ಡಾ.ಹೆಚ್.ಸಿ.ಮಹದೇವಪ್ಪನವರಿಗೆ ಸಲ್ಲುತ್ತದೆ. ಆ ಮೂಲಕ ಸಂವಿಧಾನ ದೇಶಕ್ಕೆ ಎಷ್ಟು ಮುಖ್ಯ ಎಂಬುದನ್ನು ತಿಳಿಸಿಕೊಡುವ ಪ್ರಯತ್ನ ಮಾಡಲಾಗಿದೆ ಎಂದರು.

ತಿ.ನರಸೀಪುರ ಕ್ಷೇತ್ರವನ್ನು ಸಾವಿರಾರು ಕೋಟಿ ರೂ. ಅನುದಾನದಲ್ಲಿ ನಿರೀಕ್ಷೆಗೂ ಮೀರಿ ಅಭಿವೃದ್ಧಿ ಮಾಡಲಾಗಿದೆ. ಮುಂದೆ ಇನ್ನೂ ಹೆಚ್ಚು ಅನುದಾನದೊಂದಿಗೆ ಕ್ಷೇತ್ರವನ್ನು ಸಮಗ್ರವಾಗಿ ಅಭಿವೃದ್ಧಿ ಪಡಿಸುವ ಮಹದಾಸೆಯನ್ನು ನಮ್ಮ ತಂದೆ ಹೊಂದಿದ್ದಾರೆ. ಕ್ಷೇತ್ರದ ಸಾಮಾನ್ಯ ವರ್ಗದ ಕಾಲೋನಿಗಳ ಅಭಿವೃದ್ಧಿಗೆ 10 ಕೋಟಿ ರೂ. ಅನುದಾನ ಬಿಡುಗಡೆಯಾಗಿದ್ದು, ಅದು ಟೆಂಡರ್ ಪ್ರಕ್ರಿಯೆ ಹಂತದಲ್ಲಿದ್ದು ಕಾಮಗಾರಿಗೆ ಶೀಘ್ರ ಭೂಮಿ ಪೂಜೆ ಮಾಡಲಾಗುತ್ತದೆ. ಒಟ್ಟಾರೆ ಕ್ಷೇತ್ರದ ಅಭಿವೃದ್ಧಿ ನಮಗೆ ಮುಖ್ಯವಾಗಿದ್ದು, ಗ್ರಾಮೀಣ ಭಾಗದ ಜನತೆ ನೆಮ್ಮದಿ ಬದುಕು ಕಟ್ಟಿಕೊಳ್ಳಲು ಬೇಕಾದ ಅಗತ್ಯ ಸೌಲಭ್ಯ ಕಲ್ಪಿಸಿಕೊಡಲು ನಾವು ಯಾವಾಗಲೂ ಸಿದ್ಧರಿದ್ದೇವೆ ಎಂದರು.

ಅಭಿವೃದ್ಧಿ ಕಾಮಗಾರಿ ಭೂಮಿ ಪೂಜೆಗೆ ಸಂಸದರು ಬರುವುದು ತಡವಾದರೂ ಕಾರ್ಯಕರ್ತರ ಹುಮ್ಮಸ್ಸಿಗೆ ಕೊರತೆಯಾಗಲಿಲ್ಲ. ವಿವಿಧ ಅಭಿವೃದ್ಧಿ


ವಿವಿಧ ಅಭಿವೃದ್ಧಿ ಕಾಮಗಾರಿಗೆ ಸಂಸದ ಸುನಿಲ್ ಬೋಸ್ ಭೂಮಿ ಪೂಜೆ ನೆರವೇರಿಸಿದರು.

ಕಾಮಗಾರಿಗಾಗಿ ಮಾದಾಪುರ, ಚಂದಹಳ್ಳಿ, ಅಕ್ಕೂರು, ಹೆಮ್ಮಿಗೆ ಬಿ, ವಡೆಯಂಡಹಳ್ಳಿ, ತಲಕಾಡು, ಅರುಂಧತಿ ನಗರ, ಬಿ.ಶೆಟ್ಟಿ ಹಳ್ಳಿ, ಕಾಳಿಹುಂಡಿ, ಪರಣಾಮಿಪುರ, ಬಣವೆ, ಟಿ.ಬೆಟ್ಟಹಳ್ಳಿ ಗ್ರಾಮಕ್ಕೆ ಸಂಸದರು ಆಗಮಿಸುತ್ತಿದ್ದಂತೆ ಗ್ರಾಮದಲ್ಲಿ ಪಟಾಕಿ ಸಿಡಿಸಿ ಅದ್ದೂರಿ ಯಾಗಿ ಬರಮಾಡಿಕೊಳ್ಳಲಾಯಿತು.

ಇದೇ ವೇಳೆ ಗ್ರಾಮಸ್ಥರಿಂದ ಅಹವಾಲು ಸ್ವೀಕರಿಸಿದ ಸಂಸದರು ಸಮಸ್ಯೆ ಬಗೆಹರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಈ ವೇಳೆ ಭೂ ನ್ಯಾಯ ಮಂಡಳಿ ನಿರ್ದೇಶಕ ಕುಕ್ಕೂರು ಗಣೇಶ, ತ್ರೈಮಾಸಿಕ ಕೆಡಿಪಿ ಸಮಿತಿ ಸದಸ್ಯ ಹಿರಿಯೂರು ವೀರೇಂದ್ರ, ತಲಕಾಡು ಸಮೂಹ ದೇವಾಲಯಗಳ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಟಿ.ಬೆಟ್ಟಹಳ್ಳಿ ನಾಗರಾಜು, ತಾಪಂ ಮಾಜಿ ಅಧ್ಯಕ್ಷ ಎಂ.ಮಲ್ಲಿಕಾರ್ಜುನಸ್ವಾಮಿ, ಮಾಜಿ ಸದಸ್ಯ ನರಸಿಂಹಮಾದ ನಾಯಕ, ಗ್ರಾಪಂ ಮಾಜಿ ಅಧ್ಯಕ್ಷ ಅಕ್ಕೂರು ಗುರುಮೂರ್ತಿ, ಗ್ರಾಪಂ ಉಪಾಧ್ಯಕ್ಷರಾದ ನಾಗರಾಜಮೂರ್ತಿ, ದಕ್ಷಿಣಾಮೂರ್ತಿ, ಮಾಜಿ ಅಧ್ಯಕ್ಷ ಮಲ್ಲಣ್ಣಿ, ಗ್ರೇಡ್–2 ತಹಸೀಲ್ದಾರ್ ರಾಜಾಕಾಂತ್, ತಾಪಂ ಇಓ ಪಿ.ಎಸ್.ಅನಂತರಾಜು, ಸಂಸದರ ಆಪ್ತ ಸಹಾಯಕ ಬಿ.ಬಸವರಾಜು, ಪಿಡಿಓಗಳಾದ ಚಿದಾನಂದ, ಟಿ.ಎಂ.ಮಹೇಶ, ಎಇಇ ಗಳಾದ ಸತೀಶ್ ಚಂದ್ರನ್, ಎಸ್.ಮಂಜುನಾಥ್, ಕೆ.ಶಿವರಾಜು, ಪಿ.ಎನ್.ಚರಿತ, ಕಿರಿಯ ಇಂಜಿನಿಯರ್‌ಗಳಾದ ರವೀಂದ್ರ, ಮೋಹನ್, ಮಹೇಂದ್ರಗೌಡ, ಸಾಮಾಜಿಕ ಕಾರ್ಯಕರ್ತ ಅಕ್ಕೂರು ರಾಜೇಶ್, ಮುಖಂಡರಾದ ಎಂ.ಕೆ.ಗಣೇಶ್ ಮೂರ್ತಿ, ಎಂ.ಬಿ.ಸಾಗರ್, ತಲಕಾಡು ಆನಂದ್, ಮೋಹನ, ವಿಜಯಕುಮಾರ್, ಹತೀಕ್, ಶಬಿಲ್ ಇತರರಿದ್ದರು.

ವಿಧಾನಸಭೆ ಹಾಗೂ ಲೋಕಸಭೆ ಚುನಾವಣೆ ಪೂರ್ವ ನೀಡಿದ್ದ ಭರವಸೆಯಂತೆ ತಲಕಾಡು ಗ್ರಾಮದ ವೃತ್ತವನ್ನು ನವ ವಿನ್ಯಾಸದೊಂದಿಗೆ ಅಭಿವೃದ್ಧಿಪಡಿಸಲು ರಾಜ್ಯ ಸರ್ಕಾರದಿಂದ 1 ಕೋಟಿ ರೂ. ಅನುದಾನ ಮಂಜೂರು ಮಾಡಲಾಗಿದೆ. ತಲಕಾಡು ಗ್ರಾಮದ ವೃತ್ತದಲ್ಲಿ 1 ಕೋಟಿ ರೂ. ವೆಚ್ಚದ ಚರಂಡಿ ಮತ್ತು ಪಾದಚಾರಿ ರಸ್ತೆ ನಿರ್ಮಾಣ, ಮೈಸೂರು, ಮಳವಳ್ಳಿ, ಕೊಳ್ಳೇಗಾಲ ಹಾಗೂ ಹಳೇ ಬೀದಿಗೆ ಸಂಪರ್ಕ ಕಲ್ಪಿಸುವ ವೃತ್ತವನ್ನು ಆಕರ್ಷಣೀಯವಾಗಿ ಅಭಿವೃದ್ಧಿಪಡಿಸಲು ಅನುದಾನ ಮಂಜೂರು ಮಾಡಿ, ನುಡಿದಂತೆ ನಡೆದು ಕೊಂಡಿದ್ದೇವೆ. ಐತಿಹಾಸಿಕ ಪ್ರವಾಸಿ ತಾಣವಾಗಿರುವ ತಲಕಾಡು ಧಾರ್ಮಿಕತೆಯ ಹಿರಿಮೆ ಹೊಂದಿದ್ದು, ಗ್ರಾಮದಲ್ಲಿ ಹಳೇ ಬೀದಿ ರಸ್ತೆ ಅಗಲೀಕರಣ ಸೇರಿದಂತೆ ನೆನೆಗುದಿಗೆ ಬಿದ್ದಿದ್ದ ಹಲವು ಅಭಿವೃದ್ಧಿ ಕಾಮಗಾರಿಗಳಿಗೆ ಮರು ಚಾಲನೆ ನೀಡಲಾಗಿದೆ.

– ಸುನೀಲ್ ಬೋಸ್, ಸಂಸದ.

ಕಾಂಕ್ರೀಟ್ ರಸ್ತೆ, ಚರಂಡಿ ಕಾಮಗಾರಿಗೆ ಚಾಲನೆ


ರಸ್ತೆ, ಚರಂಡಿ ಅಭಿವೃದ್ಧಿ ಕಾಮಗಾರಿಗೆ ಶಾಸಕ ದರ್ಶನ್ ಚಾಲನೆ ನೀಡಿದರು.

ನಂಜನಗೂಡು, ಮೇ 16– ತಾಲೂಕಿನ ಅರಿಯೂರು ಮತ್ತು ಹೊಸಕಡಜಟ್ಟಿ ಗ್ರಾಮದಲ್ಲಿ ಪ.ಜಾತಿ ಸಮುದಾಯ ವಾಸಿಸುವ ಹೊಸ ಬಡಾವಣೆಗಳಲ್ಲಿ 2 ಕೋಟಿ ವೆಚ್ಚದ ಕಾಂಕ್ರೀಟ್ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗಿದೆ ಎಂದು ಶಾಸಕ ದರ್ಶನ್ ತಿಳಿಸಿದರು.

ತಾಲೂಕಿನ ಅರಿಯೂರು ಮತ್ತು ಹೊಸ ಕಡಜಟ್ಟಿ ಗ್ರಾಮದಲ್ಲಿ ತಲಾ 1 ಕೋಟಿ ವೆಚ್ಚದ ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ನಮ್ಮ ಕಾಂಗ್ರೆಸ್ ಸರ್ಕಾರದಲ್ಲಿ ಗ್ಯಾರಂಟಿ ಯೋಜನೆಗಳಂತೆಯೇ ಅಭಿವೃದ್ಧಿ ಕಾರ್ಯಗಳಿಗೂ ಒತ್ತು ನೀಡಲಾಗಿದೆ. ಕ್ಷೇತ್ರಕ್ಕೆ ಗ್ಯಾರೆಂಟಿ ಯೋಜನೆಗಳಿಗಾಗಿ ಪ್ರತಿ ವರ್ಷ 150 ಕೋಟಿ ಅನುದಾನ ಬರುತ್ತಿದೆ. ಜೊತೆಗೆ ಸಿಎಂ ಸಿದ್ದರಾಮಯ್ಯನವರು ನಂಜನಗೂಡು ಕ್ಷೇತ್ರದ ಅಭಿವೃದ್ಧಿಗೆ ವಿಶೇಷ ಆಸಕ್ತಿ ವಹಿಸಿ ಹೆಚ್ಚಿನ ಅನುದಾನ ನೀಡಿದ್ದಾರೆ. ಕಳೆದ ವರ್ಷ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ 25 ಕೋಟಿ ಮಂಜೂರು ಮಾಡಿದ್ದರು. ಈ ಬಾರಿಯ ಬಜೆಟ್‌ನಲ್ಲಿ 8 ಸಾವಿರ ಕೋಟಿಗಳನ್ನು ವಿಶೇಷ ಅನುದಾನಕ್ಕಾಗಿಯೇ ಮೀಸಲಿಸಲಾಗಿದ್ದು, ನಂಜನಗೂಡು ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ಮಂಜೂರಾಗುವ ಸಾಧ್ಯತೆ ಇದೆ. ಕಳೆದ 2 ವರ್ಷಗಳಲ್ಲಿ ಕ್ಷೇತ್ರಕ್ಕೆ ಗ್ಯಾರೆಂಟಿ ಅನುದಾನ ಸೇರಿದಂತೆ ಸುಮಾರು 550 ಕೋಟಿಗಿಂತಲೂ ಹೆಚ್ಚಿನ ಅನುದಾನ ಬಂದಿದೆ ಎಂದರು.

ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರು ಅರಿಯೂರು, ಹೊಸ ಕಡಜಟ್ಟಿ ಗ್ರಾಮಕ್ಕೆ ತಲಾ ಒಂದೊಂದು 1 ಕೋಟಿ ಅನುದಾನ ನೀಡಿದ್ದಾರೆ. ಇಂದು ಗುದ್ದಲಿ ಪೂಜೆ ನೆರವೇರಿಸಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದ್ದು, ಇದರಿಂದ ಗ್ರಾಮದ ಹೊಸ ಬಡಾವಣೆಗಳಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣವಾಗಲಿವೆ ಎಂದರು.

ಮಾಜಿ ಶಾಸಕ ಕೇಶವಮೂರ್ತಿ ಮಾತನಾಡಿ, ಹುರ ಭಾಗದ ರಸ್ತೆ ಅಭಿವೃದ್ಧಿಗೆ ಶಾಸಕ ದರ್ಶನ್ ಹೆಚ್ಚಿನ ಒತ್ತು ನೀಡಿದ್ದಾರೆ. 20 ಕೋಟಿ ವೆಚ್ಚದಲ್ಲಿ ಹುಲ್ಲಹಳ್ಳಿಯಿಂದ ದುಗ್ಗಹಳ್ಳಿವರೆಗಿನ ಹೊರ ಮುಖ್ಯ ರಸ್ತೆಯನ್ನು ಅಭಿವೃದ್ಧಿಪಡಿಸಲಾಗಿದೆ. 6 ಕೋಟಿ ವೆಚ್ಚದಲ್ಲಿ ಹುರಾ ಗ್ರಾಮದಿಂದ ಜಾಲಹಳ್ಳಿವರೆಗೆ ಹೊಸದಾಗಿ ರಸ್ತೆ ನಿರ್ಮಾಣ ವಾಗಲಿದೆ. ಜೊತೆಗೆ ಸರ್ಕಾರದ ಕೆಶಿಫ್ ಹೊಸ ಯೋಜನೆಯಡಿ ಹುಲ್ಲಹಳ್ಳಿಯಿಂದ ತಾಲೂಕಿನ ಹೊರಳವಾಡಿವರೆಗೆ 55 ಕಿಮೀ ರಸ್ತೆ ಅಭಿವೃದ್ಧಿಯಾಗಲಿದೆ. ಶಾಸಕರಿಗೆ ಸಿಕ್ಕ ಕಡಿಮೆ ಅವಧಿಯಲ್ಲಿ ಎಲ್ಲಾ ಇಲಾಖೆಗಳ ಸಚಿವರ ಮನವೊಲಿಸಿ ಅನುದಾನ ತಂದು ಕ್ಷೇತ್ರದಲ್ಲಿ 400 ಕೋಟಿಗಿಂತಲೂ ಹೆಚ್ಚಿನ ಅಭಿವೃದ್ಧಿ ಕೆಲಸಗಳನ್ನು ನಿರ್ವಹಿಸಿದ್ದಾರೆ ಎಂದರು.

ಈ ವೇಳೆ ವಾಲ್ಮೀಕಿ ನಿಗಮ ಮಾಜಿ ಅಧ್ಯಕ್ಷ ಹೆಚ್.ಸಿ.ಬಸವರಾಜು, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಕೆ.ಮಾರುತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಶ್ರೀಕಂಠನಾಯಕ, ಸಿ.ಎಂ.ಶಂಕರ್, ತಾಪಂ ಮಾಜಿ ಅಧ್ಯಕ್ಷ ನಾಗೇಶ್ ರಾಜ್, ತಾಪಂ ಮಾಜಿ ಸದಸ್ಯ ಗೋವಿಂದರಾಜು, ಯುವ ಕಾಂಗ್ರೆಸ್ ಅಧ್ಯಕ್ಷ ವಿಜಯಕುಮಾರ್, ಆದರ್ಶ, ಗ್ರಾಪಂ ಅಧ್ಯಕ್ಷ ಹರೀಶ್, ತಾಲೂಕು ನಾಯಕ ಸಮುದಾಯದ ಅಧ್ಯಕ್ಷ ನಾಗರಾಜು, ನಗರಸಭೆ ನಾಮ ನಿರ್ದೇಶನ ಸದಸ್ಯ ರವಿ, ಮುಖಂಡರಾದ ಪರ್ವೀಜ್, ಮಹದೇವು, ಮಹದೇವ ಸೇರಿದಂತೆ ಇತರರಿದ್ದರು.

ಜಾತಿ ಜನಗಣತಿ ಕಾರ್ಯಕ್ಕೆ ಚಾಲನೆ

ಕೆ.ಆರ್.ನಗರ, ಮೇ 16– ಪ.ಜಾತಿ ಜನಗಣತಿ ಕಾರ್ಯಕ್ಕೆ ಪಟ್ಟಣದ ಮಧುವನಹಳ್ಳಿ ಬಡಾವಣೆಯಲ್ಲಿ ತಾಲೂಕು ಮಾದಿಗ ಸಂಘರ್ಷ ಸಮಿತಿ ಅಧ್ಯಕ್ಷ ಎಂ.ಎಸ್.ರವಿಕುಮಾರ್ ಚಾಲನೆ ನೀಡಿದರು.

ಪಟ್ಟಣದ ಮಧುವನಹಳ್ಳಿ ಬಡಾವಣೆಯಲ್ಲಿ ಪ.ಜಾತಿಗಳ ಸಮಗ್ರ ಸಮೀಕ್ಷೆ–2025ರ ಜಾತಿ ಗಣತಿಗೆ ಆಗಮಿಸಿದ ಶಾಲಾ ಶಿಕ್ಷಕಿ ರಾಧಾಮಣಿ ಅವರಿಗೆ ಹೂಗುಚ್ಛ ನೀಡಿ ಸ್ವಾಗತಿಸಿ, ಬರಮಾಡಿಕೊಳ್ಳಲಾಯಿತು.

ಎಂ.ಎಸ್.ರವಿಕುಮಾರ್ ಮಾತನಾಡಿ, ಪ.ಜಾತಿಗಳ ದತ್ತಾಂಶ ಸಂಗ್ರಹ ಸಮೀಕ್ಷೆ ಮೇ 25ರವರೆಗೆ ನಡೆಯಲಿದ್ದು, ಈ ಅವಧಿಯಲ್ಲಿ ಸಮೀಕ್ಷಾದಾರರು ಮನೆ ಮನೆಗೆ ಭೇಟಿ ನೀಡಿ ನಿಖರ ಮಾಹಿತಿ ಸಂಗ್ರಹಿಸಲಿದ್ದಾರೆ. ನಂತರ 3 ದಿನ ವಿಶೇಷ ಶಿಬಿರ ನಡೆಯಲಿದ್ದು, ಸಮೀಕ್ಷೆ ಅವಧಿಯಲ್ಲಿ ಬಿಟ್ಟು ಹೋದವರ ಮಾಹಿತಿ ಸಂಗ್ರಹಿಸಲಾಗುತ್ತದೆ. ಸಮೀಕ್ಷೆಗೆ ನೇಮಕಗೊಂಡಿರುವ ಗಣತಿ ದಾರರು ಸಮೀಕ್ಷೆಯನ್ನು ಜವಾಬ್ದಾರಿಯುತವಾಗಿ ಮಾಡಬೇಕು. ಪಜಾತಿ ಸಮುದಾಯದವರು ತಮ್ಮ ಜಾತಿಯ ಹೆಸರುಗಳನ್ನು ನಿಖರವಾಗಿ ಬರೆಸುವ ಮೂಲಕ ಮೀಸಲಾತಿ ಸೌಲಭ್ಯ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಳೆದ 30 ವರ್ಷಗಳ ಹೋರಾಟದಲ್ಲಿ ಮಾದಿಗ ಸಮುದಾಯ ಪ್ರಮುಖ ಪಾತ್ರ ವಹಿಸಿದ್ದು, ಇದರ ಪ್ರತಿಯಾಗಿ ರಾಜ್ಯ ಸರ್ಕಾರ ಒಳ ಮೀಸಲಾತಿ ಜಾರಿಗೆ ದತ್ತಾಂಶದ ಜಾತಿಗಣತಿ ಮಾಡುತ್ತಿದ್ದು, ಮಾದಿಗ ಸಮುದಾಯದವರು ಕಲಂ 61 ರಲ್ಲಿ ಮಾದಿಗ ಎಂದು ಜಾತಿ ನಮೂದಿಸಿ ಎಂದು ಮಾದಿಗ ಜನಾಂಗಕ್ಕೆ ಮನವಿ ಮಾಡಿದರು.

ಈ ವೇಳೆ ತಾಲೂಕು ಆದಿಜಾಂಬವ ಸಂಘದ ಅಧ್ಯಕ್ಷ ಎಂ.ಲೋಕೇಶ್, ಮುಖಂಡರಾದ ಚಂದ್ರ, ಎಂ.ಡಿ.ಶೇಖರ್, ದಾಸ್ ಪ್ರಕಾಶ್ ಇತರರಿದ್ದರು.


ಜಾತಿ ಜನಗಣತಿ ಕಾರ್ಯಕ್ಕೆ ಚಾಲನೆ ನೀಡಲಾಯಿತು.

ಗ್ರಾಮೀಣ ಜನತೆ ಆರೋಗ್ಯ ಶಿಬಿರ ಸದುಪಯೋಗಪಡಿಸಿಕೊಳ್ಳಿ

ತಾಲೂಕು ಆರೋಗ್ಯಾಧಿಕಾರಿ ಡಾ.ರವಿಕುಮಾರ್



ಶಿಬಿರವನ್ನು ಡಾ.ರವಿಕುಮಾರ್ ಉದ್ಘಾಟಿಸಿದರು.

ಹೆಚ್.ಡಿ.ಕೋಟೆ, ಮೇ 16– ಹಳ್ಳಿಗಾಡಿನ ಜನರ ಆರೋಗ್ಯದ ಹಿತದೃಷ್ಟಿಯಿಂದ ಗ್ರಾಮೀಣ ಭಾಗದಲ್ಲಿ ಆರೋಗ್ಯ ಶಿಬಿರ ಆಯೋಜಿಸಲಾಗಿದ್ದು, ಜನತೆ ಸದುಪಯೋಗಪಡೆದುಕೊಳ್ಳಬೇಕು ಎಂದು ತಾಲೂಕು ಆರೋಗ್ಯಾಧಿಕಾರಿ ಡಾ.ರವಿಕುಮಾರ್ ತಿಳಿಸಿದರು.

ತಾಲೂಕಿನ ಮಾದಾಪುರದಲ್ಲಿ ಹಾರ್ಟ್ ಸಂಸ್ಥೆ ಮೈಸೂರು, ರೋಟರಿ ಕ್ಲಬ್ ಆಫ್ ಮೈಸೂರು ವೆಸ್ಟ್, ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ ಹೆಚ್.ಡಿ.ಕೋಟೆ, ಮಾದಾಪುರ ಗ್ರಾಪಂ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರದ ಸಹಯೋಗದೊಂದಿಗೆ ಮಾದಾಪುರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ಆರೋಗ್ಯ ತಪಾಸಣಾ ಶಿಬಿರದಲ್ಲಿ ಕಣ್ಣಿನ ಪರೀಕ್ಷೆ ಮಧುಮೇಹ, ರಕ್ತದೊತ್ತಡ, ಇಸಿಜಿ, ಹೃದಯ ಸಂಬಂಧಿತ ತೊಂದರೆಗಳು, ಉಸಿರಾಟದ ತೊಂದರೆ ತಪಾಸಣೆ ಮಾಡಲಾಗುತ್ತದೆ. ಸುತ್ತಮುತ್ತಲ ಗ್ರಾಮಗಳ ಜನರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವ ಮೂಲಕ ಶಿಬಿರ ಯಶಸ್ವಿಗೊಳಿಸಿ ಎಂದರು.

ಶಿಬಿರದಲ್ಲಿ ಇನ್ನೂರಕ್ಕೂ ಹೆಚ್ಚು ಮಂದಿ ತಪಾಸಣೆಗೆ ಒಳಪಟ್ಟರು. ಈ ವೇಳೆ ಗ್ರಾಪಂ ಅಧ್ಯಕ್ಷೆ ಸುಧಾ, ಉಪಾಧ್ಯಕ್ಷ ಉಮಾಶಂಕರ್, ವೈದ್ಯಾಧಿಕಾರಿ ಡಾ.ಚಂದ್ರಕಲಾ, ಹಾರ್ಟ್ ಸಂಸ್ಥೆಯ ಶಿವಲಿಂಗ, ನಾರಾಯಣ ಹೆಲ್ತ್ ಸಾಮಾನ್ಯ ರೋಗ ತಜ್ಞೆ ಡಾ.ಹರ್ಷಿತಾ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ರವಿರಾಜ್, ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಗಳಾದ ವೀಣಾ, ಮಾದಮ್ಮ, ದೊರೆ, ಶಶಿರೇಖಾ, ಜಯಂತಿ, ಪ್ರಶಾಂತ್ ಮತ್ತು ತಂಡ, ಎಎಸ್‌ಜಿ ಕಣ್ಣಿನ ಆಸ್ಪತ್ರೆ ಮಹೇಶ್ ಮತ್ತು ತಂಡ, ಆಶಾ ಕಾರ್ಯಕರ್ತೆಯರಿದ್ದರು.

ಅಲ್ಲಮಪ್ರಭು ಪತ್ತಿನ ಸಹಕಾರ ಸಂಘಕ್ಕೆ ಚನ್ನಬಸಪ್ಪ ಅಧ್ಯಕ್ಷ, ನಟರಾಜು ಉಪಾಧ್ಯಕ್ಷ


ಅಲ್ಲಮಪ್ರಭು ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷ ಎ.ಎಸ್.ಚನ್ನಬಸಪ್ಪ ಉಪಾಧ್ಯಕ್ಷ ನಾಗರಾಜು ಅವರನ್ನು ನಿರ್ದೇಶಕರು ಅಭಿನಂದಿಸಿದರು.

ಕೆ.ಆರ್.ನಗರ, ಮೇ 16– ತಾಲೂಕು ಅಲ್ಲಮಪ್ರಭು ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಜಿಪಂ ಮಾಜಿ ಉಪಾಧ್ಯಕ್ಷ ಎ.ಎಸ್.ಚನ್ನಬಸಪ್ಪ ಮತ್ತು ಉಪಾಧ್ಯಕ್ಷರಾಗಿ ಎಪಿಎಂಸಿ ಮಾಜಿ ಅಧ್ಯಕ್ಷ ಕೆ.ಬಿ.ನಟರಾಜು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಪಟ್ಟಣದ ಹಾಸನ– ಮೈಸೂರು ರಸ್ತೆಯ ಅಂಬೇಡ್ಕರ್ ಪುತ್ಥಳಿ ಬಳಿ ಇರುವ ಸಂಘದ ಕಚೇರಿಯಲ್ಲಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಎ.ಎಸ್.ಚನ್ನಬಸಪ್ಪ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಕೆ.ಬಿ.ನಟರಾಜು ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ, ಕಾರ್ಯದರ್ಶಿ ಶಾಂತಮಲ್ಲಪ್ಪ ಪ್ರಕಟಿಸಿದರು.

ಚುನಾವಣಾ ಸಭೆಯಲ್ಲಿ ನಿರ್ದೇಶಕರಾದ ಡಾ.ಸಣ್ಣಲಿಂಗಪ್ಪ, ಕೆಂಪರಾಜು, ವೈ.ಎನ್.ಚಂದ್ರಶೇಖರ್, ವೈ.ಎಸ್.ಸುರೇಶ್, ನಂದೀಶ್, ಕೆ.ಎನ್.ನಾಗರತ್ನಮ್ಮ, ಹೆಚ್.ಎಸ್.ಮನು ಇದ್ದರು.

ಅಲೆಮಾರಿಗಳು ಒಂದೆಡೆ ನೆಲೆ ನಿಂತು ಬದುಕು ಕಟ್ಟಿಕೊಳ್ಳಿ

ಹಿರಿಯ ಸಾಹಿತಿ ಕುಪ್ಪೆ ನಾಗರಾಜು ಕಿವಿಮಾತು


ವಿಚಾರ ಸಂಕಿರಣವನ್ನು ಗಿಡ ನೆಡುವ ಮೂಲಕ ನಾಗರಾಜು ಉದ್ಘಾಟಿಸಿದರು.

ತಿ.ನರಸೀಪುರ, ಮೇ 16– ಸಾಮಾಜಿಕವಾಗಿ ಹಿಂದುಳಿದಿರುವ ಅಲೆಮಾರಿ ಸಮುದಾಯ ಒಂದೆಡೆ ನೆಲೆ ನಿಂತು, ತಮ್ಮ ಮೂಲಭೂತ ಸವಲತ್ತುಗಳಿಗಾಗಿ ಸಂಘಟಿತ ಹೋರಾಟ ಮಾಡುವ ಮೂಲಕ ಶಾಶ್ವತ ಬದುಕನ್ನು ಕಟ್ಟಿಕೊಳ್ಳಬೇಕು ಎಂದು ಅಲೆಮಾರಿ ಮತ್ತು ಅರೆ ಅಲೆಮಾರಿ, ವಿಮುಕ್ತ ಬುಡಕಟ್ಟು ಸಂಘಟನೆ ರಾಜ್ಯ ಗೌರವಾಧ್ಯಕ್ಷ ಮತ್ತು ಹಿರಿಯ ಸಾಹಿತಿ ಕುಪ್ಪೆ ನಾಗರಾಜು ಕಿವಿಮಾತು ಹೇಳಿದರು.

ಪಟ್ಟಣದ ಹೊರವಲಯದ ಕೂಡ್ಲೂರು ರಸ್ತೆಯಲ್ಲಿ ಪ.ಜಾತಿ ಅಲೆಮಾರಿ ಕೊರಚ ಸಮುದಾಯದ 40 ಕುಟುಂಬಗಳ ಶಾಶ್ವತ ನೆಲೆ ಮತ್ತು ಸೂರಿಗಾಗಿ ದಸಂಸ ಹೋರಾಟದ ಫಲದಿಂದ ನೂತನವಾಗಿ ನಿರ್ಮಾಣಗೊಂಡಿರುವ ಶಿವಪಾರ್ವತಿ ನಗರದಲ್ಲಿ ದಸಂಸದಿಂದ ಆಯೋಜಿಸಿದ್ದ 'ದಲಿತರು, ದಮನಿತರು ಮತ್ತು ಸಮಕಾಲೀನ ಆಡಳಿತ' ಕುರಿತ ವಿಚಾರ ಸಂಕಿರಣವನ್ನು ಗಿಡಗಳನ್ನು ನೆಡುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಅಲೆಮಾರಿಗಳು ಅಲೆದಾಡುವುದನ್ನು ಬಿಟ್ಟು, ಮಕ್ಕಳ ಭವಿಷ್ಯದ ದೃಷ್ಟಿಯಿಂದ ಒಂದು ಕಡೆ ನೆಲೆ ನಿಲ್ಲಲೇಬೇಕು. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು ಎಂದು ಸಲಹೆ ನೀಡಿದರು.

ಸಾಮಾಜಿಕ ಹೋರಾಟಗಾರ ಅಹಿಂದ ಜವರಪ್ಪ ಮಾತನಾಡಿ, ಅಲೆಮಾರಿ ಮತ್ತು ಅರೆ ಅಲೆಮಾರಿಗಳಂತಹ ಸಮುದಾಯಗಳ ಜನರ ಜೀವನ ಭದ್ರತೆಗೋಸ್ಕರ ಸರ್ಕಾರಗಳು ಆರ್ಥಿಕವಾಗಿ ಹೊಸತರಹದ ಕಾರ್ಯಕ್ರಮಗಳನ್ನು ರೂಪಿಸಬೇಕು. ಭೂಮಿ ಮತ್ತು ವಸತಿಗಳನ್ನು ನೀಡುವ ಮೂಲಕ ಘನತೆಯ ಬದುಕು ಕಟ್ಟಿಕೊಳ್ಳಲು ನೆರವಾಗಬೇಕು ಎಂದು ಒತ್ತಾಯಿಸಿದರು.

ದಸಂಸ ತಾಲೂಕು ಸಂಚಾಲಕ ಕುಕ್ಕೂರು ರಾಜು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಸಂಚಾಲಕ ಆಲಗೂಡು ಶಿವಕುಮಾರ್, ತಾಲೂಕು ಸಂಚಾಲಕ ಯಾಚೇನಹಳ್ಳಿ ಸೋಮಶೇಖರ್, ಕೊರಚರ ಕಾಲೋನಿ ರಾಜು, ಮುಖಂಡರಾದ ಕಿರಗಸೂರು ರಜಿನಿ, ಬನ್ನಹಳ್ಳಿಹುಂಡಿ ಉಮೇಶ್, ನಾಗರಾಜ್ ಮೂರ್ತಿ ಆಲಗೂಡು, ಇಂಡವಾಳು ಹೊನ್ನಯ್ಯ, ನಾಗರಾಜು, ನಿಲಸೋಗೆ ಸಿದ್ದರಾಜು, ರೇವಣ್ಣ, ಪುಟ್ಟ, ತುರುಗನೂರು ಲಕ್ಷ್ಮಣ, ಬಿಲಿಗೆರೆಹುಂಡಿ ಶಿವಕುಮಾರ್, ಸಿದ್ದರಾಜು, ತೊಟ್ಟವಾಡಿ ಮಹದೇವ, ಮಾವಿನಹಳ್ಳಿ ನಿಂಗರಾಜು, ಶಾಂತಕುಮಾರ್ ಇತರರಿದ್ದರು.

ಚಿಕ್ಕಬಸವೇಗೌಡ ನಿಧನ



ತಿ.ನರಸೀಪುರ, ಮೇ 16– ಪಟ್ಟಣದ ಪುರಸಭೆ ವ್ಯಾಪ್ತಿಯ ಹೆಳವರಹುಂಡಿ ಗ್ರಾಮದ ಕುರುಬ ಸಮುದಾಯದ ಹಿರಿಯ ಮುಖಂಡ ಚಿಕ್ಕಬಸವೇಗೌಡ (95) ಶುಕ್ರವಾರ ಸಂಜೆ ನಿಧನರಾದರು. ಮೃತರು ಬಿಜೆಪಿ ಹಿರಿಯ ಮುಖಂಡ ಸ್ಟಾರ್ ಮಲ್ಲೇಶ್ ಸೇರಿದಂತೆ ಐವರು ಪುತ್ರರು ಮತ್ತು ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶನಿವಾರ 11 ಗಂಟೆಗೆ ಸ್ವಗ್ರಾಮದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಹಲ್ಲೆರೆ ಗ್ರಾಮದಲ್ಲಿ ಅಂಬೇಡ್ಕರ್ ಭಾವಚಿತ್ರಕ್ಕೆ ಅಪಮಾನ ಪ್ರಕರಣ

ಘಟನೆ ಮರುಕಳಿಸದಂತೆ ಕಟ್ಟುನಿಟ್ಟಿನ ಕ್ರಮ: ಶಾಸಕ ದರ್ಶನ್

ನಂಜನಗೂಡು, ಮೇ 16– ತಾಲೂಕಿನ ಹಲ್ಲರೆ ಗ್ರಾಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಭಾವಚಿತ್ರಕ್ಕೆ ಕಿಡಿಗೇಡಿಗಳು ಅಪಮಾನ ಮಾಡಿರುವುದು ಅಕ್ಷಮ್ಯ ಅಪರಾಧವಾಗಿದ್ದು, ಇಂತಹ ಘಟನೆ ಮರುಕಳಿಸದಂತೆ ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸಿ ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾಗುತ್ತೇನೆ ಎಂದು ಶಾಸಕ ದರ್ಶನ್ ತಿಳಿಸಿದರು.

ಶುಕ್ರವಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಷ್ಣುವರ್ಧನ್ ಜೊತೆಗೂಡಿ ಹಲ್ಲರೆ ಗ್ರಾಮಕ್ಕೆ ಭೇಟಿ ನೀಡಿ ಗ್ರಾಮಸ್ಥರೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಹಲ್ಲರೆ ಗ್ರಾಮದಲ್ಲಿ ಯಾವುದೇ ಕಾರಣಕ್ಕೂ ಅಹಿತಕರ ಘಟನೆಗಳಿಗೆ ಅವಕಾಶ ಇಲ್ಲ. ದೇಶದ ಕಾನೂನು ಯಾರ ಸ್ವತ್ತಲ್ಲ. ತಪ್ಪು ಮಾಡಿದವರಿಗೆ ಶಿಕ್ಷೆ ಖಂಡಿತ ಆಗುತ್ತದೆ. ಗ್ರಾಮದಲ್ಲಿ ಶಾಂತಿಯುತ ಬದುಕಿಗೆ ಅವಕಾಶ ಕಲ್ಪಿಸಿಕೊಡಲು ನಾನು ಬದ್ಧ ಎಂದರು.

ಇಂತಹ ಸಮಯದಲ್ಲಿ ತಾಳ್ಮೆ ಕಳೆದುಕೊಳ್ಳಬಾರದು. ಕಾನೂನಿನ ಬಗ್ಗೆ ಗೌರವ ಮತ್ತು ನಂಬಿಕೆ ಇರಬೇಕು. ನಾನು ಮೀಸಲು ವಿಧಾನಸಭಾ ಕ್ಷೇತ್ರದಲ್ಲಿ ಶಾಸಕನಾಗಿದ್ದೇನೆ ಅಂದರೆ ಅದಕ್ಕೆ ಬಾಬಾ ಸಾಹೇಬರು ಮತ್ತು ಸಂವಿಧಾನ ಕಾರಣ. ನಮಗೆಲ್ಲರಿಗೂ ಸಮಾನತೆ ಮತ್ತು ಸಾಮಾಜಿಕ ನ್ಯಾಯ ನೀಡಿದ್ದಾರೆ. ಅದರಂತೆ ನಾನು ನಿಮ್ಮ ಜೊತೆ ಇದ್ದು ಬಾಬಾ ಸಾಹೇಬರಂತೆ ಹೋರಾಡಿ ನ್ಯಾಯ ಕೊಡಿಸುವ ಕೆಲಸ ಮಾಡುತ್ತೇನೆ. ಮೈಸೂರು ಜಿಲ್ಲೆಯಲ್ಲಿ ಯಾವುದೇ ರಾಷ್ಟ್ರ ನಾಯಕರಿಗೆ ಕಿಡಿಗೇಡಿಗಳು ಅಪಮಾನ ಮಾಡಲು ಬೆಚ್ಚಿ ಬೀಳಬೇಕು. ಅಂತಹ ಕಠಿಣ ಕಾನೂನು ಕ್ರಮಕ್ಕೆ ನಾನು ಪೊಲೀಸರಲ್ಲಿ ಆಗ್ರಹಿಸಿದ್ದೇನೆ ಎಂದು ಶಾಸಕ ದರ್ಶನ್ ಗ್ರಾಮಸ್ಥರಿಗೆ ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಷ್ಣುವರ್ಧನ್ ಮಾತನಾಡಿ, ಘಟನೆ ಸಂಬಂಧ ಆರೋಪಿಗಳ ಮೇಲೆ ನಿರ್ದಾಕ್ಷಿಣ್ಯ ಕ್ರಮಕ್ಕೆ ಮುಂದಾಗುತ್ತೇವೆ. ಶಾಸಕ ದರ್ಶನ್ ಅವರು ನಮಗೆ ಎಲ್ಲಾ ರೀತಿಯ ಸಹಕಾರ ನೀಡಿದ್ದಾರೆ. ಕಿಡಿಗೇಡಿಗಳ ವಿರುದ್ಧ ತೆಗೆದುಕೊಳ್ಳುವ ಕ್ರಮ ಇತಿಹಾಸವಾಗಬೇಕು. ಅಂತಹ ಕಠಿಣ ಕ್ರಮಕ್ಕೆ ಮುಂದಾಗುತ್ತೇವೆ. ಹಲ್ಲರೆ ಗ್ರಾಮದಲ್ಲಿ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ಇಲ್ಲ. ಶಾಂತಿಯುತವಾದ ಬದುಕು ಸಾಗಿಸಲು ಪೊಲೀಸ್ ಅಧಿಕಾರಿಗಳಾದ ನಾವು ಅನುವು ಮಾಡಿಕೊಡುತ್ತೇವೆ ಎಂದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ದರ್ಶನ್, ಗ್ರಾಮದಲ್ಲಿ ನಡೆದಿರುವ ಘಟನೆ ಸಂಬಂಧ 2 ಸಮಾಜದ ಮುಖಂಡರನ್ನು ಭೇಟಿ ಮಾಡಿ ಅವರ ಸಮಸ್ಯೆ ಆಲಿಸಿದ್ದೇನೆ. ಅವರು ಸಹ ತಪ್ಪಿತಸ್ಥರನ್ನು ಶಿಕ್ಷೆಗೆ ಗುರಿಪಡಿಸಬೇಕು ಎಂದು ಒತ್ತಾಯಿಸಿದ್ದಾರೆ. ಈ ಘಟನೆಗೆ ಸಂಬಂಧಪಟ್ಟ ತನಿಖೆ ಪ್ರಗತಿಯಲ್ಲಿದ್ದು, ನಿಷ್ಪಕ್ಷಪಾತ ತನಿಖೆ ನಡೆಸಿ ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸಿ ನೊಂದವರಿಗೆ ನ್ಯಾಯ ಒದಗಿಸುವಂತೆ ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದರು.

ಈ ವೇಳೆ ಮಾಜಿ ಶಾಸಕ ಕೇಶವಮೂರ್ತಿ, ತಹಸೀಲ್ದಾರ್ ಶಿವಕುಮಾರ್ ಕಾಸ್ನೂರ್, ವಾಲ್ಮೀಕಿ ನಿಗಮದ ಮಾಜಿ ಅಧ್ಯಕ್ಷ ಎಸ್.ಸಿ.ಬಸವರಾಜು, ಡಿವೈಎಸ್ಪಿ ರಘು, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಕೆ.ಮಾರುತಿ, ತಾಪಂ ಮಾಜಿ ಅಧ್ಯಕ್ಷ ನಾಗೇಶ್ ರಾಜ್, ತಾಲೂಕು ನಾಯಕರ ಸಂಘದ ಅಧ್ಯಕ್ಷ ನಾಗರಾಜ್, ಮಹದೇವ್ ಸೇರಿದಂತೆ ಹಲವರಿದ್ದರು.


ಹಲ್ಲರೆ ಗ್ರಾಮಕ್ಕೆ ಶಾಸಕ ದರ್ಶನ್ ಭೇಟಿ ನೀಡಿ ಗ್ರಾಮಸ್ಥರೊಂದಿಗೆ ಮಾತನಾಡಿದರು.

ಮೈಸೂರು ಮಿತ್ರ

ಶನಿವಾರ 17 ಮೇ 2025

ಸಾಂಕ್ರಾಮಿಕ ರೋಗಗಳಿಗೆ ಬ್ರೇಕ್ ಹಾಕಲು ಸೊಳ್ಳೆ ನಿಯಂತ್ರಣಕ್ಕೆ ಕ್ರಮ

ಮನೆಯ ಸುತ್ತಮುತ್ತ ನೀರು ನಿಲ್ಲದಂತೆ; ಲಾರ್ವ ಉತ್ಪಾದನೆ ಆಗದಂತೆ ಕಟ್ಟೆಚ್ಚರಕ್ಕೆ ಸೂಚನೆ





ಮೈಸೂರಿನ ಜಾಕಿ ಕ್ವಾಟ್ರಸ್‌ನಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಸಿ.ಸುವರ್ಣ ಮಾತನಾಡಿದರು. ಮತ್ತೊಂದು ಚಿತ್ರದಲ್ಲಿ ಸೊಳ್ಳೆಗಳ ಲಾರ್ವ ಹಾಗೂ ಫಾಗಿಂಗ್ ಯಂತ್ರ ಪ್ರದರ್ಶನಕ್ಕಿಟ್ಟಿರುವುದು.

ಮೈಸೂರು, ಮೇ.16(ಎಂಟಿವೈ)– ಡೆಂಗ್ಯೂ, ಚಿಕನ್ ಗುನ್ಯಾ ಸೇರಿದಂತೆ ಸಾಂಕ್ರಾಮಿಕ ರೋಗ ಹರಡುವಿಕೆ ತಡೆಗಟ್ಟಲು ಮನೆ ಸುತ್ತಮುತ್ತ ನೀರು ನಿಲ್ಲದಂತೆ ಹಾಗೂ ಸೊಳ್ಳೆಗಳ ಲಾರ್ವ ಉತ್ಪಾದನೆಯಾಗದಂತೆ ಕಟ್ಟೆಚ್ಚರ ವಹಿಸುವಂತೆ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಸಿ.ಸುವರ್ಣ ಸಲಹೆ ನೀಡಿದ್ದಾರೆ.

ಮೈಸೂರಿನ ಜಾಕಿ ಕ್ವಾಟ್ರಸ್‌ನಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಕಚೇರಿ ವತಿಯಿಂದ ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ 'ಡೆಂಗ್ಯೂ ಸೋಲಿಸಲು ಇಡಬೇಕಾದ ಹೆಜ್ಜೆಗಳು: ಪರಿಶೀಲಿಸಿ, ಸ್ವಚ್ಛಗೊಳಿಸಿ, ಮುಚ್ಚಿಡಿ' ಶೀರ್ಷಿಕೆಯಡಿ ಹಮ್ಮಿಕೊಂಡಿದ್ದ ಜಾಗೃತಿ ಅಭಿಯಾನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಳೆಗಾಲ ಆರಂಭವಾಗಿದೆ. ಮನೆ ಸುತ್ತಮುತ್ತ, ರಸ್ತೆಯಲ್ಲಿ ಮಳೆ ನೀರು ನಿಲ್ಲುವುದರಿಂದ ಸೊಳ್ಳೆ ಉತ್ಪತ್ತಿಯಾಗಿ, ಡೆಂಗ್ಯೂ, ಚಿಕನ್ ಗುನ್ಯಾ ಸೇರಿದಂತೆ ವಿವಿಧ ಸಾಂಕ್ರಾಮಿಕ ರೋಗ ಹರಡುವ ಸಾಧ್ಯತೆ ಹೆಚ್ಚಾಗಿದೆ. ಈ ಹಿನ್ನೆಲೆಯಲ್ಲಿ ಎಲ್ಲರೂ ತಮ್ಮ ಮನೆಯೊಳಗೆ ಹಾಗೂ ಮನೆ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಮಳೆ ನೀರು ಒಂದೇ ಕಡೆ ನಿಲ್ಲಲು ಬಿಡಬಾರದು. ಮಳೆ ನೀರು ನಿಂತಿದ್ದರೆ ಸಾಂಕ್ರಮಿಕ ರೋಗ ಹರಡುವ ಸೊಳ್ಳೆಗಳ ಲಾರ್ವ ಉತ್ಪತ್ತಿಯಾಗಿ, ಸೊಳ್ಳೆಗಳ ಸಂಖ್ಯೆ ಹೆಚ್ಚಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಡೆಂಗ್ಯೂ ಜ್ವರ ಬರದಂತೆ ತಡೆಗಟ್ಟಲು ಆರೋಗ್ಯ ಇಲಾಖೆಯೊಂದಿಗೆ ಎಲ್ಲರೂ ಕೈ ಜೋಡಿಸಬೇಕು. ಡೆಂಗ್ಯೂ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು. ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯ ಜೊತೆ ಜನಪ್ರತಿನಿಧಿಗಳ ಸಹಕಾರ ಬಹಳ ಮುಖ್ಯವಾಗಿರುತ್ತದೆ. ಪ್ರತಿ ಶುಕ್ರವಾರ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮಟ್ಟದಲ್ಲಿ ಲಾರ್ವಾ ಸರ್ವೆ ನಡೆಸಿ, ಲಾರ್ವಾ ನಾಶ ಮಾಡುವ ಅಭಿಯಾನ ನಡೆಸಲಾಗುತ್ತಿದೆ. ಸೊಳ್ಳೆಗಳ ನಿಯಂತ್ರಣ ಮಾಡುವುದರಿಂದ ಡೆಂಗ್ಯೂ ಹಾಗೂ ಇನ್ನಿತರೆ ಸಾಂಕ್ರಾಮಿಕ ರೋಗಗಳ ಪ್ರಸರಣಕ್ಕೆ ಕಡಿವಾಣ ಹಾಕಬಹುದು. ಜ್ವರ ಬಂದ ತಕ್ಷಣ ಹತ್ತಿರದ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆಯಬೇಕು ಎಂದು ಸಲಹೆ ನೀಡಿದರು.

ವರ್ಷ	ಡೆಂಗ್ಯೂ	ಮರಣ	ಚಿಕನ್‌ಗುನ್ಯಾ
2022	789	0	103
2023	702	0	219
2024	946	1	186
2025	15	0	38

ಸಂಶಯಾಸ್ಪದ ಡೆಂಗ್ಯೂ, ಚಿಕೂನ್ ಗುನ್ಯಾ ಜ್ವರ ಬಾಧಿತರ ರಕ್ತ ಮಾದರಿ ಪರೀಕ್ಷೆಯನ್ನು ಮೇಟಗಳ್ಳಿಯಲ್ಲಿರುವ ಜಿಲ್ಲಾಸ್ಪತ್ರೆಯ ಪ್ರಯೋಗಾಲಯದಲ್ಲಿ ಉಚಿತವಾಗಿ ಮಾಡಲಾಗುತ್ತದೆ. ಈ ಸೌಲಭ್ಯವನ್ನು ಸಾರ್ವಜನಿಕರು ಬಳಕೆ ಮಾಡಿಕೊಳ್ಳಬೇಕು. ಮನೆ ಮನೆಗೆ ಭೇಟಿ ನೀಡಿ ಈಡೀಸ್ ಲಾರ್ವ ಸಮೀಕ್ಷೆ ಕಾರ್ಯವನ್ನು ನಿರಂತರವಾಗಿ ಮಾಡಲಾಗುತ್ತಿದೆ. ಪ್ರತಿ ತಿಂಗಳ ಮೊದಲನೇ ಮತ್ತು ಮೂರನೇ ಶುಕ್ರವಾರದಂದು ಇಲಾಖಾ ಕ್ಷೇತ್ರ ಸಿಬ್ಬಂದಿಯನ್ನು ನಿಯೋಜಿಸಿ ನಗರಗಳಲ್ಲಿ ಲಾರ್ವ ಸಮೀಕ್ಷೆ ಮತ್ತು ಜ್ವರ ಸಮೀಕ್ಷೆ ನಡೆಸಲಾಗುತ್ತಿದೆ ಎಂದರು.

ಡೆಂಗ್ಯೂ ಪ್ರಕರಣಗಳು ಹೆಚ್ಚು ವರದಿಯಾಗುತ್ತಿರುವ ಪ್ರದೇಶಗಳಲ್ಲಿ ಸ್ವಯಂ ಸೇವಕರನ್ನು ಗುರುತಿಸಿ, ಗೌರವಧನ ನೀಡುವ ಮೂಲಕ ಲಾರ್ವ ಸಮೀಕ್ಷೆ ನಡೆಸುತ್ತಿದ್ದು, ಈ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಿ ಆರೋಗ್ಯ ಶಿಕ್ಷಣ ನೀಡಲಾಗುತ್ತಿದೆ. ಪ್ರತಿ ಶುಕ್ರವಾರ ಲಾರ್ವಾ ಸಮೀಕ್ಷೆಯನ್ನೂ ಎಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮಟ್ಟದಲ್ಲಿ ಕೈಕೊಂಡಿದ್ದು, ಲಾರ್ವನಾಶ ಮಾಡಿ ಸೊಳ್ಳೆಗಳ ಬೆಳವಣಿಗೆಯ ಮಟ್ಟವನ್ನು ಕಡಿಮೆ ಮಾಡುವುದರಿಂದ ಡೆಂಗ್ಯೂ ಜ್ವರಗಳ ಪ್ರಮಾಣವನ್ನು ಕಡಿಮೆ ಮಾಡಬಹುದು. ಜ್ವರ ಬಂದ ತಕ್ಷಣ ಹತ್ತಿರದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನಗರ ಪಾಲಿಕೆ ಮಾಜಿ ಸದಸ್ಯರಾದ ರಜನಿ ಅಣ್ಣಯ್ಯ, ಛಾಯಾದೇವಿ, ರಾಜ್ಯ ಮಟ್ಟದಿಂದ ಎಂಟಾಮಾಲಾಜಿಸ್ಟ್ ಉಷಾ, ಜಿಲ್ಲಾ ಮಟ್ಟದಿಂದ ಜಿಲ್ಲಾ ಆರ್‌ಸಿಹೆಚ್ ಡಾ.ಸಿರಾಜ್ ಮಹಮದ್, ತಾಲೂಕು ಆರೋಗ್ಯಾಧಿಕಾರಿ ಪುಟ್ಟತಾಯಮ್ಮ, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ನವೀನ್, ಆರೋಗ್ಯ ಶಿಕ್ಷಣಾಧಿಕಾರಿಗಳಾದ ಮುನೀಂದ್ರಮ್ಮ, ಪದ್ಮಾವತಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು, ಮೇಲ್ವಿಚಾಕರು, ಪ್ರಾಥಮಿಕ ಆರೋಗ್ಯ ಕೇಂದ್ರದ ಆಶಾ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಸಹಕಾರ ಸಂಘದ ಅಧ್ಯಕ್ಷ–ಉಪಾಧ್ಯಕ್ಷರ ಚುನಾವಣೆ ನಡೆಸದ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ದೂರು

ಮೈಸೂರು, ಮೇ 16(ಎಂಟಿವೈ)– ಹುಣಸೂರಿನ ಡಾ.ಬಿ.ಆರ್.ಅಂಬೇಡ್ಕರ್ ವಿವಿದೋದ್ದೇಶ ಸಹಕಾರ ಸಂಘದ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆ ನಡೆಸದೇ ಗೈರು ಹಾಜರಾಗುವ ಮೂಲಕ ಪಟ್ಟಭದ್ರ ಹಿಸಾಸಕ್ತಿಗಳ ಕೈಗೊಂಬೆಯಾಗಿರುವ ಸಹಕಾರ ಇಲಾಖೆ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ದೂರು ನೀಡಲಾಗಿದೆ ಎಂದು ಸಂಘದ ಚುನಾಯಿತ ನಿರ್ದೇಶಕ ಪುಟ್ಟರಾಜು ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹುಣಸೂರಿನ ಮಹಾಬೋಧಿಯಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ವಿವಿದೋದ್ದೇಶ ಸಹಕಾರ ಸಂಘಕ್ಕೆ ಏ.27ರಂದು ನಡೆದ ಚುನಾವಣೆಯಲ್ಲಿ 30 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿ, ಅಂತಿಮವಾಗಿ ಮಾತುಕತೆ ಮೂಲಕ 13 ಮಂದಿ ಅವಿರೋಧವಾಗಿ ಆಯ್ಕೆಯಾಗಿ, ಉಳಿದವರು ನಾಮಪತ್ರ ಹಿಂಪಡೆದಿದ್ದರು. ಮೇ 13ರಂದು ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆಗೆ ದಿನಾಂಕ ನಿಗಧಿಯಾಗಿ, ಚುನಾವಣಾಧಿಕಾರಿಯನ್ನು ನೇಮಿಸಲಾಗಿತ್ತು. ಅಂದು 8 ಮಂದಿ ಚುನಾವಣಾ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಲು ಆಗಮಿಸಿದ್ದರೂ, ಚುನಾವಣಾಧಿಕಾರಿ ರಾಜಣ್ಣ ಗೈರು ಹಾಜರಾಗಿದ್ದರು. ಕರೆ ಮಾಡಿದರೆ ಮೊಬೈಲ್ ಸ್ವಿಚ್ಡ್ ಆಫ್ ಮಾಡಿಕೊಂಡಿದ್ದರು.

ಈ ವಿಚಾರವನ್ನು ಎಆರ್‌ಓ, ಡಿಆರ್‌ಓ ಹಾಗೂ ಜೆಆರ್‌ಓ ಗಮನಕ್ಕೆ ತಂದು ಚುನಾವಣಾಧಿಕಾರಿ ಗೈರು ಹಾಜರಿ ಬಗ್ಗೆ ಮಾಹಿತಿ ನೀಡಿ, ಚುನಾವಣೆ ನಡೆಸಲು ಕ್ರಮ ಕೈಗೊಳ್ಳುವಂತೆ ಮನವಿ ಮಾಡಿಕೊಂಡರೂ ಒಬ್ಬರಾದ ಮೇಲೆ ಒಬ್ಬರಂತೆ ನಾಲ್ಕು ಮಂದಿ ಅಧಿಕಾರಿಗಳೂ ಮೊಬೈಲ್ ಸ್ವಿಚ್ಡ್ ಆಫ್ ಮಾಡಿಕೊಂಡರು. ಇದರಿಂದ ಚುನಾವಣಾ ಪ್ರಕ್ರಿಯೆ ಸ್ಥಗಿತಗೊಂಡಿದೆ. ಈ ಹಿನ್ನೆಲೆಯಲ್ಲಿ ಎಆರ್‌ಓ ಮೇಲಿನ ಕ್ರಮಕ್ಕಾಗಿ ಡಿಆರ್‌ಓಗೆ ದೂರು ನೀಡಲಾಗಿದೆ. ಡಿಆರ್‌ಓ ಮೇಲೆ ಕ್ರಮ ಕೈಗೊಳ್ಳಲು ಜೆಆರ್‌ಸಿಎಸ್‌ಗೆ ದೂರು ನೀಡಿ, ಜೆಆರ್‌ಸಿಎಸ್ ಮೇಲೆ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ದೂರು ನೀಡಲಾಗಿದೆ. ಹುಣಸೂರಿನಲ್ಲಿ ಸಹಕಾರಿ ಇಲಾಖೆಯ ಅಧಿಕಾರಿಗಳು ರಾಜಕಾರಣಿಗಳಂತೆ ವರ್ತಿಸುತ್ತಿದ್ದಾರೆ. ದುರುದ್ದೇಶದಿಂದ ಚುನಾವಣೆಗೆ ಗೈರು ಹಾಜರಾದ, ಅಲ್ಲದೆ, ಕರೆ ಮಾಡಿದರೂ ಸ್ಪಂಧಿಸದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ ಸಹಕಾರ ಇಲಾಖೆಯ ಡಿಆರ್ ಕಚೇರಿ ಮುಂದೆ ಪ್ರತಿಭಟನೆ ಹಮ್ಮಿಕೊಳ್ಳುವುದಾಗಿ ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ವಿವಿದೋದ್ದೇಶ ಸಹಕಾರ ಸಂಘದ ನಿರ್ದೇಶಕರಾದ ಪುಟ್ಟಮಾದಯ್ಯ, ಶಿವಯ್ಯ, ಸಿ.ಕೆ.ದಯಾನಂದ, ಮಹದೇವಸ್ವಾಮಿ, ಹೆಚ್.ಬಿ.ನಾಗರಾಜ್ ಕೊಳಗಟ್ಟ ನಾಗರಾಜು, ರಾಧಾ ಶಿವಣ್ಣ ಇದ್ದರು.

ಅಮೇರಿಕಾದಲ್ಲಿನ ಅಂಬಾನಿ, ಅದಾನಿ ವ್ಯಾಪಾರಕ್ಕೆ ತೊಂದರೆ ಆಗಬಾರದೆಂದು ಕದನ ವಿರಾಮ ಘೋಷಣೆ

ಪಾಕ್ ಆಕ್ರಮಿತ ಕಾಶ್ಮೀರ ವಶಕ್ಕೆ ಇದು ಒಳ್ಳೆಯ ಅವಕಾಶವಾಗಿತ್ತು; ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್



ಮೈಸೂರು, ಮೇ16(ಬಿಎಲ್‌ಯು)– ಭಾರತದ ಶ್ರೀಮಂತ ಉದ್ಯಮಿಗಳಾದ ಅಂಬಾನಿ ಮತ್ತು ಅದಾನಿ ಅವರ ಅಮೇರಿಕಾದ ವ್ಯಾಪಾರ ವಹಿವಾಟಿಗೆ ಯಾವುದೇ ತೊಡಕಾಗಬಾರದೆಂಬ ಉದ್ದೇಶದಿಂದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪಾಕಿಸ್ತಾನದ ಜೊತೆ ಯುದ್ಧ ಮಾಡದೆ ಕದನ ವಿರಾಮ ಘೋಷಣೆ ಮಾಡಿದ್ದಾರೆ ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಆರೋಪಿಸಿದ್ದಾರೆ.

ನಗರದ ಕಾಂಗ್ರೆಸ್ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂಬಾನಿ ಮತ್ತು ಅದಾನಿ ಅವರು ಅಮೇರಿಕಾದಲ್ಲಿ ನೂರು ಮಿಲಿಯನ್ ಡಾಲರ್ ಬಂಡವಾಳ ಹೂಡುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಇವರ ವ್ಯಾಪಾರ ವಹಿವಾಟಿಗೆ ತೊಂದರೆ ಆಗಬಾರದೆಂದು ನರೇಂದ್ರ ಮೋದಿ ಅವರು ಕದನ ವಿರಾಮ ತೀರ್ಮಾನ ಕೈಗೊಂಡಿದ್ದಾರೆ ಎಂದರು.

ಅಧಿಕೃತವಾಗಿ ಯುದ್ಧ ಆರಂಭವಾಗಿರುವ ಮಾಹಿತಿಯನ್ನು ದೇಶದ ಯಾರಿಗೂ ತಿಳಿಸಿರಲಿಲ್ಲ. ಹೀಗಿರುವಾಗ ಕದನ ವಿರಾಮದ ಪ್ರಶ್ನೆ ಹೇಗೆ ಉದ್ಭವಿಸುತ್ತದೆ ಎಂದು ಪ್ರಶ್ನಿಸಿದ ಲಕ್ಷ್ಮಣ, ಪಾಕಿಸ್ತಾನದ ಹಲವು ಸ್ಥಳಗಳ ಮೇಲೆ ಬಾಂಬ್ ಸ್ಫೋಟಿಸಿರುವುದನ್ನೇ ಯುದ್ಧವೆಂದು ಭಾವಿಸಲಾಯಿತು. ಈ ಮೂಲಕ ಪಾಕಿಸ್ತಾನದ ಕಥೆ ಮುಗಿದೆ ಹೋಯಿತು ಎಂದು ಪ್ರಚಾರ ಪಡೆದರು ಎಂದು ಟೀಕಿಸಿದರು

ಪಾಕಿಸ್ತಾನದ ಮೇಲಿನ ದಾಳಿಯನ್ನು ಮತ್ತಷ್ಟು ತೀವ್ರಗೊಳಿಸಿ ಪಾಕ್ ಆಕ್ರಮಿತ ಕಾಶ್ಮೀರವನ್ನು ನಮ್ಮ ವಶಕ್ಕೆ ತೆಗೆದುಕೊಳ್ಳಬಹುದಿತ್ತು. ಈ ಮೂಲಕ 1947ರಿಂದ ಇಲ್ಲಿ ತನಕ ಪಾಕಿಸ್ತಾನದ ಉಗ್ರರು ನೀಡುತ್ತಿದ್ದ ಉಪಟಳಕ್ಕೆ ಕೊನೆ ಆಡಬಹುದಿತ್ತು. ಆದರೆ ಕದನ ವಿರಾಮ ಘೋಷಣೆ ಮಾಡಿದ ಅಮೇರಿಕಾ ಅಧ್ಯಕ್ಷ ಡೋನಾಲ್ಡ್ ಟ್ರಂಪ್‌ಗೆ ನಮ್ಮ ಭಾರತದ ಸಾರ್ವಭೌಮತ್ವವನ್ನು ನರೇಂದ್ರ ಮೋದಿ ಅಡವಿಟ್ಟರು ಎಂದು ಟೀಕಿಸಿದರು.

ಈ ಮೂಲಕ 56 ಇಂಚಿನ ದೇಹದಾರ್ಢ್ಯದ ಪ್ರಧಾನಿ ನರೇಂದ್ರ ಮೋದಿ ಅವರು ಅಮೆರಿಕಾಗೆ ಶರಣಾದರು. ಕೊನೆ ಓವರ್ ಕ್ರಿಕೆಟ್‌ನಲ್ಲಿ ಭಾರತ ಗೆಲ್ಲುವ ಸಾಧ್ಯತೆ ಇತ್ತು. ಆದರೆ ಥರ್ಡ್ ಅಂಪೈರ್ ಭಾರತಕ್ಕೆ ಜಯ ಘೋಷಿಸದೆ ಡ್ರಾ ಹೇಳಿದಂತೆ ಡೋನಾಲ್ಡ್ ಟ್ರಂಪ್ ಕದನ ವಿರಾಮ ಘೋಷಣೆ ಮಾಡಿದ್ದಾರೆ. ಈ ಮೂಲಕ ಇಡೀ ಭಾರತವನ್ನು ಡೋನಾಲ್ಡ್ ಟ್ರಂಪ್ ಕೈಗಿತ್ತಿದ್ದಾರೆ ಎಂದು ಟೀಕಿಸಿದರು.

ಕಾಶ್ಮೀರದ ಪಹಲ್ಗಾಮ್‌ನಲ್ಲಿ ಬಹಳಷ್ಟು ಪ್ರವಾಸಿಗರು ಬರುವ ಹಿನ್ನೆಲೆಯಲ್ಲಿ ಉಗ್ರರ ದಾಳಿಯ ಮುನ್ಸೂಚನೆ ಅರಿತು ಬಿಗಿ ಭದ್ರತೆ ನೀಡಬೇಕಿತ್ತು. ಆದರೆ ಗುಪ್ತಚರ ವೈಫಲ್ಯದಿಂದ 26 ಅಮಾಯಕರು ಪ್ರಾಣ ಕಳೆದುಕೊಂಡರು. ವಾಸ್ತವತೆಯನ್ನು ರಾಜ್ಯದ ಜನತೆ ಮುಂದಿಟ್ಟರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮೇಲೆ ಮುಧೋಳ ನಾಯಿಗಳಂತೆ ಮುಗಿ ಬೀಳುತ್ತಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪಾಕಿಸ್ತಾನದ ಮೇಲೆ ದಾಳಿ ಮಾಡಲು ಪ್ರಮುಖ ಪಾತ್ರ ವಹಿಸಿದ್ದ ಕರ್ನಲ್ ಸೋಫಿಯಾ ಖುರೇಷಿ ಬಗ್ಗೆ ವಿವಾದಾತ್ಮಕ ಹೇಳಿಕೆ ನೀಡಿರುವ ಮಧ್ಯ ಪ್ರದೇಶದ ಬಿಜೆಪಿ ಸಚಿವ ವಿವೇಕ್ ಶಾ ಅವರನ್ನು ಸಚಿವ ಸ್ಥಾನದಿಂದ ವಜಾ ಮಾಡಬೇಕೆಂದು ಇದೇ ವೇಳೆ ಲಕ್ಷ್ಮಣ ಆಗ್ರಹಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರಿಗೆ ಅಂತರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂ ಮಂಜೂರು ಮಾಡಿದ್ದಾರೆ. ಆದರೆ ಈಗ ಬಿಜೆಪಿಯವರು ಇದರ ಕ್ರೆಡಿಟ್ ಪಡೆಯುತ್ತಿದ್ದಾರೆ. ಮೈಸೂರು ವಿಮಾನ ನಿಲ್ದಾಣದ ಮೇಲ್ದರ್ಜೆಗೆ ಕೇಂದ್ರ ಸರ್ಕಾರದಿಂದ ಹಣ ತರದ ಸಂಸದ ಯದುವೀರ್ ಅವರು ಸುಳ್ಳು ಭರವಸೆ ನೀಡುತ್ತಾ ಓಡಾಡುತ್ತಿದ್ದಾರೆ ಎಂದು ಲಕ್ಷ್ಮಣ್ ಆಪಾದಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ಬಿ.ಎಂ.ರಾಮು, ಮಾಧ್ಯಮ ವಕ್ತಾರ ಮಹೇಶ್ ಉಪಸ್ಥಿತರಿದ್ದರು.

ಜೆಪಿ ಅಭಿನಯದ 'ಭಗೀರಥ' ಶತದಿನೋತ್ಸವ

ಇಂದು ಮೈಸೂರಲ್ಲಿ ಸ್ಟಾರ್ ಮೆರವಣಿಗೆ, ಸಿಹಿ ವಿತರಣೆ

ಮೈಸೂರು, ಮೇ16(ಜಿಎ)–ಡೇರಿಂಗ್ ಸ್ಟಾರ್ ಎಸ್.ಜಯಪ್ರಕಾಶ್(ಜೆಪಿ) ಅಭಿನಯಿಸಿರುವ 'ಭಗೀರಥ' ಚಲನಚಿತ್ರವು ಶತದಿನ ಪೂರೈಸಿದ ಹಿನ್ನೆಲೆಯಲ್ಲಿ ಡಾ.ರಾಜ್‌ಕುಮಾರ್ ಅಭಿಮಾನಿಗಳ ಸಂಘದಿಂದ ಮೇ17ರಂದು ಸ್ಟಾರ್ ಮೆರವಣಿಗೆಯನ್ನು ಏರ್ಪಡಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಕನ್ನಡ ಪರ ಹೋರಾಟಗಾರ ತೇಜಸ್ ಲೋಕೇಶ್‌ಗೌಡ ಈ ವಿಷಯ ತಿಳಿಸಿ, ಅಂದು ಬೆಳಗ್ಗೆ 11 ಗಂಟೆಗೆ ಸ್ಟಾರ್ ಮೆರವಣಿಗೆಯೂ ಗನ್ ಹೌಸ್ ಮುಂಭಾಗದಿಂದ ಪ್ರಭಾ ಚಿತ್ರಮಂದಿರವರೆಗೆ ಸಾಗಲಿದೆ. ನಂತರ ಚಿತ್ರಮಂದಿರದಲ್ಲಿ ಸಿಹಿ ವಿತರಿಸಲಾಗುತ್ತದೆ ಎಂದರು.

ಡಾ.ರಾಜ್‌ಕುಮಾರ್ ಅಭಿಮಾನಿಗಳ ಸಂಘ ಅಧ್ಯಕ್ಷ ಮಹದೇವಸ್ವಾಮಿ ಮಾತನಾಡಿ, ಡಾ.ರಾಜ್ ಕುಮಾರ್, ವಿಷ್ಣುವರ್ಧನ್, ಅಂಬರೀಷ್ ಸೇರಿದಂತೆ ಹಿರಿಯ ಕಲಾವಿದರ ಚಿತ್ರಗಳು ಮೊದಲು 25 ವಾರಗಳ ಚಿತ್ರ ಪ್ರದರ್ಶನ ಕಂಡು ಯಶಸ್ಸು ಗಳಿಸುತ್ತಿದ್ದವು. ಆದರೆ, ಇಂದು 25ದಿನಗಳು ಚಿತ್ರಮಂದಿರದಲ್ಲಿ ಯಾವುದೇ ಚಿತ್ರ ಇರುವುದಿಲ್ಲ. ಈ ನಡುವೆ ಎಸ್.ಜಯಪ್ರಕಾಶ್(ಜೆಪಿ) ಅಭಿನಯಿಸಿರುವ ಭಗೀರಥ ಚಿತ್ರವು ಶತದಿನ ಪೂರೈಸಿದ ಹಿನ್ನೆಲೆಯಲ್ಲಿ ಸ್ಟಾರ್ ಮೆರವಣಿಗೆ ಮಾಡುವ ಮೂಲಕ ಚಿತ್ರ ವೀಕ್ಷಿಸಿದವರಿಗೆ ಧನ್ಯವಾದ ತಿಳಿಸಲಿದ್ದೇವೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಭಾಗ್ಯಮ್ಮ ಶಿವಕುಮಾರ್, ವರಕೋಡು ಕೃಷ್ಣ, ಕೃಷ್ಣಪ್ಪ, ರಘು ಅರಸ್, ಮಂಜುಳಾ ಮತ್ತಿತರರು ಉಪಸ್ಥಿತರಿದ್ದರು.

ನಾಳೆ ಮೈಸೂರಲ್ಲಿ 'ಸಪ್ತ ಸಂಪದ' ಸಮಾವೇಶ

ಮೈಸೂರು, ಮೇ16(ಜಿಎ)–ಲಯನ್ಸ್ ಅಂತರರಾಷ್ಟ್ರೀಯ ಸಂಘವು 16ನೇ ವಾರ್ಷಿಕ ಬಹು ಜಿಲ್ಲಾ ಸಮಾವೇಶ 'ಸಪ್ತ ಸಂಪದ'ವನ್ನು ಮೇ 18 ರಂದು ಬೆಳಗ್ಗೆ 9 ಗಂಟೆಗೆ ಮೈಸೂರಿನ ಕೆಎಸ್‌ಓಯು ಘಟಿಕೋತ್ಸವ ಭವನದಲ್ಲಿ ಆಯೋಜಿಸಲಾಗಿದೆ ಎಂದು ಲಯನ್ ಎನ್.ಕೃಷ್ಣೇಗೌಡ ತಿಳಿಸಿದರು. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ, ಆಂಧ್ರಪ್ರದೇಶ ಮತ್ತು ಗೋವಾ ಸೇರಿದಂತೆ 680 ಕ್ಲಬ್‌ನಿಂದ 20 ಸಾವಿರಕ್ಕೂ ಹೆಚ್ಚು ಸದಸ್ಯರನ್ನು ಹೊಂದಿರುವ 7 ಲಯನ್ ಜಿಲ್ಲೆಗಳಾಗಿ ವಿಂಗಡಿಸಲಾಗಿದ್ದು, 7 ರಾಜ್ಯಪಾಲರನ್ನು ನೇಮಕ ಮಾಡಲಾಗಿದೆ. ಈ 7 ಜಿಲ್ಲೆಗಳ 16ನೇ ವಾರ್ಷಿಕ ಬಹು ಜಿಲ್ಲಾ ಸಮಾವೇಶವನ್ನು ಆಯೋಜಿಸಿದ್ದು, ಸಮಾವೇಶದಲ್ಲಿ ಸರ್ವ ಸದಸ್ಯರ ಸಭೆ, ಸೇವಾ ಕಾರ್ಯ, ಕ್ಲಬ್‌ನ ಚಟುವಟಿಕೆ ಜೊತೆ ಜಿಲ್ಲಾಧ್ಯಕ್ಷ ಆಯ್ಕೆ ಹಾಗೂ ನೂತನ ಜಿಲ್ಲಾ ರಾಜ್ಯಪಾಲರನ್ನು ಆಯ್ಕೆ ಮಾಡಲಾಗುತ್ತದೆ ಎಂದರು. ಈ ಬಾರಿಯ ಸಮಾವೇಶಕ್ಕೆ ಅಂತರರಾಷ್ಟ್ರೀಯ ನಿರ್ದೇಶಕ ಲಯನ್ ಪಂಕಜ್ ಮೆಹ್ತಾ, ಮಾಜಿ ನಿರ್ದೇಶಕ ಲಯನ್ ಕೆ.ವಂಶಿಧರ್ ಬಾಬು ಮತ್ತು ಲಯನ್ ವಿ.ವಿ.ಕೃಷ್ಣ ರೆಡ್ಡಿ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಎನ್.ಸುಬ್ರಮಣ್ಯ, ಯೋಗೇಶ್, ನವೀನ್ ಸುಬ್ರಮ್ಮ, ಡಿ.ಹೆಚ್.ವೆಂಕಟೇಶ್, ಲೋಕೇಶ್ ಉಪಸ್ಥಿತರಿದ್ದರು.

ಇಂದು ವಿದ್ಯುತ್ ವ್ಯತ್ಯಯ

ಮೈಸೂರು, ಮೇ 16– ಮೇ 17 ರಂದು ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ಜ್ವಾಲಾಮುಖಿ ಫೀಡರ್‌ನ ವ್ಯಾಪ್ತಿಯಲ್ಲಿ ರಿಂಗ್ ರಸ್ತೆಯಲ್ಲಿ ರಸ್ತೆ ಅಗಲೀಕರಣ ಕಾಮಗಾರಿ ನಿಮಿತ್ತ ಉತ್ತನಹಳ್ಳಿ ಏಳಿಗೆಹುಂಡಿ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯಯಾಗಲಿದೆ ಎಂದು ಸೆಸ್ಕ್ ಆದುದರಿಂದ ಸಾರ್ವಜನಿಕರು ಹಾಗೂ ಕೈಗಾರಿಕೋದ್ಯಮಿಗಳು ಸಹಕರಿಸಬೇಕು ಎಂದು ಚಾ.ವಿ.ಸ.ನಿ.ನಿ. ಯ ನರಾ.ಮೊಹಲ್ಲಾದ ಕಾರ್ಯ ಮತ್ತು ಪಾಲನೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗೃಹಲಕ್ಷ್ಮಿ ಯೋಜನೆ ಹಣ ಶೀಘ್ರವೇ ಫಲಾನುಭವಿಗಳ ಖಾತೆಗೆ ಜಮಾ

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಪುಷ್ಪಾ ಅಮರನಾಥ್ ಭರವಸೆ



ಮೈಸೂರಿನ ಜಿಲ್ಲಾ ಪಂಚಾಯತ್‌ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಶುಕ್ರವಾರ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಪುಷ್ಪಾ ಅಮರನಾಥ್, ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದರು.

ಮೈಸೂರು, ಮೇ16(ಬಿಎಲ್‌ಯು)– ರಾಜ್ಯ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆಯ ಬಾಕಿ ಹಣವನ್ನು ಒಟ್ಟಿಗೆ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುವುದು ಎಂದು ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಪುಷ್ಪಾ ಅಮರನಾಥ್ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್‌ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಇಂದು ಪ್ರಾಧಿಕಾರದ ಮೈಸೂರು ಜಿಲ್ಲೆಯ ಅಧಿಕಾರಿಗಳ ಸಭೆಗೂ ಮೊದಲು ಪತ್ರಕರ್ತರ ಜೊತೆ ಮಾತನಾಡಿದ ಅವರು, ಮೈಸೂರು ಜಿಲ್ಲೆಯ 9 ತಾಲೂಕುಗಳಲ್ಲಿ 6,92,899 ಫಲಾನುಭವಿಗಳಿದ್ದು, ಜನವರಿ ತಿಂಗಳಿನಲ್ಲಿ 67. 8 ಕೋಟಿ ರೂಪಾಯಿ ಪಾವತಿ ಮಾಡಲಾಗಿದೆ ಉಳಿದ ಮೂರು ತಿಂಗಳ ಬಾಕಿ ಹಣವನ್ನು ಶೀಘ್ರವೇ ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದರು.

ಗೃಹಲಕ್ಷ್ಮಿ ಹಣ ಫಲಾನುಭವಿಗಳಿಗೆ ಆಯಾ ತಿಂಗಳು ಪಾವತಿ ಮಾಡಲು ತಾಂತ್ರಿಕ ಸಮಸ್ಯೆಗಳು ಎದುರಾಗುತ್ತಿದೆಯೇ ಹೊರತು ಖಜಾನೆಯಲ್ಲಿ ಹಣವಿಲ್ಲ ಎಂಬ ಕಾರಣದಿಂದ ಅಲ್ಲ ಎಂದು ಸ್ಪಷ್ಟಪಡಿಸಿದ ಪುಷ್ಪ ಅಮರನಾಥ್ ಅವರು, ಪಂಚ ಗ್ಯಾರಂಟಿ ಯೋಜನೆಗೆ ಈಗಾಗಲೇ ಬಜೆಟ್‌ನಲ್ಲಿ ಹಣ ಮೀಸಲಿಟ್ಟಿರುವ ಹಿನ್ನೆಲೆ ಯೋಜನೆ ಅನುಷ್ಠಾನಕ್ಕೆ ಹಣಕ್ಕೆ ಕೊರತೆ ಇಲ್ಲ ಎಂದು ತಿಳಿಸಿದರು.

ಅನ್ನಭಾಗ್ಯ ಯೋಜನೆಯಲ್ಲಿ ಮಾರ್ಚ್ ತಿಂಗಳ ತನಕ 5 ಕೆ.ಜಿ. ಅಕ್ಕಿ ಹಾಗೂ 5 ಕೆ.ಜಿ. ಅಕ್ಕಿ ಬದಲು ಹಣ ನೀಡಲಾಗುತ್ತಿತ್ತು. ಆದರೆ ಏಪ್ರಿಲ್ ತಿಂಗಳಿನಿಂದ ಹಣದ ಬದಲು ಹತ್ತು ಕೆ.ಜಿ.ಅಕ್ಕಿ ನೀಡಲಾಗುತ್ತಿದೆ. ಈ ಮೂಲಕ 2023 ರ ಜುಲೈನಿಂದ ನಿಂದ 2024 ರ ಡಿಸೆಂಬರ್‌ವರೆಗೆ 614.45 ಕೋಟಿ ವೆಚ್ಚ ಮಾಡಲಾಗಿದೆ ಎಂದು ಅಂಕಿ ಅಂಶಗಳ ಸಹಿತ ಮಾಹಿತಿ ನೀಡಿದರು.

ಮೈಸೂರು ಜಿಲ್ಲೆಯಲ್ಲಿ ಶಕ್ತಿ ಯೋಜನೆಯಲ್ಲಿ 42.82 ಪ್ರಯಾಣಿಕರು ಪ್ರಯಾಣಿಸಿದ್ದು, ಸಾರಿಗೆ ಇಲಾಖೆಗೆ ಇದರಿಂದ 693 ಕೋಟಿ ರೂಪಾಯಿ ಆದಾಯ ಬಂದಿದೆ. ಯುವ ನಿಧಿಯಲ್ಲಿ 11,154 ಪದವೀಧರರು ನೋಂದಾಯಿಸಿಕೊಂಡಿದ್ದಾರೆ ಎಂದು ತಿಳಿಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದಿದೆ. ಎರಡು ವರ್ಷದ ಸಂಭ್ರಮಾಚರಣೆ ಮೇ 20 ರಂದು ವಿಜಯನಗರ ಜಿಲ್ಲೆ ಹೊಸಪೇಟೆಯಲ್ಲಿ ನಡೆಯಲಿದ್ದು, ಸರ್ಕಾರದ ಎರಡು ವರ್ಷದ ಅಭಿವೃದ್ಧಿ ಕಾರ್ಯಕ್ರಮಗಳನ್ನು ಜನರಿಗೆ ಮನದಟ್ಟು ಮಾಡಿಕೊಡಲಾಗುವುದು ಎಂದು ಪುಷ್ಪಾ ಅಮರನಾಥ್ ವಿವರಿಸಿದರು.

ಪ್ರಾಧಿಕಾರದ ಮೈಸೂರು ಜಿಲ್ಲೆಯ ಅಧ್ಯಕ್ಷ ಅರುಣ್ ಕುಮಾರ್, ಉಪಾಧ್ಯಕ್ಷ ಶಿವಕುಮಾರ್, ನಿರ್ದೇಶಕರಾದ ಬಸವಣ್ಣ ಹಾಗೂ ಯೋಗೇಶ್ ಸಭೆಯಲ್ಲಿ ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಮಾಮನ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಮಿಷನ್ ಇಂಪಾಸಿಬಲ್ (ಇಂ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಹಿಟ್ (ಹಿಂ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಡೀ (ಕ)	4 ಪ್ರದರ್ಶನಗಳು
ಗಾಯಿತ್ರಿ	
ರೆಟ್ರೋ (ತ)	4 ಪ್ರದರ್ಶನಗಳು
ರಾಜಕಮಲ್	
ಡೆವಿಲ್ಸ್ ಡಬಲ್ ನೆಕ್ಸ್ಟ್ ಲೆವಲ್ (ತ)	4 ಪ್ರದರ್ಶನಗಳು
ಸಂಗಂ	
ರೆಟ್ರೋ (ತ)	4 ಪ್ರದರ್ಶನಗಳು
ಲಿಡೋ	
ಯುದ್ಧಕಾಂಡ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ರೆಟ್ರೋ (ತ): ಬೆ.9.40ಕ್ಕೆ, ಮ.1ಕ್ಕೆ, ರಾ.7ಕ್ಕೆ, ಥಂಡರ್‌ಬೋಲ್ಟ್ಸ್ (3ಡಿ)(ಇಂ): ಸಂ.4.20ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 2	ಥಂಡರ್‌ಬೋಲ್ಟ್ಸ್ (3ಡಿ)(ಇಂ): ಬೆ.10.25ಕ್ಕೆ, ಯುದ್ಧಕಾಂಡ 2 (ಕ): ಮ.1.05ಕ್ಕೆ, ಸಂ.4.05ಕ್ಕೆ, ತುಡಾರಂ (ಮ): ರಾ.7ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 3	ಹಿಟ್ ದಿ ಥರ್ಡ್ ಕೇಸ್ (ತೆ): ಬೆ.10ಕ್ಕೆ, ಮ.3.55ಕ್ಕೆ, ರಾ.7.05ಕ್ಕೆ, ರಾ.10.15ಕ್ಕೆ, ಟೂರಿಸ್ಟ್ ಫ್ಯಾಮಿಲಿ (ತ): ಮ.1.10ಕ್ಕೆ.
ಸ್ಕ್ರೀನ್ 4	ಪಪ್ಪಿ (ಕ): ಬೆ.10.30ಕ್ಕೆ, ರೈಡ್ 2 (ಹಿಂ): ಮ.1ಕ್ಕೆ, ರಾ.7.25ಕ್ಕೆ, ರಾ.10.25ಕ್ಕೆ, ರೆಟ್ರೋ (ತ): ಸಂ.4.05ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಪ್ರೀತಿಯ ಹುಚ್ಚ (ಕ): ಬೆ.11ಕ್ಕೆ, ರಿಕ್ಷಾ ಚಾಲಕ (ಕ): ಮ.1.35ಕ್ಕೆ, ಕೋರ (ಕ): ಸಂ.6.35ಕ್ಕೆ, ಖದೀಮ (ಕ): ಸಂ.6.35ಕ್ಕೆ, ಟೆನ್ ಅವರ್ಸ್ (ತ): ರಾ.9.15ಕ್ಕೆ.
ಸ್ಕ್ರೀನ್ 2	ಯುದ್ಧಕಾಂಡ 2 (ಕ): ಮ.1ಕ್ಕೆ, ಸಂ.6.35ಕ್ಕೆ, ಒಡೆಲ್ಲಾ (ತೆ): ಮ.3.45ಕ್ಕೆ, ರಾ.9.20ಕ್ಕೆ.
ಸ್ಕ್ರೀನ್ 3	ವೀರ ಚಂದ್ರಹಾಸ (ಕ): ಮ.1ಕ್ಕೆ, ಮ.3.55ಕ್ಕೆ, ಗುಡ್ ಬ್ಯಾಡ್ ಅಗ್ಲಿ (ತ): ಸಂ.6.50ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಯುದ್ಧಕಾಂಡ 2 (ಕ): ಬೆ.10.50ಕ್ಕೆ, ವಾಮನ (ಕ): ಮ.1.35ಕ್ಕೆ, ಸಂ.4.10ಕ್ಕೆ, ಅರ್ಜುನ್ s/o ವೈಜಯಂತಿ (ತೆ): ಸಂ.6.45ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಆರೋಗ್ಯ ಇಲಾಖೆಯ ಗುತ್ತಿಗೆ ನೌಕರರ ರಾಜೀನಾಮೆ ಕೇಳುತ್ತಿರುವುದು ಸರಿಯಲ್ಲ

ಮುಖ್ಯಮಂತ್ರಿಗಳು ಗಮನಹರಿಸುವಂತೆ ಹಿಂದುಳಿದ ಜಾಗೃತ ವೇದಿಕೆ ರಾಜ್ಯಾಧ್ಯಕ್ಷ ಶಿವರಾಮು ಆಗ್ರಹ



ಮೈಸೂರು, ಮೇ16(ಜಿಎ)–ಆರೋಗ್ಯ ಸಚಿವರು ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ನೌಕರರ ರಾಜೀನಾಮೆ ಕೇಳಿರುವುದರ ಬಗ್ಗೆ ಮುಖ್ಯಮಂತ್ರಿಗಳು ಪರಿಶೀಲಿಸಿ, ಬೇಡಿಕೆಗಳನ್ನು ಈಡೇರಿಸುವಂತೆ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ರಾಜ್ಯಾಧ್ಯಕ್ಷ ಕೆ.ಎಸ್.ಶಿವರಾಮು ಆಗ್ರಹಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ರಾಜ್ಯದಲ್ಲಿ 30 ಸಾವಿರ ಮಂದಿ ಸ್ಟಾಫ್ ನರ್ಸ್‌ಗಳಾಗಿ ಕೆಲಸ ಮಾಡುತ್ತಿದ್ದಾರೆ. ಕೋವಿಡ್ ಸಂದರ್ಭದಲ್ಲಿ ತಮ್ಮ ಪ್ರಾಣದ ಹಂಗು ತೊರೆದು ಸೇವೆ ಸಲ್ಲಿಸಿದ್ದಾರೆ. ಆದರೆ ಇಂದು ಅವರ ಬದುಕು ಕಸಿಯುವ ಕೆಲಸವನ್ನು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮಾಡುತ್ತಿದ್ದಾರೆ. ಕಾಂಗ್ರೆಸ್‌ನ ಪ್ರಣಾಳಿಕೆಯಲ್ಲಿ ಆರೋಗ್ಯ ಇಲಾಖೆ ಗುತ್ತಿಗೆ ನೌಕರರನ್ನು ಗುತ್ತಿಗೆ ಆಧಾರದ ಮೇಲೆ ಖಾಯಂಗೊಳಿಸುತ್ತೇವೆ ಎಂದು ಭರವಸೆ ನೀಡಿದ್ದಾರೆ. ಆದರೆ ಆರೋಗ್ಯ ಸಚಿವರು ಈಗ ರಾಜೀನಾಮೆ ಕೇಳಿರುವುದು ಅಕ್ಷಮ್ಯ ಎಂದರು.


ಇತ್ತೀಚೆಗೆ ಸಚಿವ ದಿನೇಶ್ ಗುಂಡೂರಾವ್ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರು ರಾಜೀನಾಮೆ ನೀಡಿದ ನಂತರ ಮರು ನೇಮಕ ಮಾಡಿಕೊಳ್ಳಲಾಗುತ್ತದೆ ಎಂದು ತಿಳಿಸಿದ್ದಾರೆ. ಆದರೆ, ಈ ರೀತಿ ಮಾಡಿದಾಗ ನೌಕರರಿಗೆ ಬಹಳಷ್ಟು ಅನ್ಯಾಯವಾಗುತ್ತದೆ. ಸುಪ್ರೀಂಕೋರ್ಟ್ ಆದೇಶದ ಪ್ರಕಾರ 10 ವರ್ಷಗಳ ಕಾಲ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸಿದರೆ, ಅವರನ್ನು ಖಾಯಂಗೊಳಿಸಬೇಕೆಂದು ಇದೆ ಎಂದು ತಿಳಿಸಿದರು.

ಹಿಂದುಳಿದ ವರ್ಗದವರೇ ಹೆಚ್ಚಿನ ಸಂಖ್ಯೆಯಲ್ಲಿ ಕೆಲಸ ಮಾಡುತ್ತಿದ್ದಾರೆ. ಆದರೆ, ಅವರಿಗೆ ಕಡಿಮೆ ಸಂಬಳ ನೀಡಲಾಗುತ್ತಿದೆ. ಮಾನವೀಯತೆ ತೋರಬೇಕಿದೆ. ಈ ವಿಚಾರ ಮುಖ್ಯಮಂತ್ರಿಗಳ ಗಮನಕ್ಕೆ ಬಂದಿಲ್ಲ. ಆರೋಗ್ಯ ಸಚಿವರಿಗೆ ಅಧಿಕಾರಿಗಳು ತಪ್ಪು ಮಾಹಿತಿ ನೀಡಿದ್ದಾರೆ ಎಂದು ಅನ್ನಿಸುತ್ತಿದೆ. ಈ ಹಿನ್ನೆಲೆ ಮುಖ್ಯಮಂತ್ರಿಗಳು ಮಧ್ಯ ಪ್ರವೇಶಿಸಬೇಕು ಎಂದರು.

ರಾಷ್ಟ್ರೀಯ ಆರೋಗ್ಯ ಅಭಿಯಾನ ನೌಕರರಿಗೆ ನಿವೃತ್ತ ಐಎಎಸ್ ಅಧಿಕಾರಿ ಶ್ರೀನಿವಾಸ್‌ಚಾರಿ ವರದಿಯಂತೆ ಶೇ.15ರಷ್ಟು ವೇತನ ಹೆಚ್ಚಳದ ಅನುದಾನ ಬಿಡುಗಡೆ ಮಾಡಬೇಕು ಹಾಗೂ ಶೇ.30 ರಷ್ಟು ಹೆಚ್ಚಳ ಮಾಡಿ ಪ್ರತಿ ವರ್ಷ ನೀಡಬೇಕಿದೆ. ಹಾಗೇ ವರದಿಯಲ್ಲಿರುವ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಸೋಮವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಗುತ್ತದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಯೋಗೇಶ್ ಉಪ್ಪಾರ್, ಹೆಚ್.ಎಸ್.ಪ್ರಕಾಶ್, ರವಿನಂದನ್, ರಾಜೇಶ್ ಮತ್ತಿತರರು ಉಪಸ್ಥಿತರಿದ್ದರು.

ತಾಲಿಬಾನ್ ವಿದೇಶಾಂಗ ಸಚಿವರ ಜೊತೆ ಜೈಶಂಕರ್ ಮಾತುಕತೆ

ನವದೆಹಲಿ, ಮೇ 16– ಇತಿಹಾಸದಲ್ಲೇ ಮೊದಲ ಬಾರಿಗೆ ತಾಲಿಬಾನ್ ವಿದೇಶಾಂಗ ಸಚಿವರ ಜೊತೆ ಎಸ್.ಜೈಶಂಕರ್ ಮಾತುಕತೆ ನಡೆಸಿದ್ದಾರೆ. ಪ್ರಾದೇಶಿಕ ಚಲನಶೀಲತೆಯಲ್ಲಿ ಹೊಸ ಅಧ್ಯಾಯ ಇದು ಎನ್ನಲಾಗಿದೆ. ವಿದೇಶಾಂಗ ಸಚಿವ ಎಸ್.ಜೈಶಂಕರ್ ಗುರುವಾರ ತಾಲಿಬಾನ್‌ನ ಹಂಗಾಮಿ ವಿದೇಶಾಂಗ ಸಚಿವ ಅಮೀರ್ ಖಾನ್ ಮುತ್ತಕಿ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿದ್ದಾರೆ. ಅಫ್ಘಾನಿಸ್ತಾನದ ತಾಲಿಬಾನ್ ಆಡಳಿತದ ಜೊತೆ ಭಾರತವು ನಡೆಸಿದ ಮೊದಲ ಸಚಿವ ಮಟ್ಟದ ಸಂಪರ್ಕ ಇದಾಗಿರುವುದರಿಂದ ಈ ಕರೆ ಮಹತ್ವದ್ದಾಗಿದೆ.



ಜಮ್ಮು ಮತ್ತು ಕಾಶ್ಮೀರದಲ್ಲಿ ಧಾರ್ಮಿಕ ಪ್ರೇರಿತ ದಾಳಿಯಲ್ಲಿ ಪಾಕಿಸ್ತಾನದ ನಂಟು ಹೊಂದಿರುವ ಭಯೋತ್ಪಾದಕರು, 26 ನಾಗರಿಕರನ್ನು ಗುಂಡಿಕ್ಕಿ ಹತ್ಯೆ ಮಾಡಿದ್ದರು. ಪಹಲ್ಗಾಮ್ ದಾಳಿಯನ್ನು ಅಫ್ಘಾನಿಸ್ತಾನ ಖಂಡಿಸಿದೆ.

ಇಂದು ಸಂಜೆ ಅಫ್ಘಾನ್ ವಿದೇಶಾಂಗ ಸಚಿವ ಮೌಲವಿ ಅಮೀರ್ ಖಾನ್ ಮುತ್ತಕಿ ಅವರೊಂದಿಗೆ ಸಂಭಾಷಣೆ ನಡೆಸಲಾಯಿತು. ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಅವರು ಖಂಡಿಸಿದ್ದಕ್ಕೆ ನಮ್ಮ ಹೃದಯಪೂರ್ವಕ ಧನ್ಯವಾದಗಳು. ಚರ್ಚೆಯ ಸಮಯದಲ್ಲಿ ಅವರು ಅಫ್ಘಾನ್ ಜನರೊಂದಿಗಿನ ನಮ್ಮ (ಭಾರತದ) ಸಾಂಪ್ರದಾಯಿಕ ಸ್ನೇಹ ಮತ್ತು ಅವರ ಅಭಿವೃದ್ಧಿ ಅಗತ್ಯಗಳಿಗೆ ನಿರಂತರ ಬೆಂಬಲವನ್ನು ಒತ್ತಿ ಹೇಳಿದರು. ಸಹಕಾರವನ್ನು ಮುಂದಕ್ಕೆ ಕೊಂಡೊಯ್ಯುವ ಮಾರ್ಗಗಳು ಮತ್ತು ವಿಧಾನಗಳ ಬಗ್ಗೆ ಚರ್ಚಿಸಲಾಯಿತು ಎಂದು ಎಕ್ಸ್‌ನಲ್ಲಿ ಜೈಶಂಕರ್ ಪೋಸ್ಟ್ ಹಾಕಿದ್ದಾರೆ.

ಜಮ್ಮು ಮತ್ತು ಕಾಶ್ಮೀರದ ಘಟನೆಗಳಿಗೆ ತಾಲಿಬಾನ್ ಕಾರಣ ಎಂಬ ಪಾಕಿಸ್ತಾನ ಸುಳ್ಳು ಸುದ್ದಿ ಹರಡಿದೆ ಎಂದು ಜೈಶಂಕರ್ ಇದೇ ವೇಳೆ ತಿಳಿಸಿದ್ದಾರೆ. ಪಾಕಿಸ್ತಾನಿ ಮಾಧ್ಯಮಗಳಲ್ಲಿ ಸುಳ್ಳು ಮತ್ತು ಆಧಾರರಹಿತ ವರದಿಗಳ ಮೂಲಕ ಭಾರತ ಮತ್ತು ಅಫ್ಘಾನಿಸ್ತಾನದ ನಡುವೆ ಅಪನಂಬಿಕೆಯನ್ನು ಸೃಷ್ಟಿಸುವ ಇತ್ತೀಚಿನ ಪ್ರಯತ್ನಗಳನ್ನು ಮುತ್ತಕಿ ದೃಢವಾಗಿ ತಿರಸ್ಕರಿಸಿದ್ದಾರೆ ಎಂದು ಬರೆದಿದ್ದಾರೆ.

ಭಾರತೀಯ ಸೇನೆಯಿಂದ ಬಾಂಗ್ಲಾ ಗಡಿಯಲ್ಲಿ ದಿಢೀರ್ ಸಮರಾಭ್ಯಾಸ

ಢಾಕಾ, ಮೇ.16– ಪಾಕಿಸ್ತಾನದೊಂದಿಗಿನ ಉದ್ವಿಗ್ನ ವಾತಾವರಣದ ನಡುವೆಯೂ ಭಾರತೀಯ ಸೇನೆಯು 'ತೀಸ್ತಾ ಪ್ರಹಾರ್' ಎಂಬ ಯುದ್ಧಾಭ್ಯಾಸವನ್ನು ನಡೆಸಿತು. ಬಾಂಗ್ಲಾದೇಶ ಮತ್ತು ಚೀನಾದ ಗಡಿ ಇಲ್ಲಿಗೆ ಹತ್ತಿರದಲ್ಲಿದೆ. ಭಾರತೀಯ ಸೇನೆಯ ಪದಾತಿ ದಳ, ಫಿರಂಗಿ ದಳ, ಶಸ್ತ್ರಸಜ್ಜಿತ ದಳ, ಸೇನಾ ವಾಯುಯಾನ, ಎಂಜಿನಿಯರ್‌ಗಳು ಮತ್ತು ಸಿಗ್ನಲ್ ವಿಭಾಗಗಳು ಈ ಮೂರು ದಿನಗಳ 'ತೀಸ್ತಾ ಪ್ರಹಾರ್' ವ್ಯಾಯಾಮದಲ್ಲಿ ಭಾಗವಹಿಸಿದ್ದವು.

ಈ ಸಮರಾಭ್ಯಾಸವು ಇತ್ತೀಚೆಗೆ ಸೇನೆಯ ಶಸ್ತ್ರಾಗಾರಕ್ಕೆ ಸೇರಿಸಲಾದ ಮುಂದಿನ ಪೀಳಿಗೆಯ ಶಸ್ತ್ರಾಸ್ತ್ರಗಳು, ಮಿಲಿಟರಿ ವೇದಿಕೆಗಳು ಮತ್ತು ಆಧುನಿಕ ತಂತ್ರಜ್ಞಾನಗಳನ್ನು ಯುದ್ಧಭೂಮಿಯಲ್ಲಿ ನಿಖರವಾಗಿ ಬಳಸುವ ಬಗ್ಗೆ ವಿಶೇಷ ಒತ್ತು ನೀಡಿತು. ಇದಲ್ಲದೆ, ಪ್ರತಿಕೂಲ ಹವಾಮಾನದಲ್ಲಿ ತ್ವರಿತ ಮತ್ತು ಕೌಶಲ್ಯಪೂರ್ಣ ಸಮನ್ವಯದಿಂದ ಶತ್ರುವನ್ನು ಸೋಲಿಸುವ ತಂತ್ರಗಳನ್ನು ಸಹ ಪರೀಕ್ಷಿಸಲಾಯಿತು. ಈ ವ್ಯಾಯಾಮದ ಮೂಲಕ ಸೇನೆಯು ವಿವಿಧ ಇಲಾಖೆಗಳ ನಡುವೆ ಸಮನ್ವಯ ಮತ್ತು ತ್ವರಿತವಾಗಿ ಕಾರ್ಯನಿರ್ವಹಿಸುವ ಸಾಮರ್ಥ್ಯವು ಹಾಗೆಯೇ ಉಳಿಯುವುದನ್ನು ಖಚಿತಪಡಿಸಿಕೊಂಡಿದೆ.

'ತೀಸ್ತಾ ಪ್ರಹಾರ್' ಮುಕ್ತಾಯದ ನಂತರ ಭಾರತೀಯ ಸೇನೆಯ ಪೂರ್ವ ಕಮಾಂಡ್ ಪತ್ರಿಕಾ ಪ್ರಕಟಣೆ ಬಿಡುಗಡೆ ಮಾಡಿದ್ದು, ಯಾವುದೇ ಯುದ್ಧ ಪರಿಸ್ಥಿತಿಯನ್ನು ಎದುರಿಸಲು ಭಾರತೀಯ ಸೇನೆಯು ಶೇಕಡಾ 100 ರಷ್ಟು ಸಿದ್ಧವಾಗಿದೆ ಎಂದು ಹೇಳಿದೆ. ಈ ಸಮರಾಭ್ಯಾಸವು ಸೇನೆಯ ತಾಂತ್ರಿಕ ಮತ್ತು ಕಾರ್ಯತಂತ್ರದ ಸಾಮರ್ಥ್ಯಗಳನ್ನು ಪ್ರದರ್ಶಿಸಿದ್ದಲ್ಲದೆ, ಪೂರ್ವ ಗಡಿಯಲ್ಲಿ ಯಾವುದೇ ಸವಾಲನ್ನು ಎದುರಿಸಲು ಸೇನೆಯು ಸಂಪೂರ್ಣವಾಗಿ ಸಮರ್ಥವಾಗಿದೆ ಎಂಬುದನ್ನು ತೋರಿಸಿದೆ.

ಭಾರತ–ಪಾಕಿಸ್ತಾನ ಕದನ ವಿರಾಮ ನಾಳೆವರೆಗೆ ವಿಸ್ತರಣೆ

ನವದೆಹಲಿ, ಮೇ 16– ಭಾರತ–ಪಾಕಿಸ್ತಾನದ ನಡುವೆ ಘೋಷಣೆಯಾಗಿದ್ದ ಕದನ ವಿರಾಮವನ್ನು ಮೇ.18 ರವರೆಗೆ ವಿಸ್ತರಣೆ ಮಾಡಲಾಗಿದೆ. ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರ ದಾಳಿ ಬಳಿಕ ಭಾರತ ಹಾಗೂ ಪಾಕಿಸ್ತಾನದ ನಡುವೆ ಉದ್ವಿಗ್ನ ವಾತಾವರಣ ನಿರ್ಮಾಣವಾಗಿತ್ತು.



ಭಾರತೀಯ ಸೇನೆ ಪಾಕಿಸ್ತಾನ ನೆಲಕ್ಕೆ ನುಗ್ಗಿ ಉಗ್ರರ ನೆಲೆಗಳನ್ನು ಧ್ವಂಸಗೊಳಿಸಿ ತಕ್ಕ ಉತ್ತರ ನೀಡಿತ್ತು. ಆ ಬಳಿಕ ಉಭಯ ದೇಶಗಳ ಉನ್ನತ ಸೇನಾಧಿಕಾರಿಗಳ ನಡುವಿನ ಮಾತುಕತೆ ಬಳಿಕ ಎರಡು ದೇಶಗಳು ಕದನ ವಿರಾಮ ಘೋಷಣೆಗೆ ಒಪ್ಪಿದ್ದವು. ಈ ಕದನ ವಿರಾಮವನ್ನು ಇದೀಗ ಮೇ.18ವರೆಗೆ ವಿಸ್ತರಣೆ ಮಾಡಲಾಗಿದೆ.

ಪಾಕಿಸ್ತಾನದ ವಿದೇಶಾಂಗ ಸಚಿವ ಇಶಾಕ್ ದಾರ್, ಪಾಕಿಸ್ತಾನದ ಡಿಜಿಎಂಒ ಮೇಜರ್ ಜನರಲ್ ಕಾಶಿಫ್ ಅಬ್ದುಲ್ಲಾ ಮತ್ತು ಭಾರತದ ಡಿಜಿಎಂಒ ಲೆಫ್ಟಿನೆಂಟ್ ಜನರಲ್ ರಾಜೀವ್ ಘಾಯ್ ಅವರು ಗುರುವಾರ ಹಾಟ್‌ಲೈನ್‌ನಲ್ಲಿ ಕದನ ವಿರಾಮದ ಬಗ್ಗೆ ಚರ್ಚಿಸಿದ್ದಾರೆಂದು ಹೇಳಿಕೊಂಡಿದ್ದು, ಕದನ ವಿರಾಮವನ್ನು ಮೇ 18 ರವರೆಗೆ ವಿಸ್ತರಿಸಲಾಗಿದೆ ಎಂದು ತಿಳಿಸಿದ್ದಾರೆ.

ಮೌಲ್ಯ ಎಸ್.ಗೌಡಗೆ 479 ಅಂಕ



ಮೈಸೂರು, ಮೇ 16– ಮೈಸೂರಿನ ವಿಜಯನಗರ 4ನೇ ಹಂತದ ಎನ್‌ಪಿಎಸ್ ಇಂಟರ್ ನ್ಯಾಷನಲ್ ಸ್ಕೂಲ್ ವಿದ್ಯಾರ್ಥಿನಿ ಮೌಲ್ಯ ಎಸ್.ಗೌಡ ಸಿಬಿಎಸ್‌ಇ 12ನೇ ತರಗತಿ ಪರೀಕ್ಷೆಯಲ್ಲಿ ಶೇ.95.8 ಅಂಕ ಗಳಿಸಿದ್ದಾಳೆ.

ಇಂಗ್ಲಿಷ್ 95, ಇತಿಹಾಸ 97, ರಾಜ್ಯಶಾಸ್ತ್ರ 92, ಅರ್ಥಶಾಸ್ತ್ರ 95 ಹಾಗೂ ಮನೋವಿಜ್ಞಾನದಲ್ಲಿ 100 ಸೇರಿ ಒಟ್ಟು 479 ಅಂಕ ಪಡೆದಿದ್ದಾಳೆ. ಈಕೆ ಆರ್.ಕೆ.ಶರತ್‌ಕುಮಾರ್ ಹಾಗೂ ಚೈತ್ರಾ ಶರತ್ ದಂಪತಿ ಪುತ್ರಿ.

ಹಾಂಗ್‌ಕಾಂಗ್, ಸಿಂಗಾಪುರದಲ್ಲಿ ಮತ್ತೆ ಕೋವಿಡ್ ಹಾವಳಿ

ಚೀನಾ, ಮೇ.16–ಚೀನಾದ ಪ್ರಮುಖ ಆಡಳಿತ ನಗರದವಾಗಿರುವ ಹಾಂಗ್‌ಕಾಂಗ್ ಮತ್ತು ಸಿಂಗಾಪುರದಲ್ಲಿ ಮತ್ತೆ ಮಹಾಮಾರಿ ಕೋವಿಡ್–19 ಪ್ರಕರಣಗಳು ಹೆಚ್ಚುತ್ತಿವೆ ಎಂದು ವರದಿಯಾಗಿದ್ದು, ಹೊಸ ಅಲೆಯ ಆತಂಕ ಸೃಷ್ಟಿಸಿದೆ. ಚೀನಾ ಮತ್ತು ಥೈಲ್ಯಾಂಡ್‌ನಲ್ಲೂ ಕೋವಿಡ್ ಪ್ರಕರಣಗಳು ವರದಿಯಾಗಿವೆ.



ಹಾಂಗ್‌ಕಾಂಗ್‌ನ ಆರೋಗ್ಯ ಅಧಿಕಾರಿಗಳು ಕೋವಿಡ್ ಪ್ರಕರಣಗಳಲ್ಲಿ ತೀವ್ರ ಏರಿಕೆಯಾಗುತ್ತಿದೆ ಎಂದು ಹೇಳಿದ್ದಾರೆ. ಈ ಮೂಲಕ ಹಾಂಗ್‌ಕಾಂಗ್‌ನಲ್ಲಿನ ಅಧಿಕಾರಿಗಳು, ಕೋವಿಡ್ ಹೊಸ ಅಲೆ ಪ್ರವೇಶಿಸಿದೆ ಎಂದು ಸೂಚಿಸಿದ್ದಾರೆ.

ಮಂಗಳವಾರ ಆರೋಗ್ಯ ರಕ್ಷಣಾ ಕೇಂದ್ರ ಬಿಡುಗಡೆ ಮಾಡಿದ ಮಾಹಿತಿಯ ಪ್ರಕಾರ ಸೋಂಕಿನ ಪ್ರಮಾಣವು ಮಾರ್ಚ್ ಮಧ್ಯದಲ್ಲಿ ಶೇ. 1.7 ರಿಂದ ಈಗ ಶೇ. 11.4 ಕ್ಕೆ ಏರಿದೆ. ಇದು ಆಗಸ್ಟ್ 2024 ರಲ್ಲಿ ದಾಖಲಾದ ಗರಿಷ್ಠ ಮಟ್ಟವನ್ನು ಮೀರಿದೆ ಎಂದು ಇಂಡಿಪೆಂಡೆಂಟ್ ವರದಿ ಮಾಡಿದೆ.

ಕಳೆದ ವರ್ಷಕ್ಕೆ ಹೋಲಿಸಿದರೆ, ಈ ವರ್ಷ ಕೋವಿಡ್ ಪ್ರಕರಣಗಳ ಸಂಖ್ಯೆ ಉತ್ತುಂಗದಲ್ಲಿದೆ. ಮೇ.3 ರವರೆಗೆ ವರದಿಯಾದಂತೆ 31 ಗಂಭೀರ ಸ್ಥಿತಿಯ ಪ್ರಕರಣಗಳು ದಾಖಲಾಗಿವೆ ಹಾಗೂ ಸಾವಿನ ಸಂಖ್ಯೆ ಗರಿಷ್ಠ ಮಟ್ಟವನ್ನು ತಲುಪಿದೆ ಎಂದು ಹಾಂಗ್‌ಕಾಂಗ್‌ನ ಆರೋಗ್ಯ ರಕ್ಷಣಾ ಕೇಂದ್ರದ ಸಾಂಕ್ರಾಮಿಕ ರೋಗಗಳ ಶಾಖೆಯ ಮುಖ್ಯಸ್ಥ ಆಲ್ಬರ್ಟ್ ಔ ಅವರು ತಿಳಿಸಿದ್ದಾರೆ. ಕೋವಿಡ್ ಹೆಚ್ಚಳವೂ ರೋಗನಿರೋಧಕ ಶಕ್ತಿ ಕಡಿಮೆಯಾಗುತ್ತಿರುವುದರ ಸೂಚನೆಯಾಗಿರಬಹುದು. ಹೀಗಾಗಿ ಲಸಿಕೆ ಹಾಕಿಸಿಕೊಳ್ಳುವಂತೆ ಅಲ್ಲಿನ ಅಧಿಕಾರಿಗಳು ಜನರನ್ನು ಒತ್ತಾಯಿಸುತ್ತಿದ್ದಾರೆ ಎಂದು ಇಂಡಿಪೆಂಡೆಂಟ್ ಬ್ಲೂಮ್‌ಬರ್ಗ್ ವರದಿ ಮಾಡಿದೆ.

ಸಿಂಗಾಪುರದಲ್ಲಿಯೂ ಕೋವಿಡ್ –19 ಪ್ರಕರಣಗಳ ಸಂಖ್ಯೆ ಹೆಚ್ಚುತ್ತಿರುವುದಾಗಿ ವರದಿಯಾಗಿದೆ. ಸಿಂಗಾಪುರ ಆರೋಗ್ಯ ಸಚಿವಾಲಯವು ಈ ಮೇ ತಿಂಗಳಲ್ಲಿ ಸುಮಾರು ಒಂದು ವರ್ಷದ ನಂತರ ಇದೇ ಮೊದಲ ಬಾರಿಗೆ ಕೋವಿಡ್ ಬಗ್ಗೆ ಮಾಹಿತಿ ನೀಡಿದೆ. ಮೇ 3 ಕ್ಕೆ ಕೊನೆಗೊಂಡ ವಾರದಲ್ಲಿ ಕೋವಿಡ್ –19 ಪ್ರಕರಣಗಳು ಶೇ. 28 ರಷ್ಟು ಹೆಚ್ಚಾಗಿ, 14,200ಕ್ಕೆ ತಲುಪಿದೆ. ಅಲ್ಲದೆ ದೈನಂದಿನ ಆಸ್ಪತ್ರೆಗೆ ದಾಖಲಾಗುವವರ ಸಂಖ್ಯೆ ಸುಮಾರು ಶೇ. 30ರಷ್ಟು ಹೆಚ್ಚಾಗಿದೆ ಎಂದು ಆರೋಗ್ಯ ಸಚಿವಾಲಯ ತಿಳಿಸಿದೆ.

ಬೆಂಗಳೂರಿನ ಹರೇ ಕೃಷ್ಣ ದೇವಾಲಯ ಬೆಂಗಳೂರು ಇಸ್ಕಾನ್‌ಗೆ ಸೇರಿದ್ದು: ಸುಪ್ರೀಂಕೋರ್ಟ್ ತೀರ್ಪು

ನವದೆಹಲಿ, ಮೇ 16– ಬೆಂಗಳೂರಿನ ಪ್ರಸಿದ್ಧ ಹರೇ ಕೃಷ್ಣ ದೇವಾಲಯ ನಿಯಂತ್ರಣದ ಬಗ್ಗೆ ದಶಕದ ಸುದೀರ್ಘ ಕಾನೂನು ಹೋರಾಟದ ನಂತರ ಸುಪ್ರೀಂ ಕೋರ್ಟ್ ಇಸ್ಕಾನ್ ಬೆಂಗಳೂರು ಪರವಾಗಿ ತೀರ್ಪು ನೀಡಿದ್ದು, ಇಸ್ಕಾನ್ ಮುಂಬೈನ ಮಾಲೀಕತ್ವದ ಹಕ್ಕುಗಳನ್ನು ಕೊನೆಗೊಳಿಸಿದೆ. ದಶಕಗಳಿಂದ ದೇವಸ್ಥಾನ ಮತ್ತು ಅದಕ್ಕೆ ಸಂಬಂಧಿಸಿದ ಶೈಕ್ಷಣಿಕ ಕಾರ್ಯ ನಿರ್ವಹಿಸುತ್ತಿರುವ ಕರ್ನಾಟಕ–ನೋಂದಾಯಿತ ಸಮಾಜಕ್ಕೆ ಈ ತೀರ್ಪು ಸಮಾಧಾನ ತಂದಿದೆ. ಈ ಹಿಂದೆ ಇಸ್ಕಾನ್ ದೇವಸ್ಥಾನದ ನಿಯಂತ್ರಣವನ್ನು ಮುಂಬೈ ಇಸ್ಕಾನ್‌ಗೆ ನೀಡಿದ್ದ ಕರ್ನಾಟಕ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಇಸ್ಕಾನ್ ಬೆಂಗಳೂರು ಸಲ್ಲಿಸಿದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಎ.ಎಸ್.ಓಕಾ ಮತ್ತು ಅಗಸ್ಟಿನ್ ಜಾರ್ಜ್ ಮಸಿಹ್ ಅವರನ್ನೊಳಗೊಂಡ ಪೀಠ ಈ ತೀರ್ಪು ನೀಡಿದೆ.

ಪೊಲೀಸ್ ಠಾಣೆಗೆ ಬರುವ ಸಾರ್ವಜನಿಕರೊಂದಿಗೆ ಸೌಜನ್ಯದಿಂದ ನಡೆದುಕೊಳ್ಳಿ: ಡಿಜಿ ಆದೇಶ

ಮೈಸೂರು, ಮೇ 16(ಎಸ್‌ಪಿಎನ್)– ನ್ಯಾಯಹರಿಸಿ ಪೊಲೀಸ್ ಠಾಣೆಗೆ ಬರುವ ಸಾರ್ವಜನಿಕರೊಂದಿಗೆ ಅನುಚಿತವಾಗಿ ವರ್ತಿಸದೇ ಹಾಗೂ ಮಾನವ ಹಕ್ಕುಗಳಿಗೆ ಧಕ್ಕೆಯಾಗದಂತೆ ಸೌಜನ್ಯದಿಂದ ನಡೆದುಕೊಳ್ಳುವಂತೆ ಡಿಜಿ ಮತ್ತು ಐಜಿ ಕಚೇರಿ ಪರವಾಗಿ ಐಪಿಎಸ್ ಅಧಿಕಾರಿ ದೇವಜ್ಯೋತಿ ರೇ ಎಲ್ಲಾ ಜಿಲ್ಲಾ ಹಂತದ ಪೊಲೀಸ್ ಅಧಿಕಾರಿಗಳಿಗೆ ಆದೇಶಿಸಿದ್ದಾರೆ.

ಸಾರ್ವಜನಿಕರು ಠಾಣೆಗೆ ಬಂದಾಗ ಪೊಲೀಸರು ಅನುಚಿತವಾಗಿ ವರ್ತಿಸುತ್ತಿದ್ದಾರೆ ಎಂಬ ದೂರುಗಳು ಹೆಚ್ಚಾಗಿ ಬರುತ್ತಿರುವುದರಿಂದ ಯಾವುದೇ ವ್ಯಕ್ತಿಯ ಮಾನವ ಹಕ್ಕುಗಳಿಗೆ, ಘನತೆಗೆ ಧಕ್ಕೆಯಾಗದಂತೆ ವರ್ತಿಸುವಂತೆ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗವು ಆದೇಶಿಸಿದೆ.

ಹಾಗಾಗಿ ಈ ಆದೇಶವನ್ನು ರಾಜ್ಯದ ಎಲ್ಲಾ ಪೊಲೀಸ್ ಆಯುಕ್ತರು, ಎಲ್ಲಾ ವಲಯಾಧಿಕಾರಿಗಳು. ಎಲ್ಲಾ ಜಿಲ್ಲಾ ಪೊಲೀಸ್ ಅಧೀಕ್ಷಕರುಗಳು (ಕೆಜಿಎಫ್ ಮತ್ತು ರೈಲ್ವೇಸ್ ಸೇರಿದಂತೆ) ಈ ನಿರ್ದೇಶನ ಪಾಲಿಸುವಂತೆ ಸೂಚಿಸಿದ್ದಾರೆ.













